PRGI No.: KARKAN/2023/86346

# ವಿಜಯ ವಿಶ್ವವಾಣಿ

VIJAYA VISHWAVANI Kannada Daily — ವಿಜಯ ಧ್ವನಿ — ಕನ್ನಡ ದಿನಪತ್ರಿಕೆ ₹1

ಬೆಂಗಳೂರು * ಬೆಂಗಳೂರು ಗ್ರಾಮಾಂತರ * ಚಿಕ್ಕಬಳ್ಳಾಪುರ * ಕೋಲಾರ * ಮಂಡ್ಯ * ರಾಮನಗರ * ತುಮಕೂರು * ಚಾಮರಾಜನಗರ * ಉತ್ತರ ಕರ್ನಾಟಕ * ಕಲಬುರ್ಗಿ * ಯಾದಗಿರಿ * ಬೀದರ್ * ರಾಯಚೂರು

Volume-2 | ಸಂಪುಟ–2 | Issue- 806 | ಸಂಚಿಕೆ–806 | Sunday, January 18, 2026 | ಭಾನುವಾರ, ಜನವರಿ 17, 2026 | Pages- 8 | ಪುಟಗಳು–8

## ಶುಭ ಮುಂಜಾವು

"ವಿದ್ಯೆಯುಳ್ಳವನ ಮುಖವು ಲಕ್ಷಣ, ವಿದ್ಯೆಯಿಲ್ಲದವನ ಮುಖವು ಬರಿದೇ ಲಕ್ಷಣ."

ಅರ್ಥ: ವಿದ್ಯಾವಂತನ ಮುಖವು ಜ್ಞಾನದಿಂದ ಕಂಗೊಳಿಸುತ್ತದೆ. ಆದರೆ ವಿದ್ಯೆಯಿಲ್ಲದವನ ಮುಖ ಎಷ್ಟೇ ಸುಂದರವಾಗಿದ್ದರೂ ಅಲ್ಲಿ ಜ್ಞಾನದ ಕಳೆ ಇರುವುದಿಲ್ಲ.

1.53 ಲಕ್ಷ ಕೋಟಿ ರೂ. ಹೊಸ ಹೂಡಿಕೆ ಆಕರ್ಷಣೆ: ಎಂ ಬಿ ಪಾಟೀಲ 02

ಬೆಂಗಳೂರಿನಲ್ಲಿ ಸಾರ್ವಜನಿಕ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಸ್ಥಾಪನೆ 04

30 ರೂಪಾಯಿಗೆ ಎಸ್‌ಎಸ್‌ಎಲ್‌ಸಿ ಪ್ರಶ್ನೆ ಪತ್ರಿಕೆ ಮಾರಾಟ 08

# ಬಳ್ಳಾರಿ: ಬಿಜೆಪಿ ಬಲಪ್ರದರ್ಶನ



ಬೆಂಗಳೂರು, ಜ. 17– ಬಳ್ಳಾರಿಯಲ್ಲಿ ಬ್ಯಾನರ್ ತೆರವಿಗೆ ಸಂಬಂಧಿಸಿದಂತೆ ನಡೆದಿದ್ದ ಗಲಭೆ ಪ್ರಕರಣದ ಸಂಬಂಧ ಬಳ್ಳಾರಿಯ ಕಾಂಗ್ರೆಸ್ ಶಾಸಕ ನಾರ ಭರತರೆಡ್ಡಿ ಮತ್ತು ಅವರ ಬೆಂಬಲಿಗರನ್ನು ಬಂಧಿಸಬೇಕು ಮತ್ತು ಗಲಭೆ ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸಬೇಕು ಎಂದು ಆಗ್ರಹಿಸಿ ಬಿಜೆಪಿ ಬಳ್ಳಾರಿಯಲ್ಲಿಂದು ಬೃಹತ್ ಪ್ರತಿಭಟನಾ ಸಮಾವೇಶ ನಡೆಸಿತು.

ಬಳ್ಳಾರಿಯ ಎಪಿಎಂಸಿ ಮೈದಾನದಲ್ಲಿ ನಡೆದ ಈ ಬೃಹತ್ ಪ್ರತಿಭಟನಾ ಸಮಾವೇಶದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಪ್ರತಿಪಕ್ಷ ನಾಯಕರಾದ ಆರ್. ಅಶೋಕ್, ಛಲವಾದಿ ನಾರಾಯಣಸ್ವಾಮಿ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಮಾಜಿ ಸಚಿವ ಶ್ರೀರಾಮುಲು, ಶಾಸಕ ಜನಾರ್ಧನರೆಡ್ಡಿ ಸೇರಿದಂತೆ ಬಿಜೆಪಿಯ ಪ್ರಮುಖ ನಾಯಕರು ಭಾಗಿಯಾಗಿ ನಗಾರಿ ಬಾರಿಸಿ, ಕಹಳೆ ಊದಿ ಸಮಾವೇಶಕ್ಕೆ ಚಾಲನೆ ನೀಡಿದರು.

ಈ ಸಮಾವೇಶ ಬಳ್ಳಾರಿ ಬಿಜೆಪಿಯ ಶಕ್ತಿ ಪ್ರದರ್ಶನಕ್ಕೂ ಸಾಕ್ಷಿಯಾಗಿದ್ದು, ಬೃಹತ್ ಸಂಖ್ಯೆಯಲ್ಲಿ ಕಾರ್ಯಕರ್ತರು ಸಮಾವೇಶದಲ್ಲಿ ಭಾಗಿಯಾಗಿ ಸರ್ಕಾರದ ವಿರುದ್ಧ ರಣಕಹಳೆ ಮೊಳಗಿಸಿದರು. ಬಳ್ಳಾರಿ ಗಲಭೆ ನಡೆದು 16 ದಿನಗಳಾದರೂ ಶಾಸಕ ಭರತ್ ರೆಡ್ಡಿಯನ್ನು ಬಂಧಿಸಿಲ್ಲ ಎಂದು ಸಮಾವೇಶದಲ್ಲಿ ರಾಜ್ಯದ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ನಾಯಕರು ವಾಗ್ದಾಳಿ ನಡೆಸಿ, ಈ ಗಲಭೆಯ ತನಿಖೆಯನ್ನು ಸಿಬಿಐಗೆ ವಹಿಸಬೇಕು ಎಂಬ ಆಗ್ರಹವನ್ನು ಮಾಡಿದರು.

ಬಳ್ಳಾರಿ ಗಲಭೆಗೆ ಭರತ್ ರೆಡ್ಡಿಯೇ ಕಾರಣ. ಆತನ ಅಂಗರಕ್ಷಕರು ಹಾರಿಸಿದ ಗುಂಡಿನಿಂದಲೇ ಕಾಂಗ್ರೆಸ್ ಕಾರ್ಯಕರ್ತ ರಾಜಶೇಖರ್ ಮೃತಪಟ್ಟಿದ್ದಾರೆ. ಇಷ್ಟಾದರೂ ಭರತ್ ರೆಡ್ಡಿಯನ್ನು ಬಂಧಿಸಿಲ್ಲ. ಸರ್ಕಾರ ಶಾಸಕ ಭರತ್ ರೆಡ್ಡಿಯ ರಕ್ಷಣೆಗೆ ನಿಂತಿದೆ ಎಂದು ಬಿಜೆಪಿಯ ನಾಯಕರು ಕಿಡಿಕಾರಿದರು.

ಈ ಗಲಭೆಯ ಸತ್ಯಾಸತ್ಯತೆ ಹೊರ ಬರಲು ಸಿಬಿಐ ತನಿಖೆಯೇ ಸೂಕ್ತ. ರಾಜ್ಯ ಸರ್ಕಾರ ಕೂಡಲೇ ಈ ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸಬೇಕು ಎಂದು ಪ್ರತಿಭಟನಾ ಸಮಾವೇಶದಲ್ಲಿ ಬಿಜೆಪಿ ನಾಯಕರು ಒತ್ತಾಯಿಸಿದರು.

ರೈತ, ಜನ, ಅಭಿವೃದ್ಧಿ, ಮಹಿಳಾ ವಿರೋಧಿ, ಎಂಬ ಘೋಷಣೆ, ಕುಸಿದ ಕಾನೂನು, ಸುವ್ಯವಸ್ಥೆ, ಕೊಲೆ ದರೋಡೆ, ಹದಗೆಟ್ಟ, ಭ್ರಷ್ಟ ಆಡಳಿತ, ಡ್ರಗ್ಸ್ ಮಾಫಿಯಾ, ದರ್ಪ ದೌರ್ಜನ್ಯ, ಬಳ್ಳಾರಿ ಫೈರಿಂಗ್ ಎಂಬ ಬರಹಗಳ ಮೂಲಕ ವೇದಿಕೆ ಗಮನ ಸೆಳೆಯಿತು.

ಜ.1 ರಂದು ನಗರದಲ್ಲಿ ನಗರ ಶಾಸಕ ಭರತ್ ರೆಡ್ಡಿ ಆಪ್ತ ಸತೀಶ್ ರೆಡ್ಡಿಯ ಖಾಸಗಿ ಗನ್ ಮ್ಯಾನ್‌ಗಳಿಂದ ನಡೆದ ಫೈರಿಂಗ್ ಘಟನೆಯನ್ನು ವೇದಿಕೆ ಮೇಲಿನ ಬೃಹತ್ ಡಿಜಿಟಲ್ ಪರದೆ ಮೂಲಕ ಪ್ರದರ್ಶಿಸಲಾಯ್ತು. ಅಂದು ಘಟನೆ ಸಂದರ್ಭ ದಲ್ಲಿ ಶಾಸಕ ಭರತ್ ರೆಡ್ಡಿ ಮಾಧ್ಯಮಗಳೊಂದಿಗೆ ಮಾತನಾಡುತ್ತ ನಾನು ಮನಸ್ಸು ಮಾಡಿದರೆ ಆತನ ಮನೆ, ಬಳ್ಳಾರಿಯನ್ನೇ ಸುಟ್ಟುಬಿಡುತ್ತಿದ್ದೆ ಎಂಬ ಹೇಳಿಕೆಯನ್ನು ಪದೇ ಪದೇ ಪ್ರದರ್ಶಿಸಲಾಯ್ತು.

ಸದಾ ಕಾಳು, ತರಕಾರಿ, ಹಮಾಲರು, ವ್ಯಾಪಾರಿಗಳಿಂದ ಕೂಡಿರುತ್ತಿದ್ದ ಇಲ್ಲಿನ ಎಪಿಎಂಸಿ ಮಾರುಕಟ್ಟೆ ಇಂದು ಬಿಜೆಪಿ ಧ್ವಜ, ಮುಖಂಡರ ಬ್ಯಾನರ್‌ಗಳು, ಕಾರ್ಯಕರ್ತರಿಂದ ರಾಜಕೀಯ ಮೈದಾನವಾಗಿ ಪರಿವರ್ತಿತಗೊಂಡಿತ್ತು.

ಲೋಕಸಭಾ ಚುನಾವಣೆಯ ನಂತರ ನಡೆದ

**ಕಳೆದ ವಿಧಾನಸಭಾ ಚುನಾವಣೆಯಲ್ಲಿ ಪ್ರತ್ಯೇಕ ಪಕ್ಷ ಕಟ್ಟಿ, ನಂತರ ಶ್ರೀರಾಮುಲು ವಿರುದ್ಧವೇ ಸಂಡೂರು ಉಪ ಚುನಾವಣೆಯ ಸೋಲಿನ ಹೊಣೆ ಹೊರಿಸಿ ಬಿರುಕಾಗಿದ್ದ ಬಳ್ಳಾರಿ ಬಿಜೆಪಿಯನ್ನು ಶಾಸಕ ಭರತ್ ರೆಡ್ಡಿ, ಬ್ಯಾನರ್ ಗಲಾಟೆ ಮೂಲಕ ಒಂದು ಗೂಡಿಸಿದಂತೆ ಇತ್ತು ಇಂದಿನ ಸಮಾವೇಶ. ಇದರಿಂದ ಬಿಜೆಪಿ ಕಾರ್ಯಕರ್ತರಲ್ಲಿ ಹೊಸ ನಿರೀಕ್ಷೆ ಮೂಡಿಸಿದೆ ಎಂದರೆ ತಪ್ಪಾಗಲಾರದು.**

ಬಿಜೆಪಿಯ ಇಂದಿನ ಬೃಹತ್ ಸಮಾವೇಶಕ್ಕೆ ಜಿಲ್ಲೆಯ ಎಲ್ಲೆಡೆಯಿಂದ ಮೂವತ್ತು ಸಾವಿರಕ್ಕೂ ಹೆಚ್ಚು ಜನರು ಭಾಗವಹಿಸಿದ್ದರು. ಬಂದವರಿಗೆ ಊಟದ ವ್ಯವಸ್ಥೆ ಸಹ ಮಾಡಿತ್ತು. ಎಲ್ಲರೂ ಕೇಸರಿ ಶಾಲು ಧರಿಸಿ ಕೂತಿದ್ದು ವಿಶೇಷವಾಗಿತ್ತು.

ಸಮಾರಂಭದಲ್ಲಿ ಮಾಜಿ ಸಚಿವರಾದ, ಜಿ.ಕರುಣಾಕರ ರೆಡ್ಡಿ, ಮಾಜಿ ಸಂಸದರಾದ ಸಣ್ಣ ಫಕ್ಕೀರಪ್ಪ, ಮಾಜಿ ಶಾಸಕರಾದ ಜಿ.ಸೋಮಶೇಖರರೆಡ್ಡಿ, ಬಸವರಾಜ್ ದಡೇಸೂಗೂರು, ಮುಖಂಡರಾದ ಡಾ.ಎಸ್.ಜೆ.ವಿ.ಮಹಿಪಾಲ್, ಪಿ.ಎಸ್.ಸೋಮಲಿಂಗನಗೌಡ, ಅಮ್ಮಾರು ಮಂಜುನಾಥ, ಕೆ.ಎಸ್.ದಿವಾಕರ್, ಹೆಚ್. ಹನುಮಂತಪ್ಪ, ಪಿ.ಪಾಲಣ್ಣ, ತಿಮ್ಮಪ್ಪ, ಗಣಪಾಲ ಐನಾಥ ರೆಡ್ಡಿ, ಸುರೇಖಾ ಮಲ್ಲನಗೌಡ, ಮಹೇಶ್ವರಸ್ವಾಮಿ, ಪಾಲಿಕೆ ಸದಸ್ಯರು, ಜಿಪಂ, ತಾಪಂ ಮಾಜಿ ಸದಸ್ಯರು ಪಕ್ಷದ ಪದಾಧಿಕಾರಿ ಗಳು, ಪಾಲ್ಗೊಂಡಿದ್ದರು.

ವಾಲ್ಮೀಕಿ ಜಯಂತಿ ಸಂದರ್ಭದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಬಳ್ಳಾರಿಯಲ್ಲಿ ಶಾಸಕ ಜನಾರ್ದನರೆಡ್ಡಿಯವರ ಮನೆ ಮುಂದೆ ಬ್ಯಾನರ್ ಕಟ್ಟಲು ಮುಂದಾದಾಗ ಘರ್ಷಣೆ ನಡೆದಿತ್ತು.

ದೊಡ್ಡಮಟ್ಟದ ಕಾಂಗ್ರೆಸ್ ಕಾರ್ಯಕರ್ತರು ಜನಾರ್ದನರೆಡ್ಡಿ ಮನೆ ಮುಂದೆ ಬ್ಯಾನರ್ ಕಟ್ಟಿದ್ದರು. ಜನಾರ್ದನರೆಡ್ಡಿ ಬೆಂಬಲಿಗರು ಈ ಬ್ಯಾನರ್ ತೆರವು ಮಾಡಿದ್ದಾರೆ ಎಂಬ ವಿಚಾರ ಘರ್ಷಣೆಗೆ ಕಾರಣವಾಗಿ ಪೊಲೀಸರು ಗೋಲಿಬಾರ್ ನಡೆಸಿದ್ದರಲ್ಲದೆ, ಶಾಸಕ ಜನಾರ್ದನ ರೆಡ್ಡಿ ಮತ್ತು ಶಾಸಕ ಭರತ್ ರೆಡ್ಡಿ ಬೆಂಬಲಿಗರು ಪರಸ್ಪರ ಗುಂಡು ಹಾರಿಸಿದ್ದಾರೆ ಎಂಬ ಮಾತುಗಳು ಕೇಳಿ ಬಂದಿದ್ದವು. ಗುಂಡೇಟಿಗೆ ಕಾಂಗ್ರೆಸ್ ಕಾರ್ಯಕರ್ತ ರಾಜಶೇಖರ್ ಬಲಿಯಾಗಿದ್ದರು.

ಈ ಗಲಭೆಯನ್ನು ಸಿಬಿಐ ತನಿಖೆಗೆ ವಹಿಸಬೇಕು ಎಂಬ ಪ್ರತಿಪಕ್ಷಗಳ ಬೇಡಿಕೆಯನ್ನು ತಳ್ಳಿಹಾಕಿದ್ದ ಸರ್ಕಾರ ಈ ಗಲಭೆ ಪ್ರಕರಣವನ್ನು ಸಿಐಡಿ ತನಿಖೆಗೆ ವಹಿಸಿತ್ತು. ಅದರಂತೆ ಈಗ ಸಿಐಡಿ ತನಿಖೆ ನಡೆದಿದೆ. ಹಾಗೆಯೇ ಈ ಗಲಭೆಗೆ ಸಂಬಂಧಿಸಿ ದಂತೆ ಹಲವರನ್ನು ಬಂಧಿಸಲಾಗಿದೆ.

## ಇಂದೋರ್ ಕಲುಷಿತ ನೀರಿನ ದುರಂತ: ಸಂತ್ರಸ್ತರು, ಕುಟುಂಬಗಳನ್ನು ಭೇಟಿಯಾದ ರಾಹುಲ್ ಗಾಂಧಿ



ಇಂದೋರ್: ಕಲುಷಿತ ನೀರು ಕುಡಿದು ವಾಂತಿ, ಭೇದಿಯಿಂದ ಹಲವು ಮಂದಿ ಮೃತ ಪಟ್ಟು, ಕೆಲವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯು ತ್ತಿರುವ ಮಧ್ಯಪ್ರದೇಶದ ಇಂದೋರ್‌ಗೆ ಲೋಕ ಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಭೇಟಿ ನೀಡಿದ್ದಾರೆ.ಬಾಂಬೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ 4 ರೋಗಿಗಳ ಆರೋಗ್ಯ ವಿಚಾರಿಸಿದ ಅವರು, ಕುಟುಂಬ ಸದಸ್ಯರನ್ನೂ ಭೇಟಿಯಾದರು.

ಮಧ್ಯಪ್ರದೇಶದ ಕಾಂಗ್ರೆಸ್ ಘಟಕದ ಅಧ್ಯಕ್ಷ ಜೀತು ಪಟ್ವಾರಿ ಮತ್ತು ಪಕ್ಷದ ಮುಖಂಡ ಉಮಂಗ್ ಸಿಂಗಾರ್ ರಾಹುಲ್ ಜೊತೆಗಿದ್ದರು.

ಕಲುಷಿತ ನೀರಿನ ದುರಂತ ಸಂಭವಿಸಿದ ಭಗೀರಥಪುರ ಪ್ರದೇಶಕ್ಕೂ ಭೇಟಿ ನೀಡಿದ ರಾಹುಲ್, ಮೃತರ ಸಂಬಂಧಿಕರನ್ನು ಭೇಟಿಯಾಗಿ ಸಂತೈಸಿದರು.

ಕಲುಷಿತ ನೀರು ಸೇವನೆಯಿಂದ ವಾಂತಿ ಮತ್ತು ಭೇದಿ ಸಂಭವಿಸಿ 24 ಮಂದಿ ಮೃತಪಟ್ಟಿ ದ್ದಾರೆ ಎಂದು ಭಗೀರಥಪುರದ ನಿವಾಸಿಗಳು ರಾಹುಲ್‌ಗೆ ತಿಳಿಸಿದ್ದಾರೆ. ಆದರೆ, ದುರಂತದಲ್ಲಿ 7 ಮಂದಿ ಮೃತಪಟ್ಟಿದ್ದಾರೆ ಎಂದು ರಾಜ್ಯ ಸರ್ಕಾರ ಮಧ್ಯ ಪ್ರದೇಶ ಹೈಕೋರ್ಟ್‌ಗೆ ಮಾಹಿತಿ ನೀಡಿದೆ.

ಈ ನಡುವೆ ಸರ್ಕಾರಿ ಸ್ವಾಮ್ಯದ ಮಹಾತ್ಮ ಗಾಂಧಿ ಮೆಮೋರಿಯಲ್ ಮೆಡಿಕಲ್ ಕಾಲೇಜಿನ ವೈದ್ಯರ ತಂಡ ನಡೆಸಿದ ಆಡಿಟ್‌ನಲ್ಲಿ 15 ಮಂದಿ ಮಾತ್ರ ವಾಂತಿ ಭೇದಿಯಿಂದ ಮೃತಪಟ್ಟಿರುವ ಸಾಧ್ಯತೆ ಇದೆ ಎಂದು ಉಲ್ಲೇಖಿಸಲಾಗಿತ್ತು. ಮೃತರ ಕುಟುಂಬಗಳಿಗೆ ಸರ್ಕಾರ ತಲಾ ರೂ.2 ಲಕ್ಷ ಪರಿಹಾರ ನೀಡಿತ್ತು.

## ಭಾರತದ ಮೊದಲ ವಂದೇ ಭಾರತ್ ಸ್ಲೀಪರ್ ರೈಲಿಗೆ ಪ್ರಧಾನಿ ಮೋದಿ ಚಾಲನೆ

ಮಾಲ್ಡಾ, ಜನವರಿ 17: ಇಂದು ಭಾರತೀಯ ರೈಲ್ವೆ ಇಲಾಖೆಗೆ ಮಹತ್ವದ ದಿನ. ಪಶ್ಚಿಮ ಬಂಗಾಳಕ್ಕೆ ಭೇಟಿ ನೀಡಿದ ಪ್ರಧಾನಿ ನರೇಂದ್ರ ಮೋದಿ ಮಾಲ್ಡಾದಲ್ಲಿ ಭಾರತದ ಮೊದಲ ವಂದೇ ಭಾರತ್ ಸ್ಲೀಪರ್ ರೈಲಿಗೆ ಹಸಿರು ನಿಶಾನೆ ತೋರಿದರು. ಈ ವಂದೇ ಭಾರತ್ ಸ್ಲೀಪರ್ ರೈಲು ಹೌರಾ ಮತ್ತು ಗುವಾಹಟಿ (ಕಾಮಾಕ್ಯ) ನಡುವೆ ಸಂಚರಿಸಲಿದೆ. ಆಧುನಿಕ ಭಾರತದ ಸಾರಿಗೆ ಅಗತ್ಯ ಗಳನ್ನು ಪೂರೈಸಲು ಆಧುನಿಕ ಸೌಲಭ್ಯಗಳೊಂದಿಗೆ ವಂದೇ ಭಾರತ್ ಸ್ಲೀಪರ್ ರೈಲನ್ನು ತಯಾರಿಸ ಲಾಗಿದೆ. ಇದು ಸಂಪೂರ್ಣ ಹವಾನಿಯಂತ್ರಿತ ಸ್ಲೀಪರ್ ರೈಲು ಆಗಿದ್ದು, ಕಡಿಮೆ ದರದಲ್ಲಿ ಪ್ರಯಾ ಣಿಕರಿಗೆ ವಿಮಾನಯಾನದಂತಹ ಅನುಭವವನ್ನು ನೀಡುತ್ತದೆ. ಪ್ರಧಾನಿ ಮೋದಿ 2 ದಿನಗಳ ಕಾಲ ಪಶ್ಚಿಮ ಬಂಗಾಳ ಮತ್ತು ಅಸ್ಸಾಂ ಪ್ರವಾಸದಲ್ಲಿದ್ದು, ಹಲವಾರು ರೈಲು ಮತ್ತು ರಸ್ತೆ ಯೋಜನೆಗಳನ್ನು ರಾಷ್ಟ್ರಕ್ಕೆ ಅರ್ಪಿಸಲಿದ್ದಾರೆ. ಮಾಲ್ಡಾದಲ್ಲಿ ಸಾರ್ವಜನಿಕ ಸಮಾರಂಭದಲ್ಲಿ ಮೋದಿ 3,250 ಕೋಟಿ ರೂ.ಗಳಿಗೂ ಹೆಚ್ಚು ಮೌಲ್ಯದ ಬಹು ರೈಲು ಮತ್ತು ರಸ್ತೆ ಮೂಲ ಸೌಕರ್ಯ ಯೋಜನೆ ಗಳಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

## ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ ಭೇಟಿ

### ಡಿಕೆಶಿ ಬಣದಲ್ಲಿ ಹೆಚ್ಚಾದ ಉತ್ಸಾಹ

ನವದೆಹಲಿ, ಜನವರಿ 17: ಸಂಕ್ರಾಂತಿ ಮುಗಿಯುತ್ತಿದ್ದಂತೆ ಡಿಸಿಎಂ ಡಿಕೆ ಶಿವಕುಮಾರ್ ದೆಹಲಿಗೆ ಹಾರಿದ್ದಾರೆ. ಅಸ್ಸಾಂ ಚುನಾವಣಾ ವೀಕ್ಷಕರಾಗಿರುವ ಡಿಕೆಶಿ ಎಐಸಿಸಿ ಸಭೆಯಲ್ಲಿ ಭಾಗಿಯಾಗಿ ಚರ್ಚಿಸಿದ್ದಾರೆ. ದೆಹಲಿಯಲ್ಲಿರುವ ಡಿಕೆ ಶಿವಕುಮಾರ್ ಈಗಾಗಲೇ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ. ರಾಹುಲ್ ಗಾಂಧಿಯವರನ್ನೂ ಭೇಟಿಯಾಗಿದ್ದಾರೆ. ಖರ್ಗೆ ಮತ್ತು ರಾಹುಲ್ ಗಾಂಧಿ ಭೇಟಿ ಬಳಿಕ ಮಾತನಾಡಿದ ಡಿಸಿಎಂ, ಅಲ್ಲಿ ಚರ್ಚೆ ಆಗಿದ್ದನ್ನೆಲ್ಲ ಹೇಳಲಾಗದು. ಬೇರೆ ಏನೂ ಮಾತನಾಡಲು ನಾನು ತಯಾರಿಲ್ಲ ಎಂದಿದ್ದಾರೆ.

ತಮಿಳುನಾಡಿಗೆ ಹೋಗುತ್ತಿದ್ದ ರಾಹುಲ್ ಗಾಂಧಿ ಮೈಸೂರು ವಿಮಾನ ನಿಲ್ದಾಣದಲ್ಲಿ, 'ದೆಹಲಿಗೆ ಬನ್ನಿ' ಎಂದು ಡಿಸಿಎಂಗೆ ಹೇಳಿದ್ದರು. ಇದರ ಬೆನ್ನಲ್ಲೇ ಡಿಕೆಶಿ ದೆಹಲಿಗೆ ತೆರಳಿದ್ದು, ಇವತ್ತೂ ದೆಹಲಿಯಲ್ಲೇ ಇರಲಿದ್ದಾರೆ. ನಮ್ಮ ಪಥ ದೆಹಲಿ ಕಡೆಗೆ ಬದಲಾಗಿದೆ ಎಂದು ಚನ್ನಗಿರಿ ಶಾಸಕ ಶಿವಗಂಗಾ ಬಸವರಾಜ್ ಹೇಳಿದ್ದಾರೆ. ಸಂಕ್ರಾಂತಿ ಮುಗಿಯಿತು. ಈ ನಡುವೆ ಇನ್ನೇನಿದ್ರೂ ಯುಗಾದಿಗೆ ನೋಡೋಣ ಎಂದು ಸಚಿವ ಜಮೀರ್ ಹೇಳಿದ್ದಾರೆ.

ವಿಶೇಷ ಅಧಿವೇಶನ, ಸಂಸತ್ ಬಜೆಟ್ ಸೆಷನ್ ನಡುವೆ ಕಾಂಗ್ರೆಸ್ ಹೈಕಮಾಂಡ್‌ಗೆ ಸಮಯ ಸಿಗುತ್ತಾ? ರಾಜ್ಯ ನಾಯಕತ್ವದ ಬಗ್ಗೆ ಚರ್ಚಿಸುತ್ತಾರಾ ಎಂಬುದೇ ಸದ್ಯದ ಪ್ರಶ್ನೆ.

## ಬೆಂಗಳೂರಿನಲ್ಲಿ 'ಬಹು ಅಂಗಾಂಗ ಕಸಿ' ಆಸ್ಪತ್ರೆ:

### 5 ವರ್ಷಗಳಲ್ಲಿ ರೂ.4,000 ಕೋಟಿ ವೆಚ್ಚದ ಗುರಿ; ಸಿಎಂ



ಬೆಂಗಳೂರು: 'ರಾಜೀವ್‌ಗಾಂಧಿ ಎದೆರೋಗಗಳ ಆಸ್ಪತ್ರೆ ಆವರಣದಲ್ಲಿರುವ 10 ಎಕರೆ ಜಮೀನಿನಲ್ಲಿ ನಿರ್ಮಾಣವಾಗಲಿರುವ ಸಾವಿರ ಆಸ್ಪತ್ರೆಗಳ ಚಾರಿಟಬಲ್ ಸೂಪರ್ ಸ್ಪೆಷಾಲಿಟಿ ಹಾಗೂ ಮಾನವ ಬಹು ಅಂಗಾಂಗ ಕಸಿ ಆಸ್ಪತ್ರೆಗೆ ಅಜೀಂ ಪ್ರೇಮ್ ಜಿ ಪ್ರತಿಷ್ಠಾನವು ಐದು ವರ್ಷ ಗಳಲ್ಲಿ ರೂ. 4 ಸಾವಿರ ಕೋಟಿ ವೆಚ್ಚ ಮಾಡಲಿದೆ' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಶನಿವಾರ ನಡೆದ ಕಾರ್ಯಕ್ರಮದಲ್ಲಿ ಸಾವಿರ ಹಾಸಿಗೆಗಳ ಚಾರಿಟಬಲ್ ಸೂಪರ್ ಸ್ಪೆಷಾಲಿಟಿ ಹಾಗೂ ಮಾನವ ಬಹು ಅಂಗಾಂಗ ಕಸಿ ಆಸ್ಪತ್ರೆ ನಿರ್ಮಾಣ ಮತ್ತು ನಿರ್ವಹಣೆಗೆ ಸಂಬಂಧಿಸಿ ದಂತೆ ವೈದ್ಯಕೀಯ ಶಿಕ್ಷಣ ಇಲಾಖೆ ಮತ್ತು ಅಜೀಂ ಪ್ರೇಮ್ ಜಿ ಪ್ರತಿಷ್ಠಾನ ನಡುವೆ ಒಡಂಬಡಿಕೆಗೆ ಸಹಿ ಹಾಕಿದ ನಂತರ ಅವರು ಮಾತನಾಡಿದರು.

'ಅಜೀಂ ಪ್ರೇಮ್ ಜಿ ಪ್ರತಿಷ್ಠಾನದ ವತಿಯಿಂದ ಸಾವಿರ ಆಸ್ಪತ್ರೆಗಳ ಚಾರಿಟಬಲ್ ಸೂಪರ್ ಸ್ಪೆಷಾಲಿಟಿ ಹಾಗೂ ಮಾನವ ಬಹು ಅಂಗಾಂಗ ಕಸಿ ಆಸ್ಪತ್ರೆ ನಿರ್ಮಾಣಕ್ಕೆ ಸಂಬಂಧಿಸಿದಂತೆ ಒಡಂಬಡಿಕೆಗೆ ಸಹಿ ಮಾಡಲಾಗಿದೆ. ಇದಕ್ಕಾಗಿ ರಾಜೀವ್ ಗಾಂಧಿ ಎದೆ ರೋಗಗಳ ಆಸ್ಪತ್ರೆ ಆವರಣದಲ್ಲಿ ಸರ್ಕಾರ 10 ಎಕರೆ ಸ್ಥಳವನ್ನು 99 ವರ್ಷಗಳ ಅವಧಿಗೆ ಗುತ್ತಿಗೆ ಆಧಾರದ ಮೇಲೆ ನೀಡಲು ಒಪ್ಪಂದವಾಗಿದೆ' ಎಂದರು.

'ಅಜೀಂ ಪ್ರೇಮ್ ಜಿ ಅವರ ಈ ಮಹತ್ಕಾರ್ಯಕ್ಕೆ ಸರ್ಕಾರ ಆಭಾರಿಯಾಗಿದೆ. ಅದರಲ್ಲಿಯೂ ಉಚಿತವಾಗಿ ಈ ಕಾರ್ಯವನ್ನು ನೆರವೇರಿಸಲು ಮುಂದಾಗಿರುವುದು ಶ್ರೇಷ್ಠ ಕಾರ್ಯ' ಎಂದು ಬಣ್ಣಿಸಿದರು.

'ಅಜೀಂ ಪ್ರೇಮ್ ಜಿ ಪ್ರತಿಷ್ಠಾನವು ಕಳೆದ 25 ವರ್ಷಗಳಿಂದ ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರದಲ್ಲಿ ದೊಡ್ಡ ಪ್ರಮಾಣದಲ್ಲಿ ಸೇವೆ ಸಲ್ಲಿಸುತ್ತಿದೆ. 2021ರಲ್ಲಿ ಶಿಕ್ಷಕರ ತರಬೇತಿಗೆ, 2024ರಲ್ಲಿ ಎಲ್‌ಕೆಜಿಯಿಂದ ಹತ್ತನೇ ತರಗತಿಯವರೆಗೆ ವಾರದಲ್ಲಿ ನಾಲ್ಕು ದಿನ ಮೊಟ್ಟೆ ಕೊಡುವ ಕಾರ್ಯಕ್ರಮಕ್ಕೆ ಒಂದೂವರೆ ಕೋಟಿ ರೂ ನೀಡುವ ಮೂಲಕ ಪ್ರತಿಷ್ಠಾನವು ಕೈಜೋಡಿಸಿದೆ. ಸರ್ಕಾರಿ ಕಾಲೇಜುಗಳಲ್ಲಿ ಓದಿರುವವರಿಗೆ ವರ್ಷಕ್ಕೆ 30 ಸಾವಿರ ವಿದ್ಯಾರ್ಥಿ ವೇತನವನ್ನು ದೀಪಿಕಾ ವಿದ್ಯಾರ್ಥಿ ವೇತನದಡಿ ನೀಡುತ್ತಿದೆ' ಎಂದು ಮುಖ್ಯಮಂತ್ರಿ ತಿಳಿಸಿದರು.

'ಅಜೀಂ ಪ್ರೇಮ್ ಜಿ ಪ್ರತಿಷ್ಠಾನದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅನುರಾಗ್ ಬೆಹರ್ ಮಾತನಾಡಿ, 'ಪ್ರತಿಷ್ಠಾನವು ಸಾರ್ವಜನಿಕ ವ್ಯವಸ್ಥೆಗಳಲ್ಲಿ ನಂಬಿಕೆ ಇಟ್ಟಿರುವ ಸಂಸ್ಥೆಯಾಗಿದೆ. ಸಾರ್ವಜನಿಕ ವ್ಯವಸ್ಥೆಗಳು ಬಲಗೊಳ್ಳಬೇಕು. ಆರೋಗ್ಯ ಆರಂಭವಾಗುವುದು ಆಶಾ ಕಾರ್ಯಕರ್ತರು, ಪ್ರಾಥಮಿಕ ಆರೋಗ್ಯ ಕೇಂದ್ರಗಳಿಂದ. ನಮ್ಮ ಜನರು ರೋಗ ಪೀಡಿತರಾಗದಂತೆ ತಡೆಯುವುದು ನಮ್ಮ ಮುಖ್ಯ ಗುರಿ ಆಗಬೇಕು' ಎಂದರು.

ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ ಪಾಟೀಲ ಮಾತನಾಡಿ, 'ಬೆಂಗಳೂರಿನ ಇನ್‌ಸ್ಟಿಟ್ಯೂಟ್ ಆಫ್ ಗ್ಯಾಸ್ಟ್ರೋ ಎಂಟಾಲಜಿ ವತಿಯಿಂದ ಅಜೀಂ ಪ್ರೇಮ್‌ಜಿ ಪ್ರತಿಷ್ಠಾನ ಈ ಆಸ್ಪತ್ರೆಯನ್ನು ನಡೆಸಲಿದೆ. ಈ ಆಸ್ಪತ್ರೆ ನಿರ್ಮಾಣಕ್ಕೆ ಪ್ರತಿಷ್ಠಾನವು ರೂ.1,000 ಕೋಟಿ ಹೂಡಿಕೆ ಮಾಡಲಿದೆ. ಆಸ್ಪತ್ರೆಯ ನಿರ್ವಹಣೆಗೆ ಪ್ರತಿಷ್ಠಾನವು ಪ್ರತಿ ವರ್ಷ ರೂ.350 ಕೋಟಿ ವೆಚ್ಚ ಮಾಡಲಿದೆ' ಎಂದರು.

ಅಜೀಂ ಪ್ರೇಮ್ ಜಿ ಪ್ರತಿಷ್ಠಾನದ ಆರೋಗ್ಯ ವಿಭಾಗದ ಮುಖ್ಯಸ್ಥ ಆನಂದ ಸ್ವಾಮಿನಾಥನ್, ಮುಖ್ಯಮಂತ್ರಿಯ ರಾಜಕೀಯ ಕಾರ್ಯದರ್ಶಿ ನಜೀರ್ ಅಹ್ಮದ್, ಮುಖ್ಯ ಸಚೇತಕ ಅಶೋಕ ಪಟ್ಟಣ, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ವೈದ್ಯಕೀಯ ಶಿಕ್ಷಣ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮೊಹ್ಮದ್ ಮೊಹ್ಸಿನ್, ಇನ್‌ಸ್ಟಿಟ್ಯೂಟ್ ಆಫ್ ಗ್ಯಾಸ್ಟ್ರೋ ಎಂಟಾಲಜಿ ಸೈನ್ಸ್‌ನ ಡಾ. ಎನ್. ಎಸ್. ನಾಗೇಶ್ ಇದ್ದರು.

## ಲಕ್ಕುಂಡಿಯಲ್ಲಿ 2ನೇ ದಿನಕ್ಕೆ ಕಾಲಿಟ್ಟ ಉತ್ಖನನ ಕಾರ್ಯ: ಪ್ರಾಚೀನ ಕಾಲದ ಶಿಲಾರಚನೆ ಪತ್ತೆ



ಗದಗ: ಜಿಲ್ಲೆ ಲಕ್ಕುಂಡಿಯಲ್ಲಿ ಉತ್ಖನನ ಕಾರ್ಯ ಎರಡನೇ ದಿನಕ್ಕೆ ಕಾಲಿಟ್ಟಿದ್ದು, ಪ್ರಾಚೀನ ಕಾಲದ ಶಿಲೆ ಪತ್ತೆಯಾಗಿದೆ. ಇದು ದೇವಸ್ಥಾನಕ್ಕೆ ಸಂಬಂಧಿಸಿದ ಕುರುಹು ಆಗಿರಬಹುದು ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಪ್ರಾಚೀನ ಶಿಲೆ ಪತ್ತೆಯಿಂದ ಸ್ಥಳೀಯರಲ್ಲಿ ಕುತೂಹಲ ಮತ್ತಷ್ಟು ಹೆಚ್ಚಾಗಿದೆ.

ಉತ್ಖನನಕ್ಕೆ ವೀರಭದ್ರೇಶ್ವರ ದೇವಸ್ಥಾನ ಜಾತ್ರಾ ಕಮಿಟಿ ಹಾಗೂ ಗ್ರಾಮಸ್ಥರಿಂದ ವಿರೋಧ ವ್ಯಕ್ತವಾಗಿದೆ. ಮುಂದಿನ ತಿಂಗಳು ನಡೆಯಲಿರುವ ವೀರಭದ್ರೇಶ್ವರ ದೇವಸ್ಥಾನದ ಜಾತ್ರೆಯ ಹಿನ್ನೆಲೆಯಲ್ಲಿ, ಉತ್ಖನನ ಪ್ರದೇಶವನ್ನು ನಿರ್ಬಂಧಿತ ವಲಯ ಎಂದು ಘೋಷಿಸಿರುವುದರಿಂದ ಜಾತ್ರೆ ನಡೆಸು ವುದು ಹೇಗೆ ಎಂದು ಗ್ರಾಮಸ್ಥರು ಪ್ರಶ್ನಿಸುತ್ತಿದ್ದಾರೆ. ಗದಗ ಜಿಲ್ಲಾಧಿಕಾರಿ ಹಾಗೂ ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರೂ ಆಗಿರುವ ಸಿ.ಎನ್. ಶ್ರೀಧರ್ ಅವರು, ಪುರಾತತ್ವ ಇಲಾಖೆಯ ಶಿಫಾರಸಿನ ಮೇರೆಗೆ ಈ ಪ್ರದೇಶ ವನ್ನು ಸೂಕ್ಷ್ಮ ಪ್ರದೇಶ ಎಂದು ಘೋಷಿಸಿ ಸಾರ್ವಜನಿಕರ ಪ್ರವೇಶ, ಛಾಯಾಚಿತ್ರ/ವಿಡಿಯೋ ಚಿತ್ರೀಕರಣಕ್ಕೆ ಸಂಪೂರ್ಣ ನಿಷೇಧ ಹೇರಿದ್ದಾರೆ.

ಉತ್ಖನನ ನಡೆಯುತ್ತಿರುವ ಸ್ಥಳದಲ್ಲಿ ಅಗ್ನಿಕುಂಡ ಹಾಕಲಾಗುತ್ತಿದೆ ಎಂಬ ಆರೋಪ ಗಳೊಂದಿಗೆ ಗ್ರಾಮಸ್ಥರು ಕಂಗಾಲಾಗಿದ್ದಾರೆ. ಸರ್ಕಾರದ ಆದೇಶಗಳಿಂದಾಗಿ ಜಾತ್ರೆ ಮತ್ತು ದೈನಂದಿನ ಧಾರ್ಮಿಕ ಚಟುವಟಿಕೆಗಳ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ.

ಈ ಉತ್ಖನನವು ಇತ್ತೀಚೆಗೆ ಮನೆ ನಿರ್ಮಾಣದ ಸಂದರ್ಭದಲ್ಲಿ ಪತ್ತೆಯಾದ ಚಿನ್ನಾಭರಣ ನಿಧಿಯ ಬೆನ್ನಲ್ಲೇ ಆರಂಭವಾಗಿದೆ. ಲಕ್ಕುಂಡಿ ಗ್ರಾಮವು ಕಲ್ಯಾಣ ಚಾಲುಕ್ಯ, ರಾಷ್ಟ್ರಕೂಟ, ಹೊಯ್ಸಳ ಆಳ್ವಿಕೆಯ ಐತಿಹಾಸಿಕ ಸ್ಥಳವಾಗಿದ್ದು, ಅಪಾರ ಸಂಪತ್ತು ಹುದುಗಿರ ಬಹುದೆಂಬ ನಿರೀಕ್ಷೆಯಿದೆ.

ಪುರಾತತ್ವ ಇಲಾಖೆ, ಪ್ರವಾಸೋದ್ಯಮ ಇಲಾಖೆ ಮತ್ತು ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರದ ಸಂಯುಕ್ತ ಕಾರ್ಯಾ ಚರಣೆಯಾಗಿದ್ದು, ಹೆಚ್ಚಿನ ಐತಿಹಾಸಿಕ ಆಭರಣ ಗಳು, ಶಿಲ್ಪಗಳು ಸಿಗುವ ನಿರೀಕ್ಷೆ ಇದೆ. ಈ ಘಟನೆಯು ಲಕ್ಕುಂಡಿಯ ಐತಿಹಾಸಿಕ ಮಹತ್ವ ವನ್ನು ಮತ್ತಷ್ಟು ಎತ್ತಿ ತೋರಿಸುತ್ತಿದ್ದರೂ, ಸ್ಥಳೀಯರಲ್ಲಿ ಆತಂಕ ಮತ್ತು ವಿರೋಧವು ಹೆಚ್ಚಾಗುತ್ತಿದೆ.

ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಕೊರ್ಲಹಳ್ಳಿ ಗ್ರಾಮದಲ್ಲಿ ನಿಗೂಢ ಗೆಜ್ಜೆಯ ಶಬ್ಧ ಕೇಳಿಬರುತ್ತಿದೆ ಎಂದು ಗ್ರಾಮಸ್ಥರು ಆತಂಕ ವ್ಯಕ್ತಪಡಿಸಿದ್ದಾರೆ. ಗ್ರಾಮಸ್ಥರ ಪ್ರಕಾರ, ಈ ಗೆಜ್ಜೆ ಶಬ್ಧವು ದುರ್ಗಮ್ಮ ದೇವಿಯ ದೈವಿಕ ಲೀಲೆಯಾಗಿರಬಹುದೆಂಬ ನಂಬಿಕೆಯಿದೆ. ಕೆಲವು ದಿನಗಳ ಹಿಂದೆ ಗ್ರಾಮದ ದುರ್ಗಮ್ಮ ದೇವಿಯ ಮೂರ್ತಿ ಭಗ್ನಗೊಂಡಿತ್ತು. ಇದರಿಂದಾಗಿ ಗ್ರಾಮಸ್ಥರು ಹೊಸ ಮೂರ್ತಿಯನ್ನು ತಯಾರಿಸಿ, ಪ್ರತಿಷ್ಠಾಪನೆಗೆ ತಯಾರಿ ನಡೆಸುತ್ತಿದ್ದರು. ಹೊಸ ಮೂರ್ತಿಯನ್ನು ಗ್ರಾಮದ ಆಂಜನೇಯ ದೇವಸ್ಥಾನದಲ್ಲಿ ಇರಿಸಲಾಗಿತ್ತು. ಬಣ್ಣ ಹಚ್ಚುವುದು ಮಾತ್ರ ಬಾಕಿ ಇತ್ತು. ಮಾರ್ಚ್ ತಿಂಗಳಲ್ಲಿ ಅದ್ದೂರಿಯಾಗಿ ಪ್ರತಿಷ್ಠಾಪನೆ ಮಾಡುವ ಯೋಜನೆ ಇತ್ತು. ಆದರೆ ಕಳೆದ ಎರಡ್ಮೂರು ದಿನಗಳಿಂದ ರಾತ್ರಿ ಸಮಯದಲ್ಲಿ ಇಡೀ ಗ್ರಾಮದಾದ್ಯಂತ ಗೆಜ್ಜೆಯ ಶಬ್ಧ ಕೇಳಿಬರುತ್ತಿದೆ. ವಿಶೇಷವಾಗಿ ದೇವಿಯ ಮೂರ್ತಿ ಇರಿಸಿದ ಸ್ಥಳದಿಂದಲೇ ಈ ಶಬ್ಧ ಹೆಚ್ಚಾಗಿ ಕೇಳಿಬರುತ್ತಿದೆ ಎಂದು ಹೇಳುತ್ತಿದ್ದಾರೆ.

## ರಾಮನಗರ: ಟೌನ್‌ಶಿಪ್ ಯೋಜನೆ ಭೂ ಸ್ವಾಧೀನಕ್ಕೆ ರೈತರ ವಿರೋಧ, ಪ್ರತಿಭಟನೆ



ರಾಮನಗರ: ತಾಲ್ಲೂಕಿನ ಬಿಡದಿ ಹೋಬಳಿಯ ಭೈರಮಂಗಲ ಮತ್ತು ಕಂಚುಗಾರನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ ಯೋಜನೆಗೆ ಭೂ ಸ್ವಾಧೀನ ವಿರೋಧಿಸಿ, ಆ ಭಾಗದ ರೈತರು ನಗರದ ಕಂದಾಯ ಭವನದಲ್ಲಿರುವ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಕಚೇರಿ ಆವರಣದಲ್ಲಿ ಶನಿವಾರ ಪ್ರತಿಭಟನೆ ನಡೆಸಿದರು.

ಭೂ ಸ್ವಾಧೀನವಾಗಲಿರುವ 26 ಗ್ರಾಮಗಳ ರೈತರ ಅಹವಾಲು ಆಲಿಕೆ ಸಭೆಯನ್ನು ಮಾಗಡಿ ಶಾಸಕ ಎಚ್.ಸಿ. ಬಾಲಕೃಷ್ಣ ಅವರು ಕಚೇರಿಯಲ್ಲಿ ಹಮ್ಮಿಕೊಂಡಿದ್ದರು. ವಿಷಯ ತಿಳಿದು ಮಹಿಳೆಯರು ಸೇರಿದಂತೆ ನೂರಕ್ಕೂ ಹೆಚ್ಚು ಮಂದಿ ಸ್ಥಳದಲ್ಲಿ ಜಮಾಯಿಸಿದರು.

ನಮ್ಮ ಭೂಮಿ ನಮ್ಮ ಹಕ್ಕು, ಕೊಡುವುದಿಲ್ಲ ಕೊಡುವುದಿಲ್ಲ ಭೂಮಿ ಕೊಡುವುದಿಲ್ಲ ಎಂದು ಘೋಷಣೆಗಳನ್ನು ಕೂಗಿದ ರೈತರು, ಶಾಸಕ ಬಾಲಕೃಷ್ಣ ಹಾಗೂ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಅಹವಾಲು ಸಭೆ ನಡೆಯುತ್ತಿದ್ದ ಕಚೇರಿ ಎದುರು ಕುಳಿತು ಧರಣಿ ಕುಳಿತರು.

ಸ್ಥಳಕ್ಕೆ ಬಂದ ಬಾಲಕೃಷ್ಣ ಧರಣಿನಿರತರ ಮನವೊಲಿಸಲು ಮುಂದಾದರು. ಇದು ಸರ್ಕಾರದ ಯೋಜನೆ. ಯೋಜನೆಯನ್ನು ನಾನು ರದ್ದು ಮಾಡಲು ಸಾಧ್ಯವಿಲ್ಲ. ನಿಮ್ಮ ಅಹವಾಲು ಗಳನ್ನು ನನಗೆ ತಿಳಿಸಿ. ಸರ್ಕಾರದ ಗಮನಕ್ಕೆ ತಂದು ಪರಿಹರಿಸುವೆ ಎಂದು ಭರವಸೆ ನೀಡಿದರು.

ಅದಕ್ಕೆ ಒಪ್ಪದ ರೈತರು, ಯೋಜನೆಯನ್ನು ರದ್ದುಪಡಿಸಿ ನಮ್ಮ ಭೂಮಿಯನ್ನು ನಮಗೆ ಬಿಟ್ಟು ಬಿಡಿ ಎಂದು ಆಗ್ರಹಿಸಿದರು. ಅದು ನನ್ನ ಕೈಯಲ್ಲಿ ಇಲ್ಲ ಎಂದು ಬಾಲಕೃಷ್ಣ ಹೇಳಿದಾಗ, ರೈತರು ಆಕ್ರೋಶ ಹೊರಹಾಕಿದರು. ಮನವೊಲಿಕೆಗೆ ರೈತರು ಬಗ್ಗದಿದ್ದಾಗ ಬಾಲಕೃಷ್ಣ ಕಚೇರಿ ಒಳಗೆ ಹೋದರು. ರೈತರು ಹೊರಗಡೆ ಧರಣಿ ಮುಂದುವರಿಸಿದರು.

ಕೆಲ ಹೊತ್ತಿನ ನಂತರ ಹೊರಬಂದ ಬಾಲಕೃಷ್ಣ ಮತ್ತೆ ರೈತರ ಮನವೊಲಿಸಲು ಯತ್ನಿಸಿದರು. ಆಗಲೂ ರೈತರು ತಮ್ಮ ಪಟ್ಟು ಸಡಿಲಿಸಲಿಲ್ಲ. ಕಡಗೆ ಪೊಲೀಸರ ನೆರವಿನೊಂದಿಗೆ ಬಾಲಕೃಷ್ಣ ಕಚೇರಿಯಿಂದ ಹೊರ ನಡೆದರು.

## ವಿದ್ಯಾರ್ಥಿ ದೆಸೆಯಲ್ಲಿ ತಾನು ಕೂಡ ಕಬಡ್ಡಿ ಪಟುವಾಗಿದ್ದೆ: ಕರ್ನಾಟಕ ಕ್ರೀಡಾಕೂಟ ಉದ್ಘಾಟನೆಯಲ್ಲಿ ಬಾಲ್ಯ ಸ್ಮರಿಸಿದ ಸಿಎಂ

ತುಮಕೂರು: ಜಿಲ್ಲೆಯ ಕ್ರೀಡಾಕ್ಷೇತ್ರಕ್ಕೆ ಹೆಚ್ಚಿನ ಅನುದಾನ ನೀಡಲಾಗುವುದು. ತುಮಕೂರಿನಿಂದ ವಿಶ್ವಮಟ್ಟದ ಕ್ರೀಡಾಪಟುಗಳು ಹೊರಹೊಮ್ಮಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕ್ರೀಡಾಪಟುಗಳಿಗೆ ಶುಭಕೋರಿದರು. ನಗರದಲ್ಲಿ ಆಯೋಜಿಸಲಾಗಿದ್ದ ಕರ್ನಾಟಕ ಕ್ರೀಡಾಕೂಟ 2025–26 ಅನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿ ದೆಸೆಯಲ್ಲಿ ಕ್ರೀಡಾಪಟುವಾಗಿದ್ದೆ: ಕ್ರೀಡೆಯು ಶಿಸ್ತು, ಸಂಯಮ, ಸಮಯಪ್ರಜ್ಞೆ ಪಾಲನೆಗೆ ಸಹಕಾರಿ. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕ್ರೀಡಾಕೂಟ ನಡೆಯುತ್ತಿದ್ದು, ಇದರ ರೂವಾರಿಯಾಗಿರುವ ಗೃಹ ಸಚಿವ ಜಿ.ಪರಮೇಶ್ವರ್ ಅವರಿಗೆ ಅಭಿನಂದನೆ ಸಲ್ಲಿಸುವೆ ಎಂದರು.

ತಾನು ಕೂಡ ವಿದ್ಯಾರ್ಥಿ ದೆಸೆಯಲ್ಲಿ ಕಬಡ್ಡಿ ಪಟುವಾಗಿದ್ದೆ. ಅದರೊಂದಿಗೆ ಫುಟ್ಬಾಲ್, ಕ್ರಿಕೆಟ್ ಕ್ರೀಡೆಯಲ್ಲಿಯೂ ಸಹ ಆಸಕ್ತಿ ಹೊಂದಿದ್ದೆ. ಈಗಲೂ ಏಕದಿನ ಕ್ರಿಕೆಟ್, ಟಿ–20 ಕ್ರಿಕೆಟ್ ವೀಕ್ಷಿಸುವ ಹವ್ಯಾಸ ಉಳಿಸಿಕೊಂಡಿರುವೆ. ತನ್ನ ಕೆಲಸದೊತ್ತಡದ ನಡುವೆ ಈಗಲೂ ಅಂತಾ ರಾಷ್ಟ್ರೀಯ ಫುಟ್ಬಾಲ್ ಪಂದ್ಯಗಳನ್ನು ವೀಕ್ಷಿಸು ವುದನ್ನು ತಪ್ಪಿಸುವುದಿಲ್ಲ ಎಂದು ಕ್ರೀಡೆಗಳ ಬಗ್ಗೆ ತಮಗಿದ್ದ ಆಸಕ್ತಿಯನ್ನು ಸಿಎಂ ವ್ಯಕ್ತಪಡಿಸಿದರು.

ಸೋಲು ಗೆಲುವುಗಿಂತ ಕ್ರೀಡಾಸ್ಫೂರ್ತಿ ಮುಖ್ಯ: ಕ್ರೀಡೆಯಲ್ಲಿ ಸೋಲು ಗೆಲುವು ಮುಖ್ಯ ವಲ್ಲ, ಕ್ರೀಡಾಸ್ಫೂರ್ತಿ ಮುಖ್ಯ. ಪ್ರತಿ ಕ್ರೀಡಾಪಟುವು ಇದನ್ನು ಪಾಲಿಸಬೇಕು. ಕ್ರೀಡಾಪಟುಗಳಿಗೆ ಉತ್ತಮ ಭವಿಷ್ಯವಿದ್ದು, ಕಠಿಣ ಶ್ರಮ ಅತ್ಯಗತ್ಯ. ಪರಿಶ್ರಮದಿಂದ ಗುರಿ ಸಾಧಿಸಲು ಉತ್ತಮ ತರಬೇತಿ ಅಗತ್ಯ ಎಂದರು.

ಕ್ರೀಡಾಪಟುಗಳ ಪ್ರೋತ್ಸಾಹಕ್ಕೆ ಸರ್ಕಾರ ಬದ್ಧ: ಕ್ರೀಡಾಪಟುಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಸರ್ಕಾರಿ ಉದ್ಯೋಗದಲ್ಲಿ ಮೀಸಲಾತಿಯ ನಿಯಮವನ್ನು ಜಾರಿಗೊಳಿಸಿದೆ. ಪೊಲೀಸ್ ಇಲಾಖೆಯಲ್ಲಿ ಕಾನ್ಸ್ಟೇಬಲ್ ಹುದ್ದೆಯಿಂದ ಆರಕ್ಷಕ ಉಪಾಧೀಕ್ಷಕರ ಹುದ್ದೆಯ ವರೆಗೆ ಶೇ.3 ರಷ್ಟು ಮೀಸಲಾತಿಯನ್ನು ಸರ್ಕಾರ ನೀಡುತ್ತಿದೆ. ಒಲಿಂಪಿಕ್ಸ್, ಪಾರಾ ಒಲಿಂಪಿಕ್ಸ್, ಏಷಿಯನ್ ಗೇಮ್ಸ್, ಕಾಮನ್ ವೆಲ್ತ್ ಗೇಮ್ಸ್, ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ವಿಜೇತರಾದ/ಭಾಗವಹಿಸುವ ಕ್ರೀಡಾಪಟುಗಳಿಗೆ ಸರ್ಕಾರಿ ಉದ್ಯೋಗದಲ್ಲಿ ಮೀಸಲಾತಿ ನೀಡಲಾಗುತ್ತಿದೆ. ವಿವಿಧ ಇಲಾಖೆಗಳಲ್ಲಿ ಶೇ.2 ರ ಮೀಸಲಾತಿಯನ್ನು ನೀಡಲಾಗುತ್ತಿದೆ. ಒಲಿಂಪಿಕ್ಸ್‌ನಲ್ಲಿ ಪದಕ ವಿಜೇತ ಕ್ರೀಡಾಪಟುಗಳಿಗೆ ನಗದು ಬಹುಮಾನ ನೀಡುವ ಮೂಲಕ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸಲಾಗುತ್ತಿದೆ ಎಂದು ಸಿಎಂ ಹೇಳಿದರು.

# ಜನಾರ್ದನ ರೆಡ್ಡಿ, ಶ್ರೀರಾಮುಲು ಶಕ್ತಿ ಅಡಗಿಸಲು ಯಾರಿಂದಲೂ ಸಾಧ್ಯವಿಲ್ಲ: ಬಸವರಾಜ ಬೊಮ್ಮಾಯಿ

**ಬಳ್ಳಾರಿ:** ಮಾಜಿ ಸಚಿವರಾದ ಜನಾರ್ದನ ರೆಡ್ಡಿ ಹಾಗೂ ಶ್ರೀರಾಮುಲು ಅವರ ಶಕ್ತಿ ಅಡಗಿಸಲು ಯಾರಿಂದಲೂ ಸಾಧ್ಯವಿಲ್ಲ. ಭ್ರಷ್ಟ ಕಾಂಗ್ರೆಸ್ ಸರ್ಕಾರವನ್ನು ಕಿತ್ತು ಹಾಕಲು ಬಿಜೆಪಿ ಹಳ್ಳಿ ಹಳ್ಳಿಗೆ ತೆರಳಿ ಹೋರಾಟ ನಡೆಸುತ್ತದೆ. ಜನಾರ್ದನ ರೆಡ್ಡಿ ಹಾಗೂ ಶ್ರೀರಾಮುಲು ಜೊತೆಗೆ ಬಿಜೆಪಿ ಯಾವಾಗಲೂ ಇರುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.

ಬಳ್ಳಾರಿಯಲ್ಲಿ ಪೋಸ್ಟರ್ ಹಾಕುವ ವಿಚಾರದಲ್ಲಿ ನಡೆದ ಗಲಾಟೆ ವಿರೋಧಿಸಿ ನಡೆದ ಬೃಹತ್ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ನಾವು ಶೆಡ್ಡು ಹೊಡೆದು ಸಂಗ್ರಾಮಕ್ಕೆ ತಯಾರಾಗಬೇಕು. ಕಾಂಗ್ರೆಸ್ ನ ಎರಡೂವರೆ ವರ್ಷದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ದಿನ ನಿತ್ಯ ಕೊಲೆ ರೇಪು ಸುದ್ದಿ ಕೇಳಿ ಸಾಕಾಗಿದೆ. ಹಲವಾರು ರೀತಿಯಲ್ಲಿ ಪೊಲಿಸರ ದಬ್ಬಾಳಿಕೆ ಇಡೀ ರಾಜ್ಯದಲ್ಲಿ ಇದೆ.

ಬಳ್ಳಾರಿಯಲ್ಲಿ ಈ ಘಟನೆ ಆಗಲು ಎರಡು ಕಾರಣ ಜನಾರ್ದನ ರೆಡ್ಡಿ ಕೋರ್ಟಿನ ಆದೇಶದ ಪ್ರಕಾರ ಬಳ್ಳಾರಿಗೆ ಬಂದಿದ್ದರಿಂದ ತಮಗೆ ಉಳಿಗಾಲವಿಲ್ಲ ಎಂದು, ಜನಾರ್ದರೆಡ್ಡಿ ಮತ್ತು ಅವರ ಆತ್ಮೀಯ ಸ್ನೇಹಿತ ರಾಮುಲು ಒಂದಾಗಿದ್ದಾರೆ ಎಂದರೆ ಬಳ್ಳಾರಿಯ ಕಾಂಗ್ರೆಸ್ ನಾಯಕರ ಕುರ್ಚಿ ಅಲುಗಾಡುತ್ತಿದೆ. ರಾಮುಲು ವೇಗ, ಜನಾರ್ದನ ರೆಡ್ಡಿ ಶಕ್ತಿ, ಬೆಂಕಿ ಬಿರುಗಾಳಿ ಇದ್ದ ಹಾಗೆ. ಕಾಂಗ್ರೆಸನವರ ಗುಂಡಿಗಿಂತ ನಮ್ಮ ಎದೆ ಗಟ್ಟಿಯಿದೆ ಜನಾರ್ದನ ರೆಡ್ಡಿ, ರಾಮುಲು ಶಕ್ತಿ ಅಡಗಿಸಲು ಸಾಧ್ಯವಿಲ್ಲ ಎಂದು ಹೇಳಿದರು.

ಈ ರೀತಿಯ ಘಟನೆ ಎಲ್ಲ ಕಡೆ ನಡೆಯುತ್ತಿದೆ. ಹುಬ್ಬಳ್ಳಿಯಲ್ಲಿ ಹೆಣ್ಣು ಮಗಳ ಬಟ್ಟೆಯನ್ನು ಪೊಲೀಸರೆ ಬಿಚ್ಚುತ್ತಾರೆ. ಕೊಲಾರದಲ್ಲಿ ಮಹಿಳಾ ಅಧಿಕಾರಿಯನ್ನು ಸುಟ್ಟು ಹಾಕುತ್ತೇನೆ ಎನ್ನುತ್ತಾರೆ. ಭದ್ರಾವತಿಯಲ್ಲಿ ಅಧಿಕಾರಿಗೆ ಶಾಸಕರ ಪುತ್ರ ಧಮ್ಕಿ ಹಾಕುತ್ತಾನೆ. ಅದೇ ರೀತಿ ಮಾಗಡಿಯಲ್ಲಿ ತಹಸಿಲ್ದಾರಗೆ ಚಪ್ಪಲೀಲಿ ಹೊಡಿತಿನಿ ಅಂತಾರೆ. ಸುಟ್ಟು ಹಾಕುವದು ಚಪ್ಪಲಿಯಲ್ಲಿ ಹೊಡೆಸುವುದು ಕಾಂಗ್ರೆಸ್ ಸಂಸ್ಕೃತಿ. ಇಲ್ಲಿ ಯಾರಿಗೂ ನೆಮ್ಮದಿ ಇಲ್ಲ ಎಂದು ಹೇಳಿದರು.

**ಎಸ್ಟಿ ಮೀಸಲಾತಿ ಹೆಚ್ಚಳ**

ವಾಲ್ಮಿಕಿ ಜನಾಂಗ ಮೂವತ್ತು ವರ್ಷದಿಂದ ಮೀಸಲಾತಿ ಹೆಚ್ಚಳಕ್ಕೆ ಹೋರಾಟ ಮಾಡುತ್ತ ಬಂದಿತ್ತು. ಶೇ 3%



ಮೀಸಲಾತಿಯನ್ನು 7% ಕ್ಕೆ ಹೆಚ್ಚಿಸುವಂತೆ ಕೇಳಿದರು. ನಾವು ಎಸ್ಟಿ ಸಮುದಾಯಕ್ಕೆ ಪ್ರತ್ಯೇಕ ಇಲಾಖೆ ಮಾಡಿದೆವು, ವಾಲ್ಮೀಕಿ ಸಮುದಾಯದ ಸ್ವಾಮಿಜಿ, ರಾಮುಲು ಪ್ರತಿಭಟನೆ ಮಾಡಿದರೆ ಕಾಂಗ್ರೆಸ್ ನವರು ಒಬ್ಬರೂ ಬರಲಿಲ್ಲ. ನಾನು ಸಿಎಂ ಆಗಿದ್ದಾಗ ಮಿಸಲಾತಿಯನ್ನಿ 3% ರಿಂದ 7% ಕ್ಕೆ ಹೆಚ್ಚಿಸಿದೆವು ಇದರಿಂದ ಸಾವಿರಾರು ಮಕ್ಕಳಿಗೆ ಮೆಡಿಕಲ್, ಇಂಜಿನೀಯರಿಂಗ್ ಸಿಟು ಉದ್ಯೋಗ ಸಿಗುತ್ತಿದೆ. ಯಡಿಯೂರಪ್ಪ ಅವರ ನಾಯಕತ್ವದಿಂದ ಅದು ಸಾಧ್ಯವಾಗಿದೆ ಎಂದು ಹೇಳಿದರು.

**ಚರ್ಚೆಗೆ ಬನ್ನಿ**

ವಾಲ್ಮಿಕಿ ನಿಗಮದ ಸುಮಾರು ನೂರು ಕೊಟಿ ಹಣ ಕಾಂಗ್ರೆಸ್ ಎಂಪಿ ಚುನಾವಣೆಗೆ ಬಳಸಿದೆ. ಎಸ್ಟಿ ಜನಾಂಗ ಇದನ್ನು ಕ್ಷಮಿಸುವುದಿಲ್ಲ. ವಾಲ್ಮೀಕಿ ಜನಾಂಗದ ಬಗ್ಗೆ ಮಾತನಾಡುತ್ತೀರ ವಾಲ್ಮೀಕಿ ಸಮುದಾಯಕ್ಕೆ ಯಾರು ಹೆಚ್ಚು ಅನುಕೂಲ ಮಾಡಿಕೊಟ್ಟಿದ್ದಾರೆ ಎಂದು ಬನ್ನಿ ಚರ್ಚೆಗೆ ಎನ್ನುವ ಸವಾಲು ಹಾಕುತ್ತೇನೆ. ಆ ಜನಾಂಗಕ್ಕೆ ಕಾಂಗ್ರೆಸ್ ದೊಡ್ಡ ಅನ್ಯಾಯ ಮಾಡಿದೆ. ಶ್ರೀರಾಮುಲು ಅವರು ವಾಲ್ಮಿಕಿ ಜನಾಂಗಕ್ಕೆ ನ್ಯಾಯ ಕೊಡಿಸುವವರೆಗೂ ವಿಶ್ರಮಿಸುವುದಿಲ್ಲ ಅಂತ ಸಂಕಲ್ಪ ಮಾಡಬೇಕು. ಎಲ್ಲ ವಾಲ್ಮಿಕಿ ಜನರು ರಾಮುಲು ನೇತೃತ್ವದಲ್ಲಿ ಹೋರಾಟ ನಡೆಸಬೇಕು ಎಂದು ಕರೆ ನೀಡಿದರು.

ಜನಾರ್ದನ ರೆಡ್ಡಿ ಅವರು ಮನೆಯಲ್ಲಿ ಇದ್ದಾರೆ ಅಂತ ಅವರ ಮನೆ ಮೇಲೆ ಗುಂಡು ಹಾರಿಸಿದ್ದಾರೆ. ಭರತ ರೆಡ್ಡಿಗೆ ಶಾಪ ಕಂಡಿತವಾಗಲೂ ತಟ್ಟುತ್ತದೆ. ಜನಾರ್ದನ ರೆಡ್ಡಿ ಅವರನ್ನು ರಾಜಕೀಯವಾಗಿ ಯಾವ ರೀತಿಯಲ್ಲೂ ಮುಗಿಸಲು ಸಾಧ್ಯವಿಲ್ಲ. ಅವರು ಬಳ್ಳಾರಿಗೆ ಮಾಡಿದ ಸಹಾಯ ಜನರಿಗೆ ಮಾಡಿದ ಕೆಲಸ ಬಹಳಷ್ಟಿದೆ. 2008 ರ ನಂತರ ಬಳ್ಳಾರಿಯ ರಸ್ತೆ ಅಭಿವೃದ್ಧಿ, ಕುಡಿಯುವ ನಿರು ಜನರಿಗೆ ಸಾಕಷ್ಟು ಅನುಕೂಲ ಆಗಿದೆ ಎಂದರು.

**ಕಾಂಗ್ರೆಸ್ ನವರಿಂದ ಗಣಿ ಲೂಟಿ**

ಈ ಬಳ್ಳಾರಿ ಗಣಿ ಲೂಟಿ ಮಾಡಿದ್ದು ಕಾಂಗ್ರೆಸ್ ನವರು, ಅವರಿಗೆ ಸುಳ್ಳು ಕೇಸು ಹಾಕಿಸುವ ಪ್ರವೃತ್ತಿ ಇದೆ. ಗಣಿ ಅಕ್ರಮಕ್ಕೂ ಅವರಿಗೂ ಸಂಬಂಧ ಇರಲಿಲ್ಲ ಆಗಲು ಅವರ ಮೇಲೆ ಕೇಸ್ ಹಾಕಿಸಿದರು. ಕೋರ್ಟ್ ಅದನ್ನು ಡಿಸ್ ಮಿಸ್ ಮಾಡಿದೆ. ಸತ್ಯಕ್ಕೆ ಯಾವಾಗಲೂ ಜಯ ಇದೆ. ಮೃತ ರಾಜಶೇಖರ ಸಾವಿಗೆ ನ್ಯಾಯ ಕೊಡಿಸಲು ಬಿಜೆಪಿ ಹೋರಾಟ ಮಾಡುತ್ತದೆ. ಅಲ್ಲಿವರೆಗೂ ಬಿಜೆಪಿ ವಿಶ್ರಮಿಸುವುದಿಲ್ಲ. ಕಾಂಗ್ರೆಸ್ ಸರ್ಕಾರ ತೆಗೆಯುವವರೆಗೂ ನಾವು ಹಳ್ಳಿಹಳ್ಳಿಗೆ ಹೋಗಿ ಭ್ರಷ್ಟ ಸರ್ಕಾರವನ್ನು ಬೇರು ಸಮೇತ ಕಿತ್ತು ಹಾಕುತ್ತೇವೆ. ಬಳ್ಳಾರಿ ಅಭಿವೃದ್ಧಿ ಮಾಡಲು ಜನಾರ್ದನ ರೆಡ್ಡಿ ರಾಮುಲು ಅವರ ಹಿಂದೆ ನಾವಿದ್ದೇವೆ ಎಂದು ಸಾರಲು ನಾವು ಬಂದಿದ್ದೇವೆ ಇಷ್ಟು ದೊಡ್ಡ ಸಂಖ್ಯೆಯಲ್ಲಿ ಜನರು ಬಂದಿರುವುದಕ್ಕೆ ಕೋಟಿ ಕೋಟಿ ಧನ್ಯವಾದಗಳು ಎಂದು ಹೇಳಿದರು.

# "ಕೆಪಿಜೆಪಿ ಪಕ್ಷ ವತಿಯಿಂದ ಸ್ವಾಮಿ ವಿವೇಕಾನಂದ ಜಯಂತಿ ಆಚರಣೆ"

**ಪೀಣ್ಯ ದಾಸರಹಳ್ಳಿ:** ವಿವೇಕಾನಂದರು ಕಲ್ಕತ್ತದಲ್ಲಿ 1862 ಜನವರಿ 12ರಂದು ಜನಿಸಿದ್ದು, ಬಾಲ್ಯದಲ್ಲಿ ಉತ್ತಮ ವ್ಯಾಸಂಗ ಮಾಡಿ ಪಿಎಚ್ ಡಿ ಪದವಿ ಮುಗಿಸಿ ಸಾಂಸ್ಕೃತಿಕವಾಗಿ , ಧಾರ್ಮಿಕವಾಗಿ, ಆಧ್ಯಾತ್ಮಿಕವಾಗಿ, ಯುವ ಜನಾಂಗವನ್ನು ಹುಟ್ಟುಹಾಕಿ ದೇಶದಲ್ಲಿ ಯುವಶಕ್ತಿಯನ್ನು ಬಲಿಷ್ಠಗೊಳಿಸಿದರು ಎಂದು ಕರ್ನಾಟಕ



ಪ್ರಜ್ಞಾವಂತ ಜನತಾ ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾದ ಪುತ್ತೂರು ಮುತ್ತು ಮಹೇಶ್ ಗೌಡ ತಿಳಿಸಿದ್ದಾರೆ.

ಹೆಗ್ಗನಹಳ್ಳಿಯ ಕರ್ನಾಟಕ ಪ್ರಜ್ಞಾವಂತ ಜನತಾ ಪಕ್ಷದ ಪ್ರದಾನ ಕಚೇರಿಯಲ್ಲಿ ಸ್ವಾಮಿ ವಿವೇಕಾನಂದ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಅತ್ಯಂತ ಕಿರಿಯ 33 ನೇ ವಯಸ್ಸಿನಲ್ಲಿ ಮರಣ ಹೊಂದಿದರು, ಅವರ ಕೀರ್ತಿ ಯುವ ಜನತೆಗೆ ಆಶಾಕಿರಣವಾಗಿ ಬೆಳೆದರು ಎಂದು ತಿಳಿಸಿದ್ದಾರೆ.

ಪ್ರತಿ ವರ್ಷದಂತೆ ಮಾಗಡಿ ರಸ್ತೆಯ ಈಸ್ಟ್ ವೆಸ್ಟ್ ಕಾಲೇಜ್ ಹತ್ತಿರ ಇರುವ ಸಹನ ರಿಯಾಬಿಟೇಶನ್ ಕೇರ್ ಸೆಂಟರ್ ಮಕ್ಕಳಿಗೆ ಹಣ್ಣು ಅಕ್ಕಿ ಮೂಟೆ ವಿತರಿಸಿ ನಂತರ ಕಡಬಗೆರೆ ಕ್ರಾಸಿನಲ್ಲಿರುವ ಗಾಂಧಿ ವೃದ್ಧಾಶ್ರಮದ ದೇವರ ಮಕ್ಕಳಿಗೆ ಹಣ್ಣು ಅಕ್ಕಿ ಚೀಲ ವಿತರಿಸಿ.

ನಂತರ ಕನ್ನಳ್ಳಿಯ ಶ್ರೀ ವೀರಭದ್ರೇಶ್ವರ ದೇವಸ್ಥಾನಕ್ಕೆ



ಅಕ್ಕಿ ಮೂಟೆ ನೀಡಿ ಪ್ರಸಾದ ಸೇವಿಸಿ ಅಲ್ಲಿಯ ಭಕ್ತರಿಗೆ ಸಿಹಿ ಹಂಚಿದರು.

ಇದೇ ಸಂದರ್ಭದಲ್ಲಿ ಹಿರಿಯ ಮುಖಂಡರಾದ ನಿಂಗಪ್ಪ, ಮೂರ್ತಿ, ನಾಗೇಶ್, ನಾಗರಾಜು, ಡಿಎಸ್ಎಸ್ ಕುಮಾರ್, ಹಾಯ್ ಬೆಂಗಳೂರು ಪತ್ರಿಕೆಯ ಮುಖ್ಯ ವರದಿಗಾರ ಬಸವರಾಜ್ ಜಮಾದಾರ್ ಸೇರಿದಂತೆ ಕಾರ್ಯಕರ್ತರು ಮುಖಂಡರು ಮಕ್ಕಳು ಮುಂತಾದವರು ಉಪಸ್ಥಿತರಿದ್ದರು.

# ಮೃತ ರಾಜಶೇಖರ್ ಮನೆಗೆ ಭೇಟಿ, 10 ಲಕ್ಷ ಪರಿಹಾರ ಸಿಬಿಐ ತನಿಖೆ ಮಾಡಿಸಿ: ಬಿ.ವೈ.ವಿಜಯೇಂದ್ರ ಆಗ್ರಹ

**ಬಳ್ಳಾರಿ:** ಮುಖ್ಯಮಂತ್ರಿಗಳು ರಾಜಶೇಖರ್ ಸಾವಿನ ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಂಡು, ಚೆಲ್ಲಾಟ ಆಡದೇ ಸಮಗ್ರ ತನಿಖೆ ಮಾಡಿಸಬೇಕು. ಬಡ ಕುಟುಂಬಕ್ಕೆ ನ್ಯಾಯ ಸಿಗಲು ಸಿಬಿಐ ತನಿಖೆ ಮಾಡಿಸಲಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಪ್ರಮುಖರು ಸೇರಿ ಬಡ ಕುಟುಂಬದವರನ್ನು ಭೇಟಿ ಮಾಡಿದ್ದೇವೆ. ಅವರ ತಾಯಿಯನ್ನೂ ಭೇಟಿ ಮಾಡಿದ್ದೇವೆ. ಅವರಿಗೆ 10 ಲಕ್ಷ ಪರಿಹಾರ ಕೊಟ್ಟಿದ್ದೇವೆ ಎಂದರು. ಆದರೆ, ಯಾವುದೇ ಪರಿಹಾರದಿಂದ ನ್ಯಾಯ ಕೊಡಿಸಲು ಸಾಧ್ಯವಿಲ್ಲ ಎಂದು ತಿಳಿಸಿದರು.



ಆಗ್ರಹಿಸಿದ್ದಾರೆ.

ಮೃತ ರಾಜಶೇಖರ್ ಅವರ ಮನೆಗೆ ಭೇಟಿ ನೀಡಿದಾಗ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಕಾಂಗ್ರೆಸ್ ಮುಖಂಡರೇ ಕಾಂಗ್ರೆಸ್ ಕಾರ್ಯಕರ್ತ ರಾಜಶೇಖರರನ್ನು ಕೊಲೆ ಮಾಡಿದ್ದಾರೆ. ಅವರೇ ಗುಂಡು ಹಾರಿಸಿದ್ದರಿಂದ ಪ್ರಾಣ ಕಳೆಕೊಂಡಿದ್ದಾರೆ ಎಂದು ಆರೋಪಿಸಿದರು. ನಾವು ಇವತ್ತು ವಿಪಕ್ಷ ನಾಯಕರಾದ ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ, ಮಾಜಿ ಡಿಸಿಎಂ– ಸಂಸದ ಗೋವಿಂದ ಕಾರಜೋಳ, ಮಾಜಿ ಸಚಿವರಾದ ಬಿ.ಶ್ರೀರಾಮುಲು, ಜನಾರ್ಧನ ರೆಡ್ಡಿ,

ಬಿ.ಶ್ರೀರಾಮುಲು ಅವರು ಮಾತನಾಡಿ, ರಾಜಶೇಖರರ ಸಾವಿನ ಸಂದರ್ಭದಲ್ಲಿ ಅನೇಕ ಜನರಲ್ಲಿ ಗೊಂದಲ ಇತ್ತು. ಬಿಜೆಪಿಯವರಿಂದ ಕೊಲೆ ಆಗಿದೆ ಎಂದು ತಿಳಿಸುವ ಕೆಲಸ ಮಾಡಿದ್ದರು. ಈ ಕೊಲೆ ಕಾಂಗ್ರೆಸ್ಸಿನವರಿಂದಲೇ ಆಗಿದೆ ಎಂಬ ವಿಷಯಕ್ಕೆ ಸಂಬಂಧಿಸಿದ ಎಲ್ಲ ವಿಡಿಯೋಗಳನ್ನು ನಾವು ಕೊಟ್ಟಿದ್ದೇವೆ ಎಂದು ತಿಳಿಸಿದರು.

ಸಾವು ಯಾರಿಂದ ಎಂಬ ವಿಷಯದಲ್ಲಿ ಗೊಂದಲ ಇದ್ದ ಕಾರಣ ಕೂಡಲೇ ಇಲ್ಲಿ ಬಂದಿರಲಿಲ್ಲ. ಇದೀಗ ಪರಿಹಾರದ ಹಣವನ್ನು ಚೆಕ್ ಮೂಲಕ ಮೃತರ ತಾಯಿಗೆ ಕೊಡಲಾಗಿದೆ ಎಂದು ವಿವರಿಸಿದರು.

# 1.53 ಲಕ್ಷ ಕೋಟಿ ರೂ. ಹೊಸ ಹೂಡಿಕೆ ಆಕರ್ಷಣೆ: ಎಂ ಬಿ ಪಾಟೀಲ

ಬೆಂಗಳೂರು: ಕಳೆದ ವರ್ಷದ ಫೆಬ್ರುವರಿಯಲ್ಲಿ ಜಾಗತಿಕ ಹೂಡಿಕೆದಾರರ ಸಮಾವೇಶ ನಡೆಸಿದ ನಂತರದ 11 ತಿಂಗಳ ಅವಧಿಯಲ್ಲಿ ರಾಜ್ಯವು 1.53 ಲಕ್ಷ ಕೋಟಿ ರೂ.ಗಳಷ್ಟು ಹೊಸ ಹೂಡಿಕೆಯ ಹಲವು ಕೈಗಾರಿಕಾ



ಯೋಜನೆಗಳನ್ನು ಆಕರ್ಷಿಸಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ತಿಳಿಸಿದ್ದಾರೆ.

ರಾಜ್ಯ ಸರಕಾರದ ಉನ್ನತ ಮಟ್ಟದ ನಿಯೋಗದೊಂದಿಗೆ ದಾವೋಸ್ ಆರ್ಥಿಕ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ತೆರಳುವ ಮುನ್ನ ಅವರು ಈ ವಿವರ ಮತ್ತು ಅಂಕಿಅಂಶಗಳನ್ನು ನೀಡಿದ್ದಾರೆ. ರಾಜ್ಯಕ್ಕೆ ಹೂಡಿಕೆಯನ್ನು ಆಕರ್ಷಿಸುವ ಪ್ರಯತ್ನಗಳು ನಿರಂತರವಾಗಿ ಸಾಗಿದ್ದು, ಅದು ಕೇವಲ ಹೂಡಿಕೆದಾರರ ಸಮಾವೇಶಕ್ಕೆ ಮಾತ್ರ ಸೀಮಿತವಾಗಿಲ್ಲ ಎಂದು ಪ್ರತಿಪಾದಿಸಿದ್ದಾರೆ.

ಈ ಬಗ್ಗೆ ಹೇಳಿಕೆ ನೀಡಿರುವ ಅವರು, ತಯಾರಿಕೆ, ಮರುಬಳಕೆ ಇಂಧನ, ಡೇಟಾ ಕೇಂದ್ರಗಳು ಮತ್ತು ಜಾಗತಿಕ ಸಾಮರ್ಥ್ಯ ಕೇಂದ್ರಗಳ (ಜಿಸಿಸಿ) ಸ್ಥಾಪನೆ ಈ ವಲಯಗಳಲ್ಲಿ ಹಲವು ಅಗ್ರಗಣ್ಯ ಉದ್ಯಮ ಸಂಸ್ಥೆಗಳು ಈ ಹೂಡಿಕೆ ಮಾಡಲು ಆಸಕ್ತಿ ತೋರಿಸಿವೆ. ಈ ಪ್ರಸ್ತಾವನೆಗಳು ಇನ್ನು ಕೆಲವೇ ದಿನಗಳಲ್ಲಿ ಕರ್ನಾಟಕ ಉದ್ಯೋಗ ಮಿತ್ರಕ್ಕೆ ಬರಲಿದ್ದು, ಮುಂದಿನ ಹಂತದ ಪ್ರಕ್ರಿಯೆಗಳು ತ್ವರಿತವಾಗಿ ನಡೆಯಲಿವೆ ಎಂದಿದ್ದಾರೆ.

11 ತಿಂಗಳಲ್ಲಿ ಆಕರ್ಷಿಸಿರುವ ಹೊಸ ಬಂಡವಾಳದಲ್ಲಿ ತಯಾರಿಕೆ ವಲಯದಲ್ಲಿ 66,293 ಕೋಟಿ, ಪವನ ಮತ್ತು ಸೌರ ವಿದ್ಯುತ್ ಉತ್ಪಾದನೆಗೆ 20,913 ಕೋಟಿ, ಜಿಸಿಸಿ ಕೇಂದ್ರಗಳ ಸ್ಥಾಪನೆಗೆ 12,500 ಕೋಟಿ, ಮತ್ತು ಡೇಟಾ ಸೆಂಟರುಗಳ ಸ್ಥಾಪನೆಗೆ 6,350 ಕೋಟಿ ರೂಪಾಯಿ ಹೂಡಿಕೆ ಆಗಲಿದೆ ಎಂದು ಅವರು ಹೇಳಿದ್ದಾರೆ.

ಟೊಯೋಟಾ ಕಂಪನಿ ಜಿಗಣಿಯ ತನ್ನ ಘಟಕದಲ್ಲಿ ಗ್ಯಾಸೊಲಿನ್ ಮತ್ತು ಹೈಬ್ರಿಡ್ ಎಂಜಿನ್ನುಗಳ ತಯಾರಿಕೆಗೆ 1,330 ಕೋಟಿ ರೂ, ಕ್ಯೂಪೈಎಐ ಕಂಪನಿಯು ಬೆಂಗಳೂರಿನಲ್ಲಿ ತನ್ನ ಕ್ವಾಂಟಂ ಉತ್ಕೃಷ್ಟತಾ ಕೇಂದ್ರ ಸ್ಥಾಪನೆಗೆ 1,136 ಕೋಟಿ ರೂ, ಎಟಿ&ಎಸ್ ಕಂಪನಿಯು ಎಲೆಕ್ಟ್ರಾನಿಕ್ ಬಿಡಿಭಾಗಗಳ ತಯಾರಿಕೆಗೆ ನಂಜನಗೂಡಿನಲ್ಲಿ 2,850 ಕೋಟಿ ರೂ, ವಿಪ್ರೋ ಹೈಡ್ರಾಲಿಕ್ಸ್ ಕಂಪನಿಯು ಎಲೆಕ್ಟ್ರಾನಿಕ್ಸ್ ಮತ್ತು ಪಿಸಿಬಿ ವಲಯಕ್ಕೆ ಬೇಕಾದ ತಾಮ್ರದ ಲ್ಯಾಮಿನೇಟ್ ತಯಾರಿಕೆಗೆ 499 ಕೋಟಿ ರೂ, ಝೂನ್– ಫೋಲ್ಡ್ ಬಯೋಸೈನ್ಸಸ್ ಲಿಮಿಟೆಡ್ ಔಷಧ ವಿಜ್ಞಾನ ಕ್ಷೇತ್ರಕ್ಕೆ ಬೇಕಾಗುವ ಕಿಣ್ವಗಳ ತಯಾರಿಕೆಗೆ 490 ಕೋಟಿ ರೂ. ಹೂಡಿಕೆ ಮಾಡುತ್ತಿವೆ ಎಂದು ಅವರು ಅಂಕಿಅಂಶ ನೀಡಿದ್ದಾರೆ.

ಉಳಿದಂತೆ ಜೆಜೆಜಿ ಏರೋಸ್ಪೇಸ್ ವಿಮಾನಗಳ ಬಿಡಿಭಾಗಗಳ ತಯಾರಿಕೆಗೆ ದೊಡ್ಡಬಳ್ಳಾಪುರದ ಆದಿನಾರಾಯಣ ಹೊಸಹಳ್ಳಿಯಲ್ಲಿ 470 ಕೋಟಿ ರೂ, ಯಸಾಕಾವ ಇದೇ ಕೈಗಾರಿಕಾ ಪ್ರದೇಶದಲ್ಲಿ ವಿದ್ಯುನ್ಮಾನ ಉತ್ಪನ್ನಗಳ ತಯಾರಿಕಾ ಘಟಕ ಸ್ಥಾಪನೆಗೆ 330 ಕೋಟಿ ರೂ, ಐನಾಕ್ಸ್ ವಿಂಡ್ ಕೊಪ್ಪಳ ಜಿಲ್ಲೆಯ ಕುಷ್ಟಗಿಯಲ್ಲಿ ವಿಂಡ್ ಟರ್ಬೈನ್ ತಯಾರಿಕಾ ಘಟಕ ಸ್ಥಾಪನೆಗೆ 305 ಕೋಟಿ ರೂ, ಎಸ್ಎಪಿ ದೇವನಹಳ್ಳಿಯಲ್ಲಿ ತನ್ನ ಎರಡನೇ ಘಟಕ ಆರಂಭಕ್ಕೆ 1,960 ಕೋಟಿ ರೂ, ಗೂಗಲ್ ಬೆಂಗಳೂರಿನಲ್ಲಿ 2,500 ಕೋಟಿ ರೂ, ಎನ್.ಟಿ.ಟಿ. ತನ್ನ ಡೇಟಾ ಸೆಂಟರುಗಳ ಸ್ಥಾಪನೆಗೆ ದೇವನಹಳ್ಳಿಯಲ್ಲಿ 4,000 ಕೋಟಿ ರೂ, ಡೇಟಾ ಸಮುದ್ರ ಕಂಪನಿಯು ಮಂಗಳೂರು, ಹುಬ್ಬಳ್ಳಿ–ಧಾರವಾಡ ಮತ್ತು ಮೈಸೂರಿನಲ್ಲಿ 1,350 ಕೋಟಿ ರೂ, ಹಳದಿರಾಮ್ಸ್ ಸಮೂಹವು ತುಮಕೂರಿನ ವಸಂತ ನರಸಾಪುರದಲ್ಲಿ ತನ್ನ ಕುರುಕಲು ತಿಂಡಿ ಘಟಕ ಸ್ಥಾಪನೆಗೆ 444 ಕೋಟಿ ರೂ. ಬಂಡವಾಳ ಹೂಡಿಕೆ ಮಾಡಿವೆ ಎಂದು ಪಾಟೀಲ ಹೇಳಿದ್ದಾರೆ.

# ಮಾನವ ಬಹು ಅಂಗಾಂಗ ಕಸಿ ಆಸ್ಪತ್ರೆಗೆ ಐದು ವರ್ಷಗಳಲ್ಲಿ 4000 ಕೋಟಿ ವೆಚ್ಚ ಮಾಡುವ ಗುರಿ : ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೆಂಗಳೂರು :** ಸಾವಿರ ಹಾಸಿಗೆಗಳ ಚಾರಿಟಬಲ್ ಸೂಪರ್ ಸ್ಪೆಷಾಲಿಟಿ ಹಾಗೂ ಮಾನವ ಬಹು ಅಂಗಾಂಗ ಕಸಿ ಆಸ್ಪತ್ರೆಗೆ ಅಜೀಂ ಪ್ರೇಮ್ ಜಿ ಪ್ರತಿಷ್ಠಾನವು ಐದು ವರ್ಷಗಳಲ್ಲಿ 4000 ಕೋಟಿ ವೆಚ್ಚ ಮಾಡುವ ಗುರಿ ಹೊಂದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ವಿಧಾನ ಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ಸಾವಿರ ಹಾಸಿಗೆಗಳ ಚಾರಿಟಬಲ್ ಸೂಪರ್ ಸ್ಪೆಷಾಲಿಟಿ ಹಾಗೂ ಮಾನವ ಬಹು ಅಂಗಾಂಗ ಕಸಿ ಆಸ್ಪತ್ರೆ ನಿರ್ಮಾಣ ಮತ್ತು ನಿರ್ವಹಣೆ ಕುರಿತು ವೈದ್ಯಕೀಯ ಶಿಕ್ಷಣ ಇಲಾಖೆ ಹಾಗೂ ಅಜೀಂ ಪ್ರೇಮ್ ಜಿ ಪ್ರತಿಷ್ಠಾನ ನಡುವೆ ಒಡಂಬಡಿಕೆಗೆ ಸಹಿ ಹಾಕಿದ ನಂತರ ಮಾತನಾಡಿದರು.

ಅಜೀಂ ಪ್ರೇಮ್ ಜಿ ಪ್ರತಿಷ್ಠಾನದ ವತಿಯಿಂದ ಸಾವಿರ ಆಸ್ಪತ್ರೆಗಳ ಚಾರಿಟಬಲ್ ಸೂಪರ್ ಸ್ಪೆಷಾಲಿಟಿ ಹಾಗೂ ಮಾನವ ಬಹು ಅಂಗಾಂಗ ಕಸಿ ಆಸ್ಪತ್ರೆ ನಿರ್ಮಾಣಕ್ಕೆ ಸಾವಿರಾರು ಕೋಟಿ ರೂ ಗಳ ಆರೋಗ್ಯ ಸಂಬಂಧಿಸಿದಂತೆ ಒಡಂಬಡಿಕೆಗೆ ಸಹಿ ಮಾಡಲಾಗಿದೆ.

ಇದಕ್ಕಾಗಿ ರಾಜೀವ್ ಗಾಂಧಿ ಎದೆ ರೋಗಗಳ ಆಸ್ಪತ್ರೆ ಆವರಣದಲ್ಲಿ ಸರ್ಕಾರ 10 ಎಕರೆ ಸ್ಥಳವನ್ನು 99 ವರ್ಷಗಳ ಅವಧಿಗೆ ಗುತ್ತಿಗೆ ಆಧಾರದ ಮೇಲೆ ನೀಡಲು ಒಪ್ಪಂದವಾಗಿದೆ ಎಂದರು.

**ಪ್ರೇಮ್ ಜಿ ಪ್ರತಿಷ್ಠಾನಕ್ಕೆ ಸರ್ಕಾರ ಆಭಾರಿ**

ಅಜೀಂ ಪ್ರೇಮ್ ಜಿ ಅವರ ಈ ಮಹತ್ಕಾರ್ಯಕ್ಕೆ ಸರ್ಕಾರ ಆಭಾರಿಯಾಗಿದೆ. ಅದರಲ್ಲಿಯೂ ಉಚಿತವಾಗಿ ಈ ಕಾರ್ಯವನ್ನು ನೆರವೇರಿಸಲು ಮುಂದಾಗಿರುವುದು ಶ್ರೇಷ್ಠ ಕಾರ್ಯ ಎಂದರು .



**ಶಿಕ್ಷಣಕ್ಕೆ ನೆರವು**

ಅಜೀಂ ಪ್ರೇಮ್ ಜಿ ಪ್ರತಿಷ್ಠಾನವು ಕಳೆದ 25 ವರ್ಷಗಳಿಂದ ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರದಲ್ಲಿ ದೊಡ್ಡ ಪ್ರಮಾಣದಲ್ಲಿ ಸೇವೆ ಸಲ್ಲಿಸುತ್ತಿದೆ.

2021ರಲ್ಲಿ ಶಿಕ್ಷಕರ ತರಬೇತಿಗೆ, 2024 ರಲ್ಲಿ ಎಲ್.ಕೆ.ಜಿ ಯಿಂದ ಹತ್ತನೇ ತರಗತಿಯವರೆಗೆ ವಾರದಲ್ಲಿ ನಾಲ್ಕು ದಿನ ಮೊಟ್ಟೆ ಕೊಡುವ ಕಾರ್ಯಕ್ರಮಕ್ಕೆ ಒಂದೂವರೆ ಕೋಟಿ ರೂ ನೀಡುವ ಮೂಲಕ ಕೈಜೋಡಿಸಿದ್ದಾರೆ. ಸರ್ಕಾರಿ ಕಾಲೇಜುಗಳಲ್ಲಿ ಓದಿರುವವವರಿಗೆ ವರ್ಷಕ್ಕೆ 30 ಸಾವಿರ ವಿದ್ಯಾರ್ಥಿ ವೇತನವನ್ನು ದೀಪಿಕಾ ವಿದ್ಯಾರ್ಥಿ ವೇತನದಡಿ ನೀಡುತ್ತಿದ್ದಾರೆ ಎಂದು ತಿಳಿಸಿದ ಮುಖ್ಯಮಂತ್ರಿಗಳು ಅಜೀಂ ಪ್ರೇಮ್ ಜಿ ಅವರಿಗೆ ಧನ್ಯವಾದಗಳನ್ನು ತಿಳಿಸಿದರು.

**ಸಾರ್ವಜನಿಕ ವ್ಯವಸ್ಥೆಗಳು ಬಲಗೊಳ್ಳಬೇಕು**

ಅಜೀಂ ಪ್ರೇಮ್ ಜಿ ಪ್ರತಿಷ್ಠಾನದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅನುರಾಗ್ ಬೆಹರ್ , ಸಾರ್ವಜನಿಕ ವ್ಯವಸ್ಥೆಗಳಲ್ಲಿ ನಂಬಿಕೆಯಿಟ್ಟಿರುವ ಸಂಸ್ಥೆಯಾಗಿದ್ದು, ಸಾರ್ವಜನಿಕ ವ್ಯವಸ್ಥೆಗಳು ಬಲಗೊಳ್ಳಬೇಕು ಎಂದರು.

ಆರೋಗ್ಯ ಶುರುವಾಗುವುದು ಆಶಾ ಕಾರ್ಯಕರ್ತರು, ಪ್ರಾಥಮಿಕ ಆರೋಗ್ಯ ಕೇಂದ್ರಗಳಿಂದ. ನಮ್ಮ ಜನತೆ ಖಾಯಿಲೆ ಬೀಳದಿರುವಂತೆ ತಡೆಯುವುದು ನಮ್ಮ ಮುಖ್ಯ ಗುರಿಯಾಗಬೇಕು.

ಕರ್ನಾಟಕ ಅತ್ಯಂತ ಕ್ರಿಯಾಶೀಲ ರಾಜ್ಯವಾಗಿದ್ದು, ಆರೋಗ್ಯ ವ್ಯವಸ್ಥೆಯನ್ನು ಬಲಬಡಿಸುವಲ್ಲಿ ಅಧಿಕಾರಿಗಳು, ಆಡಳಿತ ಒಟ್ಟಾಗಿ ಕೆಲಸ ಮಾಡುತ್ತಿರುವ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

# ಭರತ್ ರೆಡ್ಡಿ ಬಂಧಿಸಲು ಗೋವಿಂದ ಕಾರಜೋಳ ಒತ್ತಾಯ ಕಾಂಗ್ರೆಸ್ ಸರಕಾರದ ವಿರುದ್ಧ ಬೃಹತ್ ಪ್ರತಿಭಟನೆ

**ಬಳ್ಳಾರಿ:** ಬಿಜೆಪಿ ವತಿಯಿಂದ ಬಳ್ಳಾರಿಯಲ್ಲಿ ಕಾಂಗ್ರೆಸ್ ಸರಕಾರದ ವಿರುದ್ಧ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಭ್ರಷ್ಟ, ಅಭಿವೃದ್ಧಿ ಶೂನ್ಯ ಕಾಂಗ್ರೆಸ್ ಸರಕಾರದ ವಿರುದ್ಧ




ಈ ಪ್ರತಿಭಟನೆ ನಡೆಯಿತು. ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ, ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಮಾಜಿ ಮುಖ್ಯಮಂತ್ರಿ ಮತ್ತು ಸಂಸದ ಬಸವರಾಜ ಬೊಮ್ಮಾಯಿ, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಉಪಮುಖ್ಯಮಂತ್ರಿ ಮತ್ತು ಸಂಸದ ಗೋವಿಂದ ಕಾರಜೋಳ, ಮಾಜಿ ಸಚಿವ ಬಿ. ಶ್ರೀರಾಮುಲು, ವಿಧಾನಪರಿಷತ್ ವಿಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್, ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ, ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ವಿ. ಸುನೀಲ್ ಕುಮಾರ್, ಪಿ. ರಾಜೀವ್, ಶಾಸಕ ಜಿ. ಜನಾರ್ಧನ ರೆಡ್ಡಿ, ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ಮೋಕಾ, ಸಂಸದರು, ಶಾಸಕರು, ವಿಧಾನಪರಿಷತ್ ಸದಸ್ಯರು, ಮಾಜಿ ಸಚಿವರು, ರಾಜ್ಯ ಪದಾಧಿಕಾರಿಗಳು, ಜಿಲ್ಲಾಧ್ಯಕ್ಷರು, ಜಿಲ್ಲಾ ಪದಾಧಿಕಾರಿಗಳು, ಮಹಾನಗರ ಪಾಲಿಕೆ ಸದಸ್ಯರು ಮತ್ತು ಪಕ್ಷದ ಮುಖಂಡರು ಉಪಸ್ಥಿತರಿದ್ದರು.


ಸಂಸದ ಗೋವಿಂದ ಕಾರಜೋಳ ಅವರು ಮಾತನಾಡಿ, ಗುಂಡು ಹಾರಿಸಿದವರು ಸುಪಾರಿ ಕಿಲ್ಲರ್‌ಗಳು. ಅವರು ಸರಕಾರಿ ಗನ್‌ಮ್ಯಾನ್‌ಗಳಲ್ಲ ಎಂದು ತಿಳಿಸಿದರು. ಸುಪಾರಿ ಕಿಲ್ಲರ್‌ಗಳನ್ನು ಕರೆದುಕೊಂಡು ಬಂದು ಭರತ್ ರೆಡ್ಡಿ ದೊಡ್ಡ ಅಪರಾಧ ಮಾಡಿದ್ದಾರೆ.

ಸಿದ್ದರಾಮಯ್ಯನವರೇ ನಿಮಗೆ ನೈತಿಕತೆ ಇದ್ದರೆ ಮೊದಲು ಭರತ್ ರೆಡ್ಡಿಯವರನ್ನು ಬಂಧಿಸಿ; ನಂತರ ತನಿಖೆ ಮಾಡಿ ಎಂದು ಆಗ್ರಹಿಸಿದರು. ಇಲ್ಲವೇ ಸಿಬಿಐಗೆ ತನಿಖೆ ಒಪ್ಪಿಸಿ ಎಂದು ಒತ್ತಾಯಿಸಿದರು. ಅಧಿಕಾರ ಶಾಶ್ವತವಲ್ಲ; ಯಾವ ರೀತಿ ಅಧಿಕಾರ ಮಾಡಿದ್ದೀರಿ ಎಂಬುದಷ್ಟೇ ಶಾಶ್ವತ ಎಂದು ಕಿವಿಮಾತು ಹೇಳಿದರು.

# ಬೆಂಗಳೂರು ವಾಹನ ಸವಾರರಿಗೆ ತಪ್ಪದ ಸಂಕಷ್ಟ: ರಸ್ತೆ ಗುಂಡಿಗೆ ಬಿದ್ದು ಭುಜದ ಮೂಳೆ ಮುರಿದುಕೊಂಡ ಟೆಕ್ಕಿ..!

ಬೆಂಗಳೂರು: ಬೆಂಗಳೂರಿನ ಗುಂಡಿ ಗಂಡಾಂತರಕ್ಕೆ ಕೊನೆ ಬೀಳುವ ಲಕ್ಷಣಗಳೇ ಕಾಣಿಸುತ್ತಿಲ್ಲ. ಮೃತ್ಯು ಸ್ವರೂಪಿ ಗುಂಡಿಗೆ ಸ್ಕೂಟರ್ ಬಿದ್ದು ಟೆಕ್ಕಿಯೊಬ್ಬ ಕೈ ಮೂಳೆ





ಮುರಿದುಕೊಂಡಿದ್ದಾರೆ. ಬೆಂಗಳೂರಿನ ಪಣತ್ತೂರು–ದಿಣ್ಣೆ ರಸ್ತೆ ಗುಂಡಿಯಿಂದಾಗಿ ಐಟಿ ಉದ್ಯೋಗಿ ಶ್ರೀಧರ್ ಎಂಬವರು ಗಂಭೀರ'ವಾಗಿ ಗಾಯಗೊಂಡಿದ್ದಾರೆ. ಶ್ರೀಧರ್ ಅವರ ಬಲ ಭುಜದ ಮೂಳೆ ಮುರಿದಿದ್ದು, ಇದರಿಂ ದಾಗಿ ಲಕ್ಷಾಂತರ ರೂಪಾಯಿ ವೆಚ್ಚದ ಶಸ್ತ್ರ ಚಿಕಿತ್ಸೆಗೆ ಒಳಗಾಗಬೇಕಾಗಿದೆ. ಶ್ರೀಧರ್ ಅವರು ಹೊರ ವರ್ತುಲ ರಸ್ತೆಯಲ್ಲಿರುವ ಬಹುರಾಷ್ಟ್ರೀಯ ಐಟಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದಾರೆ.

ಜನವರಿ 12ರ ಸೋಮವಾರ ಸಂಜೆ ಕಚೇರಿಯಿಂದ ಮನೆಗೆ ಮರಳುತ್ತಿದ್ದಾಗ ಈ ದುರ್ಘಟನೆ ಸಂಭವಿಸಿದೆ. ಪಣತ್ತೂರು–ದಿಣ್ಣೆ ಗುಂಜೂರು ಪಾಳ್ಯ ರಸ್ತೆಯ ಸಿಡಿಪಿ ರಸ್ತೆ ಬಳಿ ಸ್ಕೂಟರ್ ಚಲಾಯಿಸುತ್ತಿದ್ದಾಗ, ದೊಡ್ಡ ಹೊಂಡವೊಂದಕ್ಕೆ ಸ್ಕೂಟರ್ ಇಳಿದಿದೆ.

ಇದರಿಂದ ನಿಯಂತ್ರಣ ಕಳೆದುಕೊಂಡ ವಾಹನ ರಸ್ತೆ ಬದಿಯಲ್ಲಿದ್ದ ಮಣ್ಣು ಮತ್ತು ಕಸದ ರಾಶಿಗೆ ನುಗ್ಗಿದ್ದು, ಶ್ರೀಧರ್ ಅವರು ರಸ್ತೆಗೆ ಮೇಲೆ ಜೋರಾಗಿ ಬಿದ್ದಿದ್ದಾರೆ. ಕೆಲ ನಿಮಿಷ ಪ್ರಜ್ಞೆ ಕಳೆದುಕೊಂಡಿದ್ದ ಅವರಿಗೆ, ದಾರಿಹೋಕರು ನೀರು ಕೊಟ್ಟು ಉಪಚರಿಸಿ ಸಹಾಯ ಮಾಡಿದ್ದಾರೆ. ಆದರೆ, ಮನೆಗೆ ತಲುಪಿದ ಮೇಲೆ ಬಲ ಭುಜದಲ್ಲಿ ವಿಪರೀತ ಊತ ಕಾಣಿಸಿಕೊಂಡಿದೆ. ವೈದ್ಯರ ಸಲಹೆಯಂತೆ ಎಕ್ಸ್–ರೇ ಮತ್ತು ಎಂಆರ್ಐ ಸ್ಕ್ಯಾನ್ ಮಾಡಿ ದಾಗ ಆಘಾತಕಾರಿ ಸಂಗತಿ ತಿಳಿದುಬಂದಿದೆ.

ಅವರ ಬಲ ಭುಜದ ಮೇಲ್ಭಾಗದಲ್ಲಿ ಮೂಳೆ ಮುರಿತವಾಗಿದ್ದು,. ಇದಕ್ಕೆ ತಕ್ಷಣ ಶಸ್ತ್ರಚಿಕಿತ್ಸೆ ಅಗತ್ಯವಿದ್ದು, ಸುಮಾರು 1.25 ರಿಂದ 1.5 ಲಕ್ಷ ರೂಪಾಯಿ ವೆಚ್ಚವಾಗಲಿದೆ ಎಂದು ವೈದ್ಯರು ತಿಳಿಸಿದ್ದಾರೆ. ಈ ಕುರಿತು ಶ್ರೀಧರ್ ಅವರು ಸಾಮಾಜಿಕ ಜಾಲತಾಣದಲ್ಲಿ ವಿಡಿಯೋವೊಂದನ್ನು ಪೋಸ್ಟ್ ಮಾಡಿದ್ದು, ಅಸಮಾಧಾನ ವ್ಯಕ್ತಪಡಿಸಿದ್ದಾರೆ. ನಾನು ಸಂಪೂರ್ಣ ಗುಣಮುಖನಾಗಲು ಕನಿಷ್ಠ ಎರಡು ತಿಂಗಳು ಬೇಕು. ಮತ್ತೆ ಗಾಡಿ ಓಡಿಸಲು ಇನ್ನೆರಡು ತಿಂಗಳು ಬೇಕಾಗ ಬಹುದು. ಪ್ರತಿದಿನ ಮಗಳನ್ನು ಶಾಲೆಗೆ ಬಿಡುವುದು, ಹೆಂಡತಿಗೆ ಸಹಾಯ ಮಾಡುವುದು ಎಲ್ಲವೂ ನಿಂತುಹೋಗಿದೆ.

# ಭರತ್ ರೆಡ್ಡಿಗೆ ಅಷ್ಟೊ ತಾಕತ್ತಿದೆಯೇ? – ಛಲವಾದಿ ನಾರಾಯಣಸ್ವಾಮಿ

**ಬಳ್ಳಾರಿ:** ಭರತ್ ರೆಡ್ಡಿಯವರು 5 ನಿಮಿಷ ಸಾಕು; ಜನಾರ್ಧನ ರೆಡ್ಡಿಯವರ ಮನೆ ಸುಟ್ಟು ಭಸ್ಮ ಮಾಡುತ್ತೇನೆ ಎಂದಿದ್ದಾರೆ. ಇದು ಶಾಸಕರು ಆಡುವ ಮಾತೇ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಪ್ರಶ್ನಿಸಿದರು.

ಬಿಜೆಪಿ ವತಿಯಿಂದ ಬಳ್ಳಾರಿಯಲ್ಲಿ ಕಾಂಗ್ರೆಸ್ ಸರಕಾರದ ವಿರುದ್ಧ ಬೃಹತ್ ಪ್ರತಿಭಟನೆ ನಡೆಸಲಾಯಿತು. ಈ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಎಂಥ ಭಸ್ಮಾಸುರನಿಗೆ ಜನ್ಮ ಕೊಟ್ಟಿದ್ದಾರೆ ಈ ಬಳ್ಳಾರಿಯಲ್ಲಿ ಎಂದು ಕಳವಳ ವ್ಯಕ್ತಪಡಿಸಿದರು. ಇವತ್ತಲ್ಲ ನಾಳೆ ಜನಾರ್ಧನ ರೆಡ್ಡಿ ಮುಗಿಸಿ ಬಿಡುವುದಾಗಿ ಹೇಳುತ್ತೀರಿ. ಏನು ಅಷ್ಟೊ ತಾಕತ್ತಿದೆಯೇ ನಿಮಗೆ ಎಂದು ಸವಾಲು ಹಾಕಿದರು.

ನಾವೂ ನೋಡುತ್ತೇವೆ; ನಾವು ಯಾವುದಕ್ಕೂ ಹೆದರುವ ಮಕ್ಕಳಲ್ಲ. ನಾವೂ ಇಳಿಯುತ್ತೇವೆ. ನಿಮ್ಮಂತೆ ದುಂಡಾವರ್ತಿ ಮಾಡುವುದಿಲ್ಲ. ಡಾ. ಬಾಬಾಸಾಹೇಬ ಅಂಬೇಡ್ಕರರು ಕೊಟ್ಟ ಸಂವಿಧಾನದ ಅಡಿಯಲ್ಲೇ ನಿಮಗೆ ಪಾಠ ಕಲಿಸಲು ಸಾಧ್ಯವಿದೆ. ಅದನ್ನು ಕಲಿಸಿ ತೋರಿಸುತ್ತೇವೆ ಎಂದು ತಿಳಿಸಿದರು.

ನೀವು ಕೋಪ ಮಾಡಿಕೊಂಡು ಮೂಗು ಕುಯ್ದು



ಹಾಕಿದರೆ ಅದು ಮತ್ತೆ ಬೆಳೆಯದು ಎಂದು ಜನಾರ್ಧನ ರೆಡ್ಡಿ ಮತ್ತು ಶ್ರೀರಾಮುಲು ಅವರಿಗೆ ಕಿವಿಮಾತು ಹೇಳಿದರು. ನಿಮ್ಮ ಕೋಪದ ಕೂಸು, ಪಾಪದ ಕೂಸು ನಿಮ್ಮ ಮೇಲೆ ಹಗೆತನ ಸಾಧಿಸುತ್ತಿದೆ ಎಂದು ತಿಳಿಸಿದರು.

# ಮಕ್ಕಳು ಹೋಂವರ್ಕ್ ಮಾಡಬಾರದು, ಹಾರ್ಡ್‌ವರ್ಕ್ ಮಾಡಬೇಕು: ಬಸವರಾಜ ಬೊಮ್ಮಾಯಿ

ಚಿತ್ರದುರ್ಗ( ಹಿರಿಯೂರು) 'ಮಕ್ಕಳು ಹೋಂವರ್ಕ್ ಮಾಡಬಾರದು, ಹಾರ್ಡ್‌ವರ್ಕ್ ಮಾಡಬೇಕು' ಎಂದು ಮಾಜಿ ಮುಖ್ಯಮಂತ್ರಿಗಳು ಹಾಗೂ ಸಂಸದ ಬಸವರಾಜ



ಬೊಮ್ಮಾಯಿ ಹೇಳಿದ್ದಾರೆ

ಹಿರಿಯೂರು ತಾಲ್ಲೂಕು, ಗೊಲ್ಲಹಳ್ಳಿಯ ಜೆಟ್ ಸಿಬಿಎಸ್‌ಇ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಸಂಕ್ರಾಂತಿ ಸಂಭ್ರಮ ಹಾಗೂ ಮಕ್ಕಳ ಸಂತೆ ಕಾರ್ಯಕ್ರಮದ ಉದ್ಘಾಟನೆ ಮಾಡಿ ಮಾತನಾಡಿದರು. ಹಳ್ಳಿ ಮಕ್ಕಳು ಪ್ರಾಮಾಣಿಕವಾಗಿ ಪರಿಶ್ರಮಪಟ್ಟರೆ ಯಶಸ್ಸು ಸಾಧಿಸುವುದು ಕಷ್ಟವಲ್ಲ ಎಂದು ಮಕ್ಕಳಿಗೆ ತಿಳಿ ಹೇಳಿದರು.

ಥೇನ್ ಸಿಂಗ್ 10ವರ್ಷ ಇರುವಾಗಲೇ ಅವರ ತಾಯಿ ಹಿಮಾಲಯ ಪರ್ವತ ಹತ್ತುತ್ತೀಯಾ ಎಂದು ಕೇಳಿದರು. ಆಗ ಥೇನ್ ಸಿಂಗ್ ಹೌದು ಹತ್ತುತ್ತೇನೆ ಎಂದು ಹೇಳಿದ, ಆದರೆ ಅಂದಿನಿಂದ ಥೇನ್ ಸಿಂಗ್ ಹಿಮಾಲಯ ಪರ್ವತ ಏರುವ ಕನಸನ್ನು ಕಂಡಿದ್ದ, ಜೀವನದಲ್ಲಿ ಅದನ್ನು ಸಾಧಿಸಿ ತೋರಿಸಿದ. ಹೀಗೆ ಮಕ್ಕಳು ತಾವು ಕಾಣುವ ಕನಸ್ಸನ್ನು ಪರಿಶ್ರಮದ ಮೂಲಕ ನನಸು ಮಾಡಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಅತಿ ವೇಗವಾಗಿ ಹೋಗುವ ವಾಹನಕ್ಕೆ ಜೆಟ್ ಎಂದು ಕರೆಯುತ್ತಾರೆ. ನೀವು ಓದುತ್ತಿರುವ ಶಾಲೆಯ ಹೆಸರು ಜೆಟ್ ನಿಮ್ಮ ಬೆಳವಣಿಗೆ ಸಹ ವಿಭಿನ್ನವಾಗಿದೆ ಎಂದು ಹೇಳಿದ ಅವರು ಹಂಸವು ಸರಸ್ವತಿಯ ವಾಹನ, ಅಂತೆಯೇ ನಿಮ್ಮ ಬದುಕಿಗೆ ಜೆಟ್ ಹಂಸವಿದ್ದಂತೆ ಎಂದು ಬಣ್ಣಿಸಿದರು.

ಸಿಬಿಎಸ್‌ಇ ಶಿಕ್ಷಣ ನೀಡುವ ಮೂಲಕ ಗ್ರಾಮೀಣ ಮಕ್ಕಳ ಭವಿಷ್ಯವನ್ನು ಉತ್ತಮವಾಗಿ ರೂಪಿಸುತ್ತಿರುವ ಜೆಟ್ ಶಾಲೆಯ ಆಡಳಿತ ಮಂಡಳಿ ಮತ್ತು ಶಿಕ್ಷಕರನ್ನು ಮಾಜಿ ಮುಖ್ಯಮಂತ್ರಿಗಳು ತುಂಬು ಹೃದಯದಿಂದ ಶ್ಲಾಘಿಸಿದರು.

ಜೆಟ್ ಶಾಲೆಯಲ್ಲಿ ಇಂದು ನಡೆದ ಮಕ್ಕಳ ಸಂತೆಯಲ್ಲಿ ಸುಮಾರು 1ಲಕ್ಷರೂ ಮೌಲ್ಯದ ಹಣ್ಣುಗಳು, ತರಕಾರಿಗಳು, ಮನೆಯಲ್ಲಿ ತಯಾರಿಸಿದ ತಿಂಡಿ ತಿನಿಸುಗಳು, ಕಾಳುಗಳು ಮಾರಾಟವಾದವು.

500ಕ್ಕೂ ಹೆಚ್ಚು ಮಕ್ಕಳು ತಾವು ತಂದ ಪದಾರ್ಥವನ್ನು ಮಾರಾಟ ಮಾಡುವ ಮೂಲಕ ವ್ಯಾವಹಾರಿಕ ಜ್ಞಾನವನ್ನು ಹೆಚ್ಚಿಸಿಕೊಂಡರು.

ಎರಡು ದಿನದಿಂದ ನಡೆಯುತ್ತಿರುವ ಕಾರ್ಯಕ್ರಮದಲ್ಲಿ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ, ಕ್ರೀಡೆ, ವಿಜ್ಞಾನ, ಸಮಾಜ ವಿಜ್ಞಾನ, ಗಣಿತ ವಿಷಯಗಳ ವಸ್ತು ಪ್ರದರ್ಶನ ಹಾಗೂ ಜಾನಪದ ಮತ್ತು ಜ್ಞಾನದ ಆಧಾರದ ಚಟುವಟಿಕೆಗಳು ನಡೆದವು.

ಸಮಾರಂಭದಲ್ಲಿ ಶಾಲೆಯ ಅಧ್ಯಕ್ಷರಾದ ಚಂದ್ರಶೇಖರ ಬೆಳಗೆರೆ, ಕಾಯದರ್ಶಿ ಶ್ರೀಮತಿ ಎನ್.ಗಿರಿಜಾ, ಮಾಜಿ ಕಾರ್ಯದರ್ಶಿ ಬಿ.ಎಸ್.ಮಲ್ಲಿಕಾರ್ಜುನ, ಪ್ರಾಂಶುಪಾಲರಾದ ಷಣ್ಮುಗ ಸುಂದರಂ ಹಾಗೂ ಸಮಾಜ ಸೇವಕಿ ಶಶಿಕಲಾ ರವಿಶಂಕರ ಅವರು ಭಾಗವಹಿಸಿದ್ದರು.



ಕೆ ಎಸ್ ಆರ್ ಟಿ ಸಿ ಕೇಂದ್ರ ಕಛೇರಿಯಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿ ಹುದ್ದೆ ನಿರೀಕ್ಷೆಯಲ್ಲಿದ್ದ 30 ಮೃತಾವಲಂಬಿತರಿಗೆ ಸಾರಿಗೆ ಹಾಗೂ ಮುಜರಾಯಿ ಸಚಿವರಾದ ರಾಮಲಿಂಗಾ ರೆಡ್ಡಿರವರು ನೇಮಕಾತಿ ಪತ್ರವನ್ನು ನೀಡಿದರು.

ಈ ಸಂದರ್ಭದಲ್ಲಿ ರಿಜ್ವಾನ್ ನವಾಬ್, ಉಪಾಧ್ಯಕ್ಷರು, ಅಕ್ರಂ ಪಾಷ, ವ್ಯವಸ್ಥಾಪಕ ನಿರ್ದೇಶಕರು, ಡಾ.ನಂದಿನಿದೇವಿ ಕೆ, ನಿರ್ದೇಶಕರು (ಸಿ & ಜಾ) ರವರು ಉಪಸ್ಥಿತರಿದ್ದರು.

# ಸ್ವಾತಂತ್ರ ಹೋರಾಟಗಾರ ಡಾ. ಭೀಮಣ್ಣ ಖಂಡ್ರೆ ನಿಧಾನಕ್ಕೆ ಎಂ. ಇ . ಐ ಸಂಸ್ಥೆಯ ಅಧ್ಯಕ್ಷ ಎಸ್.ಮನೋಹರ್ ಸಂತಾಪ

**ಬೆಂಗಳೂರು :** ಹಿರಿಯ ರಾಜಕಾರಣಿ, ಕರ್ನಾಟಕದ ಗಡಿಭಾಗ ಬೀದರ್ ಜಿಲ್ಲೆಯ ಕನ್ನಡ ನೆಲವನ್ನಾಗಿಸಿದ ಸ್ವಾತಂತ್ರ ಹೋರಾಟಗಾರರಾದ ಡಾ. ಭೀಮಣ್ಣ ಖಂಡ್ರೆ ಹೋರಾಟಗಾರರು ಹಾಗೂ 103 ವರ್ಷಗಳ ಕಾಲ ತಮ್ಮ ಪರಿಪೂರ್ಣ ಜೀವನವನ್ನು ನಡೆಸಿದ ಶತಾಯುಷಿ. ಅವರ ಆತ್ಮಕ್ಕೆ ಚಿರಶಾಂತಿ ದೊರಯಲಿ ಎಂದು ತಮ್ಮ ಸಂತಾಪ




ನಿಧಾನಕ್ಕೆ ಎಂ.ಇ .ಐ ಸಂಸ್ಥೆಯ ಅಧ್ಯಕ್ಷ ಎಸ್.ಮನೋಹರ್ ಸಂತಾಪ ಸೂಚಿಸಿದ್ದಾರೆ.

ಮೈಸೂರು ಎಲೆಕ್ಟ್ರಿಕಲ್ ಇಂಡಸ್ಟ್ರಿಲ್ ಲಿಮಿಟೆಡ್ ಕಛೇರಿಯಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಡಾ.ಭೀಮಣ್ಣ ಖಂಡ್ರೆ ಅವರು ಹಿರಿಯ ವ್ಯಕ್ತಪಡಿಸಿದರು.

ಈ ವೇಳೆ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀಮತಿ. ಅನಿತಾ ಹಾಗೂ ಅಧಿಕಾರಿಗಳಾದ ಶರಣಪ್ಪ, ಸಂತೋಷ್, ಸುಧೀರ್, ಮಂಜುನಾಥ್, ಹುಲಿಯಪ್ಪ , ಬಾಬಾ ಸಾಹೇಬ್ ಮುಚ್ಚಂಡಿ ಉಪಸ್ಥಿತರಿದ್ದರು.

# ಜನರು ಕೊಟ್ಟ ಅಧಿಕಾರವನ್ನು ಕಾಂಗ್ರೆಸ್ ಸರ್ಕಾರ ಸ್ವಾರ್ಥಕ್ಕೆ ಬಳಸಿಕೊಳ್ಳುತ್ತಿದೆ: ಬಸವರಾಜ ಬೊಮ್ಮಾಯಿ

**ಬಳ್ಳಾರಿ:** ಜನರು ಕೊಟ್ಟ ಅಧಿಕಾರವನ್ನು ಕಾಂಗ್ರೆಸ್ ಸರ್ಕಾರ ಸ್ವಾರ್ಥಕ್ಕೆ ಬಳಸಿಕೊಳ್ಳುತ್ತಿದೆ. ಈ ಸರ್ಕಾರದಿಂದ ಜನತೆಗೆ ಅಪಮಾನ ಆಗುತ್ತಿದೆ. ಹೀಗಾಗಿ ಎಷ್ಟು ಬೇಗ ಈ ಸರ್ಕಾರ ಹೋಗುತ್ತದೋ ಆಗ ಜನರಿಗೆ ಒಳಿತಾಗುತ್ತದೆ ಎಂದು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.



ಬಳ್ಳಾರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್‌ನಲ್ಲಿ ಒಬ್ಬರು ಕುರ್ಚಿ ಉಳಿಸಿಕೊಳ್ಳಲು ಹಾಗೂ ಇನ್ನೊಬ್ಬರು ಕಿತ್ತುಕೊಳ್ಳಲು ಯತ್ನಿಸುತ್ತಿದ್ದಾರೆ. ದಿನನಿತ್ಯ ರಾಜ್ಯದಲ್ಲಿ ಈ ಸರ್ಕಾರದಿಂದ ಜನತೆಗೆ ಅಪಮಾನ ಆಗುತ್ತಿದೆ. ಹೀಗಾಗಿ ಎಷ್ಟು ಬೇಗ ಈ ಸರ್ಕಾರ ಹೋಗುತ್ತದೋ ಆಗ ಜನರಿಗೆ ಒಳಿತಾಗುತ್ತದೆ ಎಂದು ಹೇಳಿದರು.

ಅಧಿಕಾರಕ್ಕಾಗಿ ದೆಹಲಿಯಲ್ಲಿ ಸರದಿಯಂತೆ ಓಡಾಡುತ್ತಿದ್ದಾರೆ. ಆದರೆ ದೆಹಲಿಯಲ್ಲಿ ಕಾಂಗ್ರೆಸ್ ಹೈಕಮಾಂಡೇ ಇಲ್ಲ. ಕಾಂಗ್ರೆಸ್ ಹೈಕಮಾಂಡ್ ಅಸ್ತಿತ್ವದಲ್ಲಿದೆಯೋ ಇಲ್ಲವೊ ಕೂಡ ಗೊತ್ತಿಲ್ಲ. ಕಳೆದ ಆರು ತಿಂಗಳಿಂದ ಇದು ನಡೆಯುತ್ತಿದೆ. ಈ ಬಗ್ಗೆ ಕಾಂಗ್ರೆಸ್ ಹೈಕಮಾಂಡ್ ಒಂದು ಮಾತೂ ಹೇಳುತ್ತಿಲ್ಲ. ಅವರನ್ನು ಕಾಂಗ್ರೆಸ್ ಹೈಕಮಾಂಡ್ ಕರಿಯುತ್ತೇವೆ ಎನ್ನುವುದರಲ್ಲೇ ಇದೆ. ಇದೇನು ಅವರ ಸ್ವಂತ ಆಸ್ತಿನಾ ಎಂದು ಪ್ರಶ್ನಿಸಿದರು.

ರಾಜ್ಯ ಕಾಂಗ್ರೆಸ್ ನಾಯಕರು ಸುಖಾಸುಮ್ಮನೆ ದೆಹಲಿಗೆ ಹೋಗಿ ಅವರ ಮನೆ ಬಾಗಿಲು ಕಾಯುವ ಕೆಲಸವಾಗುತ್ತದೆ. ನಮ್ಮ ಜನರು ಕೊಟ್ಟ ಅಧಿಕಾರಕ್ಕೆ ಅಪಮಾನ ಮಾಡುತ್ತಿದ್ದಾರೆ. ಇಡೀ ರಾಜ್ಯದ ಜನರಿಗೆ ಈ ಸರ್ಕಾರ ಅಪಮಾನ ಮಾಡುತ್ತಿದೆ. ಹೀಗಾಗಿ ಈ ಸರ್ಕಾರದ ವಿರುದ್ಧ ಬಿಜೆಪಿಯಿಂದ ರಾಜ್ಯದಲ್ಲಿ ಆರೇಳು ಸಮಾವೇಶ ಮಾಡುತ್ತಿದ್ದೇವೆ. ರಾಜ್ಯದಲ್ಲಿ ಎರಡೂವರೆ ವರ್ಷದಿಂದ ಅರಾಜಕತೆ ಹಾಗು ಕಾನೂನು ಸುವ್ಯವಸ್ಥೆ ಸರಿಯಿಲ್ಲ, ಅಭಿವೃದ್ಧಿ ಇಲ್ಲ ಹಾಗೂ ಭ್ರಷ್ಟಾಚಾರ ತುಂಬಿರುವ ಪರಿಣಾಮ ಕಾನೂನು ಸುವ್ಯವಸ್ಥೆ ಬಗ್ಗೆ ಬಳ್ಳಾರಿಯಿಂದ ಹೋರಾಟ ಶುರು ಮಾಡಿದ್ದೇವೆ ಎಂದು ಹೇಳಿದರು.

# ಬಳ್ಳಾರಿಯಲ್ಲಿ ಬಿಜೆಪಿಯಿಂದ ಬೃಹತ್ ಪ್ರತಿಭಟನೆ ಕಾಂಗ್ರೆಸ್ ಸರಕಾರವು ವಾಲ್ಮೀಕಿ ಸಮುದಾಯಕ್ಕೆ ಕೊಟ್ಟಿರುವ ಕೊಡುಗೆ ಏನು?: ವಿಜಯೇಂದ್ರ

**ಬಳ್ಳಾರಿ:** ಇವತ್ತು ಬಳ್ಳಾರಿಯಲ್ಲಿ ವಾಲ್ಮೀಕಿ ಪ್ರತಿಮೆ ಕೂರಿಸುವ ವಿಷಯದಲ್ಲಿ ಗಲಾಟೆ ಆಗಿದೆ. ಸಿದ್ದರಾಮಯ್ಯನವರೇ, ಕಾಂಗ್ರೆಸ್ ಸರಕಾರವು ವಾಲ್ಮೀಕಿ ಸಮುದಾಯಕ್ಕೆ ಕೊಟ್ಟಿರುವ ಕೊಡುಗೆ ಏನು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಪ್ರಶ್ನಿಸಿದ್ದಾರೆ.

ಬಿಜೆಪಿ ವತಿಯಿಂದ ಬಳ್ಳಾರಿಯಲ್ಲಿ ಕಾಂಗ್ರೆಸ್ ಸರಕಾರದ ವಿರುದ್ಧ ಏರ್ಪಡಿಸಿದ ಬೃಹತ್ ಪ್ರತಿಭಟನಾ



ಸಮಾವೇಶದಲ್ಲಿ ಅವರು ಮಾತನಾಡಿದರು.

ಹಿಂದೆ ಬಿಜೆಪಿ ಸರಕಾರ ಇದ್ದಾಗ ಯಡಿಯೂರಪ್ಪ ಅವರು ರಾಜ್ಯದ ಮುಖ್ಯಮಂತ್ರಿಗಳಿದ್ದಾಗ ವಾಲ್ಮೀಕಿ ಜಯಂತಿ ರಜೆಯನ್ನು ಘೋಷಿಸಿದ್ದರು ಎಂದು ನೆನಪಿಸಿದರು. ಕಾಂಗ್ರೆಸ್ ಆಡಳಿತದಲ್ಲಿ ನಮ್ಮ ವಾಲ್ಮೀಕಿ ಸಮುದಾಯಕ್ಕೆ ನ್ಯಾಯ ಸಿಕ್ಕಿಲ್ಲ ಎಂದು ಯಡಿಯೂರಪ್ಪ ಅವರ ಬಳಿ ಶ್ರೀರಾಮುಲು ಅವರು ಹೇಳಿಕೊಂಡಿದ್ದರು. ಬಳಿಕ ವಾಲ್ಮೀಕಿ ಜಯಂತಿ ಘೋಷಿಸಿ ರಜೆಯನ್ನು ಕೊಟ್ಟು ವಾಲ್ಮೀಕಿ ಅಭಿವೃದ್ಧಿ ನಿಗಮವನ್ನೂ ಸ್ಥಾಪಿಸಿದ್ದರು ಎಂದು ಗಮನಕ್ಕೆ ತಂದರು.

ಶ್ರೀರಾಮುಲು, ಜನಾರ್ಧನ ರೆಡ್ಡಿಯವರು ಇಲ್ಲಿ ಮಹರ್ಷಿ ವಾಲ್ಮೀಕಿ ಪ್ರತಿಮೆ ಪ್ರತಿಷ್ಠಾಪಿಸಿದ್ದರು. ಬಸವರಾಜ ಬೊಮ್ಮಾಯಿಯವರು ರಾಜ್ಯದ ಮುಖ್ಯಮಂತ್ರಿಗಳಿದ್ದಾಗ ವಾಲ್ಮೀಕಿ ಸಮುದಾಯಕ್ಕೆ, ಪರಿಶಿಷ್ಟ ಪಂಗಡಕ್ಕೆ ಇದ್ದ ಮೀಸಲಾತಿಯನ್ನು ಶೇ 3ರಿಂದ ಶೇ 7ಕ್ಕೆ ಏರಿಸಿದ್ದರು ಎಂದು ವಿವರಿಸಿದರು. ಆರೋಗ್ಯ ಸರಿ ಇಲ್ಲದಿದ್ದರೂ ಇಲ್ಲಿ ಈ ನಿರ್ಲಜ್ಜ ಕಾಂಗ್ರೆಸ್ ಸರಕಾರದ ವಿರುದ್ಧ ನಡೆಯುತ್ತಿರುವ ಈ ಹೋರಾಟದಲ್ಲಿ ಭಾಗವಹಿಸಲೇ ಬೇಕೆಂದು ಬಂದಿರುವುದಾಗಿ ತಿಳಿಸಿದರು.

**ಮೊಸಳೆಕಣ್ಣೀರು ಸುರಿಸುವ ಕೆಲಸ..**

ಸಿದ್ದರಾಮಯ್ಯನವರೇ, ವಾಲ್ಮೀಕಿ ಸಮುದಾಯಕ್ಕೆ ನಿಮ್ಮ ಕೊಡುಗೆ ಏನು ಎಂದು ಸವಾಲೆಸೆದರು. ರಾಜ್ಯಕ್ಕೂ ಏನೂ ಕೊಡುಗೆ ಇಲ್ಲ; ಆ ಸಮುದಾಯಕ್ಕೂ ಏನೂ ಕೊಡುಗೆ ಇಲ್ಲ. ಕಾಂಗ್ರೆಸ್ ಪಕ್ಷವು ಇವತ್ತು ಮೊಸಳೆಕಣ್ಣೀರು ಸುರಿಸುವ ಕೆಲಸ ಮಾಡುತ್ತಿದೆ ಎಂದು ಟೀಕಿಸಿದರು.

ರಾಜ್ಯದಲ್ಲಿ ಕಾನೂನು– ಸುವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ. ಯಲ್ಲಾಪುರದಲ್ಲಿ ದಲಿತ ಮಹಿಳೆಯನ್ನು ಬರ್ಬರವಾಗಿ ಕೊಲೆ ಮಾಡಲಾಗಿದೆ. ಅದಕ್ಕೂ ಕಾಂಗ್ರೆಸ್ ಸರಕಾರ ನ್ಯಾಯ ಕೊಟ್ಟಿಲ್ಲ ಎಂದು ಆರೋಪಿಸಿದರು.

**ಹಿಂದೂ ವಿರೋಧಿ ಕಾಂಗ್ರೆಸ್ ಸರಕಾರ..**

ಮಂಗಳೂರಿನಲ್ಲಿ ದೇಶದ್ರೋಹಿಗಳ ಕೊಲೆ ಆದರೆ, ಸಿದ್ದರಾಮಯ್ಯನವರ ಸರಕಾರ 25 ಲಕ್ಷ ಕೊಟ್ಟು ಬರುತ್ತದೆ. ಆದರೆ, ಮಂಗಳೂರಿನಲ್ಲಿ ನಮ್ಮ ಹಿಂದೂ ಕಾರ್ಯಕರ್ತರ ಹತ್ಯೆ ಆದರೆ, ಕಾಂಗ್ರೆಸ್ ಸರಕಾರ ಒಂದು ರೂಪಾಯಿ ಪರಿಹಾರ ಕೊಡುವುದಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಇದು ಹಿಂದೂ ವಿರೋಧಿ ಕಾಂಗ್ರೆಸ್ ಸರಕಾರ ಎಂದು ಟೀಕಿಸಿದರು.

ರಾಜ್ಯದಲ್ಲಿ ಪೊಲೀಸ್ ಠಾಣೆಗಳು ಕಾಂಗ್ರೆಸ್ ಕಚೇರಿಯಾಗಿವೆ. ಹಾಗಾಗಿಯೇ ದೇಶದ್ರೋಹಿಗಳು, ಕೊಲೆಗಡುಕರು ಅಟ್ಟಹಾಸದಿಂದ ಮೆರೆಯುತ್ತಿದ್ದಾರೆ. ಇವರಿಗೆ ತಕ್ಕ ಪಾಠವನ್ನು ಕಲಿಸುವ ಕೆಲಸವನ್ನು ನಾವು ಮಾಡಬೇಕಿದೆ ಎಂದು ತಿಳಿಸಿದರು.

ಶ್ರೀರಾಮುಲು– ಜನಾರ್ಧನ ರೆಡ್ಡಿಯವರು ಪಾದಯಾತ್ರೆ ಬಗ್ಗೆ ಆಲೋಚನೆ ಮಾಡಿದ್ದಾರೆ; ನಮ್ಮ ಯಾರದೂ ವಿರೋಧ ಇಲ್ಲ. ಕೋರ್ ಕಮಿಟಿ ಸದಸ್ಯರ ಅಭಿಪ್ರಾಯವನ್ನು ಕೇಂದ್ರದ ವರಿಷ್ಠರಿಗೆ ತಿಳಿಸಿದ್ದೇನೆ. ಮುಂಬರುವ ದಿನಗಳಲ್ಲಿ ಯಾವ ರೀತಿ ಹೋರಾಟ ಮಾಡಬೇಕು; ಎಲ್ಲಿಂದ ಪಾದಯಾತ್ರೆ ಮಾಡಬೇಕೆಂದು ಕೇಂದ್ರದ ನಮ್ಮ ನಾಯಕರ ಸೂಚನೆ ಮೇರೆಗೆ ಹೋರಾಟವನ್ನು ಯೋಜಿಸುವುದಾಗಿ ಸ್ಪಷ್ಟಪಡಿಸಿದರು.

ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಮಾಜಿ ಮುಖ್ಯಮಂತ್ರಿ ಮತ್ತು ಸಂಸದ ಬಸವರಾಜ ಬೊಮ್ಮಾಯಿ, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಉಪಮುಖ್ಯಮಂತ್ರಿ ಮತ್ತು ಸಂಸದ ಗೋವಿಂದ ಕಾರಜೋಳ, ಮಾಜಿ ಸಚಿವ ಬಿ. ಶ್ರೀರಾಮುಲು, ವಿಧಾನಪರಿಷತ್ ವಿಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್, ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ, ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ವಿ. ಸುನೀಲ್ ಕುಮಾರ್, ಪಿ. ರಾಜೀವ್, ಶಾಸಕ ಜಿ. ಜನಾರ್ಧನ ರೆಡ್ಡಿ, ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ಮೋಕಾ, ಸಂಸದರು, ಶಾಸಕರು, ವಿಧಾನಪರಿಷತ್ ಸದಸ್ಯರು, ಮಾಜಿ ಸಚಿವರು, ರಾಜ್ಯ ಪದಾಧಿಕಾರಿಗಳು, ಜಿಲ್ಲಾಧ್ಯಕ್ಷರು, ಜಿಲ್ಲಾ ಪದಾಧಿಕಾರಿಗಳು, ಮಹಾನಗರ ಪಾಲಿಕೆ ಸದಸ್ಯರು ಮತ್ತು ಪಕ್ಷದ ಮುಖಂಡರು ಉಪಸ್ಥಿತರಿದ್ದರು.

# ಡಿಸಿಸಿ ಬ್ಯಾಂಕ್ ಚುನಾವಣೆ: 28 ಜನ ಮತದಾರರನ್ನು ಮಿನಿ ಬಸ್‌ನಲ್ಲಿ ಕರೆ ತಂದ MLC ಸಿ.ಟಿ. ರವಿ, ಭೋಜೇಗೌಡ

**ಚಿಕ್ಕಮಗಳೂರು:** ಜಿಲ್ಲೆಯ ಡಿಸಿಸಿ ಬ್ಯಾಂಕ್ ಚುನಾವಣೆ ಇಂದು ನಡೆಯುತ್ತಿದ್ದು, ಭಾರಿ ಕುತೂಹಲ ಮೂಡಿಸಿದೆ. ಈ ಚುನಾವಣೆ ದಿನಾಂಕ ಘೋಷಣೆಯಾದಗಿನಿಂದ ಪ್ರತಿ ನಿತ್ಯ ಒಂದಲ್ಲ, ಒಂದು ಬೆಳವಣಿಗೆಗಳು ನಡೆಯುತ್ತಲೇ ಇವೆ. ಈ ಚುನಾವಣೆಯಲ್ಲಿ ರಾಜ್ಯ ಹಾಗೂ ರಾಷ್ಟ್ರ ರಾಜಕಾರಣದಲ್ಲಿ ಹೆಸರು ಮಾಡಿರುವ ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಮತ್ತು ಮತ್ತೊಬ್ಬ ವಿಧಾನ ಪರಿಷತ್ ಸದಸ್ಯ ಎಸ್.ಎಲ್. ಭೋಜೇಗೌಡ ಸ್ಪರ್ಧಿಸಿದ್ದು, ಈ ಚುನಾವಣೆಯಲ್ಲಿ ಗೆಲ್ಲಲು ನಾನಾ ತಂತ್ರಗಳನ್ನು ರೂಪಿಸಿ ಮತದಾರರನ್ನು ಸೆಳೆಯಲು ಕಸರತ್ತು ನಡೆಸಿದ್ದಾರೆ. ಈ ಹಿನ್ನೆಲೆ ಚುನಾವಣೆ ಭಾರಿ ಕುತೂಹಲ ಮೂಡಿಸಿದ್ದು, ಸಂಜೆ ವೇಳೆಗೆ ಮತದಾನ ಪ್ರಕ್ರಿಯೆ ಮುಕ್ತಾಯವಾಗಲಿದೆ. ಈಗಾಗಲೇ ಒಬ್ಬೊಬ್ಬರಾಗಿ ಬಂದು ಮತದಾರರು ಮತ ಚಲಾಯಿಸುತ್ತಿದ್ದು, ಸಂಜೆ ಮತದಾನ ಮುಗಿದ ನಂತರ, ಮತ ಎಣಿಕೆ ಕಾರ್ಯ ನಡೆಯಲಿದೆ.




ಚಿಕ್ಕಮಗಳೂರು ಡಿಸಿಸಿ ಬ್ಯಾಂಕ್ ಚುನಾವಣೆ ಕಾವು ಹೆಚ್ಚಾಗಿರುವುದರಿಂದ, ಈ ಚುನಾವಣೆಯಲ್ಲಿ ಮತದಾನ ಮಾಡುವ 28 ಮತದಾರರನ್ನು ಮಿನಿ ಬಸ್‌ನಲ್ಲಿ ವಿಧಾನ ಪರಿಷತ್ ಸದಸ್ಯರಾದ ಸಿ.ಟಿ. ರವಿ ಹಾಗೂ ಎಸ್.ಎಲ್. ಭೋಜೇಗೌಡ ಕರೆತಂದರು.

28 ಮತದಾರರ ಜೊತೆ ಈ ಇಬ್ಬರು ಅಭ್ಯರ್ಥಿಗಳು ಮತದಾನಕ್ಕೆ ಆಗಮಿಸಿದರು. ಚಿಕ್ಕಮಗಳೂರು ತಾಲೂಕು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಕ್ಷೇತ್ರಕ್ಕೆ ಸಿ.ಟಿ. ರವಿ, ಎಸ್.ಎಲ್. ಭೋಜೇಗೌಡ ಸ್ಪರ್ಧೆ ಮಾಡಿದ್ದಾರೆ. ಈ ಇಬ್ಬರು ಮೈತ್ರಿ ಅಭ್ಯರ್ಥಿಗಳಾಗಿ ಕಣದಲ್ಲಿದ್ದಾರೆ.

ಬಿಜೆಪಿ ಕಾರ್ಯಕರ್ತ ನಿರಂಜನ್ ಸ್ಪರ್ಧೆ ಮಾಡಿರುವುದು ಇವರಿಗೆ ಬಿಸಿ ತುಪ್ಪವಾಗಿ ಪರಿಣಮಿಸಿದೆ.

ಈ ಕ್ಷೇತ್ರದಿಂದ ನಿರಂಜನ್ ಸ್ಪರ್ಧೆ ಮಾಡಿರುವುದರಿಂದ ಚುನಾವಣೆ ಕುತೂಹಲ ಕೆರಳಿಸಿದೆ.

32 ಮತದಾರರಿರುವ ಚಿಕ್ಕಮಗಳೂರು ತಾಲೂಕು ಸಹಕಾರ ಸಂಘಗಳ ಕ್ಷೇತ್ರವಾಗಿದೆ.

ಚಿಕ್ಕಮಗಳೂರು ನಗರದ ರತ್ನಗಿರಿ ರಸ್ತೆಯಲ್ಲಿರುವ ಡಿಸಿಸಿ ಬ್ಯಾಂಕ್ ಚುನಾವಣೆಯಲ್ಲಿ ಸಿ.ಟಿ. ರವಿ ಹಾಗೂ ಎಸ್.ಎಲ್. ಭೋಜೇಗೌಡ ಅವರಿಗೆ ಈ ಚುನಾವಣೆ ಪ್ರತಿಷ್ಠೆಯಾಗಿದೆ. ಶಾಂತಿಯುತವಾಗಿ ಈ ಚುನಾವಣೆ ಪ್ರಕ್ರಿಯೆ ನಡೆಯುತ್ತಿದ್ದು, ಬ್ಯಾಂಕಿನ ಸುತ್ತಮುತ್ತ ಯಾವುದೇ ರೀತಿಯ ಅಹಿತಕರ ಘಟನೆ ನಡೆಯದಂತೆ ಪೊಲೀಸರು ಬಿಗಿ ಬಂದೋಬಸ್ತ್ ವ್ಯವಸ್ಥೆ ಮಾಡಿ, ಕಟ್ಟೆಚ್ಚರ ವಹಿಸಿದ್ದಾರೆ.

ಇತ್ತೀಚೆಗೆ ಬೆಳಗಾವಿ, ಮಂಡ್ಯ, ಉತ್ತರ ಕನ್ನಡ ಜಿಲ್ಲೆಯ ಡಿಸಿಸಿ ಬ್ಯಾಂಕ್ ಚುನಾವಣೆಗಳು ನಡೆದಿದ್ದವು. ತೀವ್ರ ಕುತೂಹಲ ಕೆರಳಿಸಿದ್ದ ಬೆಳಗಾವಿ ಡಿಸಿಸಿ ಬ್ಯಾಂಕ್ ಅಧ್ಯಕ್ಷ ಸ್ಥಾನಕ್ಕೆ ಮಾಜಿ ಸಂಸದ ಅಣ್ಣಾಸಾಹೇಬ ಜೊಲ್ಲೆ, ಉಪಾಧ್ಯಕ್ಷ ಸ್ಥಾನಕ್ಕೆ ಶಾಸಕ ರಾಜು ಕಾಗೆ ಅಧಿಕೃತವಾಗಿ ಆಯ್ಕೆಗೊಂಡಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ನೇತೃತ್ವದಲ್ಲಿ ನಡೆದಿದ್ದ ಸಭೆಯಲ್ಲಿ ಒಮ್ಮತದಿಂದ ಅಣ್ಣಾಸಾಹೇಬ ಜೊಲ್ಲೆ ಅವರನ್ನು ಅಧ್ಯಕ್ಷ ಸ್ಥಾನಕ್ಕೆ, ರಾಜು ಕಾಗೆ ಅವರನ್ನು ಉಪಾಧ್ಯಕ್ಷ ಸ್ಥಾನಕ್ಕೆ ಆಯ್ಕೆ ಮಾಡಲಾಗಿದೆ.

# ಪೊಲೀಸ್ ಇಲಾಖೆ ಸಮಾಜದಲ್ಲಿ ಶಾಂತಿ ನೆಮ್ಮದಿ ಕಾಪಾಡುವ ಗುರುತರವಾದ ಕಾರ್ಯವನ್ನು ಪರಿಣಾಮಕಾರಿಯಾಗಿ ನಡೆಸುತ್ತಿದೆ: ಸಿದ್ದರಾಮಯ್ಯ




**ಬೆಂಗಳೂರು :** ಸಮಾಜದಲ್ಲಿ ಶಾಂತಿ ನೆಮ್ಮದಿ ಕಾಪಾಡುವ ಗುರುತರವಾದ ಕಾರ್ಯವನ್ನು ಪೊಲೀಸ್ ಇಲಾಖೆ ಪರಿಣಾಮಕಾರಿಯಾಗಿ ನಡೆಸುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಪೊಲೀಸ್ ಅಧಿಕಾರಿಗಳ ವಾರ್ಷಿಕ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ಸಂವಿಧಾನ ಪ್ರತಿಯೊಬ್ಬರಿಗೂ ಸಮಾನ ಅವಕಾಶ, ರಕ್ಷಣೆಯನ್ನು ಒದಗಿಸಿದೆ. ಎಲ್ಲರಿಗೂ ಕಾನೂನು ಒಂದೇ. ಯಾರು ತಪ್ಪು ಮಾಡಿದರೂ ಅದು ತಪ್ಪೇ. ಬಲಾಢ್ಯರು, ಸಮಾಜ ಘಾತುಕ ಶಕ್ತಿಗಳಿಗೆ ಯಾವುದೇ ಕಾರಣಕ್ಕೂ ಮಣೆ ಹಾಕಬಾರದು ಎಂದರು.

ದುರ್ಬಲರು, ಪರಿಶಿಷ್ಟ ಜಾತಿ, ವರ್ಗದ ಜನರು, ಧಾರ್ಮಿಕ ಅಲ್ಪಸಂಖ್ಯಾತರು ರಕ್ಷಣೆ ಎಲ್ಲರ ಹೊಣೆ. ದುರ್ಬಲರು ಯಾವುದೇ ಕಾರಣಕ್ಕೂ ಅನ್ಯಾಯಕ್ಕೆ ಒಳಗಾಗಬಾರದು. ಪ್ರತಿಯೊಬ್ಬರಿಗೂ ಸಮಾನ ನ್ಯಾಯ ಒದಗಿಸುವುದು ಪೊಲೀಸರ ಕರ್ತವ್ಯವಾಗಿದೆ.

ತಹಶೀಲ್ದಾರ್ ಹಾಗೂ ಪೊಲೀಸ್ ಇನ್ಸ್ಪೆಕ್ಟರ್ ಸರಿಯಾಗಿ ಕರ್ತವ್ಯ ನಿರ್ವಹಿಸಿದರೆ ಆ ತಾಲೂಕಿನಲ್ಲಿ ಜನರು ನೆಮ್ಮದಿಯಿಂದ ಇರಲು ಸಾಧ್ಯ. ಇದೇ ರೀತಿ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿ, ಎಸ್ಪಿ ಮತ್ತು ಸಿಇಓ ಸರಿಯಾಗಿ ಕರ್ತವ್ಯ ನಿರ್ವಹಿಸಿದರೆ ಆ ಜಿಲ್ಲೆಯ ಜನರು ನೆಮ್ಮದಿಯಿಂದ ಇರಲು ಸಾಧ್ಯ. ಆದರೆ ಕೆಲವು ಪೊಲೀಸ್ ಠಾಣೆಗಳಲ್ಲಿ ಕೆಲವು ಅಧಿಕಾರಿಗಳು ಸರಿಯಾಗಿ ಕರ್ತವ್ಯ ನಿರ್ವಹಿಸದ ಕಾರಣಕ್ಕೆ ಜನರು ತೊಂದರೆ ಅನುಭವಿಸಬೇಕಾಗುತ್ತದೆ.

ಕೊಲೆ, ಸುಲಿಗೆ, ಡಕಾಯಿತಿ, ದರೋಡೆ ಪ್ರಕಣಗಳ ಸಂಖ್ಯೆಯಲ್ಲಿ ಕಳೆದ ಒಂದು ವರ್ಷದಲ್ಲಿ ಕಡಿಮೆಯಾಗಿದೆ. ಆದರೆ ಸೈಬರ್ ಅಪರಾಧ, ಡ್ರಗ್ಸ್ ಚಟುವಟಿಕೆಗಳು ಹೆಚ್ಚಾಗಿದ್ದು, ಅದನ್ನು ಮಟ್ಟ ಹಾಕಲು ಕಠಿಣ ಕ್ರಮಗಳನ್ನು ಜರುಗಿಸಬೇಕು ಎಂದರು.

ನಮ್ಮ ರಾಜ್ಯದಲ್ಲಿ ಕ್ರಿಮಿನಲ್ ಪ್ರಕರಣಗಳಲ್ಲಿ ಕನ್ವಿಕ್ಷನ್ ದರ ಕಡಿಮೆಯಿದೆ. ಅಪರಾಧ ಪ್ರಕರಣಗಳಲ್ಲಿ ಭಾಗಿಯಾದವರಿಗೆ ಶಿಕ್ಷೆಯನ್ನು ಖಾತ್ರಿಪಡಿಸುವಲ್ಲಿ ಪೊಲೀಸರ ಪಾತ್ರ ಮುಖ್ಯವಾಗಿದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರ ಮೇಲಿನ ದೌರ್ಜನ್ಯ ಪ್ರಕರಣದಲ್ಲಿ ಕನ್ವಿಕ್ಷನ್ ಪ್ರಮಾಣ ಕಳೆದ ವರ್ಷ ಶೇ.3ರಷ್ಟಿತ್ತು ಈಗ ಶೇ.12 ಕ್ಕೆ ಸುಧಾರಿಸಿದ್ದು, ಇದನ್ನು ಇನ್ನಷ್ಟು ಉತ್ತಮಪಡಿಸಬೇಕಿದೆ ಎಂದರು.

ಅಪರಾಧವನ್ನು ಸಂಪೂರ್ಣವಾಗಿ ನಿಲ್ಲಿಸಲು ಸಾಧ್ಯವಿಲ್ಲದಿದ್ದರೂ, ಅಪರಾಧ ಪ್ರಮಾಣ ಕಡಿಮೆ ಮಾಡಲು ಸಾಧ್ಯವಿದೆ. ಆದರೆ ಕಳೆದ ಸಾಲಿನಲ್ಲಿ 88 ಕ್ರಿಮಿನಲ್ ಪ್ರಕರಣಗಳಲ್ಲಿ ಪೊಲೀಸರೇ ಭಾಗಿಯಾಗಿರುವುದು ನಾಚಿಗೇಡಿನ ವಿಷಯ ಎಂದರು.

ಪೊಲೀಸರು ಜಾಗರೂಕರಾಗಿದ್ದರೆ ಅನೇಕ ಅಪರಾಧ ಪ್ರಕರಣಗಳನ್ನು ತಡೆಗಟ್ಟಲು ಸಾಧ್ಯವಿದೆ. ಎಟಿಎಂ ದರೋಡೆ ಪ್ರಕರಣಗಳು, ಬಳ್ಳಾರಿಯಲ್ಲಿ ನಡೆದ ಬ್ಯಾನರ್ ಗಲಾಟೆ ಪ್ರಕರಣಗಳನ್ನು ಪೊಲೀಸರು ಮುಂಜಾಗರೂಕತೆ ಮೂಲಕ ತಪ್ಪಿಸಬಹುದಾಗಿತ್ತು. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಸರಿಯಾದ ಮುಂಜಾಗರೂಕತೆ ಕೈಗೊಂಡಿದ್ದರೆ, ಅಮಾಯಕರು ಕಾಲ್ತುಳಿತಕ್ಕೆ ಬಲಿಯಾಗುವುದನ್ನು ತಪ್ಪಿಸಲು ಸಾಧ್ಯವಿತ್ತು ಎಂದರು.

ಜೈಲುಗಳಲ್ಲಿ ಅವ್ಯವಸ್ಥೆ ಪ್ರಕರಣಗಳನ್ನು, ಮಾದಕ ವಸ್ತು ಜಾಲ ನಿಯಂತ್ರಣದಲ್ಲಿ ಯಾವುದೇ ಲೋಪವನ್ನು ಸಹಿಸಲು ಸಾಧ್ಯವಿಲ್ಲ. ಮಾದಕ ವಸ್ತು ಪ್ರಕರಣಗಳಲ್ಲಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಜರುಗಿಸಲು ಮುಂದಿನ ಅಧಿವೇಶದನಲ್ಲಿ ಹೊಸ ಕಾನೂನು ಜಾರಿಗೊಳಿಸಲು ಸರ್ಕಾರ ಸಿದ್ಧವಿದೆ ಎಂದರು.

ಇದೇ ರೀತಿ ಸೈಬರ್ ಅಪರಾಧಗಳು ರಾಜ್ಯದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ನಡೆಯುತ್ತಿದ್ದು, ಇದನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಆಧುನಿಕ ತಂತ್ರಜ್ಞಾನದ ಸಮರ್ಪಕ ಬಳಕೆ ಮಾಡಬೇಕಿದೆ. ಕಾನೂನು ಸುವ್ಯವಸ್ಥೆ ಮತ್ತು ರಾಜ್ಯದ ಅಭಿವೃದ್ಧಿ ಪರಸ್ಪರ ಪೂರಕವಾಗಿವೆ. ಕಾನೂನು ಸುವ್ಯವಸ್ಥೆ ಚೆನ್ನಾಗಿದ್ದರೆ ಮಾತ್ರ ಬಂಡವಾಳ ಹೂಡಿಕೆ ಹೆಚ್ಚಾಗಿ ಅಭಿವೃದ್ಧಿ ಸಾಧಿಸಲು ಸಾಧ್ಯವಿದೆ. ಪ್ರತಿಯೊಬ್ಬರಿಗೂ ರಕ್ಷಣೆ ಒದಗಿಸುವುದು, ನ್ಯಾಯ ಒದಗಿಸುವುದು ಸರ್ಕಾರದ ಬದ್ಧತೆಯಾಗಿದೆ ಎಂದು ತಿಳಿಸಿದ್ದಾರೆ.

इंडियन बैंक Indian Bank
इलाहाबाद ALLAHABAD

## ಉದಯಗಿರಿ ಶಾಖೆ ಉದಯಗಿರಿ

**ಅನುಬಂಧ IV (ನಿಯಮ–8(1)) ಸ್ವಾಧೀನದ ಸೂಚನೆ (ಸ್ಥಿರ ಆಸ್ತಿಗಾಗಿ)**

**ಆದರೆ,** ಕೆಳಸಹಿದಾರರು ಇಂಡಿಯನ್ ಬ್ಯಾಂಕ್‌ನ ಅಧಿಕೃತ ಅಧಿಕಾರಿಯಾಗಿದ್ದು ಹಣಕಾಸು ಆಸ್ತಿಗಳ ಭದ್ರತೆ ಮತ್ತು ಪುನರ್ನಿರ್ಮಾಣ ಹಾಗೂ ಭದ್ರತಾ ಹಿತಾಸಕ್ತಿ ಕಾಯ್ದೆ 2002 ಮತ್ತು ಭದ್ರತಾ ಹಿತಾಸಕ್ತಿ ನಿಯಮಗಳು 2002ರ ನಿಯಮ 8 ಮತ್ತು 9 ಓದಿದಂತೆ, ಸೆಕ್ಷನ್ 13 (12) ಅನ್ವಯ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ **ದಿನಾಂಕ 03.11.2025ರಂದು** ಕೆಳಕಂಡ ಸಾಲಗಾರರಿಗೆ ಡಿಮ್ಯಾಂಡ್ ನೋಟಿಸ್ ಹೊರಡಿಸಿದ್ದಾರೆ. **1) ಶ್ರೀ ಸೈಯದ್ ಮುಜಾಹಿದ್ ಬಿನ್ ಸೈಯದ್ ಬುಧನ್ (ಸಾಲಗಾರ), 2) ಶ್ರೀಮತಿ ಪ್ಯಾರಿ ಜಾನ್ ಕೋಂ ಸೈಯದ್ ಬುಧಾನ್ (ಸಹ–ಸಾಲಗಾರ ಮತ್ತು ಅಡಮಾನದಾರ), 3) ಶ್ರೀ ಸೈಯದ್ ನಯಾಜ್, ಬಿನ್. ಸೈಯದ್ ಗಾಜಿ (ಗ್ಯಾರೆಂಟರ್) 4). ಶ್ರೀ ಸೈಯದ್ ಸಾಜಿದ್ ಬಿನ್ ಸೈಯುದ್ ಬುಧಾನ್ (ಖಾತರಿದಾರರು) ಎಲ್ಲರ ವಾಸ: ಬಾಗಿಲು ಸಂಖ್ಯೆ 2478, ಎಲ್–29, 23ನೇ ಕ್ರಾಸ್, ಎರೆಕಟ್ಟೆ ರಸ್ತೆ, ಲಷ್ಕರ್ ಮೊಹಲ್ಲಾ, ಮೈಸೂರು – 570001 ಮತ್ತು ಶ್ರೀ ಸೈಯದ್ ನಯಾಜ್ ಬಿನ್ ಸೈಯದ್ ಘಾಜಿ (ಖಾತರಿದಾರರು) ಕಚೇರಿ ಬಾಗಿಲು ಸಂಖ್ಯೆ ಎಂಐಜಿ–6/ಎ, ತಮ್ಮಯ್ಯ ಪಾರ್ಕ್ ಹತ್ತಿರ, ಉದಯಗಿರಿ, ಮೈಸೂರು – 570 019** ಇವರು ನಮ್ಮ **ಉದಯಗಿರಿ ಶಾಖೆಗೆ** ಡಿಮ್ಯಾಂಡ್ ನೋಟಿಸ್‌ನಲ್ಲಿ ನಮೂದಿಸಿದ ಮೊತ್ತ **ರೂ.17,25,314/– (ಹದಿನೇಳು ಲಕ್ಷದ ಇಪ್ಪತ್ತೈದು ಸಾವಿರದ ಮುನ್ನೂರ ಹದಿನಾಲ್ಕು ರೂಪಾಯಿಗಳು ಮಾತ್ರ)** ಸದರಿ ಸೂಚನೆಯನ್ನು ಸ್ವೀಕರಿಸಿದ ದಿನಾಂಕದಿಂದ 60 ದಿನಗಳೊಳಗೆ ಮರುಪಾವತಿಸುವಂತೆ ಸೂಚಿಸಲಾಗಿದೆ.

ಮೇಲ್ಕಂಡ ಮೊತ್ತವನ್ನು ಮರುಪಾವತಿಸುವಲ್ಲಿ ಸಾಲಗಾರರು ವಿಫಲವಾಗಿರುವುದರಿಂದ ಸದರಿ ಕಾಯ್ದೆಯ ನಿಯಮ 8 ಮತ್ತು 9ನ್ನು ಓದಿದಂತೆ ಸೆಕ್ಷನ್ 13 (4)ರ ಅನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸುವ ಮೂಲಕ ಕೆಳಗೆ ವಿವರಿಸಿದ ಆಸ್ತಿಯನ್ನು ಕೆಳಸಹಿದಾರರು ಸ್ವಾಧೀನಪಡಿಸಿಕೊಂಡಿದ್ದಾರೆಂದು **13ನೇ ಜನವರಿ 2026ರಂದು** ಸಾಲಗಾರರು ಮತ್ತು ಸಾರ್ವಜನಿಕರಿಗೆ ಸೂಚಿಸಲಾಗಿದೆ.

ಸದರಿ ಆಸ್ತಿಯೊಂದಿಗೆ ಯಾವುದೇ ವ್ಯವಹಾರ ನಡೆಸದಂತೆ ನಿರ್ದಿಷ್ಟವಾಗಿ ಸಾಲಗಾರರು ಮತ್ತು ಸಾಮಾನ್ಯವಾಗಿ ಸಾರ್ವಜನಿಕರಿಗೆ ಎಚ್ಚರಿಕೆ ನೀಡಲಾಗಿದೆ ಹಾಗೂ ಆಸ್ತಿಯೊಂದಿಗಿನ ಯಾವುದೇ ವ್ಯವಹಾರವು ಇಂಡಿಯನ್ ಬ್ಯಾಂಕ್‌ನ ಶುಲ್ಕ **ರೂ.17,25,314/– (ಹದಿನೇಳು ಲಕ್ಷದ ಇಪ್ಪತ್ತೈದು ಸಾವಿರದ ಮುನ್ನೂರ ಹದಿನಾಲ್ಕು ರೂಪಾಯಿಗಳು ಮಾತ್ರ)** ಅದರ ಮೇಲಿನ ಶುಲ್ಕಗಳು.

ಸರ್ಫೇಸಿ ಕಾಯ್ದೆಯ ಸೆಕ್ಷನ್ 13(8) ರ ನಿಬಂಧನೆಗಳು ಮತ್ತು ಸೆಕ್ಯುರಿಟಿಗಳ ಮೇಲಿನ ನಿಮ್ಮ ವಿಮೋಚನೆಯ ಹಕ್ಕುಗಳೊಂದಿಗೆ ವ್ಯವಹರಿಸುವ ನಿಯಮಗಳತ್ತ ನಾವು ಗಮನ ಸೆಳೆಯುತ್ತೇವೆ.

**ಸ್ಥಿರ ಆಸ್ತಿಯ ವಿವರ:** ಎಲ್ಲಾ ಭಾಗ ಮತ್ತು ವಿಭಾಗಗಳು ಸೇರಿದಂತೆ ಮನೆ ಆಸ್ತಿ ಮೈಸೂರು ನಗರದ ಲಷ್ಕರ್ ಮೊಹಲ್ಲಾದ ಎರೆಕಟ್ಟೆ ಬೀದಿಯಲ್ಲಿರುವ ಹೊಸ ಸಂಖ್ಯೆ 2478, ಹೊಸ ಸಂಖ್ಯೆ ಎಲ್–29 ಅನ್ನು ಹೊಂದಿರುವ ಮನೆ ಮತ್ತು ಇದರ ಚೆಕ್ಕುಬಂದಿ: ಪೂರ್ವಕ್ಕೆ: ಸಾಹಿಬ್ ಖಾನ್ ಅವರ ಆಸ್ತಿ, ಪಶ್ಚಿಮಕ್ಕೆ: ಕನ್ಸರ್ವೆನ್ಸಿ, ಉತ್ತರಕ್ಕೆ: ಅಬ್ದುಲ್ ವಹಾಬ್ ಸಾಬ್ ಅವರ ಮನೆ, ದಕ್ಷಿಣಕ್ಕೆ: ಖುರ್ಷಿದ್ ಮಸೀದಿ.

**ಮತ್ತು ಪೂರ್ವದಿಂದ ಪಶ್ಚಿಮಕ್ಕೆ ಅಳತೆ: 40.00 ಅಡಿ ಮತ್ತು ಉತ್ತರದಿಂದ ದಕ್ಷಿಣಕ್ಕೆ: 44.00 ಅಡಿ**

**ದಿನಾಂಕ: 14.01.2026, ಸ್ಥಳ: ಮೈಸೂರು** **ಸಹಿ/– ಅಧಿಕೃತ ಅಧಿಕಾರಿ, ಇಂಡಿಯನ್ ಬ್ಯಾಂಕ್**

# ಕರ್ನಾಟಕ ಸರ್ಕಾರ ಮತ್ತು ಅಜೀಂ ಪ್ರೇಮ್‌ಜಿ ಫೌಂಡೇಷನ್ ವತಿಯಿಂದ ಬೆಂಗಳೂರಿನಲ್ಲಿ ಸಾರ್ವಜನಿಕ ಉದ್ದೇಶವುಳ್ಳ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಸ್ಥಾಪನೆ

**ಬೆಂಗಳೂರು** : ಬೆಂಗಳೂರಿನಲ್ಲಿ ಬೃಹತ್ತಾದ, ಸಾರ್ವಜನಿಕ ಉದ್ದೇಶವುಳ್ಳ, ಲೋಕೋಪಕಾರಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯನ್ನು ತೆರೆಯಲು ಕರ್ನಾಟಕ ಸರ್ಕಾರ



(ಸರ್ಕಾರ) ಮತ್ತು ಅಜೀಂ ಪ್ರೇಮ್‌ಜಿ ಫೌಂಡೇಷನ್ (ಫೌಂಡೇಷನ್) ಪಾಲುದಾರಿಕೆಗೆ ಕೈ ಜೋಡಿಸಿವೆ.

ಈ ಆಸ್ಪತ್ರೆಯನ್ನು 1000 ಹಾಸಿಗೆಗಳ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯನ್ನಾಗಿ ಅಭಿವೃದ್ಧಿಪಡಿಸಲಾಗುತ್ತಿದ್ದು ಈ ಮೂಲಕ ದುರ್ಬಲ ವರ್ಗಗಳು ಮತ್ತು ಸೂಕ್ತ ಸೇವೆಗಳಿಂದ ವಂಚಿತರಾದ ಜನರಿಗೆ ಉತ್ತಮ ಗುಣಮಟ್ಟದ ಆರೈಕೆಯನ್ನು ಒದಗಿಸುವ ಉದ್ದೇಶವನ್ನು ಹೊಂದಿದೆ. ಒಟ್ಟಾರೆ ಶೇಕಡಾ 75 ರಷ್ಟು ಹಾಸಿಗೆಗಳನ್ನು ರೋಗಿಗಳಿಗೆ ಉಚಿತವಾಗಿ ಒದಗಿಸುವ ಗುರಿ ಹೊಂದಲಾಗಿದ್ದು, ಉಳಿದ ಹಾಸಿಗೆಗಳಿಗೆ ತೃತೀಯ ಹಂತದ ಆರೈಕೆ ಒದಗಿಸುವ ಸರ್ಕಾರಿ ಆಸ್ಪತ್ರೆಗಳ ದರಕ್ಕೆ ಸರಿಸಮಾನವಾದ ದರವನ್ನು ವಿಧಿಸಲಾಗುತ್ತದೆ.

ಈ ಆಸ್ಪತ್ರೆಯು ವಿವಿಧ ಸ್ಪೆಷಾಲಿಟಿಗಳನ್ನು ಒದಗಿಸಲಿದ್ದು, ಅಂಗಾಂಗ ಕಸಿಗೆ ವಿಶೇಷ ಒತ್ತನ್ನು ನೀಡಲಾಗುತ್ತದೆ. ಅಲ್ಲದೆ ಇದು ವೈದ್ಯಕೀಯ ಶಿಕ್ಷಣ ಮತ್ತು ಸಂಶೋಧನೆಗೆ ತನ್ನ ಕೊಡುಗೆಯನ್ನು ನೀಡಲಿದೆ. ಈ ಉಪಕ್ರಮವು, ಅತ್ಯಾಧುನಿಕ ತೃತೀಯ ಹಂತದ ಆರೈಕೆಯ ಲಭ್ಯತೆಯನ್ನು ವಿಸ್ತರಿಸುವ ಮೂಲಕ ನಗರದ ಸಾರ್ವಜನಿಕ ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸುವ ಮತ್ತು ಅದಕ್ಕೆ ಪೂರಕವಾಗಿ ಕೊಡುಗೆ ನೀಡುವ ಉದ್ದೇಶವನ್ನು ಹೊಂದಿದೆ.

ಆಸ್ಪತ್ರೆಯ ಸಂಪೂರ್ಣ ಬಂಡವಾಳ ಮತ್ತು ಕಾರ್ಯನಿರ್ವಹಣಾ ವೆಚ್ಚವನ್ನು ಫೌಂಡೇಷನ್ ಭರಿಸಲಿದೆ. ಇದನ್ನು ಸರ್ಕಾರಿ ಮಾಲೀಕತ್ವದ ಜಮೀನಿನಲ್ಲಿ ಸ್ಥಾಪಿಸಲಾಗುತ್ತದೆ. ಅಜೀಂ ಪ್ರೇಮ್‌ಜಿ ಫೌಂಡೇಷನ್ ಸ್ಥಾಪಿಸುವ ಪ್ರತ್ಯೇಕ ಲಾಭೇತರ ಸಂಸ್ಥೆಯ ಮೂಲಕ ಈ ಆಸ್ಪತ್ರೆಯನ್ನು ನಿರ್ಮಿಸಿ ನಿರ್ವಹಿಸಲಾಗುತ್ತದೆ. ಆಸ್ಪತ್ರೆಯ ಆಡಳಿತ ಮಂಡಳಿಯು ಸರ್ಕಾರಿ ಪ್ರತಿನಿಧಿಗಳನ್ನು ಹೊಂದಿರಲಿದೆ.

ಜಮೀನನ್ನು ಗುತ್ತಿಗೆ ಪಡೆದು ಅಗತ್ಯ ಅನುಮೋದನೆಗಳನ್ನು ಗಳಿಸಿದ ನಂತರ ಐದು ವರ್ಷಗಳೊಳಗೆ ಆಸ್ಪತ್ರೆಯು ಸಂಪೂರ್ಣವಾಗಿ ಕಾರ್ಯ ನಿರ್ವಹಿಸುವ ನಿರೀಕ್ಷೆ ಇದೆ. ಆಸ್ಪತ್ರೆಯ ಎಲ್ಲ ಚಟುವಟಿಕೆಗಳು ಸಾರ್ವಜನಿಕ ಹಿತಾಸಕ್ತಿಯ ಉದ್ದೇಶಕ್ಕೆ ತಕ್ಕುದಾಗಿ ಇರಲಿವೆ.

# 88 ಪ್ರಕರಣಗಳಲ್ಲಿ ಪೊಲೀಸಿನವರೇ ಶಾಮೀಲು: ಬೇಲಿಯೇ ಎದ್ದು ಹೊಲ ಮೇಯುವುದು ಅಕ್ಷಮ್ಯ ಅಪರಾಧ: ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೆಂಗಳೂರು** : ಬೇಲಿಯೇ ಎದ್ದು ಹೊಲ ಮೇಯುವುದು ಅಕ್ಷಮ್ಯ ಅಪರಾಧ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಪೊಲೀಸ್ ಅಧಿಕಾರಿಗಳ ವಾರ್ಷಿಕ ಸಮ್ಮೇಳನ ಉದ್ಘಾಟಿಸಿದ ನಂತರ ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದರು.

ಪೊಲೀಸ್ ಇಲಾಖೆ ಕೆಲವು ಠಾಣೆಗಳಲ್ಲಿ ಉತ್ತಮವಾಗಿ ಕೆಲಸ ಮಾಡುತ್ತಿದ್ದು, ಇನ್ನು ಕೆಲವೆಡೆ ಸರಿಯಾಗಿ ಕೆಲಸ ಮಾಡುತ್ತಿಲ್ಲ. ಸುಮಾರು 88 ಪ್ರಕರಣಗಳಲ್ಲಿ ಪೊಲೀಸಿನವರೇ ಶಾಮೀಲಾಗಿದ್ದಾರೆ. ಬೇಲಿಯೇ ಎದ್ದು ಹೊಲ ಮೇಯ್ದಂತೆ ಆಗಿರುವುದು ಅಕ್ಷಮ್ಯ ಅಪರಾಧ. ರಾಜ್ಯ ಸರ್ಕಾರ ಮಾತ್ರವಲ್ಲದೆ, ಪೊಲೀಸ್ ಇಲಾಖೆಗೆ ಕೆಟ್ಟ ಹೆಸರು ತರುವಂಥ ಕೆಲಸವಿದು ಎಂದರು.

2003 ರಿಂದ ರಾಜ್ಯದಲ್ಲಿ ಅಪರಾಧಗಳ ಸಂಖ್ಯೆ ಕಡಿಮೆಯಾಗುತ್ತಿದೆ. ರಾಯಚೂರು ಜಿಲ್ಲೆಯ ಕವಿತಾಳ, ಪೊಲೀಸ್ ಠಾಣೆ ದೇಶದಲ್ಲಿಯೇ ಉತ್ತಮ ಪೊಲೀಸ್ ಠಾಣೆಗಳ ಸಾಲಿನಲ್ಲಿ ಮೂರನೇ ಸ್ಥಾನ ಪಡೆದಿದೆ ಎಂದರು.

ಪೊಲೀಸರು ಜಾಗರೂಕತೆಯಿಂದ ಕೆಲಸ ಮಾಡಬೇಕು

ಪೊಲೀಸ್ ಸಬ್ ಇನ್ಸ್‌ಪೆಕ್ಟರ್, ಎ ಎಸ್ ಪಿ, ಡಿ ವೈ ಎಸ್ ಪಿ , ಎಸಿಪಿ ಇವರಿಗೆ ಗೊತ್ತಿಲ್ಲದೆ ಯಾವ ಅಪರಾಧವೂ ನಡೆಯಲು ಸಾಧ್ಯವಿಲ್ಲ. ಪೊಲೀಸರು ಜಾಗರೂಕತೆಯಿಂದ ಕೆಲಸ ಮಾಡಬೇಕೆಂದು ಸ್ಪಷ್ಟವಾಗಿ ಸೂಚಿಸಲಾಗಿದೆ. ವಿಶೇಷವಾಗಿ ದುರ್ಬಲರಿಗೆ ರಕ್ಷಣೆ ನೀಡಬೇಕು. ಬಲಾಢ್ಯರ ಕೈಗೊಂಬೆಗಳಂತೆ ಕೆಲಸ ಮಾಡಬಾರದು ಎಂದು ಸೂಚಿಸಲಾಗಿದೆ ಎಂದರು.

**ಪೊಲೀಸರು ಜಾಗರೂಕತೆಯಿಂದ, ದಕ್ಷತೆಯಿಂದ ಕೆಲಸ ಮಾಡಿದರೆ ರಾಜ್ಯವನ್ನು ಮಾದಕ ವಸ್ತು ಮುಕ್ತವನ್ನಾಗಿಸಬಹುದು** ಕಳ್ಳತನ, ಸುಲಿಗೆ, ದರೋಡೆ, ಕೊಲೆ ಮುಂತಾದ ಪ್ರಕರಣಗಳು ಕಡಿಮೆಯಾಗುತ್ತಿದ್ದರೂ, ಸೈಬರ್ ಅಪರಾಧ ಹಾಗೂ ಡ್ರಗ್ಸ್ ಅಪರಾಧಗಳು ಕಡಿಮೆಯಾಗುತ್ತಿಲ್ಲ. ಯುವಜನರು ಇದರಿಂದ ಹಾಳಾಗುತ್ತಿದ್ದು, ಕರ್ನಾಟಕವನ್ನು ಮಾದಕ ವಸ್ತು ಮುಕ್ತಾ ರಾಜ್ಯವಾಗಿಸಬೇಕೆಂದು ಸರ್ಕಾರ ಘೋಷಣೆ ಮಾಡಿದೆ. ಪೊಲೀಸರು ಜಾಗರೂಕತೆಯಿಂದ, ದಕ್ಷತೆಯಿಂದ ಕೆಲಸ ಮಾಡಿದರೆ ರಾಜ್ಯವನ್ನು ಮಾದಕ ವಸ್ತು ಮುಕ್ತವನ್ನಾಗಿಸಬಹುದು. ಜೊತೆಗೆ ಯುವಜನರನ್ನೂ ರಕ್ಷಿಸಬಹುದು ಎಂದರು.

**ಡ್ರಗ್ಸ್ ದಂಧೆ ಮಾಡುವ ವಿದೇಶಿಯರನ್ನು ಮುಲಾಜಿಲ್ಲದೆ ಅವರ ದೇಶಕ್ಕೆ ಕಳುಹಿಸಬೇಕು**

ರಾಜ್ಯವನ್ನು ಮಾದಕವಸ್ತು ಮುಕ್ತ ಮಾಡಬೇಕಾದರೆ ಡ್ರಗ್ಸ್ ಮಾರಾಟ ಮಾಡುವವರನ್ನು ವಿಚಾರಣೆ ಮಾಡಿದರೆ ಅಥವಾ ಮಾದಕ ವಸ್ತು ವ್ಯಸನಿಗಳನ್ನು ವಿಚಾರಿಸಿದರೆ ಡ್ರಗ್ಸ್ ಜಾಲವನ್ನು ಪತ್ತೆ ಹಚ್ಚಬಹುದು. ಸರಬರಾಜು ಮಾಡುವವರನ್ನು ವಿಚಾರಣೆಗೆ ಗುರಿ ಪಡಿಸಿದರೆ ಉತ್ಪಾದಕರು ಹಾಗೂ ಸರಬರಾಜುದಾರರು ಯಾರು



ಎಂದು ತಿಳಿಯುತ್ತದೆ. ಎಲ್ಲ ಪೊಲೀಸ್ ಠಾಣೆಗಳಲ್ಲಿ ಈ ಕೆಲಸವನ್ನು ತಕ್ಷಣದಿಂದಲೇ ಮಾಡಬೇಕೆಂದು ಸೂಚಿಸಲಾಗಿದೆ. ವಿದೇಶಿಯರು ಜಾಮೀನಿನ ಮೇಲೆ ಬಿಡುಗಡೆಯಾಗಿ ಇಲ್ಲೇ ಉಳಿದರೆ ಪುನಃ ಅದೇ ಅಪರಾಧದಲ್ಲಿ ತೊಡಗುವ ಸಾಧ್ಯತೆಗಳು ಹೆಚ್ಚು. ಆದ್ದರಿಂದ ವಿದೇಶಿಯರನ್ನು ಯಾವುದೇ ಮುಲಾಜಿಲ್ಲದೆ ಅವರ ದೇಶಕ್ಕೆ ಕಳುಹಿಸಬೇಕು ಎಂದು ಸೂಚಿಸಲಾಗಿದೆ ಎಂದರು.

**ಪೊಲೀಸ್ ಠಾಣೆಗಳ ಮೇಲೆ ಮೇಲಾಧಿಕಾರಿಗಳು ನಿಗಾ ಇಡಬೇಕು** ಪೊಲೀಸ್ ಠಾಣೆಗಳಲ್ಲಿ ಪೊಲೀಸ್ ಇನ್ಸ್‌ಪೆಕ್ಟರ್ ಹಾಗೂ ಪೊಲೀಸ್ ಸಬ್ ಇನ್ಸ್‌ಪೆಕ್ಟರ್, ಡಿ ವೈ ಎಸ್ ಪಿ ಗಳ ಮೇಲೆ ಮೇಲಾಧಿಕಾರಿಗಳು ನಿಗಾ ಇಡಲು ಸೂಚಿಸಲಾಗಿದೆ. ಅಪರಾಧಗಳಲ್ಲಿ ಅವರು ಶಾಮೀಲಾಗಬಾರದು.

**ಡ್ರಗ್ಸ್ ಪತ್ತೆ ಹಚ್ಚುವಲ್ಲಿ ವಿಫಲರಾದ ಪೊಲೀಸರ ಮೇಲೆ ಕ್ರಮಕ್ಕೆ ಸೂಚನೆ** ಮಹಾರಾಷ್ಟ್ರದ ಪೊಲೀಸರಿಗೆ ಬೆಂಗಳೂರಿಗೆ ಬಂದು ಡ್ರಗ್ಸ್ ಪತ್ತೆಹಚ್ಚಲು ಸಾಧ್ಯವಾದರೆ, ರಾಜ್ಯದ ಪೊಲೀಸರು ಏಕೆ ಮಾಡಬಾರದು? ರಾಜ್ಯದ ಪೊಲೀಸರು ಇದನ್ನು ಪತ್ತೆ ಹಚ್ಚುವಲ್ಲಿ ವಿಫಲರಾಗಿದ್ದು, ಸಂಬಂಧಪಟ್ಟ ಪೊಲೀಸರ ಮೇಲೆ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ ಎಂದರು.

**ಸೈಬರ್ ಅಪರಾಧ ಮತ್ತು ಮಾದಕವಸ್ತು ನಿಯಂತ್ರಣಕ್ಕೆ ಕಾನೂನನ್ನು ಇನ್ನಷ್ಟು ಬಿಗಿಗೊಳಿಸಬೇಕು** ಸೈಬರ್ ಅಪರಾಧ ಮತ್ತು ಮಾದಕವಸ್ತು ನಿಯಂತ್ರಣಕ್ಕೆ ಕಾನೂನನ್ನು ಇನ್ನಷ್ಟು ಬಿಗಿಗೊಳಿಸಬೇಕಾಗುತ್ತದೆ. ಹೊಸ ಕಾನೂನು ಅಥವಾ ತಿದ್ದುಪಡಿಯನ್ನು ಮುಂಬರುವ ದಿನಗಳಲ್ಲಿ ಮಾಡಬೇಕಾಗುತ್ತದೆ ಎಂದರು. ಐಪಿಎಲ್ ಕುರಿತಂತೆ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು ಡಿ ಮೈಕಲ್ ಕುನ್ಹಾ ಅವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿ, ಅವರ ಶಿಫಾರಸ್ಸುಗಳನ್ನು ಪಾಲಿಸಲು ಗೃಹ ಸಚಿವರ ಅಧ್ಯಕ್ಷತೆಯಲ್ಲಿ ಉಪ ಸಮಿತಿ ರಚಿಸಲಾಗಿದೆ. ಅವರು ಅಲ್ಪಾವಧಿ ಶಿಫಾರಸ್ಸುಗಳನ್ನು ಕೂಡಲೆ ಜಾರಿಗೆ ತರಬೇಕು ಹಾಗೂ ದೀರ್ಘಾವಧಿಯಲ್ಲಿ ಉಳಿದವನ್ನು ಪಾಲಿಸಬೇಕಿದೆ. ಶಿಫಾರಸುಗಳನ್ನು ಜಾರಿ ಮಾಡಲೇಬೇಕು ಎಂದರು.

**ಬಳ್ಳಾರಿ ಘಟನೆ: ತನಿಖಾ ವರದಿ ಬಂದ ನಂತರ ತಪಿತಸ್ಥರ ಮೇಲೆ ಕ್ರಮ** ಬಳ್ಳಾರಿ ಘಟನೆಗೆ ಸಂಬಂಧಿಸಿದಂತೆ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿ ಪ್ರಕರಣವನ್ನು ಸಿಐಡಿ ಗೆ ವಹಿಸಲಾಗಿದೆ. ಬಳ್ಳಾರಿ ಸೂಕ್ಷ್ಮ ಪ್ರದೇಶವಾಗಿದ್ದು ಜಿಲ್ಲಾ ಪೊಲೀಸ್ ವರಿಷ್ಠ ಅಧಿಕಾರಿಗಳು ಸ್ಥಳದಲ್ಲಿ ಇರಲಿಲ್ಲ ಎಂಬ ಕಾರಣಕ್ಕೆ ಅಮಾನತು ಮಾಡಲಾಗಿದೆ . ತನಿಖಾ ವರದಿ ಬಂದ ನಂತರ ತಪಿತಸ್ಥರ ಮೇಲೆ ಕ್ರಮ* ಕೈಗೊಳ್ಳಲಾಗುವುದು ಎಂದರು.

**ರಾಜೀವ್ ಗೌಡರನ್ನು ಬಂಧಿಸಲಾಗುವುದು**

ಕಾಂಗ್ರೆಸ್ ಮುಖಂಡ ರಾಜೀವ್ ಗೌಡ ಶಿಡ್ಲಘಟ್ಟದ ಪೌರಾಯುಕ್ತರನ್ನು ನಿಂದಿಸಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾತನಾಡಿದ ಮುಖ್ಯಮಂತ್ರಿಗಳು ಅವರು ತಲೆಮರೆಸಿಕೊಂಡಿದ್ದು, ಅವರನ್ನು ಬಂಧಿಸಲಾಗುವುದು. ಅವರ ಮೇಲೆ ಕಾನೂನಿನ ಪ್ರಕಾರ ಕ್ರಮಕೈಗೊಳ್ಳಲು ಸೂಚಿಸಲಾಗಿದೆ. ಯಾವುದೇ ಪಕ್ಷದವರಾಗಲಿ, ಕಾನೂನಿಗಿಂತ ಯಾರೂ ಮೇಲಲ್ಲ ಎಂದರು.

# ಬಳ್ಳಾರಿಯ ಕಾರ್ಯಕರ್ತನ ಕೊಲೆಗೆ ಕಾಂಗ್ರೆಸ್ ಸರ್ಕಾರ ನ್ಯಾಯ ನೀಡಬೇಕು, ಪ್ರಕರಣವನ್ನು ಸಿಬಿಐಗೆ ವಹಿಸಬೇಕು: ಪ್ರತಿಪಕ್ಷ ನಾಯಕ ಆರ್.ಅಶೋಕ

**ಬಳ್ಳಾರಿ** : ಬಳ್ಳಾರಿಯ ಕಾರ್ಯಕರ್ತನ ಕೊಲೆಗೆ ಕಾಂಗ್ರೆಸ್ ಸರ್ಕಾರ ನ್ಯಾಯ ನೀಡಬೇಕು. ತಪ್ಪಿತಸ್ಥರನ್ನು ಕೂಡಲೇ ಬಂಧಿಸಿ ಜೈಲಿಗೆ ಕಳುಹಿಸಬೇಕು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹಿಸಿದರು.

ಬಳ್ಳಾರಿಯಲ್ಲಿ ನಡೆದ ಪ್ರತಿಭಟನೆಯಲ್ಲಿ ಮಾತನಾಡಿದ



ಅವರು, ಕೊಲೆಗಡುಕ ಕಾಂಗ್ರೆಸ್ ಸರ್ಕಾರದ ಬಳಿ ನ್ಯಾಯ ಕೇಳಲು ಬಳ್ಳಾರಿಗೆ ಬಂದಿದ್ದೇವೆ. ಎರಡೂವರೆ ವರ್ಷದಿಂದ ಯಾರು ಆಡಳಿತ ನಡೆಸುತ್ತಿದ್ದಾರೆ ಎಂದು ಗೊತ್ತಾಗಿಲ್ಲ. ಗೃಹ ಸಚಿವರು ಯಾರೆಂದು ಇನ್ನೂ ತಿಳಿದಿಲ್ಲ. ಗೃಹ ಸಚಿವ ಡಾ.ಜಿ.ಪರಮೇಶ್ವರ್ ವಿಧಾನಸಭೆಯಲ್ಲಿ ಉತ್ತರ ಕೊಡಲು ಮಾತ್ರ ಸೀಮಿತವಾಗಿದ್ದಾರೆ. ಉಳಿದಂತೆ ಪ್ರತಿ ಜಿಲ್ಲೆಗಳಲ್ಲಿ ಪ್ರತ್ಯೇಕ ಗೃಹ ಸಚಿವರಿದ್ದಾರೆ. ಕಾಂಗ್ರೆಸ್ ನಾಯಕರಿಂದಾಗಿ ಅಮಾಯಕ ಕಾರ್ಯಕರ್ತ ಬಲಿಯಾಗಿದ್ದು, ತಪ್ಪಿತಸ್ಥರಿಗೆ ಶಿಕ್ಷೆಯಾಗಬೇಕಿದೆ ಎಂದರು.

ಜನವರಿ 1 ರಂದು ಎಲ್ಲ ಕಡೆ ಹೊಸ ವರ್ಷದ ಆಚರಣೆಗಾಗಿ ಪಟಾಕಿ ಸಿಡಿಯುತ್ತಿದ್ದರೆ, ಬಳ್ಳಾರಿಯಲ್ಲಿ ಗುಂಡಿನ ಸುರಿಮಳೆ ಆಗುತ್ತಿತ್ತು. ಗುಂಡು ಹಾರಿಸಿದವರು ಯಾರೆಂದು ಪೊಲೀಸರಿಗೆ ಇನ್ನೂ ಗೊತ್ತಿಲ್ಲ. ಜನಾರ್ದನ ರೆಡ್ಡಿ ಅಥವಾ ಶ್ರೀರಾಮುಲು ಕಡೆಯವರಿಂದ ಗುಂಡು ಹಾರಿದ್ದರೆ ಪೊಲೀಸರು ಪ್ರತಿ ಮನೆಗೆ ಬಂದು ಲಾಠಿ ಏಟು ಕೊಟ್ಟು ಎಲ್ಲರನ್ನೂ ಬಂಧಿಸುತ್ತಿದ್ದರು. ಕಾಂಗ್ರೆಸ್ ಕಡೆಯವರೇ ಆಗಿರುವುದರಿಂದ ಕೊಲೆ ಮಾಡಿದವರನ್ನು ಇನ್ನೂ ಬಂಧನ ಮಾಡಿಲ್ಲ. ಗುಂಡು ಹಾರಿಸಿದ್ದ ಗನ್‌ಮ್ಯಾನ್‌ನನ್ನು ಬಂಧಿಸಲು ಪೊಲೀಸರ ಮೇಲೆ ಒತ್ತಡ ಹೇರಲಾಗಿದೆ. ಈ ಬಗ್ಗೆ ನಾನು ವಿಚಾರಿಸಿದಾಗ ಅಚಾನಕ್ಕಾಗಿ ಗುಂಡು ಹಾರಿದೆ ಎಂದು ಪೊಲೀಸರು ಹೇಳಿದ್ದಾರೆ. ಹೀಗೆ ಗುಂಡು ಹಾರಿಸಿದರೆ ಪೊಲೀಸರು ಬಿಟ್ಟುಬಿಡುತ್ತಾರೆಯೇ? ಈಗ ಕೊಲೆಗಾರರು ಬೆಂಗಳೂರಿನಲ್ಲಿ ಆರಾಮವಾಗಿ ಇದ್ದಾರೆ. ಇದು ನ್ಯಾಯವೇ? ಎಂದು ಪ್ರಶ್ನಿಸಿದರು.

ಪೊಲೀಸರು ನ್ಯಾಯ ಕೊಡಲು ವಿಫಲರಾಗಿದ್ದಾರೆ. ಕಳೆದೆರಡು ವರ್ಷಗಳಲ್ಲಿ ಬಳ್ಳಾರಿಯಲ್ಲಿ ಏನೂ ಅಭಿವೃದ್ಧಿಯಾಗಿಲ್ಲ. ಈಗ ಇಲ್ಲಿ ಪೆಟ್ರೋಲ್ ಬಾಂಬ್ ದಾಳಿ ನಡೆದಿದೆ. ಅಂತಹ ದಾಳಿ ಮಾಡಿದವರನ್ನು ಬಂಧಿಸಿ ಜೈಲಿಗೆ ಹಾಕಬೇಕಾಗಿತ್ತು. ಜನಾರ್ದನ ರೆಡ್ಡಿಯವರ ಮೇಲೆ ದಾಳಿ ಮಾಡಲು ಬೇರೆ ಬೇರೆ ಪ್ರಯತ್ನ ನಡೆದರೂ ಕ್ರಮ ವಹಿಸಿಲ್ಲ. ಈ ಪ್ರಕರಣವನ್ನು ಮುಚ್ಚಿಹಾಕಲು ವ್ಯವಸ್ಥಿತ ಪ್ರಯತ್ನ ನಡೆದಿದೆ. ಶಿಡ್ಲಘಟ್ಟದಲ್ಲಿ ಕಾಂಗ್ರೆಸ್ ಮುಖಂಡ ರಾಜೀವ್ ಗೌಡ ಅಧಿಕಾರಿಗೆ ಬೆದರಿಕೆ ಹಾಕುತ್ತಾನೆ. ಇದಕ್ಕೆ ಡಿಸಿಎಂ ಡಿ.ಕೆ.ಶಿವಕುಮಾರ್ ಬೆಂಬಲ ನೀಡುತ್ತಾರೆ. ಕುಕ್ಕರ್ ಬಾಂಬ್ ಹಾಕುವವರು, ಬೆದರಿಕೆ ಹಾಕುವವರು ಇವರಿಗೆ ಬ್ರದರ್‌ಗಳಾಗಿದ್ದಾರೆ ಎಂದರು.

ಎರಡು ವರ್ಷದ ಬಳಿಕ ಅಧಿಕಾರ ಇರುವುದಿಲ್ಲ ಎಂದು ಗೊತ್ತಾಗಿರುವುದರಿಂದಲೇ ಇಷ್ಟೆಲ್ಲ ಹಲ್ಲೆ ನಡೆಯುತ್ತಿದೆ. ಈ ಬಗ್ಗೆ ವಿಧಾನಸಭೆಯಲ್ಲೂ ಪ್ರಶ್ನೆ ಮಾಡಿ ಹೋರಾಟ ಮಾಡುತ್ತೇವೆ. ಸರ್ಕಾರಕ್ಕೆ ಸಾಧ್ಯವಾದರೆ ಜನರಿಗೆ ಒಳಿತು ಮಾಡಬೇಕು, ಇಲ್ಲವಾದರೆ ತೊಲಗಬೇಕು. ಪೊಲೀಸರು ಜನರಿಗೆ ರಕ್ಷಣೆ ನೀಡಬೇಕು. ಆದರೆ 7 ಕೋಟಿ ರೂ. ದರೋಡೆ ಪ್ರಕರಣದಲ್ಲಿ ಪೊಲೀಸರೇ ಭಾಗಿಯಾಗಿದ್ದಾರೆ. ಕರ್ನಾಟಕ ಪೊಲೀಸ್ ಎಂದರೆ ದೇಶಕ್ಕೆ ಮಾದರಿಯಾಗಿತ್ತು. ಆ ವ್ಯವಸ್ಥೆಯನ್ನು ಕಾಂಗ್ರೆಸ್ ಹಾಳು ಮಾಡಿಬಿಟ್ಟಿದೆ ಎಂದರು.

ಜನರು ನೆನಪಿಸಿಕೊಳ್ಳುವಂತೆ ಪೊಲೀಸರು ಕೆಲಸ ಮಾಡಬೇಕು. ಆದರೆ ಬಳ್ಳಾರಿಯಲ್ಲಿ ಹೊಸ ವರ್ಷದಲ್ಲೇ ಒಂದು ಕುಟುಂಬದಲ್ಲಿ ಸೂತಕ ಕಂಡುಬಂದಿದೆ. ಈ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಿ ನೊಂದವರಿಗೆ ನ್ಯಾಯ ನೀಡಬೇಕು ಎಂದು ಆಗ್ರಹಿಸಿದರು.

# ನಕಲಿ ದಾಖಲಾತಿ ನೀಡಿದ ಆರೋಪ: ಏಳು ಸರ್ಕಾರಿ ನೌಕರರ ವಿರುದ್ಧ ಎಫ್‌ಐಆರ್

**ಬೆಂಗಳೂರು:** ಭಾರತೀಯ ಅರಣ್ಯ ಸಂಶೋಧನೆ ಮತ್ತು ಶಿಕ್ಷಣ ಮಂಡಳಿ (ಐಸಿಎಫ್‌ಆರ್‌ಇ) ನಡೆಸುವ ವಿವಿಧ ಹುದ್ದೆಗಳ ಪರೀಕ್ಷೆಗಳಲ್ಲಿ ನಕಲಿ ಅಭ್ಯರ್ಥಿ ಗಳಿಂದ ಪರೀಕ್ಷೆ ಬರೆಯಿಸಿ ಹಾಗೂ ನಕಲಿ ದಾಖಲಾತಿ ಸಲ್ಲಿಸಿ ವಾಮಮಾರ್ಗದಲ್ಲಿ ಸರ್ಕಾರಿ ಕೆಲಸ ಗಿಟ್ಟಿಸಿಕೊಂಡಿದ್ದ ಏಳು ಮಂದಿ ಸರ್ಕಾರಿ ನೌಕರರ ವಿರುದ್ಧ ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಐಸಿಎಫ್‌ಆರ್‌ಇ ನಿರ್ದೇಶಕ ಡಾ. ಶಕ್ತಿಸಿಂಗ್ ಚೌಹಾಣ್ ಎಂಬುವರು ನೀಡಿದ ದೂರು ಆಧರಿಸಿ ಎಂಟಿಎಸ್ ನೌಕರರಾದ ದಿನೇಶ್, ಸುಧೀರ್, ಪ್ರಿನ್ಸ್, ಸೋನು, ಪ್ರವೀಣ್, ರಾಜ್ ಕುಮಾರ್ ಹಾಗೂ ಅರಣ್ಯ ರಕ್ಷಕ ಸುನೀಲ್ ಕುಮಾರ್ ಎಂಬುವರ ವಿರುದ್ಧ ಎಫ್‌ಐಆರ್ ದಾಖಲಿಸಿ ತನಿಖೆ ಕೈಗೊಂಡಿರುವುದಾಗಿ ಪೊಲೀಸರು ಹೇಳಿದ್ದಾರೆ. ಐಸಿಎಫ್‌ಆರ್‌ಇ ವತಿಯಿಂದ ಮರ ವಿಜ್ಞಾನ ಮತ್ತು ತಂತ್ರಜ್ಞಾನ ಸಂಸ್ಥೆಯಲ್ಲಿ ಮಲ್ಟಿ ಟಾಸ್ಕಿಂಗ್ ಸ್ಟಾಫ್ (ಎಂಟಿಎಸ್) ಹಾಗೂ ಅರಣ್ಯ ರಕ್ಷಕ ಹುದ್ದೆಗಳಿಗೆ ಅಧಿಸೂಚನೆ ಹೊರಡಿಸಿತ್ತು. ಇದರಂತೆ 2019, 2022 ಹಾಗೂ 2023ರಲ್ಲಿ ಪರೀಕ್ಷೆ ಬರೆದು ಸರ್ಕಾರಿ ಕೆಲಸ ಗಿಟ್ಟಿಸಿ ಕೊಂಡಿದ್ದರು. 2025ರಲ್ಲಿ ನೇಮಕಗೊಂಡ ಸರ್ಕಾರಿ ಉದ್ಯೋಗಿಗಳ ದಾಖಲೆ ನೈಜತೆ ಪರಿಶೀಲಿಸಲು ಸೂಚಿಸಲಾಗಿತ್ತು.

**ಇಂತಹುದೇ ಪ್ರಕರಣ ರಾಜಸ್ಥಾನದಿಂದಲೂ ವರದಿಯಾಗಿದೆ:** ನಕಲಿ ದಾಖಲೆ ಸಲ್ಲಿಸಿ ಪೊಲೀಸ್ ಕಾನ್ಸ್‌ಟೇಬಲ್‌ಗಳಾಗಿ ನೇಮಕವಾದ 38 ಜನರ ವಿರುದ್ಧ ರಾಜಸ್ಥಾನ ಪೊಲೀಸರು ಕ್ರಮ ಕೈಗೊಂಡಿದ್ದಾರೆ.

2018 ಮತ್ತು 2021ರ ನೇಮಕಾತಿಯಲ್ಲಿ ನಕಲಿ ದಾಖಲೆ ಸಲ್ಲಿಸಿ ಪೊಲೀಸ್ ಕಾನ್ಸ್‌ಟೇಬಲ್‌ಗಳಾಗಿ ಆಯ್ಕೆ ಆದ ಆರೋಪದ ಮೇಲೆ 38 ಕಾನ್ಸ್‌ಟೇಬಲ್‌ಗಳ ಮೇಲೆ ರಾಜಸ್ಥಾನ ಪೊಲೀಸರ ವಿಶೇಷ ಕಾರ್ಯಾಚರಣೆ ಪಡೆ (SOG) ಪ್ರಕರಣ ದಾಖಲಿಸಿದೆ. ಸರ್ಕಾರಿ ನೇಮಕಾತಿಗಳಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆ ಮತ್ತು ಭ್ರಷ್ಟಾಚಾರದ ಹಲವು ಪ್ರಕರಣಗಳ ನಡುವೆ ಈ ಹೊಸ ವಂಚನೆ ಬೆಳಕಿಗೆ ಬಂದಿದೆ. ತನಿಖೆಯಲ್ಲಿ ಆರೋಪಿಗಳ ವಿರುದ್ಧ ಬಲವಾದ ಪುರಾವೆಗಳು ಸಿಕ್ಕಿವೆ. ಇದರಲ್ಲಿ 2018ರ ಬ್ಯಾಚ್‌ನ 26 ಕಾನ್ಸ್‌ಟೇಬಲ್‌ಗಳು ಮತ್ತು 2021 ರ ಬ್ಯಾಚ್‌ನ 12 ಕಾನ್ಸ್‌ಟೇಬಲ್ ಗಳು ಆರೋಪಿ ಗಳಾಗಿದ್ದಾರೆ ಎಂದು ವಿಶೇಷ ಕಾರ್ಯಾಚರಣೆ ಪಡೆಯ ಎಡಿಜಿ ವಿಶಾಲ ಬನ್ಸಾಲ್ ತಿಳಿಸಿದ್ದಾರೆ. ಆ ಬಳಿಕ ರಾಜಸ್ಥಾನ ಪೊಲೀಸ್ ನೇಮಕಾತಿ ಮತ್ತು ಬಡ್ತಿ ಮಂಡಳಿಯು ಜಲೋರ್ ಎಸ್‌ಪಿಗೆ ಪತ್ರ ಬರೆದು ಕಳೆದ ಐದು ವರ್ಷಗಳಲ್ಲಿ ನಡೆದ ಎಲ್ಲಾ ಕಾನ್ಸ್‌ಟೇಬಲ್ ನೇಮಕಾತಿಗಳ ತನಿಖೆಗೆ ಆದೇಶಿಸಲಾಗಿತ್ತು.

# ಡಿಸಿಎಂ ಡಿ.ಕೆ. ಶಿವಕುಮಾರ್ ಡಾವೊಸ್ ಪ್ರವಾಸ ರದ್ದು

**ದೆಹಲಿ :** ಜನವರಿ 18ರಂದು ನಿಗದಿಯಾಗಿದ್ದ ವರ್ಲ್ಡ್ ಏಕನಾಮಿಕ್ ಫೋರಂ ಕಾರ್ಯಕ್ರಮದಲ್ಲಿ ಭಾಗವಹಿಸುವ ಡಿಸಿಎಂ ಡಿ.ಕೆ. ಶಿವಕುಮಾರ್ ಅವರ ಪ್ರವಾಸವನ್ನು ರದ್ದುಗೊಳಿಸಲಾಗಿದೆ.

ಬೆಂಗಳೂರು ಹಾಗೂ ನವದೆಹಲಿಯಲ್ಲಿ ಅಧಿಕೃತ ಕಾರ್ಯಕ್ರಮಗಳ ಹಿನ್ನೆಲೆಯಲ್ಲಿ ಡಿಸಿಎಂ ಅವರ ಈ ಪ್ರವಾಸ ರದ್ದುಗೊಳಿಸಲಾಗಿದೆ.

ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಎಐಸಿಸಿ ನಾಯಕರ ಜೊತೆಗಿನ ಸರಣಿ ಸಭೆ ಹಾಗೂ ಮನರೇಗಾ ಮರುಜಾರಿ ಆಗ್ರಹಿಸಿ ಕೇಂದ್ರ ಸರ್ಕಾರದ ವಿರುದ್ಧದ ಅಭಿಯಾನದ ಜೊತೆಗೆ ಜ. 22ರಿಂದ ಆರಂಭವಾಗುವ ಐದು ದಿನಗಳ ವಿಶೇಷ ಅಧಿವೇಶನದಲ್ಲಿ ಭಾಗವಹಿಸಬೇಕಾಗಿದೆ.

# ನಮ್ಮ ಮೆಟ್ರೋ ದರ ಏರಿಕೆ: ಬಿಎಂಆರ್‌ಸಿಎಲ್‌ಗೆ ಎಚ್ಚರಿಕೆ ಕೊಟ್ಟ ಬೆಂಗಳೂರು ಪ್ರಯಾಣಿಕರು

**ಬೆಂಗಳೂರು:** ಬೆಂಗಳೂರು ಮೆಟ್ರೋ ಟಿಕೆಟ್ ದರ ಏರಿಕೆ ವಿಚಾರ ಮತ್ತೆ ಭಾರೀ ವಿವಾದಕ್ಕೆ ಕಾರಣವಾಗಿದೆ. ಈಗಾಗಲೇ ಕಳೆದ ಫೆಬ್ರವರಿ 9ರಂದು ಬಿಎಂ ಆರ್ಸಿ ಎಲ್ ಅಧಿಕಾರಿಗಳು ಶೇ 105.5 ರಷ್ಟು ದರ ಏರಿಕೆ ಮಾಡಿದ್ದನ್ನು ವಿರೋಧಿಸಿ ಪ್ರಯಾಣಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದರು. ಈ ಹಿನ್ನೆಲೆಯಲ್ಲಿ ಮೆಟ್ರೋ ಟಿಕೆಟ್



ದರವನ್ನು ಶೇ 71.5ಕ್ಕೆ ಇಳಿಸ ಲಾಗಿತ್ತು. ಈ ಎಲ್ಲಾ ಗೊಂದಲದ ನಡುವೆಯೇ ಇದೀಗ ಮತ್ತೆ ಸ್ವಯಂಚಾಲಿತ ದರ ಏರಿಕೆ ಮಾಡಲು ಬಿಎಂಆರ್ಸಿಎಲ್ ಅಣಿಯಾಗಿದ್ದು, ಬಿಎಂಆರ್‌ಸಿಎಲ್‌ಗೆ ಬೆಂಗಳೂರು ಪ್ರಯಾಣಿಕರು ಎಚ್ಚರಿಕೆ ನೀಡಿದ್ದಾರೆ. ಕಳೆದ ವರ್ಷ ಶೇ. 75 ರಷ್ಟು ಏರಿಕೆಯ ನಂತರ, ಮೆಟ್ರೋ ಪ್ರಯಾಣಿಕರು ಯಾವುದೇ ಹೊಸ ದರ ಏರಿಕೆಯನ್ನು ವಿರೋಧಸುತ್ತಾರೆ ಮತ್ತು ತಕ್ಷಣದ ದರ ಹಿಂಪಡೆ ಯುವಿಕೆಗೆ ಒತ್ತಾಯಿಸುತ್ತಾರೆ. ಅಲ್ಲದೇ ಬೆಂಗಳೂರು ಮೆಟ್ರೋ ಪ್ರಯಾಣ ಟಿಕೆಟ್ ದರ ಏರಿಕೆಯಾದರೆ ಪ್ರತಿಭಟನೆ ಮಾಡುವುದಾಗಿ ಎಚ್ಚರಿಕೆ ನೀಡುತ್ತಾರೆ.

ಬೆಂಗಳೂರಿನ ಮೆಟ್ರೋ ಪ್ರಯಾಣಿಕರು ಬೆಂಗಳೂರು ಮೆಟ್ರೋ ರೈಲು ನಿಗಮ ಲಿಮಿಟೆಡ್ ಗೆ ಬಲವಾದ ಎಚ್ಚರಿಕೆ ನೀಡಿದ್ದು, ಯಾವುದೇ ಸಂದರ್ಭ ದಲ್ಲೂ ಟಿಕೆಟ್ ದರವನ್ನು ಹೆಚ್ಚಿಸುವುದನ್ನು ವಿರೋಧಿಸಿದ್ದಾರೆ. ಮತ್ತೆ ಬೆಲೆಗಳನ್ನು ಹೆಚ್ಚಿಸುವ ಬದಲು, ಕಳೆದ ವರ್ಷ ತೀವ್ರವಾಗಿ ಹೆಚ್ಚಿಸಲಾದ ದರಗಳನ್ನು BMRCL ಕಡಿಮೆ ಮಾಡಬೇಕು ಎಂದು ಪ್ರಯಾಣಿಕರ ಸ್ಪಷ್ಟವಾಗಿ ಹೇಳಿದ್ದಾರೆ. 2025 ರಲ್ಲಿ, ಬಿಎಂಆರ್‌ಸಿಎಲ್ ಮೆಟ್ರೋ ಟಿಕೆಟ್ ಬೆಲೆಯಲ್ಲಿ ಹಠಾತ್ತನೆ ಸುಮಾರು 75% ಹೆಚ್ಚಳವನ್ನು ಜಾರಿಗೆ ತಂದಿತು, ಇದು ದೈನಂದಿನ ಪ್ರಯಾಣಿಕರು ಮತ್ತು ಸಾರ್ವ ಜನಿಕರಿಂದ ವ್ಯಾಪಕ ಟೀಕೆಗೆ ಕಾರಣವಾಯಿತು. ಅಂದಿನಿಂದ, ಮೆಟ್ರೋ ಬಳಕೆದಾರರು ನಿರಂತರ ವಾಗಿ ಹೆಚ್ಚಿದ ದರಗಳನ್ನು ಹಿಂಪಡೆಯುವಂತೆ ಒತ್ತಾಯಿ ಸುತ್ತಿದ್ದಾರೆ, ಈ ಹೆಚ್ಚಳವು ಸಾಮಾನ್ಯ ಪ್ರಯಾಣಿಕರ ಮೇಲೆ ಭಾರೀ ಆರ್ಥಿಕ ಹೊರೆಯನ್ನುಂಟು ಮಾಡುತ್ತದೆ ಎಂದು ವಾದಿಸಿದ್ದಾರೆ. ಸುಮಾರು ಒಂದು ವರ್ಷ ಕಳೆದರೂ, ಬಿಎಂಆರ್‌ಸಿಎಲ್ ಟಿಕೆಟ್ ಬೆಲೆಗಳನ್ನು ಕಡಿಮೆ ಮಾಡಿಲ್ಲ.

ಕಳೆದ ಪರಿಷ್ಕರಣೆಯಿಂದ ಒಂದು ವರ್ಷ ಕಳೆದಿರುವಾಗ, ಆಂತರಿಕ ಲೆಕ್ಕಾಚಾರಗಳನ್ನು ಉಲ್ಲೇಖಿಸಿ, ಬಿಎಂಆರ್‌ಸಿಎಲ್ ಮತ್ತೊಂದು ದರ ಏರಿಕೆಗೆ ಸಿದ್ಧತೆ ನಡೆಸುತ್ತಿದೆ ಎಂದು ಪ್ರಯಾಣಿಕರು ಆರೋಪಿಸಿದ್ದಾರೆ. ಶುಲ್ಕ ನಿಗದಿ ಸಮಿತಿಯು ಪ್ರತಿ ವರ್ಷ 5% ರಷ್ಟು ಮೆಟ್ರೋ ದರಗಳನ್ನು ಹೆಚ್ಚಿಸ ಬಹುದು ಎಂದು ಸೂಚಿಸಿದ್ದ ಶಿಫಾರಸುಗಳೊಂದಿಗೆ ಈ ಕ್ರಮವು ಸಂಬಂಧಿಸಿದೆ ಎಂದು ವರದಿ ಯಾಗಿದೆ. ಈ ಶಿಫಾರಸಿನ ಆಧಾರದ ಮೇಲೆ, ಬಿಎಂಆರ್ ಸಿಎಲ್ ಫೆಬ್ರವರಿ ಆರಂಭದಲ್ಲಿ ಹೊಸ ದರ ಪರಿಷ್ಕರಣೆಯನ್ನು ಪರಿಗಣಿಸುತ್ತಿದೆ ಎಂದು ಹೇಳಲಾಗುತ್ತಿದ್ದು, ಮೆಟ್ರೋ ಬಳಕೆ ದಾರರಲ್ಲಿ ಕಳವಳ ವ್ಯಕ್ತವಾಗಿದೆ.

ಸೇವ್ ಬೆಂಗಳೂರು ಸಮಿತಿ ಮತ್ತು ಬೆಂಗಳೂರು ಮೆಟ್ರೋ ಪ್ರಯಾಣಿಕರ ಸಂಘವು ಯಾವುದೇ ದರ ಏರಿಕೆಯ ವಿರುದ್ಧ ಬಿಎಂಆರ್ ಸಿಎಲ್‌ಗೆ ಜಂಟಿ ಯಾಗಿ ಎಚ್ಚರಿಕೆ ನೀಡಿದೆ. ಮೆಟ್ರೋ ಟಿಕೆಟ್ ಬೆಲೆಗಳನ್ನು ಮತ್ತೆ ಹೆಚ್ಚಿಸಿದರೆ, ಪ್ರತಿಭಟನೆ ಗಳನ್ನು ಪ್ರಾರಂಭಿಸುತ್ತೇವೆ ಮತ್ತು ಮೆಟ್ರೋ ಪ್ರಾಧಿಕಾರದ ವಿರುದ್ಧ ತಮ್ಮ ಆಂದೋಲನವನ್ನು ತೀವ್ರಗೊಳಿಸುತ್ತೇವೆ ಎಂದು ಸ್ಪಷ್ಟಪಡಿಸಿದ್ದಾರೆ. ಪ್ರಯಾಣಿಕರಿಗೆ ಪದೇ ಪದೇ ಹೊರೆಯಾಗುವ ಬದಲು, ಬಿಎಂಆರ್‌ಸಿಎಲ್ ಸಾರ್ವಜನಿಕ ಸಾರಿಗೆಯನ್ನು ಕೈಗೆಟುಕುವ ಮತ್ತು ಪ್ರಯಾಣಿಕ ಸ್ನೇಹಿಯನ್ನಾಗಿ ಮಾಡುವತ್ತ ಗಮನಹರಿಸಬೇಕು ಎಂದು ಸಲಹೆ ನೀಡಿದೆ.

# ಮೂಕ ಯುವಕ ನಾಪತ್ತೆ

**ಕೆ.ಆರ್.ಪೇಟೆ** : ತಾಲ್ಲೂಕಿನ ಅಕ್ಕಿಹೆಬ್ಬಾಳು ಹೋಬಳಿಯ ಮಾಕನಕೊಪ್ಪಲು ಗ್ರಾಮದ ಮೂಕ ಯುವಕನೊಬ್ಬ ಮನೆಯಿಂದ ಹೊರ ಹೋದ ಬಳಿಕ ವಾಪಸ್ ಮನೆಗೆ ಬಾರದೇ ನಾಪತ್ತೆಯಾಗಿರುವ ಬಗ್ಗೆ ವರದಿಯಾಗಿದೆ.

ಮಾಕನಕೊಪ್ಪಲು ಗ್ರಾಮದ ರಾಧಾ ಮತ್ತು ರಮೇಶ್ ದಂಪತಿಗಳ ಪುತ್ರ ಮೋಹನ್ ಎಂಬಾತನೇ ನಾಪತ್ತೆಯಾಗಿರುವ ಯುವಕ. ಈತನಿಗೆ ಸುಮಾರು 22ವರ್ಷ ವಯಸ್ಸಾಗಿರುತ್ತದೆ. ಈತ ಡಿ.7ರಂದು ಬೆಳಿಗ್ಗೆ 10ಗಂಟೆಗೆ ಮನೆಯಿಂದ ಹೊರಗಡೆ ಹೋಗಿ ಬರುವುದಾಗಿ ಕೈಸನ್ನೆ ಮೂಲಕ ಮನೆಯವರಿಗೆ ತಿಳಿಸಿ ಹೊರ ಹೋದವನು ವಾಪಸ್ ಮನೆಗೆ ಬಂದಿರುವುದಿಲ್ಲ.

ಈತನ ಸುಳಿವಿಗಾಗಿ ಸಂಬಂಧಿಕರು ಹಾಗೂ ಸ್ನೇಹಿತರ ಮನೆಗಳಲ್ಲಿ ಹುಡುಕಿದರೂ ಸಹ ಪತ್ತೆಯಾಗಿರುವುದಿಲ್ಲ. ಈತನು ದೈಹಿಕವಾಗಿ ಆರೋಗ್ಯವಾಗಿದ್ದು ಮಾತು ಬರುವುದಿಲ್ಲ. ಈತನ ಸುಳಿವು ಸಿಕ್ಕಿವರು ಕೂಡಲೇ ತಮ್ಮ ಹತ್ತಿರದ ಪೊಲೀಸ್ ಠಾಣೆಗೆ ಅಥವಾ ಕೆ.ಆರ್.ಪೇಟೆ ಗ್ರಾಮಾಂತರ ಪೊಲೀಸ್ ಠಾಣೆಗೆ 9480804860, 8296193711, 9353872564 ಮೊಬೈಲ್ ಸಂಖ್ಯೆಗಳಿಗೆ ಕರೆ ಮಾಡಿ ಮಾಹಿತಿ ನೀಡುವಂತೆ



ಗ್ರಾಮಾಂತರ ಪೊಲೀಸ್ ಠಾಣೆಯ ಇನ್ಸ್ ಪೆಕ್ಟರ್ ಆನಂದೇಗೌಡ ಪತ್ರಿಕಾ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ದೆಹಲಿಯಿಂದ ಆಗಮಿಸಿ ಭೀಮಣ್ಣ ಖಂಡ್ರೆ ಅವರ ಅಂತಿಮ ಸಂಸ್ಕಾರದಲ್ಲಿ ಡಿಸಿಎಂ ಡಿ ಕೆ ಶಿವಕುಮಾರ್ ಭಾಗಿ

**ಬೀದರ್** : ಹಿರಿಯ ಕಾಂಗ್ರೆಸ್ ಮುಖಂಡರು, ಮಾಜಿ ಸಚಿವರು, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಮಾಜಿ ಅಧ್ಯಕ್ಷರಾದ ಭೀಮಣ್ಣ ಖಂಡ್ರೆ ಅವರ ಪಾರ್ಥಿವ ಶರೀರಕ್ಕೆ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಬೀದರ್ ನ ಭಾಲ್ಕಿಯಲ್ಲಿ ಶನಿವಾರ ಅಂತಿಮ ನಮನ ಸಲ್ಲಿಸಿ, ಅಂತಿಮ ಸಂಸ್ಕಾರದಲ್ಲಿ ಪಾಲ್ಗೊಂಡರು.

ದೆಹಲಿ ಪ್ರವಾಸದಲ್ಲಿದ್ದ ಡಿ ಕೆ ಶಿವಕುಮಾರ್ ಅವರು ಭೀಮಣ್ಣ ಖಂಡ್ರೆ ಅವರು ಲಿಂಗೈಕ್ಯರಾದ ಸುದ್ದಿ ತಿಳಿದು, ದೆಹಲಿಯಿಂದ ಹೈದರಾಬಾದ್ ಗೆ ಆಗಮಿಸಿ, ಅಲ್ಲಿಂದ ವಿಶೇಷ ವಿಮಾನದಲ್ಲಿ ಬೀದರ್ ಗೆ ಆಗಮಿಸಿದರು.

ಭೀಮಣ್ಣ ಖಂಡ್ರೆ ಅವರ ಅಂತಿಮ ಸಂಸ್ಕಾರದಲ್ಲಿ ಪಾಲ್ಗೊಂಡ ನಂತರ ಮತ್ತೆ ಹೈದರಾಬಾದ್ ಮೂಲಕ ದೆಹಲಿಗೆ ಮರಳಿದರು.

# ಪಶ್ಚಿಮ ಘಟ್ಟದ 'ಕಾಡಿನ ಹರಿಕಾರ' ಹಾರ್ನ್ ಬಿಲ್‌ಗಳಿಗೆ ಈಗ ಅಭಿವೃದ್ಧಿ ಯೋಜನೆಗಳ ಗ್ರಹಣ

**ಕಾರವಾರ (ಉತ್ತರ ಕನ್ನಡ):** ಜಿಲ್ಲೆಯ ಪಶ್ಚಿಮ ಘಟ್ಟಗಳ ಸೌಂದರ್ಯಕ್ಕೆ ಮಕುಟ ಪ್ರಾಯ ವಾಗಿರುವ 'ಕಾಡನ್ನು ಬೆಳೆಸುವ ಹಕ್ಕಿ' ಎಂದೇ ಖ್ಯಾತಿ ಪಡೆದಿರುವ ಹಾರ್ನ್‌ಬಿಲ್ (ಧನೇಶ) ಪಕ್ಷಿಗಳ ಆವಾಸಸ್ಥಾನಕ್ಕೆ ಈಗ ಅಭಿವೃದ್ಧಿ ಯೋಜನೆಗಳ ಗ್ರಹಣ ಹಿಡಿದಿದೆ. ಕಾಳಿ ಹುಲಿ ಸಂರಕ್ಷಿತ ಪ್ರದೇಶ ಸೇರಿದಂತೆ ಜಿಲ್ಲೆಯ ವಿವಿಧೆಡೆ ಜಾರಿಯಾಗುತ್ತಿರುವ ಬೃಹತ್ ಯೋಜನೆಗಳಿಂದಾಗಿ ಈ ಅಪ ರೂಪದ ಪಕ್ಷಿಗಳ ಸಂತತಿ ಅಳಿವಿನ ಭೀತಿ ಎದುರಿಸುತ್ತಿವೆ.

**ಯೋಜನೆಗಳ ಅಬ್ಬರಕ್ಕೆ ನಲುಗುತ್ತಿದೆ ಹಸಿರು ನಾಡು :** ಜಿಲ್ಲೆಯಲ್ಲಿ ಒಂದೆಡೆ ಶರಾವತಿ ಪಂಪ್ ಸ್ಟೋರೇಜ್ ಯೋಜನೆ, ಮತ್ತೊಂದೆಡೆ ಅಂಕೋಲಾ –ಹುಬ್ಬಳ್ಳಿ ರಸ್ತೆ ವಿಸ್ತರಣೆ ಹಾಗೂ ಕಾಳಿ ರಕ್ಷಿತಾರಣ್ಯದಲ್ಲಿ ರೈಲ್ವೆ ಹಳಿ ಜೋಡಣೆ ಕಾಮಗಾರಿಗಳ ಸದ್ದು ಜೋರಾಗಿದೆ. ಹೊನ್ನಾವರ ಅಭಯಾ ರಣ್ಯದಲ್ಲಿ ಸುಮಾರು 54 ಹೆಕ್ಟೇರ್ ಅರಣ್ಯ ನಾಶವಾಗಲಿದೆ. ರೈಲ್ವೆ ಡಬ್ಲಿಂಗ್‌ಗಾಗಿ ದೂದ್ ಸಾಗರ್‌ನಿಂದ ಕ್ಯಾಸಲ್ ರಾಕ್ ನಡುವೆ 9.25 ಹೆಕ್ಟೇರ್ ಭೂಮಿ ಬಳಕೆಯಾಗುತ್ತಿದೆ. ಅಂಕೋಲಾ– ಹುಬ್ಬಳ್ಳಿ ರಸ್ತೆಗಾಗಿ 49.431 ಹೆಕ್ಟೇರ್ ಅರಣ್ಯ ಬಲಿ ಯಾಗು ತ್ತಿದೆ. ಈಗಾಗಲೇ ಜಿಲ್ಲೆಯಲ್ಲಿ ವಿವಿಧ ಯೋಜನೆ ಗಳಿಗಾಗಿ ಸುಮಾರು 64,365 ಹೆಕ್ಟೇರ್ ಅರಣ್ಯ ಭೂಮಿ ಯನ್ನು ಬಳಸಿ ಕೊಳ್ಳಲಾಗಿದ್ದು, ಇದು ಪರಿಸರ ಪ್ರೇಮಿಗಳ ಆತಂಕಕ್ಕೆ ಕಾರಣವಾಗಿದೆ.

**ಹಾರ್ನ್‌ಬಿಲ್‌ಗಳ ನೆಲೆಗೆ ಕೊಡಲಿ ಪೆಟ್ಟು:** ವಿಶ್ವದಲ್ಲಿ 57 ಪ್ರಭೇದದ ಹಾರ್ನ್ ಬಿಲ್‌ಗಳಿದ್ದರೆ, ಭಾರತದಲ್ಲಿ ಕೇವಲ ಕರ್ನಾಟಕ ಮತ್ತು ನಾಗಾಲ್ಯಾಂಡ್‌ನಲ್ಲಿ ಮಾತ್ರ ಇವು ಹೆಚ್ಚಾಗಿ ಕಂಡು ಬರುತ್ತವೆ. ವಿಶೇಷವೆಂದರೆ, ಕರ್ನಾಟಕದ ಪಾಲಿನ 9 ಪ್ರಭೇದಗಳಲ್ಲಿ 4 ಪ್ರಭೇದಗಳು (ಮಲಬಾರ್ ಪೈಡ್, ಮಲಬಾರ್ ಗ್ರೇ, ಗ್ರೇ ಹಾರ್ನ್ ಬಿಲ್ ಮತ್ತು ಗ್ರೇಟ್ ಇಂಡಿಯನ್ ಹಾರ್ನ್‌ಬಿಲ್) ಉತ್ತರ ಕನ್ನಡ ಜಿಲ್ಲೆಯ ದಾಂಡೇಲಿ, ಹಳಿಯಾಳ ಹಾಗೂ ಜೋಯಿಡಾ ಭಾಗದ ದಟ್ಟ ಕಾಡುಗಳಲ್ಲಿ ನೆಲೆಸಿವೆ. ಈ ಪಕ್ಷಿಗಳು ಗೂಡು ಕಟ್ಟಲು ಬೃಹತ್ ಹಾಗೂ ಹಳೆಯ ಮರಗಳನ್ನೇ ಅವಲಂಬಿಸಿವೆ. ಆದರೆ, ಅಭಿವೃದ್ಧಿ ಹೆಸರಿನಲ್ಲಿ ದೊಡ್ಡ ಮರಗಳ ಕಡಿತ ಆಗುತ್ತಿರುವುದರಿಂದ ಇವುಗಳ ನೈಸರ್ಗಿಕ ಆವಾಸಸ್ಥಾನ ನಾಶವಾಗುತ್ತಿವೆ. 'ದೊಡ್ಡ ಮರಗಳು ಇಲ್ಲದಿದ್ದರೆ ಹಾರ್ನ್‌ಬಿಲ್‌ಗಳು ಸಂತಾನೋತ್ಪತ್ತಿ ಮಾಡಲು ಸಾಧ್ಯವಿಲ್ಲ, ಇದು ನೇರವಾಗಿ ಅವುಗಳ ಸಂತತಿಯ ಮೇಲೆ ಹೊಡೆತ ನೀಡಲಿದೆ' ಎಂದು ಅರಣ್ಯ ಇಲಾಖೆಯ ಹಿರಿಯ ಅಧಿಕಾರಿ ಗಳು ಕಳವಳ ವ್ಯಕ್ತಪಡಿಸಿದ್ದಾರೆ.

**ಜಾಗೃತಿಗಾಗಿ 'ಹಾರ್ನ್‌ಬಿಲ್ ಉತ್ಸವ' :** ಒಂದೆಡೆ ಪರಿಸರಕ್ಕೆ ಪೆಟ್ಟು ಬೀಳುತ್ತಿದ್ದರೂ, ಮತ್ತೊಂ ದೆಡೆ ಅರಣ್ಯ ಇಲಾಖೆ ಈ ಪಕ್ಷಿಗಳ ಸಂರಕ್ಷಣೆಗಾಗಿ ಹರಸಾಹಸ ಪಡುತ್ತಿದೆ. ಹಾರ್ನ್‌ಬಿಲ್‌ಗಳ ಮಹತ್ವದ ಬಗ್ಗೆ ಜನರಲ್ಲಿ ಅರಿವು ಮೂಡಿಸಲು ಹಳಿಯಾಳ ವಿಭಾಗದ ಅರಣ್ಯ ಇಲಾಖೆ ಪ್ರತಿ ವರ್ಷ 'ಹಾರ್ನ್‌ಬಿಲ್ ಉತ್ಸವ' ಆಯೋಜಿಸುತ್ತಿದೆ. ಎರಡು ದಿನಗಳ ಕಾಲ ಹಾರ್ನ್ ಬಿಲ್ ಉತ್ಸವ ಹಾಗೂ ಜಾಗೃತಿ ಅಭಿಯಾನ ನಡೆಯುತ್ತಿದ್ದು, ಹಕ್ಕಿಗಳ ಉಳಿವಿಗಾಗಿ ಪರಿಸರ ಪ್ರೇಮಿಗಳು ಧ್ವನಿ ಎತ್ತಿದ್ದಾರೆ.

# ನಿಧಿ ಸಿಕ್ಕರೆ ಏನು ಮಾಡಬೇಕು? 1878ರ ಕಾನೂನು ಪಾಲನೆ ಮಾಡದೇ ಇದ್ದರೆ ಚಿನ್ನ ಅಲ್ಲ ಜೈಲು ಗ್ಯಾರಂಟಿ!

ಚಿನ್ನ.. ಚಿನ್ನ.. ಚಿನ್ನ... ಈಗಿನ ಕಾಲದಲ್ಲಿ ಬಂಗಾರಕ್ಕೆ ಭಾರಿ ಬೆಲೆ ಇದ್ದು, ಹೀಗಾಗಿಯೇ ಜನರು ಚಿನ್ನ ಖರೀದಿಗೆ ಪರದಾಡುವಂತೆ ಆಗಿದೆ. ಹೀಗಿದ್ದಾಗ ನಿಮ್ಮ ಮನೆ ಅಥವಾ ನಿಮ್ಮ ಜಾಗದಲ್ಲೇ ಚಿನ್ನ ನಿಧಿಯ ರೂಪದಲ್ಲಿ ಸಿಕ್ಕರೆ ಖುಷಿ ಆಗೇ ಆಗುತ್ತದೆ ಅಲ್ವಾ ಆದರೆ ನಿಮಗೆ ಈ ನಿಧಿ ಸಿಕ್ಕರೆ ಮೊದಲು ಮಾಡಬೇಕಾದ ಕೆಲಸ ಸಾಕಷ್ಟು ಇದೆ. ಅದರಲ್ಲೂ ನಿಧಿ ಸಿಕ್ಕ ವಿಚಾರವನ್ನು ಯಾರಿಗೂ ತಿಳಿಸದೆ & ಅದನ್ನ ನಿಮ್ಮ ಮನೆಯಲ್ಲೇ ಇಟ್ಟುಕೊಂಡು ಮಾರಾಟ ಮಾಡಲು ಪ್ರಯತ್ನ ಮಾಡಿದರೆ ಸಾಲು ಸಾಲು ಸಂಕಷ್ಟ ಗ್ಯಾರಂಟಿ.

ಹಾಗಾದರೆ ನಿಧಿ ಸಿಕ್ಕರೆ ಏನು ಮಾಡಬೇಕು 1878ರ ಕಾನೂನು ಹೇಳುವುದು ಏನು ಗದಗ ಜಿಲ್ಲೆ ಲಕ್ಕುಂಡಿ ಗ್ರಾಮದ ಗಂಗವ್ವ ಬಸವರಾಜ ರಿತ್ತಿ ಎನ್ನುವವರು ಮನೆಯನ್ನ ಕಟ್ಟಿಸಲು ಗುಂಡಿ ತೋಡುವ ಸಮಯದಲ್ಲಿ ನಿಧಿ ಸಿಕ್ಕಿತ್ತು.

ಹೀಗೆ ಸಿಕ್ಕ ನಿಧಿಯಲ್ಲಿ ಪುರಾತನ ಕಾಲದ ಅಪಾರ ಪ್ರಮಾಣದ ಚಿನ್ನಾಭರಣ ಹಾಗೂ ಅಮೂಲ್ಯ ವಸ್ತುಗಳು ಪತ್ತೆಯಾಗಿದ್ದವು.

ಆ ನಂತರ ನಿಧಿ ವಿಚಾರ ವಾಗಿ ಇದೀಗ ದೊಡ್ಡ ಚರ್ಚೆ ನಡೆಯುತ್ತಿದೆ. ಲಕ್ಕುಂಡಿ ಗ್ರಾಮದಲ್ಲಿ ನಿಧಿ ಸಿಕ್ಕ ನಂತರ ಕುಟುಂಬಸ್ಥರು ಸರ್ಕಾರಕ್ಕೆ ಅದನ್ನು ಒಪ್ಪಿಸಿ ಪ್ರಾಮಾಣಿಕತೆ ಮೆರೆದಿದ್ದರು. ಆದರೆ ಅಕಸ್ಮಾತ್ ನಿಧಿ ಸಿಕ್ಕ ನಂತರ ಅದನ್ನ ಸರ್ಕಾರಕ್ಕೆ ಒಪ್ಪಿಸದೇ ಇದ್ದರೆ ಏನಾಗುತ್ತದೆ ತಿಳಿದಿದೆಯಾ ಹೌದು, ಭೂಮಿ ಒಳಗೆ ಯಾವುದೇ ನಿಧಿ ಅಥವಾ ನಿಧಿ ರೂಪದಲ್ಲಿ ಚಿನ್ನ & ಬೆಳ್ಳಿ ಸೇರಿದಂತೆ ಯಾವುದೇ ರೀತಿಯ ಅಮೂಲ್ಯ ವಸ್ತುಗಳು ಸಿಕ್ಕರೂ ಅದು ಸರ್ಕಾರದ ಸ್ವತ್ತು ಆಗಿರುತ್ತದೆ. 1878ರ 'ಇಂಡಿಯನ್ ಟ್ರೆಷರ್ ಟ್ರೋವ್ ಆಕ್ಟ್' ಎಂಬ ಕಾನೂನು ಇಂದಿಗೂ ಪಾಲನೆ ಮಾಡಲಾಗುತ್ತಿದ್ದು, ಈ ಆಕ್ಟ್ ಹೇಳುವ ನಿಯಮ ಇಂದಿಗೂ ಜಾರಿಯಲ್ಲಿ ಇದೆ. ಇನ್ನು ನಿಧಿ ಸಿಕ್ಕವರು ಅದನ್ನು ಸರ್ಕಾರಕ್ಕೆ ತಲುಪಿಸದೇ, ಆ ನಿಧಿಯನ್ನು ತಮ್ಮಲ್ಲೇ ಉಳಿಸಿಕೊಂಡು ಮಾರಾಟ ಮಾಡಲು ಪ್ರಯತ್ನ ಮಾಡಿದರೆ, ದೊಡ್ಡ ಕಂಟಕ ಗ್ಯಾರಂಟಿ.

ಹಾಗಾದರೆ ಏನೆಲ್ಲಾ ಶಿಕ್ಷೆ ಆಗುತ್ತದೆ ಮುಂದೆ ತಿಳಿಯೋಣ. ಭೂಮಿಯ ಒಳಗೆ ಯಾವುದೇ ಅಮೂಲ್ಯ ವಸ್ತು ಸಿಕ್ಕರೂ ಅದು ಸರ್ಕಾರದ ಸ್ವತ್ತಾಗಿರುವ ಹಿನ್ನೆಲೆಯಲ್ಲಿ ಕೂಡಲೇ ನಿಧಿ ಅಥವಾ ಚಿನ್ನ & ಬೆಳ್ಳಿ



ಸೇರಿ ಅಮೂಲ್ಯ ವಸ್ತುಗಳು ಸಿಕ್ಕಿರುವ ವಿಚಾರವನ್ನು ಸರ್ಕಾರಕ್ಕೆ ತಿಳಿಸಬೇಕು.

ಅಕಸ್ಮಾತ್ ಈ ಕೆಲಸ ಮಾಡದೇ ನಿಧಿ ಸಿಕ್ಕ ವಿಷಯ ಮರೆಮಾಚುವುದು ಅಥವಾ ಅದನ್ನು ಮಾರಾಟ ಮಾಡುವುದು ಮಾಡಿದರೆ ಅದು ಘೋರ ಅಪರಾಧವಾಗಿರುತ್ತದೆ.

100 ವರ್ಷಕ್ಕಿಂತ ಹಳೆಯ ವಸ್ತುಗಳನ್ನು 'ಪ್ರಾಚೀನ ವಸ್ತುಗಳು & ಕಲಾನಿಧಿಗಳ ಕಾಯ್ದೆ-1972' ಅಡಿಯಲ್ಲಿ ನಿಯಂತ್ರಿಸಲಾಗುತ್ತದೆ.

ಹೀಗಿದ್ದಾಗ ನಿಧಿಯ ವಿಚಾರವನ್ನು ಕೂಡಲೇ ಸರ್ಕಾರಕ್ಕೆ ತಿಳಿಸಬೇಕು, ಇಲ್ಲವಾದರೆ ದಂಡ ಅಥವಾ 1 ವರ್ಷದ ತನಕ ಜೈಲು ಶಿಕ್ಷೆ ವಿಧಿಸಲು ಅವಕಾಶ ಇರುತ್ತದೆ. ಕೆಲವು ಪ್ರಕರಣಗಳಲ್ಲಿ ದಂಡ ಮತ್ತು ಜೈಲು ಶಿಕ್ಷೆ ಎರಡನ್ನೂ ವಿಧಿಸುವ ಸಾಧ್ಯತೆ ಹೆಚ್ಚಾಗಿರುತ್ತದೆ.

# ಪಾದಚಾರಿ ಮತ್ತು ರಸ್ತೆ ಅತಿಕ್ರಮಣ ತೆರವು ಮತ್ತು ರಸ್ತೆಯ ಮೇಲಿನ ವಾರಸುದಾರರಿಲ್ಲದ ಹಳೆಯ ವಾಹನಗಳ ತೆರವಿಗೆ ಸೂಚನೆ: ಕೆ.ಎನ್.ರಮೇಶ್

**ದಕ್ಷಿಣ ನಗರ ಪಾಲಿಕೆ ಆಯುಕ್ತರಿಂದ ಮುಂದುವರೆದ ವಿವಿಧ ಬಡಾವಣೆಗಳ ಪರಿಶೀಲನೆ:**

ಬೆಂಗಳೂರು : ಸಾರ್ವಜನಿಕರ ದೂರುಗಳನ್ನು ಆಲಿಸಲು ಮತ್ತು ನಾಗರಿಕ ಸಮಸ್ಯೆಗಳಿಗೆ ತಳಮಟ್ಟದಲ್ಲಿ ಪರಿಹಾರ ಕಂಡುಕೊಳ್ಳಲು ಬೆಂಗಳೂರು ದಕ್ಷಿಣ ನಗರ ಪಾಲಿಕೆಯ ಆಯುಕ್ತರಾದ ಕೆ ಎನ್ ರಮೇಶ್ ಎನ್.ಎಸ್. ಪಾಳ್ಯ, ಡಾಲರ್ಸ್ ಕಾಲೋನಿ ಮತ್ತು ವಿಜಯಾ ಬ್ಯಾಂಕ್ ಲೇಔಟ್ (ಮುಲ್ಕಿ ಸುಂದರ ರಾಮ ಶೆಟ್ಟಿ ನಗರ) ಪ್ರದೇಶಗಳಲ್ಲಿ ಸುದೀರ್ಘ ಪರಿಶೀಲನೆ ನಡೆಸಿದರು.

**ಭೇಟಿಯ ಪ್ರಮುಖ ಮುಖ್ಯಾಂಶಗಳು ಹಾಗೂ ನಿರ್ದೇಶನಗಳು**

**ಡಾಲರ್ಸ್ ಕಾಲೋನಿ**

ಡಾಲರ್ಸ್ ಕಾಲೋನಿಯ ನಿವಾಸಿಗಳ ಅಹವಾಲು ಸ್ವೀಕರಿಸಿದ ಆಯುಕ್ತರು, ಖಾಲಿ ಇರುವ ಬಿಡಿಎ (BDA) ಜಾಗಗಳಲ್ಲಿ ನಡೆಯುತ್ತಿರುವ ಅಕ್ರಮ ಚಟುವಟಿಕೆಗಳ ಬಗ್ಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು.

**ಭದ್ರತೆ ಮತ್ತು ಪೊಲೀಸ್ ಗಸ್ತು:**

ಮೈಕೋ ಲೇಔಟ್ ಮತ್ತು ಸುತ್ತಮುತ್ತಲಿನ ಖಾಲಿ ನಿವೇಶನಗಳಲ್ಲಿ ಅಕ್ರಮ ಚಟುವಟಿಕೆ ತಡೆಯಲು ಪೊಲೀಸ್ ಗಸ್ತು (Police Beats) ಹೆಚ್ಚಿಸಲು ಕೋರಿದರು.

ರಸ್ತೆ ಮೇಲಿನ ಅನಧಿಕೃತ ವಾಹನಗಳ ತೆರವುಗೊಳಿಸಿ

ರಸ್ತೆ ಬದಿಯಲ್ಲಿ ದೀರ್ಘಕಾಲದಿಂದ ನಿಲ್ಲಿಸಿರುವ ವಾರಸುದಾರರಿಲ್ಲದ 40-50 ಹಳೆಯ ವಾಹನಗಳನ್ನು ಕೂಡಲೇ ತೆರವುಗೊಳಿಸಲು ಆದೇಶಿಸಿದರು.

**ದಂಡ ಮತ್ತು ನೋಟಿಸ್**

ರಸ್ತೆಯ ಮೇಲೆ ಕಟ್ಟಡ ನಿರ್ಮಾಣ ಸಾಮಗ್ರಿಗಳನ್ನು ಸುರಿದಿದ್ದ ಮಾಲೀಕರಿಗೆ ದಂಡ ವಿಧಿಸಲು ಸೂಚಿಸಲಾಯಿತು. ನಿಯಮ ಉಲ್ಲಂಘಿಸಿ ನಿರ್ಮಿಸಿರುವ ಕಟ್ಟಡಗಳ ತೆರವಿಗೆ ನೋಟಿಸ್ ನೀಡಲು ಸೂಚಿಸಲಾಯಿತು.

**ಪಾದಚಾರಿ ಸುರಕ್ಷತೆ**

ವೇಗಾ ಸಿಟಿ ಮಾಲ್ ಜಂಕ್ಷನ್‌ನಲ್ಲಿ ಪಾದಚಾರಿಗಳು ಸಂಚರಿಸಲು ಅನುಕೂಲವಾಗುವಂತೆ ಸ್ಕೈ-ವಾಕ್ (Sky-walk) ನಿರ್ಮಾಣದ ಅಗತ್ಯತೆಯನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲು ಸೂಚನೆ ನೀಡಿದರು.

**ವಿಜಯಾ ಬ್ಯಾಂಕ್ ಲೇಔಟ್**

ಸಾರ್ವಜನಿಕ ಸ್ವತ್ತುಗಳ ರಕ್ಷಣೆ: ವಿಜಯಾ ಬ್ಯಾಂಕ್ ಲೇಔಟ್‌ನಲ್ಲಿ ಸಾರ್ವಜನಿಕ ಆಸ್ತಿಗಳ ಅತಿಕ್ರಮಣ ತೆರವುಗೊಳಿಸಲು ಆಯುಕ್ತರು ಸೂಚನೆ ನೀಡಿದರು.

**ಅತಿಕ್ರಮಣ ತೆರವು:**



ಚೈತ್ರಶ್ರೀ ಪ್ಯಾಲೇಸ್ ಅಪಾರ್ಟ್‌ಮೆಂಟ್ ಮತ್ತು ಇತರ ಮನೆ ಮಾಲೀಕರು ಮಾಡಿಕೊಂಡಿರುವ ಪಾದಚಾರಿ ಮಾರ್ಗ ಅತಿಕ್ರಮಣ ಹಾಗೂ ರಾಜಮಾರ್ಗದಲ್ಲಿರುವ ಬಿಡಿಎ ಸ್ವತ್ತುಗಳ ಅತಿಕ್ರಮಣವನ್ನು ಕೂಡಲೇ ತೆರವುಗೊಳಿಸಲು ಆದೇಶಿಸಿದರು.

**ಪಾರ್ಕ್ ಮತ್ತು ಮೂಲಸೌಕರ್ಯ:**

ಮುಲ್ಕಿ ಸುಂದರ ರಾಮ ಶೆಟ್ಟಿ ನಗರ ಕ್ಷೇಮಾಭಿವೃದ್ಧಿ ಸಂಘದ ಮನವಿಯಂತೆ, ಉದ್ಯಾನವನದಲ್ಲಿರುವ ಹಾನಿಗೊಳಗಾದ ಜಿಮ್ ಮತ್ತು ಆಟದ ಉಪಕರಣಗಳನ್ನು ಬದಲಿಸಲು ಹಾಗೂ ಒಣಗಿದ ಅಪಾಯಕಾರಿ ಮರಗಳನ್ನು ತೆರವುಗೊಳಿಸಲು ಸೂಚಿಸಿದರು.

**ಸಂಚಾರ ದಟ್ಟಣೆ:**

ಅಯ್ಯಪ್ಪ ಸ್ವಾಮಿ ದೇವಸ್ಥಾನದ ಬಳಿ ಸಂಚಾರ ದಟ್ಟಣೆ ನಿಯಂತ್ರಿಸಲು ಅಗತ್ಯವಿರುವ ಕಡೆಗಳಲ್ಲಿ ರಸ್ತೆ ಉಬ್ಬುಗಳನ್ನು (Humps) ನಿರ್ಮಿಸಲು ನಿರ್ದೇಶನ ನೀಡಿದರು.

**ಎನ್.ಎಸ್. ಪಾಳ್ಯ ಕಸದ ಸಮಸ್ಯೆ ನಿವಾರಣೆ**

ಎನ್.ಎಸ್. ಪಾಳ್ಯದ 1ನೇ ಕ್ರಾಸ್‌ನಲ್ಲಿ ಬ್ಲ್ಯಾಕ್ ಸ್ಪಾಟ್ ಗಳನ್ನು (Blackspots) ನಿವಾರಿಸಲು ಮತ್ತು ವೈಜ್ಞಾನಿಕವಾಗಿ ಕಸ ವಿಲೇವಾರಿ ಮಾಡಲು 'ಕಸ ಕಿಯೋಸ್ಕ್' (Kasa Kiosk) ಸ್ಥಾಪನೆಯ ಪ್ರಸ್ತಾವನೆಗೆ ಚಾಲನೆ ನೀಡಲಾಯಿತು.

**ಆಯುಕ್ತರ ಭರವಸೆ**

ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದ ಆಯುಕ್ತರು, "ಕ್ಷೇತ್ರ ಭೇಟಿಯಿಂದ ಮಾತ್ರ ಸಮಸ್ಯೆಗಳ ನೈಜ ಸ್ವರೂಪ ಅರ್ಥವಾಗುತ್ತದೆ. ವಾರ್ಡ್ ಮಟ್ಟದ ಪ್ರತಿಯೊಂದು ಸಮಸ್ಯೆಯನ್ನು ದಾಖಲಿಸಿಕೊಳ್ಳಲಾಗಿದ್ದು, ಅವುಗಳನ್ನು ಆದ್ಯತೆಯ ಮೇರೆಗೆ ಬಗೆಹರಿಸಲಾಗುವುದು. ನಗರದ ಅಭಿವೃದ್ಧಿಯಲ್ಲಿ ನಾಗರಿಕರ ಪಾಲ್ಗೊಳ್ಳುವಿಕೆ ಮುಖ್ಯವಾಗಿದ್ದು, ತಜ್ಞರು ಮತ್ತು ಸ್ವಯಂಸೇವಕರು ನಗರ ಪಾಲಿಕೆಯೊಂದಿಗೆ ಕೈಜೋಡಿಸಲು ಸ್ವಾಗತಿಸುತ್ತೇವೆ," ಎಂದು ತಿಳಿಸಿದರು.

ರಸ್ತೆಬದಿಯ ಹಳೆಯ ಅನುಪಯುಕ್ತ ವಾಹನಗಳನ್ನು ಟ್ರಾಫಿಕ್ ಪೊಲೀಸರ ನೆರವಿನೊಂದಿಗೆ ತೆರವುಗೊಳಿಸುವ ಪ್ರಕ್ರಿಯೆಯು ಟೆಂಡರ್ ಹಂತದಲ್ಲಿದೆ ಎಂದು ಅವರು ಇದೇ ಸಂದರ್ಭದಲ್ಲಿ ಸ್ಪಷ್ಟಪಡಿಸಿದರು.

ಆಯುಕ್ತರ ಈ ತ್ವರಿತ ಕ್ರಮಗಳಿಗೆ ಲೇಔಟ್ ನಿವಾಸಿಗಳು ಮೆಚ್ಚುಗೆ ವ್ಯಕ್ತಪಡಿಸಿದರು.

# ಅನಧಿಕೃತ/ನಕ್ಷೆಗೆ ವ್ಯತಿರಿಕ್ತವಾಗಿ ನಿರ್ಮಿಸಿದ ಕಟ್ಟಡಗಳ ಅಂತಸ್ತು /ಹೆಚ್ಚುವರಿ ಭಾಗಗಳ ತೆರವು ಕಾರ್ಯಾಚರಣೆ

ಬೆಂಗಳೂರು : ಉತ್ತರ ನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ನಿರ್ಮಿಸಿದ, ನಕ್ಷೆ ಮಂಜೂರಾತಿ ಪಡೆಯದ/ಉಲ್ಲಂಘಿಸಿದ, ಸರ್ಕಾರಿ ಜಾಗಗಳಲ್ಲಿ ಕಟ್ಟಿದ ಅಕ್ರಮ ಕಟ್ಟಡಗಳ ಮೇಲೆ ನಿರ್ದಾಕ್ಷಿಣ್ಯವಾಗಿ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಆಯುಕ್ತರಾದ ಪೊಮ್ಮಲ ಸುನೀಲ್ ಕುಮಾರ್ ರವರು ಸಭೆಗಳಲ್ಲಿ ಸೂಚನೆ ನೀಡಿರುವ




ಹಿನ್ನಲೆಯಲ್ಲಿ ಹಲವು ವಾರ್ಡ್ ಗಳ ವ್ಯಾಪ್ತಿಯಲ್ಲಿನ ಅನಧಿಕೃತ/ನಕ್ಷೆಗೆ ವ್ಯತಿರಿಕ್ತವಾಗಿ ನಿರ್ಮಿಸಿದ ಕಟ್ಟಡಗಳ ಅಂತಸ್ತು /ಹೆಚ್ಚುವರಿ ಭಾಗಗಳ ತೆರವು ಕಾರ್ಯಾಚರಣೆ ನಡೆಸಲಾಗಿದೆ.

ನಗರ ಪಾಲಿಕೆ ವ್ಯಾಪ್ತಿಯಲ್ಲಿ ಈ ದಿನ ಒಟ್ಟು ಈ ಕೆಳಕಂಡ 9 ಸ್ಥಳಗಳಲ್ಲಿ ಅನಧಿಕೃತ/ನಕ್ಷೆಗೆ ವ್ಯತಿರಿಕ್ತವಾಗಿ ನಿರ್ಮಿಸಿದ ಕಟ್ಟಡಗಳ ಅಂತಸ್ತು /ಹೆಚ್ಚುವರಿ ಭಾಗಗಳ ತೆರವು ಕಾರ್ಯಾಚರಣೆ ನಡೆಸಲಾಯಿತು.

**ಹೆಬ್ಬಾಳ ವಿಭಾಗ:**

ಹೆಬ್ಬಾಳ ವಿಭಾಗ, ಜೆ.ಸಿ ನಗರ ಉಪವಿಭಾಗ, ವಾರ್ಡ್ ಸಂಖ್ಯೆ 65, ಮನೋರಾಯನಪಾಳ್ಯ, ದೊಡ್ಡಮ್ಮ ಬಡಾವಣೆಯ 1ನೇ ಅಡ್ಡರಸ್ತೆಯ ಸ್ವತ್ತಿನ ಸಂಖ್ಯೆ-12 .

**ವಿದ್ಯಾರಣ್ಯಪುರ ವಿಭಾಗ:**

ವಿದ್ಯಾರಣ್ಯಪುರ ವಿಭಾಗದ ವ್ಯಾಪ್ತಿಯ ಕೊಡಿಗೇಹಳ್ಳಿ ಉಪ ವಿಭಾಗದ ದೊಡ್ಡಬೊಮ್ಮಸಂದ್ರ ವಾರ್ಡ್ ವ್ಯಾಪ್ತಿಯಲ್ಲಿನ ಶ್ರೀ ಕಾಟೇರಮ್ಮ ದೇವಸ್ಥಾನ ಹತ್ತಿರದ ನಿವೇಶನ ಸಂಖ್ಯೆ.41.

ವಿದ್ಯಾರಣ್ಯಪುರ ಉಪ ವಿಭಾಗದ ತಿಂಡ್ಲು ವಾರ್ಡ್ ವ್ಯಾಪ್ತಿಯಲ್ಲಿನ, ಎನ್.ಟಿ.ಐ ಬಡಾವಣೆ 2ನೇ ಹಂತ, ರಾಜೀವ್ ಗಾಂಧಿನಗರದ ಕೊಡಿಗೇಹಳ್ಳಿಯ ನಿವೇಶನ ಸಂಖ್ಯೆ.797.

ಕುವೆಂಪುನಗರ ಉಪ ವಿಭಾಗದ ಡಿಫೆನ್ಸ್ ಬಡಾವಣೆ, 1ನೇ ಹಂತದ ಸಿಂಗಾಪುರ ವಾರ್ಡ್ ವ್ಯಾಪ್ತಿಯಲ್ಲಿನ ನಿವೇಶನ ಸಂಖ್ಯೆ.180.

**ಯಲಹಂಕ ವಿಭಾಗ:**

ಯಲಹಂಕ ವಿಭಾಗ ವ್ಯಾಪ್ತಿಯಲ್ಲಿನ, ಯಲಹಂಕ ಉಪ ವಿಭಾಗದ ವಾರ್ಡ್ ಸಂಖ್ಯೆ 01ರ ರಾಜಾ ಕೆಂಪೇಗೌಡ ವಾರ್ಡ್ ನ ಯಲಹಂಕ ಹೋಬಳಿಯ ಶಿವನಹಳ್ಳಿ ಗ್ರಾಮದಲ್ಲಿನ ಸ್ವತ್ತಿನ ಸಂಖ್ಯೆ 137.

ಯಲಹಂಕ ವಿಭಾಗದ ಅಟ್ಟೂರು ಉಪವಿಭಾಗದ ವ್ಯಾಪ್ತಿಯ ವಾರ್ಡ್ ನಂ 7 ರ ವ್ಯಾಪ್ತಿಯಲ್ಲಿನ. ಎ.ಎಂ.ಎಸ್ ಬಡಾವಣೆಯ 4 ನೇ ಅಡ್ಡ ರಸ್ತೆಯ ಸ್ವತ್ತಿನ ಸಂಖ್ಯೆಗಳಾದ: 77 ಮತ್ತು 78.

**ಬ್ಯಾಟರಾಯನಪುರ ವಿಭಾಗ**

ಕೋಗಿಲು ಉಪವಿಭಾಗದ ಕಟ್ಟಿಗೇಹಳ್ಳಿಯ ರೇವಾ ಕಾಲೇಜಿನ ಎದುರಿನ ಸ್ವತ್ತಿನ ಸಂಖ್ಯೆ. 15. ಬ್ಯಾಟರಾಯನಪುರದ ಜಕ್ಕೂರು ಉಪ-ವಿಭಾಗದ ಸಹಕಾರನಗರ 9ನೇ ಮುಖ್ಯರಸ್ತೆಯಲ್ಲಿನ ವ್ಯಾಪ್ತಿಯಲ್ಲಿನ ಸ್ವತ್ತಿನ ಸಂಖ್ಯೆ. 1424.

ಈ ತೆರವು ಕಾರ್ಯಾಚರಣೆಯನ್ನು ಸಂಬಂಧಿಸಿದ ಕಾರ್ಯಪಾಲಕ ಅಭಿಯಂತರರ ನೇತೃತ್ವದಲ್ಲಿ ಸಹಾಯಕ ಕಾಯಪಾಲಕ ಅಭಿಯಂತರರು ಹಾಗೂ ಸಹಾಯಕ ಅಭಿಯಂತರರು ಸೇರಿದಂತೆ ಇತರೆ ಸಿಬ್ಬಂದಿಗಳ ಸಹಕಾರದೊಂದಿಗೆ ನಡೆಸಲಾಗಿದೆ.

ಈ ತೆರವು ಕಾರ್ಯಾಚರಣೆಗೆ ತಗಲುವ ವೆಚ್ಚವನ್ನು ದಂಡದ ಸಮೇತ ಮಾಲೀಕರಿಂದ ವಸೂಲಿ ಮಾಡಲಾಗುವುದು.

# ಗುಜರಾತ್ ಜೈಂಟ್ಸ್ ವಿರುದ್ಧ ಆರ್‌ಸಿಬಿ ಗೆಲುವಿಗೆ ಪ್ರಮುಖ ಕಾರಣಗಳು

ಜನವರಿ 16ರ ಶುಕ್ರವಾರ ಗುಜರಾತ್ ಜೈಂಟ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರು ಭರ್ಜರಿ ಜಯ ಸಾಧಿಸಿತು. ಈ ಮೂಲಕ ಡಬ್ಲ್ಯೂಪಿಎಲ್ 2026ರ ಆವೃತ್ತಿಯಲ್ಲಿ ಹ್ಯಾಟ್ರಿಕ್ ಗೆಲುವು ಖಂಡಿದೆ. ಹಾಗಾದ್ರೆ, ನಿನ್ನೆಯ ಜಯಭೇರಿಗೆ ಪ್ರಮುಖ ಕಾರಣಗಳು ಏನು ಎನ್ನುವ ಸಂಪೂರ್ಣ ಮಾಹಿತಿಯನ್ನು ಇಲ್ಲಿ ನೀಡಲಾಗಿದೆ ತಿಳಿಯಿರಿ.

ನವಿ ಮುಂಬೈನ ಡಿವೈ ಪಾಟೀಲ್ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಆರ್‌ಸಿಬಿಯು ಗುಜರಾತ್ ಜೈಂಟ್ಸ್ ವಿರುದ್ಧ 32 ರನ್‌ಗಳ ಭರ್ಜರಿ ಗೆಲುವು ಕಂಡಿದ್ದು, ಇದು ಆರ್ಸಿಬಿಯ ಹ್ಯಾಟ್ರಿಕ್ ಜಯ ಆಗಿದೆ. ಟಾಸ್ ಗೆದ್ದ ಗುಜರಾತ್ ತಂಡವು ಮೊದಲು ಬೌಲಿಂಗ್ ಆಯ್ಕೆ ಮಾಡಿಕೊಂಡಿತು.

ರಾಧಾ, ರಿಚಾ ಘೋಷ್ ಸ್ಫೋಟಕ ಬ್ಯಾಟಿಂಗ್: ಮೊದಲು ಬ್ಯಾಟ್ ಬೀಸಿದ ಆರ್‌ಸಿಬಿ ನಿಗದಿತ 20 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು 182 ರನ್‌ಗಳನ್ನು ಕಲೆಹಾಕುವ ಮೂಲಕ ಗುಜರಾತ್ ಜೈಂಟ್ಸ್‌ಗೆ 183 ರನ್‌ಗಳನ್ನು ಗುರಿ ನೀಡಿತು.


ರಾಧಾ ಯಾದವ್ ಹಾಗೂ ರಿಚಾ ಘೋಷ್ ಸ್ಫೋಟಕ ಬ್ಯಾಟಿಂಗಿನಿಂದ ತಂಡಕ್ಕೆ ಬೃಹತ್ ರನ್‌ಗಳು ಹರಿದುಬಂದವು. ರಾಧಾ ಯಾದವ್ 47 ಬಾಲ್‌ಗೆ 6 ಬೌಂಡರಿ, 3 ಸಿಕ್ಸ್ ಸಹಿತ 66 ರನ್ ಕಲೆಹಾಕಿದರು. ರಿಚಾ ಘೋಷ್ 28 ಬಾಲ್‌ಗಳಲ್ಲಿ 2 ಸಿಕ್ಸ್, 4 ಬೌಂಡರಿ ಸಹಿತ 44 ರನ್ ಕಲೆಹಾಕಿ ತಂಡಕ್ಕೆ ನೆರವಾದರು.

ಇನ್ನೂ ಗ್ರೇಸ್ ಹ್ಯಾರಿಸ್ 17(8), ನಾಯಕಿ ಸ್ಮೃತಿ ಮಂಧಾನ 5(8), ದಯಾಲನ್ ಹೇಮಾಲತಾ 4(8), ಗೌತಮಿ ನಾಯಕ್ 9(6), ನಾಡಿನ್ ಡಿ ಕ್ಲರ್ಕ್ 26(12), ಅರುಂಧತಿ ರೆಡ್ಡಿ 2(2) ರನ್ ಕಲೆಹಾಕಿದರು.

**ಶ್ರೇಯಾಂಕಾ ಸ್ಪಿನ್ ಮೋಡಿ:** ಬಳಿಕ ಬ್ಯಾಟಿಂಗ್ ಮಾಡಿದ ಗುಜರಾತ್ ಜೈಂಟ್ಸ್ 18.5 ಓವರ್‌ಗಳಿಗೆ ಬರೀ 150 ರನ್‌ಗಳನ್ನು ಮಾತ್ರ ಕಲೆಹಾಕಿ ಸೋಲನುಭವಿಸಿತು. ಅಷ್ಟರ ಮಟ್ಟಿಗೆ ಆರ್‌ಸಿಬಿ ಬೌಲರ್‌ಗಳು ಮಾರಕ ಬೌಲಿಂಗ್ ದಾಳಿ ನಡೆಸಿದರು.

ಶ್ರೇಯಾಂಕ ಪಾಟೀಲ್ ಅವರು ಸ್ಪಿನ್ ಮೋಡಿ ಮಾಡಿ ಐದು ವಿಕೆಟ್ ಕಬಳಿಸಿ ಆರ್‌ಸಿಬಿ ಗೆಲುವಿಗೆ ಪ್ರಮುಖ ಪಾತ್ರವಹಿಸಿದರು.

ಶ್ರೇಯಾಂಕಾ ಪಾಟೀಲ್ 4 ಓವರ್‌ಗಳಲ್ಲಿ 23 ರನ್ ಬಿಟ್ಟುಕೊಟ್ಟು 5 ವಿಕೆಟ್ ಕಬಳಿಸಿ ಮಿಂಚಿದರು.



ಇನ್ನೂ ಲಾರೆನ್ಸ್ ಬೆಲ್ 3, ಅರುಂಧತಿ ರೆಡ್ಡಿ ಹಾಗೂ ನಾಡಿನ್ ಡಿ ಕ್ಲರ್ಕ್ ತಲಾ ಒಂದು ವಿಕೆಟ್ ಪಡೆದುಕೊಂಡರು.

ನವಿ ಮುಂಬೈನ ಡಿವೈ ಪಾಟೀಲ್ ಕ್ರೀಡಾಂಗಣದಲ್ಲಿ ನಡೆದ ಆರ್‌ಸಿಬಿ ಹಾಗೂ ಗುಜರಾತ್ ಜೈಂಟ್ಸ್ ತಂಡಗಳು ಮುಖಾಮುಖಿಯಾದವು.

ಎರಡು ಬಲಿಷ್ಠ ತಂಡಗಳ ನಡುವಿನ ಸ್ಪರ್ಧೆ ಭಾರೀ ಕುತೂಹಲ ಕೆರಳಿಸಿತ್ತು. ಕೊನೆಗೆ ಸ್ಮೃತಿ ಮಂಧಾನ ಬಳಗ ಗುಜರಾತ್ ತಂಡವನ್ನು ಮಣಿಸುವ ಮೂಲಕ ಈ ಆವೃತ್ತಿಯಲ್ಲಿ ಹ್ಯಾಟ್ರಿಕ್ ಜಯ ಸಾಧಿಸಿದೆ. ಟಾಸ್ ಸೋತು ಮೊದಲು ಬ್ಯಾಟ್ ಬೀಸಿದ ಆರ್‌ಸಿಬಿ ಆರಂಭದಲ್ಲಿ ನಿರೀಕ್ಷಿಸಿದಷ್ಟು ರನ್‌ಗಳನ್ನು ಬರಲಿಲ್ಲ.

ಪವರ್‌ಪ್ಲೇನಲ್ಲಿ ಕೇವಲ 45 ರನ್ನಗಳಿಗೆ ಪ್ರಮುಖ ನಾಲ್ಕು ವಿಕೆಟ್‌ಗಳನ್ನು ಕಳೆದುಕೊಂಡಿತು ಸಂಕಷ್ಟಕ್ಕೆ ಸಿಲುಕಿತು. ಬಳಿಕ ರಾಧಾ ಯಾದವ್ ಮತ್ತು ರಿಚಾ ಘೋಷ್ 5ನೇ ವಿಕೆಟ್‌ಗೆ ಅದ್ಭುತ ಆಟ ಮುಂದುವರೆಸಿದರು.

ರಾಧಾ ಯಾದವ್ 47 ಎಸೆತಗಳಲ್ಲಿ 66 ರನ್, ರಿಚಾ ಘೋಷ್ 28 ಎಸೆತಗಳಲ್ಲಿ 44 ರನ್‌ಗಳನ್ನು ಕಲೆಹಾಕಿದರು. ಇಬ್ಬರು ಆಟಗಾರ್ತಿಯರು 66 ಎಸೆತಗಳಲ್ಲಿ 5ನೇ ವಿಕೆಟ್‌ಗೆ 105 ರನ್ ಕಲೆಹಾಕಿದರು.

ನಂತರ ನಾಡಿನ್ ಡಿ ಕ್ಲರ್ಕ್ 26 ರನ್ ಗಳಿಸಿದರು. ಈ ಮೂವರ ಸ್ಫೋಟಕ ಬ್ಯಾಟಿಂಗ್‌ನಿಂದ ತಂಡದ ಮೊತ್ತ 20 ಓವರ್ ಗಳಲ್ಲಿ 7 ವಿಕೆಟ್‌ಗಳಿಗೆ 182 ರನ್‌ಗಳಿಗೆ ತಲುಪಿತು. ಬ್ಯಾಟಿಂಗ್‌ನಲ್ಲಿ ಗುಜರಾತ್ ಜೈಂಟ್ಸ್ ಉತ್ತಮ ಆರಂಭ ಪಡೆದುಕೊಂಡಿತು.

ಆದರೂ ಆರ್‌ಸಿಬಿ ಬೌಲರ್‌ಗಳು ಎದುರಾಳಿ ತಂಡದ ಬ್ಯಾಟರ್ಗಳನ್ನು ನಿಯಂತ್ರಣದಲ್ಲಿಡುವ ಮೂಲಕ ಕಡಿಮೆ ರನ್‌ಗಳಿಗರ ಕಟ್ಟಿಹಾಕಿದರು. ಶ್ರೇಯಾಂಕಾ ಪಾಟೀಲ್ ಮಾರಕ ಬೌಲಿಂಗ್ ದಾಳಿ ನಡೆಸಿ, 3.5 ಓವರ್‌ಗಳಲ್ಲಿ ಕೇವಲ 23 ರನ್‌ಗಳನ್ನು ಬಿಟ್ಟುಕೊಟ್ಟು 5 ವಿಕೆಟ್‌ಗಳನ್ನು ಪಡೆದರು.

**ಆರ್‌ಸಿಬಿ ಗೆಲುವಿಗೆ ಪ್ರಮುಖ ಕಾರಣ**

* ಸ್ಫೋಟಕ ಬ್ಯಾಟ್ ಬೀಸಿದ ರಾಧಾ ಯಾದವ್, ರಿಚಾ ಘೋಷ್, ನಾಡಿನ್ ಡಿ ಕ್ಲರ್ಕ್.
* ಮಾರಕ ಬೌಲಿಂಗ್ ದಾಳಿ ನಡೆಸಿದ ಶ್ರೇಯಂಕಾ ಪಾಟೀಲ್, ಲಾರೆನ್ ಬೆಲ್.
* ಗುಜರಾತ್ ಜೈಂಟ್ಸ್ ಬ್ಯಾಟರ್‌ಗಳನ್ನು ಕಡಿಮೆ ರನ್‌ಗಳಿಗೆ ಕಟ್ಟಿಹಾಕಿದ ಆರ್‌ಸಿಬಿ ಬೌಲರ್‌ಗಳು.
* ಮಧ್ಯಮ ಕ್ರಮಾಂಕದದಲ್ಲಿ ಉತ್ತಮ ಬ್ಯಾಟಿಂಗ್ ಪ್ರದರ್ಶನ.
* ಐದು ವಿಕೆಟ್ ಕಬಳಿಸಿದ ಕನ್ನಡತಿ ಶ್ರೇಯಂಕಾ ಪಾಟೀಲ್.

# ವಿದ್ಯಾರ್ಥಿ ದೆಸೆಯಲ್ಲಿ ತಾನು ಕೂಡ ಕಬಡ್ಡಿ ಪಟುವಾಗಿದ್ದೆ: ಕರ್ನಾಟಕ ಕ್ರೀಡಾಕೂಟ ಉದ್ಘಾಟನೆಯಲ್ಲಿ ಬಾಲ್ಯ ಸ್ಮರಿಸಿದ ಸಿಎಂ

**ತುಮಕೂರು:** ಜಿಲ್ಲೆಯ ಕ್ರೀಡಾಕ್ಷೇತ್ರಕ್ಕೆ ಹೆಚ್ಚಿನ ಅನುದಾನ ನೀಡಲಾಗುವುದು. ತುಮಕೂರಿ ನಿಂದ ವಿಶ್ವಮಟ್ಟದ ಕ್ರೀಡಾಪಟುಗಳು ಹೊರಹೊಮ್ಮಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕ್ರೀಡಾಪಟುಗಳಿಗೆ ಶುಭಕೋರಿದರು.

ನಗರದಲ್ಲಿ ಶುಕ್ರವಾರ ಆಯೋಜಿಸಲಾಗಿದ್ದ ಕರ್ನಾಟಕ ಕ್ರೀಡಾಕೂಟ 2025-26 ಅನ್ನು ಉದ್ಘಾಟಿಸಿ ಅವರು ಮಾತನಾಡಿದರು.

**ವಿದ್ಯಾರ್ಥಿ ದೆಸೆಯಲ್ಲಿ ಕ್ರೀಡಾಪಟುವಾಗಿದ್ದೆ:** ಕ್ರೀಡೆಯು ಶಿಸ್ತು, ಸಂಯಮ, ಸಮಯಪ್ರಜ್ಞೆ ಪಾಲನೆಗೆ ಸಹಕಾರಿ. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕ್ರೀಡಾಕೂಟ ನಡೆಯುತ್ತಿದ್ದು, ಇದರ ರೂವಾರಿಯಾಗಿರುವ ಗೃಹ ಸಚಿವ ಜಿ.ಪರಮೇಶ್ವರ್ ಅವರಿಗೆ ಅಭಿನಂದನೆ ಸಲ್ಲಿಸುವೆ ಎಂದರು.

ತಾನು ಕೂಡ ವಿದ್ಯಾರ್ಥಿ ದೆಸೆಯಲ್ಲಿ ಕಬಡ್ಡಿ ಪಟುವಾಗಿದ್ದೆ. ಅದರೊಂದಿಗೆ ಫುಟ್ಬಾಲ್, ಕ್ರಿಕೆಟ್ ಕ್ರೀಡೆಯಲ್ಲಿಯೂ ಸಹ ಆಸಕ್ತಿ ಹೊಂದಿದ್ದೆ. ಈಗಲೂ ಏಕದಿನ ಕ್ರಿಕೆಟ್, ಟಿ-20 ಕ್ರಿಕೆಟ್ ವೀಕ್ಷಿಸುವ ಹವ್ಯಾಸ ಉಳಿಸಿಕೊಂಡಿರುವೆ. ತನ್ನ ಕೆಲಸದೊತ್ತಡದ ನಡುವೆ ಈಗಲೂ ಅಂತಾರಾಷ್ಟ್ರೀಯ ಫುಟ್ಬಾಲ್ ಪಂದ್ಯಗಳನ್ನು ವೀಕ್ಷಿಸುವುದನ್ನು ತಪ್ಪಿಸುವುದಿಲ್ಲ ಎಂದು ಕ್ರೀಡೆಗಳ ಬಗ್ಗೆ ತಮ ಗಿದ್ದ ಆಸಕ್ತಿಯನ್ನು ಸಿಎಂ ವ್ಯಕ್ತಪಡಿಸಿದರು.

**ಸೋಲು ಗೆಲುವುಗಿಂತ ಕ್ರೀಡಾಸ್ಫೂರ್ತಿ ಮುಖ್ಯ:** ಕ್ರೀಡೆಯಲ್ಲಿ ಸೋಲು ಗೆಲುವು ಮುಖ್ಯವಲ್ಲ, ಕ್ರೀಡಾಸ್ಫೂರ್ತಿ ಮುಖ್ಯ. ಪ್ರತಿ ಕ್ರೀಡಾಪಟುವು ಇದನ್ನು ಪಾಲಿಸಬೇಕು. ಕ್ರೀಡಾಪಟುಗಳಿಗೆ ಉತ್ತಮ ಭವಿಷ್ಯವಿದ್ದು, ಕಠಿಣ ಶ್ರಮ ಅತ್ಯಗತ್ಯ. ಪರಿಶ್ರಮದಿಂದ ಗುರಿ ಸಾಧಿಸಲು ಉತ್ತಮ ತರಬೇತಿ ಅಗತ್ಯ ಎಂದರು.



**ಕ್ರೀಡಾಪಟುಗಳ ಪ್ರೋತ್ಸಾಹಕ್ಕೆ ಸರ್ಕಾರ ಬದ್ಧ:** ಕ್ರೀಡಾಪಟುಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಸರ್ಕಾರಿ ಉದ್ಯೋಗದಲ್ಲಿ ಮೀಸಲಾತಿಯ ನಿಯಮವನ್ನು ಜಾರಿಗೊಳಿಸಿದೆ. ಪೊಲೀಸ್ ಇಲಾಖೆಯಲ್ಲಿ ಕಾನ್ಸ್‌ಟೇಬಲ್ ಹುದ್ದೆಯಿಂದ ಆರಕ್ಷಕ ಉಪಾಧೀಕ್ಷಕರ ಹುದ್ದೆಯ ವರೆಗೆ ಶೇ.3 ರಷ್ಟು ಮೀಸಲಾತಿಯನ್ನು ಸರ್ಕಾರ ನೀಡುತ್ತಿದೆ. ಒಲಿಂಪಿಕ್ಸ್, ಪಾರಾ ಒಲಿಂಪಿಕ್ಸ್, ಏಷಿಯನ್ ಗೇಮ್ಸ್, ಕಾಮನ್ ವೆಲ್ತ್ ಗೇಮ್ಸ್, ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ವಿಜೇತರಾದ/ಭಾಗವಹಿಸುವ ಕ್ರೀಡಾಪಟುಗಳಿಗೆ ಸರ್ಕಾರಿ ಉದ್ಯೋಗದಲ್ಲಿ ಮೀಸಲಾತಿ ನೀಡಲಾಗುತ್ತಿದೆ. ವಿವಿಧ ಇಲಾಖೆಗಳಲ್ಲಿ ಶೇ.2ರ ಮೀಸಲಾತಿಯನ್ನು ನೀಡಲಾಗುತ್ತಿದೆ. ಒಲಿಂಪಿಕ್ಸ್‌ನಲ್ಲಿ ಪದಕ ವಿಜೇತ ಕ್ರೀಡಾಪಟುಗಳಿಗೆ ನಗದು ಬಹುಮಾನ ನೀಡುವ ಮೂಲಕ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸಲಾಗುತ್ತಿದೆ ಎಂದು ಸಿಎಂ ಹೇಳಿದರು.

**ಕ್ರೀಡಾ ಕ್ಷೇತ್ರಕ್ಕೆ ಹೆಚ್ಚಿನ ಅನುದಾನ:** ತುಮಕೂರಿನಿಂದ ವಿಶ್ವಮಟ್ಟದ ಕ್ರೀಡಾಪಟು ಗಳು ಹೊರಹೊಮ್ಮಲಿ. ತುಮಕೂರು ಜಿಲ್ಲೆಗೆ ಹಾಕಿ ಕ್ರೀಡಾಂಗಣ, ವಿಶ್ವದರ್ಜೆಯ ಈಜುಕೊಳದ ಬೇಡಿಕೆಯಿದ್ದು, ಕ್ರೀಡೆಗಾಗಿ ಹೆಚ್ಚಿನ ಅನುದಾನ ನೀಡುವ ಭರವಸೆಯನ್ನು ನೀಡಿದ ಸಿಎಂ, ಜಿಲ್ಲೆಯಿಂದ ಉತ್ತಮ ಕ್ರೀಡಾ ಪಟುಗಳು ಹೊರಬಂದು, ವಿಶ್ವಮಟ್ಟದಲ್ಲಿ ನಾಡಿನ ಕೀರ್ತಿಯನ್ನು ಹೆಚ್ಚಿಸಲೆಂದ ಕ್ರೀಡಾಪುಟಗಳಿಗೆ ಶುಭ ಕೋರಿದರು. ಒಲಿಂಪಿಕ್ಸ್ ನಿಮಿತ್ತ ನಡೆದ ಕ್ರೀಡಾಪಟುಗಳ ಪಥ ಸಂಚಲನ ಗಮನ ಸೆಳೆಯಿತು. ವಿವಿಧ ಜಿಲ್ಲೆಗಳಿಂದ ಬಂದಿದ್ದ ಕ್ರೀಡಾಪಟುಗಳು ಹೆಜ್ಜೆ ಹಾಕಿ ಕ್ರೀಡಾಪ್ರೇಮ ಮೆರೆದರು. ಶಿಸ್ತುಬದ್ಧ ನಡಿಗೆ ಗಮನ ಸೆಳೆಯಿತು. ಪಥ ಸಂಚಲನಕ್ಕೆ ಕಲಾ ತಂಡಗಳು ಕೂಡ ಮತ್ತಷ್ಟು ಮೆರುಗು ತಂದವು.

**ಜಿ.ಪರಮೇಶ್ವರ್ ಪೋಸ್ಟ್:** "ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ಒಲಂಪಿಕ್ ಸಂಸ್ಥೆ ಹಾಗೂ ತುಮಕೂರು ಜಿಲ್ಲಾಡಳಿತದ ವತಿಯಿಂದ ಮೊಟ್ಟಮೊದಲ ಬಾರಿಗೆ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ 'ಕರ್ನಾಟಕ ಕ್ರೀಡಾಕೂಟ 2025-26'ನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಉದ್ಘಾಟಿಸಲಾಯಿತು" ಎಂದು ಗೃಹ ಸಚಿವ ಜಿ.ಪರಮೇಶ್ವರ್ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ. "ಕರ್ನಾಟಕ ಕ್ರೀಡಾಕೂಟವನ್ನು ನಶೆ ಮುಕ್ತ ಕರ್ನಾಟಕ ನಿರ್ಮಾಣದ ಸಂಕಲ್ಪದೊಂದಿಗೆ ಯುವಜನತೆಗೆ ಮೀಸಲಾಗಿ ಆಯೋಜಿಸ'ಲಾಗಿದೆ. ಯುವಕರು ಮಾದಕ ವ್ಯಸನಗಳಿಂದ ದೂರವಿದ್ದು ಕ್ರೀಡೆಯಲ್ಲಿ ತೊಡಗಿಸಿ ಕೊಳ್ಳಬೇಕೆಂಬ ಉದ್ದೇಶ ಹೊಂದಿದೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಕ್ರೀಡಾಪಟುಗಳಿಗೆ ಅಗತ್ಯವಿರುವ ಎಲ್ಲ ಸೌಲಭ್ಯಗಳನ್ನು ಒದಗಿಸಲು ಬದ್ಧವಾಗಿದೆ. ನಮ್ಮ ರಾಜ್ಯದಿಂದ ಏಷ್ಯಾ ಮಟ್ಟದ ಕ್ರೀಡಾಕೂಟಗಳಿಗೆ ಕನಿಷ್ಠ 500 ಕ್ರೀಡಾಪಟುಗಳು ಭಾಗವಹಿಸಬೇಕೆಂಬ ಗುರಿಯಿದೆ. ಎಲ್ಲ ಆಟಗಳಲ್ಲಿ ಗೆಲ್ಲುವುದು ಮುಖ್ಯವಲ್ಲ, ಒಲಿಂಪಿಕ್ ಕ್ರೀಡಾಕೂಟದಲ್ಲಿ ಭಾಗವಹಿಸುವುದೇ ಮುಖ್ಯ. ಕ್ರೀಡೆ ವಿದ್ಯಾಭ್ಯಾಸದ ಜೊತೆಗೆ ಯುವಕರ ಜೀವನ ರೂಪಿಸುವ ಶಕ್ತಿಯಾಗಿದೆ. ಸ್ಮಾರ್ಟ್ ಸಿಟಿ ಯೋಜನೆ ಹಾಗೂ ಕರ್ನಾಟಕ ಸರ್ಕಾರದ ಸಹಯೋಗದಲ್ಲಿ 60 ಕೋಟಿ ರೂ. ವೆಚ್ಚದಲ್ಲಿ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣವನ್ನು ನಿರ್ಮಿಸಲಾಗಿದೆ. ಬೆಂಗಳೂರಿನ ಕಂಠೀರವ ಸ್ಟೇಡಿಯಂಗೆ ಸರಿಸಮಾನವಾದ ಸಿಂಥೆಟಿಕ್ ಟ್ರ್ಯಾಕ್, ಕ್ರೀಡಾಪಟುಗಳಿಗೆ ಉಳಿದುಕೊಳ್ಳಲು ವ್ಯವಸ್ಥೆ ಕಲ್ಪಿಸಲಾಗಿದೆ. ಅಂತಾರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣಕ್ಕೆ ಭೂಮಿ ನೀಡಲಾಗಿದೆ. ನಿರ್ಮಾಣ ಕಾಮಗಾರಿ ಶೀಘ್ರದಲ್ಲಿ ಆರಂಭವಾಗಲಿದೆ. ಜಿಲ್ಲೆಯಲ್ಲಿ ಕ್ರೀಡಾಪಟುಗಳಿಗೆ ಮತ್ತಷ್ಟು ಉತ್ತೇಜನ ನೀಡಲು ಅಂತಾರಾಷ್ಟ್ರೀಯ ಮಟ್ಟದ ಹಾಕಿ ಕ್ರೀಡಾಂಗಣ ಮತ್ತು ಈಜುಕೊಳ ನಿರ್ಮಿಸಬೇಕಿದೆ. ಇದರ ಅಭಿವೃದ್ಧಿಗೆ 25 ಕೋಟಿ ರೂ. ಅನುದಾನ ನೀಡಬೇಕು ಎಂದು ಮುಖ್ಯಮಂತ್ರಿಯವರಿಗೆ ಮನವಿ ಮಾಡಿದೆ ಎಂದು ಜಿ.ಪರಮೇಶ್ವರ್ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ.

**ಮಾಂಸಾಹಾರ ಊಟ ಸೇವಿಸಿದೆ:** ನನಗೆ ಸ್ವಲ್ಪ ಜ್ವರ ಇತ್ತು, ಹಾಗಾಗಿ ಅನೇಕ ದಿನಗಳಿಂದ ಬಾಯಿ ಕೆಟ್ಟುಹೋಗಿತ್ತು. ಮಾಂಸಾಹಾರ ಊಟ ಸೇವಿಸಿರುವೆ. ಕೋಳಿ ಸಾರು, ಇಡ್ಲಿ, ಕಾಲುಸೂಪು, ನಾಟಿ ಚಿಕ್ಕನ್ ಸೇರಿದಂತೆ ಎಲ್ಲವೂ ಚೆನ್ನಾಗಿತ್ತು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ತುಮಕೂರಿನಲ್ಲಿ ಮಾಜಿ ಸಚಿವ ಕೆ ಎನ್ ರಾಜಣ್ಣ ಅವರ ಮನೆಯಲ್ಲಿ ಊಟ ಮಾಡಿದ ನಂತರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಯಾವಾಗಲೂ ಕೆಎನ್ ರಾಜಣ್ಣ ಅವರೊಂದಿಗೆ ಯಾವಾಗಲೂ ಸಿಹಿ ಸುದ್ದಿನೇ ಇರುತ್ತದೆ. ರಾಜಣ್ಣ ಅವರಿಗೆ ಸಚಿವ ಸ್ಥಾನ ದೊರೆಯಲಿದೆಯೇ ಎಂಬ ಪತ್ರಕರ್ತರ ಪ್ರಶ್ನೆಗೆ ನಾನು ಅದನ್ನು ಹೈಕಮಾಂಡ್ ನೊಂದಿಗೆ ಮಾತನಾಡುತ್ತೇನೆ ಎಂದು ಹೇಳಿದರು.

# ಎಲ್ಲಾ ಸ್ವಚ್ಛತಾ ಸಿಬ್ಬಂದಿಗಳಿಗೆ ಶೌಚಾಲಯ ಬಳಕೆಗೆ ಅವಕಾಶ ಕಲ್ಪಿಸಲು ಕಟ್ಟುನಿಟ್ಟಿನ ಸೂಚನೆ: ಡಿ.ಎಸ್.ರಮೇಶ್

**ಬೆಂಗಳೂರು :** ಸಫಾಯಿ ಕರ್ಮಚಾರಿಗಳ ಆಯೋಗದ ಅಧ್ಯಕ್ಷರು, ಬೆಂಗಳೂರು ಪೂರ್ವ ನಗರ ಪಾಲಿಕೆ ವ್ಯಾಪ್ತಿಯ ವಿವಿಧ ವಾರ್ಡ್ ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಚ್ಛತಾ ಸಿಬ್ಬಂದಿಗಳೊಂದಿಗಿನ



ನೇರ ಸಂವಾದ ಸಭೆಯಲ್ಲಿ ಅನೇಕ ಸ್ಥಳಗಳಲ್ಲಿ ಶೌಚಾಲಯಗಳ ಕೊರತೆಯಿಂದ ತೀವ್ರ ತೊಂದರೆ ಅನುಭವಿಸುತ್ತಿರುವುದಾಗಿ ಹಾಗೂ ವಿಶೇಷವಾಗಿ ಮಹಿಳಾ ಸ್ವಚ್ಛತಾ ಸಿಬ್ಬಂದಿಗಳು ಹೋಟೆಲ್, ರೆಸ್ಟೋರೆಂಟ್, ಮಾಲ್, ಪೆಟ್ರೋಲ್ ಬಂಕ್ ಮತ್ತು ವಾಣಿಜ್ಯ ಸಂಸ್ಥೆಗಳು ಸೇರಿದಂತೆ ಇನ್ನಿತರೆ ಸಾರ್ವಜನಿಕ ಸ್ಥಳಗಳಲ್ಲಿ ಶೌಚಾಲಯಗಳ ಬಳಕೆಗೆ ಅನುಮತಿ ನೀಡದಿರುವ ಬಗ್ಗೆ ಆಯೋಗಕ್ಕೆ ದೂರು ಸಲ್ಲಿಸಲಾಗಿತ್ತು.

ಈ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಅಧ್ಯಕ್ಷರು ಬೆಂಗಳೂರು ಪೂರ್ವ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರು, ಲೋಡರ್ಸ್ ಹಾಗೂ ವಾಹನ ಚಾಲಕರು ಸೇರಿದಂತೆ ಎಲ್ಲಾ ಸ್ವಚ್ಛತಾ ಸಿಬ್ಬಂದಿಗಳಿಗೆ ಸಾರ್ವಜನಿಕ ಸ್ಥಳಗಳಲ್ಲಿನ ಶೌಚಾಲಯಗಳನ್ನು ಗೌರವಯುತವಾಗಿ ಯಾವುದೇ ನಿರ್ಬಂಧವಿಲ್ಲದೆ ಉಪಯೋಗಿಸಲು ಸೂಕ್ತ ಆದೇಶ ಹೊರಡಿಸಲು ಪತ್ರ ಬರೆದಿರುತ್ತಾರೆ.


ಸರ್ವೋಚ್ಚ ನ್ಯಾಯಾಲಯದ ರಿಟ್ ಅರ್ಜಿಯಲ್ಲಿ ರಾಜೀಬ್ ಕಲಿತಾ ವಿರುದ್ಧ ಭಾರತ ಒಕ್ಕೂಟದ ಪ್ರಕರಣದಲ್ಲಿನ ಆದೇಶದಲ್ಲಿ ಉಲ್ಲೇಖಿಸಿರುವಂತೆ ಶೌಚಾಲಯಗಳು ಕೇವಲ ಸೌಲಭ್ಯವಲ್ಲ, ಅದು ಮೂಲಭೂತ ಅಗತ್ಯವಾಗಿದ್ದು ಮಾನವ ಹಕ್ಕಿನ ಭಾಗವಾಗಿದೆ. ಸಂವಿಧಾನದ ವಿಧಿ 21 ರಡಿ ಜೀವಿಸುವ ಹಕ್ಕು ಮತ್ತು ವೈಯಕ್ತಿಕ ಸ್ವಾತಂತ್ರ್ಯವು ಸುರಕ್ಷಿತ ಮತ್ತು ಸ್ವಚ್ಛ ಪರಿಸರದ ಹಕ್ಕನ್ನೂ ಒಳಗೊಂಡಿದೆ. ಸಾರ್ವಜನಿಕ ಆರೋಗ್ಯವನ್ನು ರಕ್ಷಿಸುವುದು ಮತ್ತು ಸುಧಾರಿಸುವುದು ರಾಜ್ಯದ ಕರ್ತವ್ಯವಾಗಿದೆ ಎಂದು ಸ್ಪಷ್ಟಪಡಿಸಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ, ಬೆಂಗಳೂರು ಪೂರ್ವ ನಗರ ಪಾಲಿಕೆಯ ವ್ಯಾಪ್ತಿಯಲ್ಲಿರುವ ಎಲ್ಲಾ ಹೋಟೆಲ್, ರೆಸ್ಟೋರೆಂಟ್, ಮಾಲ್, ಪೆಟ್ರೋಲ್ ಬಂಕ್ ಮತ್ತು ವಾಣಿಜ್ಯ ಸಂಸ್ಥೆಗಳು ಸೇರಿದಂತೆ ಇನ್ನಿತರೆ ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತಾ ಸಿಬ್ಬಂದಿಗಳಿಗೆ ಕಡ್ಡಾಯವಾಗಿ ಶೌಚಾಲಯ ಬಳಕೆಗೆ ಅನುಮತಿ ನೀಡುವಂತೆ ಸೂಚಿಸಿದರು. ಸ್ವಚ್ಛತಾ ಕಾರ್ಮಿಕರು ಶೌಚಾಲಯ ಬಳಸಲು ಯಾರಾದರೂ ನಿರ್ಬಂಧ ಅಥವಾ ಅಡ್ಡಿಪಡಿಸಿದಲ್ಲಿ, ಅಂತಹವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಆಯುಕ್ತರು ಕಟ್ಟುನಿಟ್ಟಾಗಿ ಎಚ್ಚರಿಕೆ ನೀಡಿದರು.

ಬೆಂಗಳೂರು ಪೂರ್ವ ನಗರ ಪಾಲಿಕೆಯು ಸ್ವಚ್ಛತಾ ಕಾರ್ಮಿಕರ ಗೌರವ, ಆರೋಗ್ಯ ಮತ್ತು ಮೂಲಭೂತ ಹಕ್ಕುಗಳ ರಕ್ಷಣೆಗೆ ಸಂಪೂರ್ಣ ಬದ್ಧವಾಗಿದೆ. ಸಮಾಜದ ಅತ್ಯಂತ ಪ್ರಮುಖ ಸೇವೆಯನ್ನು ನಿರ್ವಹಿಸುವ ಕಾರ್ಮಿಕರಿಗೆ ಗೌರವಯುತ ಹಾಗೂ ಸುರಕ್ಷಿತ ಕೆಲಸದ ಪರಿಸರ ಕಲ್ಪಿಸುವುದು ನಮ್ಮ ನಿಮ್ಮೆಲರ ಆದ್ಯ ಕರ್ತವ್ಯವಾಗಿದೆ ಎಂದು ಆಯುಕ್ತರು ತಿಳಿಸಿದರು.

# ಮಾಜಿ ಸಚಿವ ಡಾ.ಭೀಮಣ್ಣ ಖಂಡ್ರೆ ನಿಧನ

ಮಾಜಿ ಸಚಿವ, ವೀರಶೈವ ಮಹಾಸಭಾ ಗೌರವ ಅಧ್ಯಕ್ಷರಾಗಿದ್ದ ಶತಾಯುಷಿ ಡಾ.ಭೀಮಣ್ಣ ಖಂಡ್ರೆ (102) ನಿಧನರಾಗಿದ್ದಾರೆ. ಆರು ದಶಕಗಳಿಗೂ ಹೆಚ್ಚು ಕಾಲ ಸಾರ್ವ ಜನಿಕ ಜೀವನದಲ್ಲಿ ಜನಪರ ಕಾರ್ಯಕ್ರಮಗಳ ಮೂಲಕ ಜನಪ್ರಿಯರಾಗಿದ್ದ ಭಾಲ್ಕಿ ಕ್ಷೇತ್ರದ ಹಿರಿಯರಾದ ಅವರು ವಯೋ ಸಹಜ ಅನಾರೋಗ್ಯದ ಕಾರಣ ಹಲವು ದಿನಗಳಿಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ವಯೋ ಸಹಜ ಅನಾರೋಗ್ಯ ಕಾರಣ ಅವರು ಬೀದರ್‌ನಲ್ಲಿ ಶುಕ್ರವಾರ ರಾತ್ರಿ ನಿಧನರಾಗಿದ್ದಾರೆ.



ಅವರು ಪುತ್ರ, ಸಚಿವ ಈಶ್ವರ್ ಖಂಡ್ರೆ ಸೇರಿ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಉಸಿರಾಟದ ತೊಂದರೆ ಹಾಗೂ ರಕ್ತದೊತ್ತಡ ಕಾರಣದಿಂದ ಬೀದರ್ ಖಾಸಗಿ ಆಸ್ಪತ್ರೆಯಲ್ಲಿ ಸೂಕ್ತ ಚಿಕಿತ್ಸೆ ಪಡೆಯುತ್ತಿದ್ದ ಅವರನ್ನು ಕೆಲ ದಿನಗಳ ಹಿಂದೆ ಮನೆಗೆ ಕರೆದುಕೊಂಡು ಹೋಗ ಲಾಗಿತ್ತು. ಇನ್ನೂ ಅಂತ್ಯಕ್ರಿಯೆ ಇಂದೇ ಭಾಲ್ಕಿಯಲ್ಲಿ ನಡೆಯಲಿದೆ ಎನ್ನುವ ಮಾಹಿತಿ ಲಭ್ಯವಾಗಿದೆ. ಇವರ ನಿಧನಕ್ಕೆ ಸಿಎಂ ಸಿದ್ದ ರಾಮಯ್ಯ ಸೇರಿದಂತೆ ಹಲವು ರಾಜಕೀಯ ಗಣ್ಯರು ಸಂತಾಪ ಸೂಚಿಸಿ ದ್ದಾರೆ.

**ಭೀಮಣ್ಣ ಕುಟುಂಬದ ರಾಜಕೀಯ ಹಿನ್ನೆಲೆ:** ಡಾ.ಭೀಮಣ್ಣ ಖಂಡ್ರೆ ಅವರ ಪುತ್ರ ಈಶ್ವರ್ ಖಂಡ್ರೆ ಅವರು ಪ್ರಸ್ತುತ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾಗಿ ಕಾರ್ಯ ನಿರ್ವ ಹಿಸುತ್ತಿದ್ದಾರೆ. ಅವರ ಮೊಮ್ಮಗ ಸಾಗರ್ ಖಂಡ್ರೆ ಅವರು ಬೀದರ್ ಜಿಲ್ಲೆಯ ಸಂಸದರಾಗಿದ್ದಾರೆ.

**ಭೀಮಣ್ಣ ಅವರ ರಾಜಕೀಯ ಹಿನ್ನೆಲೆ:** 1953ರಲ್ಲಿ ಭಾಲ್ಕಿ ಪುರಸಭೆಯ ಪ್ರಥಮ ಚುನಾಯಿತ ಅಧ್ಯಕ್ಷರಾಗುವ ಮೂಲಕ ರಾಜಕೀಯ ಜೀವನಕ್ಕೆ ಪ್ರವೇಶಿಸಿದ್ದ ಭೀಮಣ್ಣ ಖಂಡ್ರೆ ಅವರು 1962ರಲ್ಲಿ ಮೊದಲ ಬಾರಿಗೆ ವಿಧಾನಸಭೆ ಪ್ರವೇಶ ಮಾಡಿದರು. 4 ಬಾರಿ ಶಾಸಕರಾಗಿ, 2 ಬಾರಿ ವಿಧಾನ ಪರಿಷತ್ ಸದಸ್ಯರಾಗಿ, ಎಂ.ವೀರಪ್ಪ ಮೊಯ್ಲಿ ಅವರ ಸಚಿವ ಸಂಪುಟದಲ್ಲಿ ಸಾರಿಗೆ ಸಚಿವರಾಗಿ ಸೇವೆ ಸಲ್ಲಿಸಿದ್ದರು.

**ಭೀಮಣ್ಣ ಅವರ ಸಾಧನೆ:** ಸಹಕಾರಿ ಧುರೀಣರಾಗಿ ಮತ್ತು ರೈತರ ಕಲ್ಯಾಣದ ಬಗ್ಗೆ ಕಳಕಳಿ ಹೊಂದಿದ್ದ ಭೀಮಣ್ಣ ಖಂಡ್ರೆ ಅವರು ಹಳ್ಳಿಖೇಡ್‌ನಲ್ಲಿ ಇರುವ ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ಮತ್ತು ಹುಣಜಿ ಯಲ್ಲಿರುವ ಮಹಾ ತ್ಮಾ ಗಾಂಧೀ ಸಕ್ಕರೆ ಕಾರ್ಖಾನೆಯ ಸ್ಥಾಪಕ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದರು. ನಾರಂಜಾ ಮತ್ತು ಕಾರಂಜಾ ನೀರಾವರಿ ಯೋಜನೆ ಗಳ ಅನುಷ್ಠಾನ ದಲ್ಲೂ ಭೀಮಣ್ಣ ಖಂಡ್ರೆ ಅವರು, ಪ್ರಮುಖ ಪಾತ್ರ ವಹಿಸಿದ್ದರು.

ಸ್ವಾತಂತ್ರ್ಯ ಸೇನಾನಿಯಾಗಿ, ಹೈದ್ರಾಬಾದ್ ವಿಮೋಚನೆಯ ಹೋರಾಟಗಾರರಾಗಿ ರಜಾಕಾರರ ದೌರ್ಜನ್ಯ ಪ್ರತಿಭಟಿಸಿದ್ದ ಅವರು, ಏಕೀಕರಣದ ಸಂದರ್ಭದಲ್ಲಿ ಬೀದರ್ ಜಿಲ್ಲೆಯನ್ನು ಕರ್ನಾಟ ಕದಲ್ಲಿಯೇ ಉಳಿಸಲು ಶ್ರಮಿಸಿ ದ್ದರು.

ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರಾಗಿ ಸಮು ದಾಯವನ್ನು ಒಗ್ಗೂಡಿಸುವಲ್ಲಿ ಶ್ರಮಿಸಿದ ಅವರು ಕೆಲವೇ ಸಾವಿರ ಇದ್ದ ಸಭಾದ ಸದಸ್ಯತ್ವವನ್ನು ಲಕ್ಷಕ್ಕೆ ತೆಗೆದು ಕೊಂಡು ಹೋಗುವ ಮೂಲಕ ತಮ್ಮ ಸಂಘಟನಾ ಸಾಮರ್ಥ್ಯ ಪ್ರದರ್ಶಿಸಿ ದವರಾಗಿದ್ದಾರೆ.

# ನಮ್ಮ ಮೂಲ ಸಂಸ್ಕೃತಿ-ಜಾನಪದ ಕಲೆಯನ್ನು ಮುಂದಿನ ಪೀಳಿಗೆಗೆ ದಾಟಿಸುವುದೇ ಸುಗ್ಗಿ-ಹುಗ್ಗಿ ಕಾರ್ಯಕ್ರಮದ ಮೂಲ ಉದ್ದೇಶ- ಕೃಷ್ಣ ಬೈರೇಗೌಡ

**ಬೆಂಗಳೂರು :** ಭೂಮಿ- ಪ್ರಕೃತಿಯನ್ನು ಆರಾಧಿಸುವ ನಮ್ಮ ಮೂಲ ಸಂಸ್ಕೃತಿ ಹಾಗೂ ಜಾನಪದ ಕಲೆಗಳನ್ನು ಉಳಿಸುವ ಹಾಗೂ ಮುಂದಿನ ಪೀಳಿಗೆಗೆ ದಾಟಿಸುವ ಸಲುವಾಗಿಯೇ ಸುಗ್ಗಿ-ಹುಗ್ಗಿ ಕಾರ್ಯಕ್ರಮವನ್ನು ಪ್ರತಿ ವರ್ಷ ಆಯೋಜಿಸಲಾಗುತ್ತಿದೆ ಎಂದು ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು.

ಜಕ್ಕೂರು ಕ್ರೀಡಾಂಗಣದಲ್ಲಿ ಆಯೋಜಿಸಲಾಗಿರುವ ಮೊದಲ ದಿನದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, "ನಾವಿಂದು ಐಟಿ ಸಿಟಿ ಬೆಂಗಳೂರಿನಲ್ಲಿದ್ದೇವೆ. ಬದುಕನ್ನು ಕಟ್ಟಿಕೊಳ್ಳುವುದಕ್ಕಾಗಿ ಈ ಕಾಂಕ್ರೀಟ್ ಕಾಡಿನಲ್ಲಿ ನೆಲೆಗೊಂಡಿದ್ದೇವೆ. ಆದರೆ, ನಮ್ಮ ಮೂಲ ಹಳ್ಳಿಗಳಲ್ಲಿವೆ ಎಂಬುದನ್ನು ನಾವು ಮರೆಯಬಾರದು. ಹೀಗಾಗಿ ನಮ್ಮ ಹಳ್ಳಿ ಸೊಗಡಿನ ಮಣ್ಣಿನ ಸಂಸ್ಕೃತಿ, ದೇಸಿ ಸಂಸ್ಕೃತಿ ಹಾಗೂ ಜಾನಪದ ಕಲೆಗಳನ್ನು ಪರಿಚಯಿಸುವ ಸಲುವಾಗಿ ಈ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ" ಎಂದು ತಿಳಿಸಿದರು.

"ನಗರ ಭಾಗದ ಇಂದಿನ ಮಕ್ಕಳಿಗೆ ನಮ್ಮ ಹಳ್ಳಿ ಹೇಗಿರುತ್ತೆ? ನಮ್ಮ ಹಳ್ಳಿಯ ಬದುಕಿನ ಖುಷಿ ಎಂತಾದ್ದು? ಭತ್ತ ರಾಗಿಯ ತೆನೆ ಹೇಗಿರುತ್ತದೆ? ಎಂಬ ಕುರಿತು ತಿಳುವಳಿಕೆ ಕಡಿಮೆ. ಹೀಗಾಗಿ ನಮ್ಮ ಮಕ್ಕಳಿಗೆ ಹಳ್ಳಿಯ ಬದುಕಿನ ಶ್ರೀಮಂತಿಕೆಯನ್ನು ಪರಿಚಯಿಸುವ ಮತ್ತು ಆಮೂಲಕ ನಮ್ಮ ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ದಾಟಿಸುವ ಪ್ರಯತ್ನವೇ ಈ ಸುಗ್ಗಿ-ಹುಗ್ಗಿ ಕಾರ್ಯಕ್ರಮ" ಎಂದು ಅವರು ಅಭಿಪ್ರಾಯಪಟ್ಟರು.

"ಪ್ರತಿ ವರ್ಷ ಈ ಕಾರ್ಯಕ್ರಮಕ್ಕೆ ಆಗಮಿಸುತ್ತಿರುವ ಜನರ ಸಂಖ್ಯೆ ಅಧಿಕವಾಗುತ್ತಿರುವ ಕಾರಣ ಇದೀಗ ಈ ಕಾರ್ಯಕ್ರಮವನ್ನು ಎರಡು ದಿನ ನಡೆಸಲಾಗುತ್ತಿದೆ.

ನಾವು ಈ ಕಾರ್ಯಕ್ರಮ ಆರಂಭಿಸಿದ ನಂತರ ಬೆಂಗಳೂರಿನ ಹಲವೆಡೆ ಸಂಕ್ರಾಂತಿಗೆ ಇದೇ ರೀತಿಯ ಕಾರ್ಯಕ್ರಮ ಆಯೋಜಿಸುತ್ತಿದ್ದಾರೆ. ಬ್ಯಾಟರಾಯನಪುರದಲ್ಲೂ ಕೆಲವರು ಮಾಡುತ್ತಿದ್ದಾರೆ. ಇದು ಉತ್ತಮ ಬೆಳವಣಿಗೆ, ಇದರ ಮುಖಾಂತರ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಹೆಚ್ಚು ಪ್ರೋತ್ಸಾಹ ಸಿಕ್ಕಿದರೆ ನಮ್ಮ ಉದ್ದೇಶ ಈಡೇರಿದಂತೆ" ಎಂದು ತಿಳಿಸಿದರು.

"ನಮ್ಮ ಜಾನಪದ ಕಲಾವಿದರಿಗೆ ಹೆಚ್ಚು ಹೆಚ್ಚು ಪ್ರೋತ್ಸಾಹ ನೀಡಬೇಕು, ಇಂತಹಾ ಕಲಾ ಸಾಂಸ್ಕೃತಿಕ



ಕಾರ್ಯಕ್ರಮಗಳು ಅಧಿಕ ಸಂಖ್ಯೆಯಲ್ಲಿ ನಡೆಯಬೇಕು ಹಾಗೂ ಜನ ಕುಟುಂಬ ಸಮೇತರಾಗಿ ಸಂತೋಷದಿಂದ ಕೆಲವು ಗಂಟೆಗಳು ಕಳೆಯುವಂತಾಗಬೇಕು ಎಂಬ ಕಾರಣದಿಂದಲೇ ನಾವು ಸುಗ್ಗಿ-ಹುಗ್ಗಿ ಕಾರ್ಯಕ್ರಮದ ಆಯೋಜನೆ ಮುಂದಾಗಿದ್ದು. ಈಗ ನಮ್ಮಿಂದ ಸ್ಫೂರ್ತಿಯಾಗಿ ಇತರರು ಇಂತಹ ಕಾರ್ಯಕ್ರಮ ಮಾಡುತ್ತಿರುವುದು ಸಂತೋಷದ ವಿಚಾರ" ಎಂದು ಸಂತಸ ಹಂಚಿಕೊಂಡರು.

"ಈಗೆಲ್ಲಾ ಮನರಂಜನೆಗಾಗಿ ಮಾಲ್ಗೆ ಹೋಗಬೇಕು. ಅಲ್ಲಿ ಹೋದರೆ ಮಿತಿಮೀರಿ ಖರ್ಚು ಮಾಡಬೇಕು.ಖರ್ಚು ಮಾಡದಿದ್ದರೆ ಮನಸ್ಸಿಗೆ ಸಂಕಟ. ಆದರೆ, ಇಲ್ಲಿ ಅಂತಹ ಸಂಕಟಗಳಿಗೆ ಆಸ್ಪದವೇ ಇಲ್ಲ. ಹಿರಿಯರು-ಕಿರಿಯರು ಒಟ್ಟಾಗಿ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಗ್ರಾಮೀಣ ಆಟಗಳಲ್ಲಿ ತೊಡಗಬಹುದು.

ಇಡೀ ಕುಟುಂಬ ಒಟ್ಟಾಗಿ ಸಂತೋಷದಿಂದ ಸಮಯ ಕಳೆಯಬಹುದು. ಜನ ಕುಟುಂಬ ಸಮೇತರಾಗಿ ಬಂದು ಸಂತೋಷದಿಂದ ಇಲ್ಲಿ ಸಮಯ ಕಳೆದರೆ ಸಾಕು, ನಮಗೆ ಅದಕ್ಕಿಂತ ಹೆಚ್ಚಿನ ಭಾಗ್ಯ ಏನಿದೆ" ಎಂದು ತಮ್ಮ ಆಶಯ ವ್ಯಕ್ತಪಡಿಸಿದರು.

ಜಕ್ಕೂರು ಕ್ರೀಡಾಂಗಣದಲ್ಲಿ ಹಳ್ಳಿಭಾಗದ ತಿನಿಸುಗಳನ್ನು ನಗರದ ಜನರಿಗೆ ಪರಿಚಯಿಸುವ ಸಲುವಾಗಿ 80ಕ್ಕೂ ಅಧಿಕ ಮಳಿಗೆಗಳನ್ನು ತೆರೆಯಲಾಗಿತ್ತು. ಈ ಮಳಿಗೆಗಳಲ್ಲಿ ಸಾವಿರಾರು ಜನ ತಮ್ಮ ಮಕ್ಕಳೊಂದಿಗೆ ಹಳ್ಳಿ ಖಾದ್ಯಗಳನ್ನು ಸವಿದು ಸಂಭ್ರಮಿಸಿದರು. ಜತೆಗೆ ಎರಡೂ ದಿನದ ಕಾರ್ಯಕ್ರಮದಲ್ಲಿ ಸಚಿವರ ಕೃಷ್ಣ ಬೈರೇಗೌಡ ಅವರು ತಂಡ ಕಾರ್ಯಕ್ರಮಕ್ಕೆ ಆಗಮಿಸಿದ ಎಲ್ಲರಿಗೂ ಉಚಿತವಾಗಿ ಸಿಹಿ ಮತ್ತು ಖಾರ ಪೊಂಗಲ್ ವಿತರಿಸಿದರು.

ಸುಗ್ಗಿ-ಹುಗ್ಗಿ 2026 ಕಾರ್ಯಕ್ರಮಕ್ಕಾಗಿ ನಾಡಿನ ಮೂಲೆ ಮೂಲೆಯಿಂದ ಆಗಮಿಸಿದ್ದ ಅನೇಕ ತಂಡಗಳು ಜನಪದ ನೃತ್ಯ ತಂಡ ನೀಡಿದ ಪ್ರದರ್ಶನ ಜನ ಗಮನ ಸೆಳೆಯಿತು. ಸ್ಥಳೀಯ 30ಕ್ಕೂ ಅಧಿಕ ತಂಡಗಳು ಜನಪದ ಪ್ರದರ್ಶನ ನೀಡಿದ್ದು ವಿಶೇಷ. ಈ ಕಾರ್ಯಕ್ರಮದಲ್ಲಿ ಪ್ರದರ್ಶನ ನೀಡುವ ಸಲುವಾಗಿಯೇ ಹಲವರು ಪ್ರತಿನಿತ್ಯ ಜನಪದ ಕಲೆ-ನೃತ್ಯದ ಅಭ್ಯಾಸದಲ್ಲಿ ತೊಡಗಿರುವ ಕುರಿತು ವೇದಿಕೆಯಲ್ಲೇ ಸಚಿವ ಕೃಷ್ಣ ಬೈರೇಗೌಡ ಅವರು ಹರ್ಷ ವ್ಯಕ್ತಪಡಿಸಿದರು. ಮೊದಲ ದಿನ ಸ್ಥಳೀಯ "ಬರ್ಫಿ" ತಂಡ ನೀಡಿದ ಸಾಂಸ್ಕೃತಿಕ ಕಾರ್ಯಕ್ರಮ ಪ್ರೇಕ್ಷಕರಿಗೆ ಹೊಸ ಅನುಭವ ನೀಡಿತು.

# ಸುತ್ತೂರು ಜಾತ್ರಾ ಮಹೋತ್ಸವ

**ಮೈಸೂರು:** ಸಡಗರ ಸಂಭ್ರಮ ಭಕ್ತಿ ಭಾವಗಳೊಂದಿಗೆ ವಿಜೃಂಭಣೆಯಿಂದ ಸುತ್ತೂರು ರಥೋತ್ಸವ ಇಂದು ಜರುಗಿತು. ಸುತ್ತೂರಿನ ಕರ್ತೃ ಗದ್ದಿಗೆ ಮುಂಭಾಗ ಸುತ್ತೂರು ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ರಥೋತ್ಸವಕ್ಕೆ ಚಾಲನೆ ನೀಡಿದರು. ವಿವಿಧ ಮಠಗಳ



ಮಠಾಧೀಶರು, ರಾಜಕಾರಣಿಗಳು ಮತ್ತು ಸಹಸ್ರ ಸಂಖ್ಯೆಯ ಭಕ್ತರು ಸಾಕ್ಷಿಯಾದರು. ಚತ್ರಿ ಚಾಮರ, ವೀರಗಾಸೆ, ಮರಗಾಲು ಕುಣಿತ, ಗೊರವರ ಕುಣಿತ, ತಮಟೆ, ಕಂಸಾಳೆ ಸೇರಿದಂತೆ ವಿವಿಧ ಜಾನಪದ ಕಲಾತಂಡಗಳು ರಥೋತ್ಸವಕ್ಕೆ ಮೆರುಗು ನೀಡಿದವು. ಒಂದು ಚಿಕ್ಕ ತೇರು ಮತ್ತೊಂದು ದೊಡ್ಡ ತೇರು ಒಟ್ಟಿಗೆ ಸಾಗುವುದು ಈ ರಥೋತ್ಸವದ ವಿಶೇಷ. ಚಿಕ್ಕ ರಥ ಸುತ್ತೂರು ಗ್ರಾಮಧ ಪ್ರಮುಖ ಬೀದಿಗಳಲ್ಲಿ ಸಾಗಿ ನಂತರ ಸ್ವಸ್ಥಾನಕ್ಕೆ ಮರಳಿತು. ದೊಡ್ಡ ತೇರು ಕರ್ತೃ ಗದ್ದುಗೆಯ ಮುಂಭಾಗದ ರಸ್ತೆಯಲ್ಲಿ ಸಂಚರಿಸಿ ಅದು ಸಹ ಸ್ವಸ್ಥಾನ ಸೇರಿತು. ರಥೋ ತ್ಸವಕ್ಕೆ ಸುತ್ತಮುತ್ತಲಿನ ಗ್ರಾಮಸ್ಥರು ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಿಂದ ಮತ್ತು ಹೊರ 'ರಾಜ್ಯಗಳಿಂದ ಭಕ್ತರು ಆಗಮಿಸಿದ್ದರು.

ರಥಗಳಿಗೆ ಜನರು ಭಕ್ತಿ ಭಾವದೊಂದಿಗೆ ಹಣ್ಣು ಜವನವನ್ನು ಎಸೆದು ಭಾವಪರವಶರಾದರು. ಜಾತ್ರೆಗೆ ಆಗಮಿಸಿದ್ದ ಎಲ್ಲರಿಗೂ ಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು. ಹೊರ ಊರುಗಳಿಂದ ಆಗಮಿಸಿರುವ ಭಕ್ತರ ವಾಸ್ತವ್ಯಕ್ಕೂ ವ್ಯವಸ್ಥೆ ಕಲ್ಪಿಸಲಾಗಿತ್ತು. ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ನಂಜನಗೂಡು ಉಪವಿಭಾಗದ ಡಿವೈಎಸ್ಪಿ ರಘು ನೇತೃತ್ವದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು. ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಪೊಲೀಸರು ಆಯಾ ಸ್ಥಳಗಳಲ್ಲಿ ಕಟ್ಟೆಚ್ಚರ ವಹಿಸಿದ್ದರು. ಹಳೇ ಮೈಸೂರು ಪ್ರಾಂತ್ಯದ ಜನಾಕರ್ಷಕ ಸುತ್ತೂರು ಜಾತ್ರಾ ಮಹೋ ತ್ಸವ ಗುರುವಾರ (ಜ.15) ಅನಾವರಣಗೊಂಡಿದ್ದು, ಜ.20ರ ವರೆಗೆ ನಡೆಯಲಿದೆ. ಆರು ದಿನಗಳ ವೈಭವಪೂರ್ಣ ಜಾತ್ರಾ ಮಹೋತ್ಸವದ ಮೊದಲ ದಿನವೇ ಲಕ್ಷಕ್ಕೂ ಹೆಚ್ಚು ಮಂದಿ ಭೇಟಿ ನೀಡಿದ್ದರು. ಜಾತ್ರೆಯಲ್ಲಿ 5 ದಾಸೋಹ ಪ್ರಸಾದ ವಿತರಣಾ ಕೇಂದ್ರಗಳನ್ನು ತೆರೆದಿದ್ದು, ಗದ್ದುಗೆ ಸಮೀಪದಲ್ಲಿರುವ ಮಹಾದಾಸೋಹ ಪ್ರಸಾದ ವಿತರಣಾ ಕೇಂದ್ರದಲ್ಲಿ ಮಹಿಳೆಯರು, ಪುರುಷರಿಗೆ ಹಾಗೂ ಸ್ವಯಂ ಸೇವಕರಿಗೆ ಪ್ರತ್ಯೇಕವಾಗಿ ಪ್ರಸಾದ ವಿತರಿಸಲಾಗುತ್ತಿದೆ.

ಉತ್ಸವ ನೆರವೇರಿದ್ದು, ಇಂದು ರಥೋತ್ಸವ ಜರುಗಿತು. ಜ.18 ರಂದು ಶ್ರೀ ಮಹ ದೇಶ್ವರ ಕೊಂಡೋತ್ಸವ ಮತ್ತು ಲಕ್ಷದೀಪೋತ್ಸವ, ಜ. 19 ರಂದು ತೆಪ್ಪೋತ್ಸವ ಹಾಗೂ 20 ರಂದು ಅನ್ನಬ್ರಹ್ಮೋತ್ಸವ ನಡೆಯಲಿವೆ. ಜೊತೆಗ ಧಾರ್ಮಿಕ, ಸಾಂಸ್ಕೃತಿಕ, ಶೈಕ್ಷಣಿಕ ಹಾಗೂ ಕ್ರೀಡಾ ಚಟುವಟಿಕೆಗಳು ಜರುಗಲಿವೆ.

# ಹ್ಯಾಬಿಲ್ಡ್ ಜಾಗತಿಕ ಯೋಗ ವೀಕ್ಷಕರಲ್ಲಿ 8 ನೇ ವಿಶ್ವ ದಾಖಲೆಯನ್ನು ಸಾಧಿಸಿದೆ, ಶಾಲಾ ಉಪಕ್ರಮದ ನಿರ್ಮಾಣವನ್ನು ಘೋಷಣೆ

ಬೆಂಗಳೂರು : ಈ ಉಪಕ್ರಮವು ಜಾಗತಿಕ ಭಾಗವಹಿಸುವವರನ್ನು ಒಂದು ದಿನದ ಆನ್‌ಲೈನ್ ಸೆಷನ್‌ಗಳಲ್ಲಿ ಒಟ್ಟುಗೂಡಿಸಿತು, ಇದು ಒಂದೇ ದಿನದಲ್ಲಿ ದಾಖಲಾದ ಅತಿ ಹೆಚ್ಚು ಯೋಗ ವೀಕ್ಷಕರನ್ನು ಗುರುತಿಸುತ್ತದೆ.

ಭಾರತದ ಮೊದಲ ಅಭ್ಯಾಸ ನಿರ್ವಾಣ




ವೇದಿಕೆಯಾದ ಹ್ಯಾಬಿಲ್ಡ್, ವಿಶ್ವ ದಾಖಲೆಗಳ ಒಕ್ಕೂಟದಿಂದ ಮೌಲ್ಯೀಕರಿಸಲ್ಪಟ್ಟಂತೆ, ಒಂದು ದಿನದಲ್ಲಿ ಅತಿ ಹೆಚ್ಚು ಯೋಗ ವೀಕ್ಷಕರಿಗೆ ಅಧಿಕೃತವಾಗಿ ವಿಶ್ವ ದಾಖಲೆಯನ್ನು ಮಾಡಿದೆ. ದಿನವಿಡೀ ನಡೆಸಿದ ಆರು ಲೈವ್ ಆನ್‌ಲೈನ್ ಯೋಗ ಸೆಷನ್‌ಗಳ ಮೂಲಕ ಈ ದಾಖಲೆಯನ್ನು ಸಾಧಿಸಲಾಗಿದೆ, ಎಲ್ಲಾ ಸೆಷನ್‌ಗಳಲ್ಲಿ ಒಟ್ಟು ಭಾಗವಹಿಸುವಿಕೆಯನ್ನು ಎಣಿಸಲಾಗಿದೆ. ಈ ಉಪಕ್ರಮವು ಜಾಗತಿಕ ಭಾಗವಹಿಸುವಿಕೆಗೆ ಸಾಕ್ಷಿಯಾಯಿತು, 9.3 ಲಕ್ಷ ಜನರು ಸೇರಿದ್ದಾರೆ. ಮೈಲಿಗಲ್ಲನ್ನು ಗುರುತಿಸುವ ಮೂಲಕ, ವೇದಿಕೆಯು ಶಾಲೆಯ ನಿರ್ಮಾಣವನ್ನು ಸಹ ಘೋಷಿಸಿತು, ಪ್ರತಿಯೊಬ್ಬ ಹೊಸ ಭಾಗವಹಿಸುವವರ ಉಪಸ್ಥಿತಿಯು ಶಾಲೆಯ ನಿರ್ಮಾಣಕ್ಕೆ ಒಂದು ಇಟ್ಟಿಗೆಯನ್ನು ಕೊಡುಗೆ ನೀಡುತ್ತದೆ.

ಹ್ಯಾಬಿಲ್ಡ್‌ನ ಹರ್ ಘರ್ ಯೋಗ ಉಪಕ್ರಮದ ಭಾಗವಾಗಿ ಈ ದಾಖಲೆಯನ್ನು ರಚಿಸಲಾಗಿದೆ. ಈ ವರ್ಷದ ಥೀಮ್ ಹೊಸ ಆರಂಭಕ್ಕಾಗಿ ಭರವಸೆಗಳ ಸುತ್ತ ವಿನ್ಯಾಸಗೊಳಿಸಲಾಗಿದೆ. ಪ್ರತಿ ಹೊಸ ವರ್ಷವು ಉತ್ತಮ ಆರೋಗ್ಯ, ಹೆಚ್ಚು ಚಲನೆ, ಶಾಂತ ಮನಸ್ಸುಗಳಂತಹ ಭರವಸೆಗಳೊಂದಿಗೆ ಪ್ರಾರಂಭವಾಗುತ್ತದೆ. ಆದರೆ ಜನವರಿ ಮಧ್ಯದ ವೇಳೆಗೆ, ಹೆಚ್ಚಿನ ನಿರ್ಣಯಗಳು ಮಸುಕಾಗುತ್ತವೆ. ವಾಸ್ತವವಾಗಿ, ಜನವರಿಯ ಎರಡನೇ ಶುಕ್ರವಾರವನ್ನು ಸಾಮಾನ್ಯವಾಗಿ ಕ್ವಿಟರ್ಸ್ ಡೇ ಎಂದು ಕರೆಯಲಾಗುತ್ತದೆ, ಆಗ ಪ್ರೇರಣೆ ಕಡಿಮೆಯಾಗುತ್ತದೆ ಮತ್ತು ಜನರು ಬಿಟ್ಟುಕೊಡುವ ಸಾಧ್ಯತೆ ಹೆಚ್ಚು. ಈ ವಿಶ್ವ ದಾಖಲೆಯು ಹ್ಯಾಬಿಲ್ಡ್ ಈ ಕ್ಷಣಕ್ಕೆ ನೀಡಿದ ಪ್ರತಿಕ್ರಿಯೆಯಾಗಿದೆ.

ಜನರನ್ನು ಹೆಚ್ಚಿನದನ್ನು ಮಾಡಲು ಒತ್ತಾಯಿಸುವ ಬದಲು, ಈ ಉಪಕ್ರಮವು ಅವರನ್ನು ಮೃದುವಾಗಿ ಪ್ರಾರಂಭಿಸಲು ಆಹ್ವಾನಿಸಿತು. ಪರಿಪೂರ್ಣತೆಯನ್ನು ಬೆನ್ನಟ್ಟುವ ಬದಲು, ಅದು ಕಾಣಿಸಿಕೊಳ್ಳುವುದನ್ನು ಆಚರಿಸಿತು. ಮತ್ತು ತ್ಯಜಿಸುವುದನ್ನು ವೈಫಲ್ಯವೆಂದು ರೂಪಿಸುವ ಬದಲು, ಮತ್ತೆ ಪ್ರಾರಂಭಿಸುವುದನ್ನು ಯಾವಾಗಲೂ ಅನುಮತಿಸಲಾಗಿದೆ ಎಂದು ಅದು ಜನರಿಗೆ ನೆನಪಿಸಿತು. ಈ ದಿನವು ನವೀಕರಣ, ಆತ್ಮ ನಂಬಿಕೆ ಮತ್ತು ಪ್ರಜ್ಞಾಪೂರ್ವಕ ಕ್ರಿಯೆಯನ್ನು ಸಂಕೇತಿಸುತ್ತದೆ, ಇದು ಸಾಮೂಹಿಕವಾಗಿ ಪ್ರಾರಂಭಿಸಲು ಅಥವಾ ಮತ್ತೆ ಪ್ರಾರಂಭಿಸಲು ಅರ್ಥಪೂರ್ಣ ದಿನವಾಗಿದೆ.

45 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ಮಹಿಳೆಯರು ಭಾಗವಹಿಸುವಿಕೆಯ ಮಹತ್ವದ ಭಾಗವನ್ನು ರೂಪಿಸಿದರು, ಹ್ಯಾಬಿಲ್ಡ್ ಅವರ ದೈನಂದಿನ ಅಭ್ಯಾಸವನ್ನು ರೂಪಿಸುತ್ತಿರುವ ಸಮುದಾಯವನ್ನು ಪ್ರತಿಬಿಂಬಿಸುತ್ತದೆ. ನಿಶ್ಚಿತಾರ್ಥದ ಪ್ರಮಾಣವು ಹಂಚಿಕೆಯ ದಿನಚರಿ ಮತ್ತು ಸೌಮ್ಯವಾದ ಹೊಣೆಗಾರಿಕೆ ಅಭ್ಯಾಸಗಳು ಹೇಗೆ ಬೇರೂರಲು ಸಹಾಯ ಮಾಡುತ್ತದೆ ಎಂಬುದನ್ನು ಎತ್ತಿ ತೋರಿಸಿತು.

ಈ ಮೈಲಿಗಲ್ಲಿನ ಕುರಿತು ಪ್ರತಿಕ್ರಿಯಿಸಿದ ಹ್ಯಾಬಿಲ್ಡ್‌ನ ಸಹ-ಸಂಸ್ಥಾಪಕ ಮತ್ತು ಯೋಗ ಶಿಕ್ಷಕ ಸೌರಭ್ ಬೋತ್ರಾ, "ಈ ದಿನವು ದಾಖಲೆಯ ಬಗ್ಗೆ ಕಡಿಮೆ ಮತ್ತು ಜನರು ತಮ್ಮ ದಾರಿಯನ್ನು ಕಂಡುಕೊಳ್ಳುವ ಬಗ್ಗೆ ಹೆಚ್ಚು ಭಾವಿಸಿದರು. ಭಾಗವಹಿಸುವಿಕೆಯು ಸ್ವಾಗತಾರ್ಹವೆಂದು ಭಾವಿಸಿದಾಗ, ಸ್ಥಿರತೆ ಅನುಸರಿಸುತ್ತದೆ. ಆ ಜಾಗವನ್ನು ಹಿಡಿದಿಟ್ಟುಕೊಳ್ಳಲು ಹರ್ ಘರ್ ಯೋಗವನ್ನು ರಚಿಸಲಾಗಿದೆ ಮತ್ತು ಪ್ರತಿಕ್ರಿಯೆಯು ಅದು ಎಷ್ಟು ಶಕ್ತಿಯುತವಾಗಿದೆ ಎಂಬುದನ್ನು ತೋರಿಸಿದೆ. ನಮ್ಮ ಸಮುದಾಯವು ಯಾವಾಗಲೂ ದಾಸ್ಯದಲ್ಲಿ ನಂಬಿಕೆ ಇಟ್ಟಿದೆ. ಆದ್ದರಿಂದ ನಾವು ನನ್ನ ಪೂರ್ವಜರ ಗ್ರಾಮದಲ್ಲಿ ಶಾಲೆಯ ನಿರ್ಮಾಣವನ್ನು ಘೋಷಿಸಿದ್ದೇವೆ. ನಮ್ಮ ಸಮುದಾಯದ ಮೂಲಕ ನಮ್ಮೊಂದಿಗೆ ಸೇರುವ ಪ್ರತಿಯೊಬ್ಬ ವ್ಯಕ್ತಿಗೂ, ನಾವು ಈ ಶಾಲೆಯ ನಿರ್ಮಾಣಕ್ಕಾಗಿ ಇಟ್ಟಿಗೆಯನ್ನು ದಾನ ಮಾಡುತ್ತಿದ್ದೇವೆ."

ಹ್ಯಾಬಿಲ್ಡ್‌ಗಾಗಿ, ಈ ದಿನವು ದೈನಂದಿನ ಅಭ್ಯಾಸದ ಮೇಲೆ ಮತ್ತು ಸಮಾಜದ ಕಡೆಗೆ ಹೆಚ್ಚಿನ ಒಳಿತಿನ ಮೇಲೆ ಅದರ ಗಮನದ ಮುಂದುವರಿಕೆಯನ್ನು ಸೂಚಿಸುತ್ತದೆ. ಜನರು ಈ ಲಯವನ್ನು ದೈನಂದಿನ ಜೀವನದಲ್ಲಿ, ಒಂದೊಂದೇ ಅಧಿವೇಶನದಲ್ಲಿ ಸಾಗಿಸುವಾಗ ಅವರನ್ನು ಬೆಂಬಲಿಸುವುದರ ಮೇಲೆ ಮುಂದಿನ ಕೆಲಸವು ಕೇಂದ್ರೀಕೃತವಾಗಿದೆ.

# ಬೀದರ್ ಇಂದು ಕರ್ನಾಟಕದಲ್ಲಿ ಉಳಿದಿದ್ದರೆ, ಭೀಮಣ್ಣ ಖಂಡ್ರೆ ಅವರು ಏಕೀಕರಣಕ್ಕಾಗಿ ಹೋರಾಟ ಮಾಡಿದ್ದರ ಫಲ

**ಬೀದರ್ :** ಹಿರಿಯ ರಾಜಕಾರಣಿ ಭೀಮಣ್ಣ ಖಂಡ್ರೆ ಅವರು ಸಮಾಜಮುಖಿಯಾದ ಸಾರ್ಥಕ ಜೀವನವನ್ನು ನಡೆಸಿದ್ದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು .

ಮಾಜಿ ಸಚಿವರೂ, ಶತಾಯುಷಿ ಆಗಿದ್ದ ಹಿರಿಯ ಕಾಂಗ್ರೆಸ್ ಧುರೀಣ ಭೀಮಣ್ಣ ಖಂಡ್ರೆ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದ ನಂತರ ಮಾತನಾಡಿದರು.

ಭೀಮಣ್ಣ ಖಂಡ್ರೆ ಒಬ್ಬ ಹೋರಾಟಗಾರರು. ಅನ್ಯಾಯದ ವಿರುದ್ಧ ಸದಾ ಹೋರಾಡಿದವರು. ಸ್ವಾತಂತ್ರ್ಯ ಚಳುವಳಿಯಿಂದ ಪ್ರೇರಿತರಾಗಿ, ಮಹಾತ್ಮಾ ಗಾಂಧಿಯವರಿಂದ ಪ್ರಭಾವಿತರಾಗಿ ಅನೇಕ ಹೋರಾಟಗಳಲ್ಲಿ ಪಾಲ್ಗೊಂಡವರು ಎಂದರು.

**ನ್ಯಾಯ ಪರವಾದ ಧ್ವನಿ**

ಹೈದರಾಬಾದ್ ಕರ್ನಾಟಕ ವಿಮೋಚನಾ ಚಳುವಳಿ , ಏಕೀಕರಣದಲ್ಲಿ ಭಾಗವಹಿಸಿದ್ದರು. ಜನಪರವಾದ ಹೋರಾಟಗಾರ ಎಂದೇ ಗುರುತಿಸಿಕೊಂಡಿದ್ದ ಅವರು ಅನ್ಯಾಯವಾದ ಕಡೆಗೆಲ್ಲಾ ತೆರಳಿ ನ್ಯಾಯದ ಪರವಾಗಿ ಧ್ವನಿ ಎತ್ತಿದವರು ಎಂದರು.

ಬೀದರ್ ಇಂದು ಕರ್ನಾಟಕದಲ್ಲಿ ಉಳಿದಿದ್ದರೆ, ಭೀಮಣ್ಣ ಖಂಡ್ರೆ ಅವರು ಏಕೀಕರಣಕ್ಕಾಗಿ ಹೋರಾಟ ಮಾಡಿದ್ದರ ಫಲ ಎಂದ ಅವರು ಭೀಮಣ್ಣ ಖಂಡ್ರೆ ಕೇವಲ ರಾಜಕಾರಣಿಯಾಗಿರದೇ ಸಮಾಜಸೇವಕರೂ ಆಗಿದ್ದರು. ದೀರ್ಘ ಕಾಲ ಸಮಾಜ ಸೇವೆಯಲ್ಲಿ ತೊಡಗಿದ್ದರು. ಎಲ್ಲ ವರ್ಗದ ಜನರನ್ನು ಪ್ರತಿನಿಧಿಸುವ ಛಾತಿ ಅವರಲ್ಲಿತ್ತು ಎಂದರು.

**ಯುವಜನಾಂಗಕ್ಕೆ ದಾರಿದೀಪ**

ಅವರ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದನ್ನು ಸ್ಮರಿಸಿದ ಮುಖ್ಯಮಂತ್ರಿಗಳು ಖಂಡ್ರೆ ಅವರು ನಮಗೆ ಸ್ಫೂರ್ತಿಯಾಗಿದ್ದರು. ಅವರ ಬದುಕಿನ ರೀತಿ ಯುವಕರಿಗೆ ದಾರಿದೀಪ ಎಂದರು.

ಭೀಮಣ್ಣ ಖಂಡ್ರೆ ಅವರ ಸಾವಿನಿಂದ ಉಂಟಾಗಿರುವ ದುಃಖವನ್ನು ಭರಿಸುವ ಶಕ್ತಿಯನ್ನು ಭಗವಂತ ಕುಟುಂಬದವರಿಗೆ ಹಾಗೂ ಅಭಿಮಾನಿಗಳಿಗೆ ನೀಡಲಿ ಎಂದರು.

# ಫೆಬ್ರವರಿ 13, 14 ಮತ್ತು 15ರಂದು ಅದ್ದೂರಿ ಹಂಪಿ ಉತ್ಸವ

**ವಿಜಯನಗರ:** ಫೆಬ್ರವರಿ 13, 14 ಮತ್ತು 15ರಂದು ಮೂರು ದಿನಗಳ ಕಾಲ ಹಂಪಿ ಉತ್ಸವ ವನ್ನು ಅದ್ದೂರಿಯಾಗಿ ಆಚರಿಸ'ಲಾಗುತ್ತದೆ ಎಂದು ಸಚಿವ ಜಮೀರ್ ಅಹ್ಮದ್ ಖಾನ್ ಅವರು ತಿಳಿಸಿದ್ದಾರೆ. ಹಂಪಿ ಉತ್ಸವಕ್ಕೆ ದಿನಾಂಕ ನಿಗದಿ ಹಿನ್ನೆಲೆ ಜಿಲ್ಲಾಡಳಿತದಿಂದ ಶುಕ್ರವಾರ ಹಂಪಿ ಉತ್ಸವ ಪೂರ್ವಭಾವಿ ಸಭೆ ನಡೆಯಿತು. ಹೊಸಪೇಟೆ ಅಮರಾವತಿ ಪ್ರವಾಸಿ ಮಂದಿರದಲ್ಲಿ ಹಂಪಿ ಉತ್ಸವ -2026ರ ಲಾಂಛನ ಬಿಡುಗಡೆ ಮಾಡಿ ಮಾತನಾಡಿದ ಕರ್ನಾಟಕ ರಾಜ್ಯ ಸರ್ಕಾರದ ವಕ್ಫ್ ಹಾಗೂ ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಅವರು, ಫೆಬ್ರವರಿ 13, 14 ಮತ್ತು 15ರಂದು ಮೂರು ದಿನಗಳ ಕಾಲ ಹಂಪಿ ಉತ್ಸವವನ್ನು ಅದ್ದೂರಿಯಾಗಿ ಆಚರಿಸ ಲಾಗುತ್ತದೆ.

ಹಂಪಿ ಉತ್ಸವ ನಾಡ ಹಬ್ಬವಿದ್ದಂತೆ ವಿಜೃಂಭಣೆಯ ವಿನೂತನ ಉತ್ಸವಾಗಲಿ. ಉತ್ಸವದ ಸಿದ್ಧತೆಗಳ ತಯಾರಿ ನಡೆಸಲು ಅಧಿಕಾರಿಗಳ ಜೊತೆ ಸಭೆ ನಡೆಸಲಾಗಿದೆ ಎಂದು ತಿಳಿಸಿದರು. ಆದರೆ, ಕೋವಿಡ್ ಕಾರಣದಿಂದ ವಿಳಂಬವಾಗಿ ಕಳೆದ ವರ್ಷ ಗಳಿಂದ ಫೆಬ್ರವರಿಯಲ್ಲಿ ನಡೆಸ ಲಾಗುತ್ತಿದೆ.

ಈ ಬಾರಿಯೂ ಫೆಬ್ರವರಿ 13ರಿಂದಲೇ ಆರಂಭಿ ಸಲು ತೀರ್ಮಾನ ಮಾಡಿದೆ. ಉತ್ಸವದ ಯಶಸ್ವಿ ಆಚ ರಣೆಗಾಗಿ




ಈ ಬಾರಿ 22 ಕೋಟಿ ಅನುದಾನ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ನೀಡಲಾಗಿದೆ. ಕಳೆದ ವರ್ಷ 16 ಕೋಟಿ ಅನುದಾನ ನೀಡಲಾಗಿತ್ತು. ರಾಷ್ಟ್ರ ಮತ್ತು ರಾಜ್ಯ ಮಟ್ಟದ ಖ್ಯಾತ ಕಲಾವಿದರನ್ನು ಆಹ್ವಾನಿಸುವ ಕುರಿತು ಅಧಿಕಾರಿಗಳ ಜೊತೆ ಮಾತುಕತೆ ನಡೆದಿದೆ. ಅಧಿಕಾರಿ ಗಳು ಹಾಗೂ ಜನಪ್ರತಿನಿಧಿ ಗಳೊಂದಿಗೆ ಮಹತ್ವದ ಸಭೆ ನಡೆಸಿ ಕಾರ್ಯಕ್ರಮಗಳ ಪಟ್ಟಿ ಅಂತಿಮ ಮಾಡಲಾಗುವುದು. ಹಂಪಿ ಉತ್ಸವದಲ್ಲಿ ಪ್ರತಿ ವರ್ಷದಂತೆ ಈ ಉತ್ಸವದಲ್ಲಿ ಸ್ಥಳೀಯ ಕಲಾವಿ ದರಿಗೂ ಹೆಚ್ಚಿನ ಆದ್ಯತೆ ನೀಡಲಾಗುವುದು. ಕಳೆದ ಬಾರಿ ಅಶ್ವಿನಿ ಪುನೀತ್ ರಾಜ್ ಕುಮಾರ್ ಅವರನ್ನು ಆಹ್ವಾನಿಸಿದ್ದೆವು. ಆದರೆ, ಅವರಿಗೆ ಬರುವ ಸಮಯದಲ್ಲಿ ವಿಮಾನ ಮಿಸ್ ಆಗಿತ್ತು, ಈ ಬಾರಿ ಕೂಡ ಅವರನ್ನು ಆಹ್ವಾನಿ ಸುತ್ತಿದ್ದೇವೆ. ಸಾರ್ವ ಜನಿಕರಿಗೆ ಯಾವುದೇ ತೊಂದರೆಯಾಗದಂತೆ ಉತ್ಸವ ಆಗಬೇಕು. ಸಾರಿಗೆ ಹಾಗೂ ಮೂಲ ಸೌಕರ್ಯಗಳ ಬಗ್ಗೆ ವಿಶೇಷ ಗಮನ ಹರಿಸಿ ಎಂದ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು. ಕಳೆದ ಬಾರಿ ಹಂಪಿ ಉತ್ಸವದ ಬಗ್ಗೆ ಪ್ರಚಾರವಾಗಿ ಇರಲಿಲ್ಲ. ಈ ಬಾರಿ ಪ್ರಚಾರ ಮಾಡಲು ಹೇಳಲಾಗಿದೆ. ಈ ಬಾರಿ ಒಟ್ಟು 5 ವೇದಿಕೆ ಮಾಡುತ್ತೇವೆ. ಅದರಲ್ಲಿ ಒಂದು ಮುಖ್ಯ ವೇದಿಕೆ ಉಳಿದ ನಾಲ್ಕು ವೇದಿಕೆಗಳಿವೆ. ಅದಕ್ಕೆ ಪ್ರಚಾರ ಕೊಡಬೇಕಾಗಿದೆ. ಇಂತಿಂಥ ಕಡೆ ಈ ತರಹದ ಕಾರ್ಯಕ್ರಮಗಳು ಇದೆ ಎಂದು ಸಾರ್ವಜನಿಕರಿಗೆ ಮಾಹಿತಿ ನೀಡಬೇಕು ಎಂದು ತಿಳಿಸಿದರು.

# ಮಗ, ಮಗಳು, ಅಳಿಯನ ಬಳಿಕ ಕೊರಗಜ್ಜನ ಆದಿಸ್ಥಳ ಕುತ್ತಾರಿಗೆ ಬಾಲಿವುಡ್ ಸ್ಟಾರ್ ಸುನೀಲ್ ಶೆಟ್ಟಿ ಭೇಟಿ

**ಉಳ್ಳಾಲ (ದಕ್ಷಿಣ ಕನ್ನಡ):** ಕರಾವಳಿಯ ಕಾರಣಿಕ ಕ್ಷೇತ್ರ ಕೊರಗಜ್ಜನ ಆದಿಸ್ಥಳ ಕುತ್ತಾರಿಗೆ ಬಾಲಿವುಡ್ ಸೂಪರ್ ಸ್ಟಾರ್ ಸುನೀಲ್ ಶೆಟ್ಟಿ ಶುಕ್ರವಾರ ಭೇಟಿ ನೀಡಿ ಪ್ರಾರ್ಥನೆ ಸಲ್ಲಿಸಿದ್ದಾರೆ. ಪುತ್ರ ಅಹಾನ್ ಶೆಟ್ಟಿ ನಟಿಸಿರುವಂತಹ ಚೊಚ್ಚಲ ಚಿತ್ರ 'ಬಾರ್ಡರ್ 2' ಬಿಡುಗಡೆ ಹೊಸ್ತಿಲಿನಲ್ಲಿದ್ದು, ಸಿನಿಮಾ ಯಶಸ್ಸಿಗೆ ಕೊರಗಜ್ಜನಿಗೆ ಪ್ರಾರ್ಥನೆ ಸಲ್ಲಿಸಿದ್ದಾರೆ.

ಕೊರಗಜ್ಜನಿಗೆ ಪ್ರಾರ್ಥನೆ ಸಲ್ಲಿಸಿದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಸುನೀಲ್ ಶೆಟ್ಟಿ, ಮಂಗಳೂರಿಗೆ ಯಾರೇ ಬಂದರೂ ಕೊರಗಜ್ಜನ ಕ್ಷೇತ್ರಕ್ಕೆ ಭೇಟಿ ಕೊಟ್ಟೇ ಕೊಡ್ತಾರೆ. ಯಾರೇ ಬಂದರೂ ಕೊರಗಜ್ಜ ಅವರ ಬಯಕೆಗಳನ್ನು ಈಡೇರಿಸುತ್ತಾರೆ. ನನ್ನ ಮಗ, ಮಗಳು, ಅಳಿಯ ಎಲ್ಲರೂ ಇಲ್ಲಿಗೆ ಈಗಾಗಲೇ ಬಂದಿದ್ದಾರೆ. ನನಗಿಲ್ಲಿ ಬರಲು ಬಹಳ ಆಸೆ ಇತ್ತು. ಅದೀಗ ನೆರವೇರಿದೆ ಎಂದರು.

ಪುತ್ರ ಅಹಾನ್ ಶೆಟ್ಟಿ ನಟನೆಯ ಬಹುನಿರೀಕ್ಷಿತ ಬಾರ್ಡರ್ 2 ಚಿತ್ರ ಬಿಡುಗಡೆಯಾಗುತ್ತಿದೆ. ಚಿತ್ರದ ಯಶಸ್ಸಿಗಾಗಿ ದೈವದ ಆಶೀರ್ವಾದ ಪಡೆಯಲು ಇಲ್ಲಿಗೆ ಬಂದಿದ್ದೇನೆ ಎಂದು ಇದೇ ವೇಳೆ ತಿಳಿಸಿದರು. ತುಳು ಭಾಷೆ, ಸಂಸ್ಕೃತಿಯನ್ನು ಜಗತ್ತಿಗೆ ಪಸರಿಸುವ ಉದ್ದೇಶ'ದಿಂದ ಈಗಾಗಲೇ "ಜೈ" ಶೀರ್ಷಿಕೆಯ ತುಳು ಸಿನಿಮಾದಲ್ಲಿ ನಟಿಸಿದ್ದೇನೆ. ತುಳು, ಕನ್ನಡದಲ್ಲಿ ಸದ್ಯಕ್ಕೆ ಬೇರೆ ಯೋಜನೆಗಳಿಲ್ಲ ಎಂದು ಅವರು ಹೇಳಿದರು.

# ಲಕ್ಕುಂಡಿಯಲ್ಲಿ ಉತ್ಖನನ – ಪ್ರಾಚೀನ ಕಾಲದ ಶಿಲಾಕೃತಿ ಪತ್ತೆ

**ಗದಗ:** ಎರಡನೇ ದಿನವೂ ಲಕ್ಕುಂಡಿಯ (Lakkundi) ಶ್ರೀ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಅಂಗಳದಲ್ಲಿ ಉತ್ಖನನ ( Excavation) ನಡೆಯುತ್ತಿದ್ದು ಪ್ರಾಚೀನ ಕಾಲದ ಒಂದು ಶಿಲಾಕೃತಿ ಪತ್ತೆಯಾಗಿದೆ.




ಒಂದೂವರೆ ಅಡಿ ತೆಗೆಯುತ್ತಿದ್ದಂತೆ ಈ ಶಿಲಾಕೃತಿ ಸಿಕ್ಕಿದೆ. ಪುರಾತತ್ವ ಇಲಾಖೆ ತಜ್ಞರು ಶಿಲಾಕೃತಿಯನ್ನು ಪರಿಶೀಲಿಸುತ್ತಿದ್ದು ಶೀಘ್ರವೇ ಎಷ್ಟು ವರ್ಷ ಹಿಂದಿನದ್ದು ಎನ್ನುವುದು ತಿಳಿಯಲಿದೆ.

10 ಮೀಟರ್ ಸುತ್ತಳತೆ ಜಾಗದಲ್ಲಿ ಉತ್ಖನನ ನಡೆಸಲು ಸಿದ್ಧತೆ ನಡೆದಿದೆ. ಉತ್ಖನನ ಕಾರ್ಯ ಮುಗಿಯುವವರೆಗೂ ಸಾರ್ವಜನಿಕ ಪ್ರವೇಶ ನಿರ್ಬಂಧಿಸಿ ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಜಿಲ್ಲಾಧಿಕಾರಿ ಸಿ.ಎನ್ ಶ್ರೀಧರ್ ಆದೇಶ ಪ್ರಕಟಿಸಿದ್ದಾರೆ.

ಪುರಾತತ್ವ ಇಲಾಖೆಯ ಶಿಫಾರಸ್ಸಿನ ಮೇರೆಗೆ ಉತ್ಖನನ ಜಾಗವನ್ನ ಸೂಕ್ಷ್ಮ ಪ್ರದೇಶ ಎಂದು ಘೋಷಣೆ ಮಾಡಲಾಗಿದೆ. ಅಷ್ಟೇ ಅಲ್ಲದೇ ಉತ್ಖನನ ಕೆಲಸಕ್ಕೆ ತೊಂದರೆಯಾಗದೇ ಇರಲು ಸಾರ್ವಜನಿಕರ ಫೋಟೋ, ವೀಡಿಯೋಗ್ರಾಫಿಗೆ ನಿಷೇಧ ಹೇರಲಾಗಿದೆ. ಅಗ್ರಹಾರಾಗಿದ್ದ ಲಕ್ಕುಂಡಿ


ಮೊದಲು ಇಲ್ಲಿ ಲಕ್ಕುಂಡಿ ಗ್ರಾಮವಿರಲಿಲ್ಲ. ಲಕ್ಕುಂಡಿ ಗ್ರಾಮ ಸಪ್ತ ಗ್ರಾಮಗಳ ಅಗ್ರಹಾರವಾಗಿತ್ತು. ಈ ಅಗ್ರಹಾರ ಸೊಕಮನಕಟ್ಟಿ, ತಂಗಾಬೆಂಚಿ, ಜವಳಬೆಂಚಿ, ನರಸಿಪುರ, ಮೊಟಬಸಪ್ಪ, ಬೂದಿಬಸಪ್ಪ, ಲಕ್ಕುಂಡಿ ಗ್ರಾಮಗಳನ್ನು ಒಳಗೊಂಡಿತ್ತು.

ವಿಜಯನಗರ ಅರಸರ ಆಳಿಕ್ವೆ ಅಧಿಪತ್ಯದ ನಂತರ ಏಳು ಗ್ರಾಮದ ಜನರು ಲಕ್ಕುಂಡಿಗೆ ಬಂದು ನೆಲೆಸಿದರು. ಇಲ್ಲಿ ನಾಣ್ಯಗಳನ್ನು ತಯಾರಿಸುವ ಠಂಕಸಾಲೆಗಳಿದ್ದವು ಎಂಬ ಇತಿಹಾಸವಿದೆ. ಇತಿಹಾಸಕ್ಕೆ ಸಂಬಂಧಿಸಿದ ಪುರಾತನ ಕಾಲದ ಕಲ್ಲಿನ ವಿಗ್ರಹಗಳು, ಅವಶೇಷಗಳು, ಪುರಾವೆಗಳು ಲಕ್ಕುಂಡಿಯ ಅಲ್ಲಲ್ಲಿ ಸಿಗುತ್ತಿವೆ.

ಅಷ್ಟೇ ಅಲ್ಲಾ ಬೆಳ್ಳಿ, ಬಂಗಾರ, ಮುತ್ತು, ರತ್ನ, ಹವಳಗಳ ತುಣುಕುಗಳು ಅನೇಕ ವರ್ಷಗಳಿಂದ ಸಿಗುತ್ತಲೇ ಇವೆ ಅಂತಿದ್ದಾರೆ ಸ್ಥಳಿಯರು.

# ಗ್ರೀನ್‌ಲ್ಯಾಂಡ್ ಮೇಲೆ ಅಮೆರಿಕಾ ನಿಯಂತ್ರಣ: ಬೆಂಬಲ ನೀಡದ ರಾಷ್ಟ್ರಗಳಿಗೆ ಹೆಚ್ಚಿನ ತೆರಿಗೆ; ಟ್ರಂಪ್ ಎಚ್ಚರಿಕೆ

**ಕೋಪನ್‌ಹೇಗನ್:** ಗ್ರೀನ್‌ಲ್ಯಾಂಡ್ ಮೇಲೆ ಅಮೆರಿಕದ ನಿಯಂತ್ರಣಕ್ಕೆ ಬೆಂಬಲ ನೀಡದ ದೇಶಗಳ ಮೇಲೆ ಹೆಚ್ಚಿನ ತೆರಿಗೆ (ಟ್ಯಾರಿಫ್) ವಿಧಿಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಶುಕ್ರವಾರ



ಎಚ್ಚರಿಸಿದ್ದಾರೆ.

ಡೆನ್ಮಾರ್ಕ್ ರಾಜಧಾನಿ ಕೋಪನ್‌ಹೇಗನ್‌ನಲ್ಲಿ ಉದ್ವಿಗ್ನತೆ ಕಡಿಮೆ ಮಾಡಲು ಅಮೆರಿಕಾದ ಸಂಸತ್ ಸದಸ್ಯರ ದ್ವಿಪಕ್ಷೀಯ ನಿಯೋಗ ಭೇಟಿ ನೀಡಿದ್ದ ಸಮಯದಲ್ಲೇ ಟ್ರಂಪ್ ಅವರು ಈ ಹೇಳಿಕೆಯನ್ನು ನೀಡಿದ್ದಾರೆ.

ಶ್ವೇತಭವನದಲ್ಲಿ ನಡೆದ ಕಾರ್ಯಕ್ರಮ ವೊಂದರಲ್ಲಿ ಔಷಧಗಳ ಮೇಲೆ ಸುಂಕ ವಿಧಿಸುವ ಮೂಲಕ ಯುರೋಪಿಯನ್ ಮಿತ್ರರಾಷ್ಟ್ರಗಳಿಗೆ ಹೇಗೆ ಬೆದರಿಕೆ ಹಾಕಿದ್ದೇನೆ ಎಂಬುದನ್ನು ವಿವರಿಸಿರುವ ಟ್ರಂಪ್ ಅವರು, "ನಾನು ಗ್ರೀನ್‌ಲ್ಯಾಂಡ್‌ಗೂ ಸಹ ಹಾಗೆ ಮಾಡಬಹುದು ಎಂದು ಹೇಳಿದ್ದಾರೆ.

ಗ್ರೀನ್‌ಲ್ಯಾಂಡ್ ಮೇಲೆ ಅಮೆರಿಕದ ನಿಯಂತ್ರಣಕ್ಕೆ ಬೆಂಬಲ ನೀಡದ ದೇಶಗಳ ಮೇಲೆ ಹೆಚ್ಚಿನ ತೆರಿಗೆ ವಿಧಿಸಬಹುದು. ಏಕೆಂದರೆ ನಮಗೆ ರಾಷ್ಟ್ರೀಯ ಭದ್ರತೆಗಾಗಿ ಗ್ರೀನ್‌ಲ್ಯಾಂಡ್ ಅಗತ್ಯವಿದೆ. ಆದ್ದರಿಂದ ಹೆಚ್ಚಿನ ತೆರಿಗೆ ವಿಧಿಸುವ ಕ್ರಮ ಕೈಗೊಳ್ಳಬಹುದು ಎಂದು ತಿಳಿಸಿದ್ದಾರೆ.

ಈ ವಾರದ ಆರಂಭದಲ್ಲಿ, ಡೆನ್ಮಾರ್ಕ್ ಮತ್ತು ಗ್ರೀನ್‌ಲ್ಯಾಂಡ್‌ನ ವಿದೇಶಾಂಗ ಮಂತ್ರಿಗಳು ವಾಷಿಂಗ್ಟನ್‌ನಲ್ಲಿ ಅಮೆರಿಕದ ಉಪಾಧ್ಯಕ್ಷ ಜೆ.ಡಿ. ವ್ಯಾನ್ಸ್ ಮತ್ತು ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಅವರನ್ನು ಭೇಟಿ ಮಾಡಿದ್ದರು.

ಮಾತುಕತೆಗಳಿಂದ ಭಿನ್ನಾಭಿಪ್ರಾಯಗಳು ಪರಿಹಾರವಾಗದಿದ್ದರೂ, ಕಾರ್ಯನಿರತ ಗುಂಪನ್ನು ಸ್ಥಾಪಿಸಲು ಒಪ್ಪಂದವಾಯಿತು. ಆದರೆ, ಅದರ ಉದ್ದೇಶದ ಬಗ್ಗೆ ಡೆನ್ಮಾರ್ಕ್ ಮತ್ತು ವೈಟ್ ಹೌಸ್ ವಿಭಿನ್ನ ಅಭಿಪ್ರಾಯಗಳನ್ನು ವ್ಯಕ್ತಪಡಿಸಿವೆ.

ಯುರೋಪಿನ ನಾಯಕರು ಗ್ರೀನ್‌ಲ್ಯಾಂಡ್ ಕುರಿತ ನಿರ್ಧಾರವನ್ನು ಡೆನ್ಮಾರ್ಕ್ ಮತ್ತು ಗ್ರೀನ್‌ಲ್ಯಾಂಡ್ ಮಾತ್ರ ತೆಗೆದುಕೊಳ್ಳಬೇಕು ಎಂದು ಸ್ಪಷ್ಟಪಡಿಸಿದ್ದಾರೆ.

ಇದೇ ವೇಳೆ, ಡೆನ್ಮಾರ್ಕ್ ತನ್ನ ಮಿತ್ರರ ಸಹಕಾರದೊಂದಿಗೆ ಗ್ರೀನ್‌ಲ್ಯಾಂಡ್‌ನಲ್ಲಿ ಸೇನಾ ಹಾಜರಾತಿಯನ್ನು ಹೆಚ್ಚಿಸುವುದಾಗಿ ಘೋಷಿಸಿದೆ.

ಡೆನ್ಮಾರ್ಕ್‌ನ ನಾಟೋ ಮಿತ್ರ ರಾಷ್ಟ್ರದ ಅಡಿಯಲ್ಲಿ ಇರುವ ಅರೆಸ್ವಾಯತ್ತ ಪ್ರದೇಶವಾದ ಗ್ರೀನ್‌ಲ್ಯಾಂಡ್ ಅಮೆರಿಕದ ನಿಯಂತ್ರಣಕ್ಕೆ ಬರಬೇಕು ಎಂದು ಟ್ರಂಪ್ ಹಲವು ತಿಂಗಳಿಂದ ಒತ್ತಾಯಿಸುತ್ತಿದ್ದಾರೆ

# ಅಕ್ರಮ ವಲಸಿಗರ ಶೆಡ್‌ಗಳಿಗೆ ಹೋಗಿ ಶೋಧ, ಕಿರುಕುಳ ಆರೋಪ: ಹಿಂದೂಪರ ಕಾರ್ಯಕರ್ತ ಪುನೀತ್ ಕೆರೆಹಳ್ಳಿ ಬಂಧನ

ಬೆಂಗಳೂರು: ಅಕ್ರಮ ವಲಸಿಗರ ಶೆಡ್‌ಗಳಿಗೆ ತೆರಳಿ ಪರಿಶೀಲನೆ ನಡೆಸುತ್ತಿದ್ದ ಹಿಂದೂಪರ ಕಾರ್ಯಕರ್ತ ಪುನೀತ್ ಕೆರೆಹಳ್ಳಿ ಅವರನ್ನ ಪೊಲೀಸರು ಶುಕ್ರವಾರ ಬಂಧನ ಕ್ಕೊಳಪಡಿಸಿದ್ದಾರೆ.

ತಡರಾತ್ರಿ ಪುನೀತ್ ಕೆರೆಹಳ್ಳಿ ಅವರನ್ನು ಅವರ ಮನೆ ಬಳಿ ವಶಕ್ಕೆ ಪಡೆದ ಬನ್ನೇರುಘಟ್ಟ ಪೊಲೀಸರು, ಠಾಣೆಗೆ ಕರೆದುಕೊಂಡು ಹೋಗಿದ್ದಾರೆ ಎಂದು ತಿಳಿದು ಬಂದಿದೆ.

ಹಿಂದೂಪರ ಕಾರ್ಯಕರ್ತ ಪುನೀತ್ ಕೆರೆಹಳ್ಳಿ ಹಾಗೂ ಸಹಚರರು ಸೇರಿ ಬೆಂಗಳೂರಿನಲ್ಲಿರುವ ಅಕ್ರಮ ವಲಸಿಗರ ಶೆಡ್‌ಗಳಿಗೆ ಹೋಗಿ ಪರಿಶೀಲನೆ ನಡೆಸುತ್ತಿದ್ದರು. ಈ ವೇಳೆ ಶೆಡ್ ವಾಸಿಗಳ ಬಳಿ ರಾಷ್ಟ್ರೀಯತೆ ಬಗ್ಗೆ ಪ್ರಶ್ನೆ ಮಾಡಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ವೀಡಿಯೋ ಹಂಚಿಕೊಂಡು ಸರ್ಕಾರಕ್ಕೆ ನಾನಾ ಪ್ರಶ್ನೆಗಳನ್ನು ಕೇಳಿದ್ದರು.


ಈ ಬೆಳವಣಿಗೆ ನಡುವಲ್ಲೇ ಪುನೀತ್ ವಿರುದ್ಧ ದೂರು ದಾಖಲಾಗಿದ್ದು, ದೂರು ಹಿನ್ನೆಲೆಯಲ್ಲಿ ಪೊಲೀಸರು ಪುನೀತ್ ಕೆರೆಹಳ್ಳಿಯವರನ್ನು ವಶಕ್ಕೆ ಪಡೆದಿದ್ದಾರೆಂದು ತಿಳಿದುಬಂದಿದೆ.

ಏತನ್ಮಧ್ಯೆ ಪುನೀತ್ ಕೆರೆಹಳ್ಳಿ ಬಂಧನಕ್ಕೆ ಅವರ ಬೆಂಬಲಿಗರು ತೀವ್ರವಾಗಿ ಕಿಡಿಕಾರಿದ್ದಾರೆ. ಎಡಪಂಥೀಯರ ಒತ್ತಡಕ್ಕೆ ಮಣಿದು ಸರ್ಕಾರ ಪುನೀತ್ ಕೆರೆಹಳ್ಳಿ ಅವರನ್ನ ವಶಕ್ಕೆ ಪಡೆದಿದೆ. ಪೊಲೀಸರ ಕ್ರಮವನ್ನ ನಾವು ಖಂಡಿಸುತ್ತೇವೆ ಎಂದು ವಿಡಿಯೋ ಮಾಡಿ ಕಿಡಿಕಾರಿದ್ದಾರೆ.

ನಿನ್ನೆಯಷ್ಟೇ ಪುನೀತ್ ಕೆರೆಹಳ್ಳಿ ಹಾಗೂ ಆತನ ಸಹಚರರ ವಿರುದ್ಧ ಪ್ರಕರಣ ದಾಖಲಿಸಬೇಕೆಂದು ಒತ್ತಾಯಿಸಿ ಕರ್ನಾಟಕ ರಾಜ್ಯ ಪೊಲೀಸ್ ಮಹಾನಿರ್ದೇಶಕರಿಗೆ 'ದ್ವೇಷದ ಮಾತಿನ ವಿರುದ್ಧ ಜನಾಂದೋಲನ ಮನವಿ ಸಲ್ಲಿಸಿತ್ತು.

ಇಮೇಲ್ ಮೂಲಕ ಮನವಿ ಸಲ್ಲಿಸಲಾಗಿತ್ತು. ಪುನೀತ್ ಕೆರೆಹಳ್ಳಿ ಎಂಬ ಕೊಲೆ ಆರೋಪಿ ವಲಸೆ ಕಾರ್ಮಿಕರ ವಾಸಸ್ಥಳಗಳಿಗೆ ಅಕ್ರಮವಾಗಿ ಪ್ರವೇಶಿಸಿ, ಅವರ ಪೌರತ್ವ ಹಾಗೂ ಗುರುತಿನ ದಾಖಲೆಗಳಿಗೆ ಬೇಡಿಕೆ ಇಟ್ಟು, ಬೆದರಿಕೆ ಹಾಗೂ ಭೀತಿಯನ್ನುಂಟು ಮಾಡುತ್ತಿದ್ದಾನೆಂದು ಗಂಭೀರ ಆರೋಪ ಗಳನ್ನು ಮಾಡಲಾಗಿತ್ತು.

ಸ್ವತಃ ಆತನೇ ಸಾಮಾಜಿಕ ಜಾಲತಾಣಗಳಲ್ಲಿ



ಅಪ್‌ಲೋಡ್ ಮಾಡಿದ ವೀಡಿಯೊಗಳಲ್ಲಿ, "ಬಾಂಗ್ಲಾದೇಶಿಗಳು" ಎಂದು ಮುಸ್ಲಿಂ ವಲಸೆ ಕಾರ್ಮಿಕರನ್ನು ಗುರುತಿಸಿ, ರಾತ್ರಿ ಸಮಯದಲ್ಲಿ ಘೋಷಣೆ ಕೂಗಿ, ಧರ್ಮಾಧಾರಿತ ದ್ವೇಷ ಮತ್ತು ಸಮಾಜದಲ್ಲಿ ಉದ್ವಿಗ್ನತೆಯನ್ನು ಉಂಟುಮಾಡಿರುವುದು ದಾಖಲಾಗಿದೆ. ಈತನ ಈ ವರ್ತನೆಯಿಂದ ಕಾರ್ಮಿಕರ ಗೌರವ, ಗೌಪ್ಯತೆ ಮತ್ತು ಜೀವಸುರಕ್ಷೆಗೆ ಗಂಭೀರ ಅಪಾಯವನ್ನುಂಟುಮಾಡುತ್ತದೆ ಎಂದು ದೂರಿನಲ್ಲಿ ತಿಳಿಸಿತ್ತು.

# ಹಿತ್ತಲ ಗಿಡ ಮದ್ದು ಅಲ್ಲವೇ..?

**ಅಶ್ವಗಂಧದ ಭಾಗ-2. ಮತ್ತು ಎಲೆ ತೊಗಟ್ಟಿ ಬೀಜ** ಕಾಂಡವನ್ನು ನಮ್ಮ ಭಾರತ ದೇಶದ ಋಷಿಮುನಿಗಳು. ವಿಸ್ತಾರವಾಗಿ ಸಾವಿರಾರು ವರ್ಷಗಳ ಹಿಂದೆ ಈಗಿನ ವಿಜ್ಞಾನಕ್ಕೂ.ನಿಲುಕದಂತೆ ಆರೋಗ್ಯ ದೃಷ್ಟಿಯಿಂದ ಅತ್ಯಂತ ನಿಖರವಾಗಿ ಅಪಾರ ಜ್ಞಾನವನ್ನು ಭಾರತ ದೇಶಕ್ಕೆ ಮಾತ್ರ ಸೀಮಿತ ಗೊಳ್ಳದೆ ಇಡೀ ಪ್ರಪಂಚಕ್ಕೆ ಗುರುಕುಲದ ಮುಖಾಂತರ ಮತ್ತು ರಾಮಾಯಣ ಮಹಾಭಾರತ ಭಗವದ್ಗೀತೆ ಮುಖಾಂತರ ಸಕಲ ಮಾನವನ ಕುಲಕ್ಕೆ ವಿಚಾರ ದೊರೆತಿದೆ.

**ತಂತ್ರದಿಂದ ಬಂತು ಮಂತ್ರ..ಮಂತ್ರ ದಿಂದ ಬಂತು ಯಂತ್ರ**

ಈ ಪ್ರಪಂಚದಲ್ಲಿ ಮಂತ್ರದ ಪ್ರಭಾವದಿಂದ ಸಕಲ ರೋಗಿಗಳನ್ನು ಗುಣಪಡಿಸಿ ಪ್ರಪಂಚಕ್ಕೆ ತೋರಿಸಿ ಕೊಟ್ಟವರು ನಮ್ಮ ದೇಶದ ಋಷಿಮುನಿಗಳು. ಇದು ಸತ್ಯ ಅಲ್ಲವೇ ಮತ್ತು ಈಗಿನ ಕಾಲದ ಮಾತು ಮಂತ್ರದಿಂದ ಮಾವಿನಕಾಯಿ ಉದುರಬಹುದೇ ಅಂತ ಹೇಳುವರು ಉಂಟು ಹಾಗೂ ಮಾನವನ ಕುಲಕ್ಕೆ ಅಲ್ಲದೆ ಪ್ರಾಣಿ ಪಕ್ಷಿ ಜಾನುವಾರಗಳಿಗೂ ಮತ್ತು ಕೃಷಿ ಸಾಹಿತ್ಯ ಸಂಗೀತ ಸೂರ್ಯ ಗ್ರಹಣ ಚಂದ್ರ ಗ್ರಹಣ ಅಮವಾಸ್ಯೆ ಉಣ್ಣಿಮೆ ಗ್ರಹ ನಕ್ಷತ್ರ.

ಒಂದು ಒತ್ತು ಊಟ ಮಾಡಿದವನು ಯೋಗಿ ಎರಡು ಹೊತ್ತು ಊಟ ಮಾಡಿದವನು ಭೋಗಿ ಮೂರು ಹೊತ್ತು ಊಟ ಮಾಡಿದವನು ರೋಗಿ. ಅನ್ನೋ ಗಾದೆ ಮಾತಿನಂತೆ ಇನ್ನೂ ಅನೇಕ ರೀತಿಯಲ್ಲಿ ಮಾನವನ ಕುಲಕ್ಕೆ ಆಗಿನ ವಿಜ್ಞಾನದಲ್ಲಿ.ಧ್ಯಾನ ತಪಸ್ಸಿನ ಶಕ್ತಿ ಇಂದ ಮಾಡಿದಂತ ಸಾಧನೆಯನ್ನು ಈಗಿನ ಕಾಲದಲ್ಲಿ ಓದಿ ತಿಳಿದುಕೊಳ್ಳಲು ಈ ಏಳು ಜನ್ಮ ಹುಟ್ಟಿ ಬಂದು ತಿಳಿದುಕೊಳ್ಳಬೇಕು. ಅಸಾಧ್ಯವಾದ ಮಾತು ಎಂದು ನಮ್ಮ ಅಭಿಪ್ರಾಯ ಮತ್ತು ಋಷಿಮುನಿಗಳು ಸಾವಿರಾರು ವರ್ಷಗಳ ಹಿಂದೆ ಹಿತ್ತಲ ಗಿಡ ಮದ್ದು ಎಂದು. ಮನೆಯ ಅಂಗಳದಲ್ಲಿ ಮತ್ತು ಮನೆಯ ಹಿತ್ತಲದಲ್ಲಿ ಇದೆ.

**ಮಾಡಿ ನೋಡು ಮದ್ದಿನ ಗುಣ**


ಇದು ಒಂದು ಗಾದೆ ಮಾತು. ಇಂಥದೊಂದು ಅದ್ಭುತವಾದ ಮಾತು ನಮ್ಮ ಪೂರ್ವಿಕರು ಹೇಳಿದ ಹಿತ ನುಡಿಗಳು ಮತ್ತು ಹಿತ್ತಲ ಗಿಡದ ವಿಚಾರ ತಿಳಿಯೋಣ ಈಗ ಇಷ್ಟು ವಿಜ್ಞಾನ (ಸೈನ್ಸ್ )ಇದ್ದರೂ ರೋಗಿಗಳು ಗುಣ ಆಗುವುದಿಲ್ಲ ಯಾಕೆ.

ಇಂದಿನ ಸಂಚಿಕೆಯಲ್ಲಿ ತಿಳಿಸಿದ್ದೆ ಇವತ್ತಿನ ದಿನಮಾನಗಳಲ್ಲಿ. ಬೆಳಗ್ಗೆ ಎದ್ದು ತಕ್ಷಣನೇ ಬಿಸಿ ಬಿಸಿ ಕಾಫಿ ಟೀ ಊಟ ಉಪಚಾರದಲ್ಲಿ ಕಲಬೆರಿಕೆಯ. ಎಣ್ಣೆ ಮತ್ತು ಕುರಿ ಕೋಳಿ ಮೇಕೆ ಮಾಂಸ ಸಕ್ಕರೆ ಬಿಳಿ ಅಕ್ಕಿ ವಿದೇಶಿ ಗೋಧಿ ಮೈದಾ ಬಣ್ಣ ಬಣ್ಣದ ತಿಂಡಿ ತಿನಿಸುಗಳು ವಿದೇಶಿ ಜರ್ಸಿಯ ಹಸುವಿನ ಹಾಲು ಮತ್ತು ಬಜ್ಜಿ ಬೋಂಡಾ ಪಾನಿಪುರಿ ಬೇಲ್ ಪುರಿ ಮಸಾಲಪುರಿ. ನಕಲಿ ಎಣ್ಣೆ ಬೆಣ್ಣಿ ತುಪ್ಪ ಹಾಗೂ ರಾಸಾಯನಿಕದಿಂದ ತಯಾರಾದ ಹಣ್ಣು ಹಂಪಲ ತರಕಾರಿಗಳು ಮತ್ತು ಇತ್ತೀಚಿನ ದಿನಗಳಲ್ಲಿ ಚಟವಾದಿಗಳು ಜಾಸ್ತಿ ಹಾಗೂ ದೇಹ ದಂಡನೆ ವಿಲ್ಲ ಯೋಗವಿಲ್ಲ ಮೈ ಮತ್ತು ಮನಸುಗಳನ್ನು ದಂಡಿಸಿ ಕೆಲಸ ಮಾಡುವದು ಇಲ್ಲದೆ ದಿನಕ್ಕೆ ನಾಲ್ಕು ಐದು ಸಲ ತಿನ್ನುವರು ಉಂಟು. ನಮ್ಮ ಹೊಟ್ಟೆ ಭೀಮನ ಕೆರೆ ಅಥವಾ ಕನ್ನಂಬಾಡಿ ಕಟ್ಟೆಯ ಅಲ್ಲ. ಇದು ನಮ್ಮ ಆರೋಗ್ಯಕ್ಕಾಗಿ ನಮಗೆ ನೆನಪಿರಬೇಕು ಮತ್ತು ಒಂದು ರೋಗಕ್ಕೆ ಸೂಜಿ ಮಾತ್ರೆ ಹೆಚ್ಚಿಗೆ ತಗೊಂಡರೆ ಇನ್ನೊಂದು ಕಾಯಿಲೆ ಹುಟ್ಟುವುದು ಎಂದು ಡಾಕ್ಟರ್ ಹೇಳುವುದನ್ನು ತಾವೆಲ್ಲರೂ ತಿಳಿದುಕೊಂಡಿರಬಹುದು. ಇಂಥ ವಿಜ್ಞಾನ (ಸೈನ್ಸ್ )ಯೋಗದಲ್ಲಿ ಹೊಂದಿಕೊಂಡು ಹೋಗುವಂತ ಪರಿಸ್ಥಿತಿ ಬಂದಿದೆ. ಇದು ನಮ್ಮ ಕರ್ಮವೇ?.ಹುಟ್ಟುವುದು ಆಸ್ಪತ್ರೆಯಲ್ಲಿ ಸಾಯುವುದು ಆಸ್ಪತ್ರೆಯಲ್ಲಿ ಮನುಷ್ಯನ ಆಯಸ್ಸು 65 ರಿಂದ 75 ವರ್ಷಕ್ಕೆ ಕೂಸುದಿದೆ ಮಾನವನ ಆಯಸ್ಸು. 100 ರಿಂದ 120 ವರ್ಷ. ಬದುಕಿದವರನ್ನು ನಾವು ಕಣ್ಣಾರ ನೋಡಿರುತ್ತೇವೆ ಅಂದರೆ ಇದರ ಅರ್ಥ 30 ರಿಂದ 40 ವರ್ಷ ಮನುಷ್ಯನ ಆಯಸ್ಸು , ಕುಸುದಿದೆ ಹೀಗಿರುವಾಗ ಹಿರೇ ಮುದ್ದಿನ ಬೇರು ಸರ್ವ ರೋಗಕ್ಕೂ ಔಷಧವಾಗಿ ಕೆಲಸ ಮಾಡಬಹುದೇ?

**ಹುಟ್ಟುವದು ಉಚಿತ ಸಾವು ಖಚಿತ.**

ಗಾದೆ ಮಾತಿನಂತೆ. ಈಗಿನ ಗಾದೆ ಮಾತು ಹುಟ್ಟುವುದು ಆಕಸ್ಮಿಕ ಸಾವು ಖಚಿತ. ಇದು ಸತ್ಯ ಅಲ್ಲವೇ. ಹಿಂದೆ ಕೂಡ ಎಲ್ಲರೂ ಎಲ್ಲಾ ತರದ ಪದಾರ್ಥಗಳನ್ನು ತಿನ್ನುತ್ತಿದ್ದರೂ ಒಂದು ವಾರಕ್ಕೋ ಅಥವಾ ತಿಂಗಳಿಗೋ ಸೇವನೆ ಮಾಡುತ್ತಿದ್ದರು. ನಾವೆಲ್ಲರೂ ಆರೋಗ್ಯ ಕಡೆ ಗಮನ ಕೊಡದೆ ಇಲ್ಲದಿರುವುದೇ ನಮ್ಮ ತಪ್ಪು. ಅಶ್ವಗಂಧ 108 ರೋಗಗಳನ್ನು ಗುಣ ಪಡಸುವ ಶಕ್ತಿ ಇದೆ ಎಂದು ನಮ್ಮ ಹಿರಿಯರು ಒಂದೇ ಮಾತಿನಲ್ಲಿ ಹೇಳಿರುತ್ತಾರೆ.


ಈ ಹಿಂದೆ ನಯವಂಚಕರು ಕಿಡಿಗೇಡಿ ಕಿರಾತಕರು ಹಿತ್ತಲ ಗಿಡ ಮದ್ದು ಅಲ್ಲ ಎಂದು ಬಿತ್ತಿ ಬಿಂಬಿಸಿದರು. ಆದರೆ ನಮ್ಮ ಹಿರಿಯರು ಹಿತ್ತಲ ಗಿಡ ಮದ್ದು ಎಂದು ಸಾರಿದ್ದಾರೆ.



**ಶ್ರೀ ಚಂದ್ರಶೇಖರ್ ಪಂಡಿತ್**
**ಪಾರಂಪರಿಕ ನಾಟಿ ವೈದ್ಯ**

# ಸನ್ನಿವೇಶಗಳು ಎದುರಿಸಲು ನಾವು ಸದಾ ಸಿದ್ಧರಾಗಿರಬೇಕು: ಜಲಮಂಡಳಿ ಅಧ್ಯಕ್ಷರಾದ ರಾಮ್ ಪ್ರಸಾತ್ ಮನೋಹರ್

**ಬೆಂಗಳೂರು :** ನಾವು ಸವಾಲುಗಳನ್ನು ಎದುರಿಸಲು ಸಿದ್ಧರಿರಬೇಕು. ನಾಗರೀಕರಿಗೆ ಅನುಕೂಲವಾಗುವಂತಹ ಯೋಜನೆಗಳನ್ನು ರೂಪಿಸಲು ಮತ್ತು ಅನುಷ್ಠಾನ ಮಾಡಲು ಮಂಡಳಿಯ ಪ್ರತಿಯೊಬ್ಬರು ಶ್ರಮಿಸಬೇಕೆಂದು" ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (ಬಿಡ್ಲ್ಯೂಎಸ್‌ಎಸ್‌ಬಿ) ಅಧ್ಯಕ್ಷರಾದ ರಾಮ್‌ಪ್ರಸಾತ್‌ಮನೋಹರ್ ಹೇಳಿದರು.




ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ(ಬಿಡ್ಲ್ಯೂಎಸ್‌ಎಸ್‌ಬಿ) ಅಭಿಯಂತರರ ಸಂಘ ಕಾವೇರಿ ಭವನದಲ್ಲಿ ಆಯೋಜಿಸಿದ್ದ "ತಾಂತ್ರಿಕ ದಿನಚರಿ 2026 ಬಿಡುಗಡೆ ಹಾಗೂ ನಿವೃತ್ತರಾದ ಅಭಿಯಂತರರಿಗೆ ಅಭಿನಂದಿಸಿ ಮಾತನಾಡಿದ ಅವರು, "ಜಲ ಮಂಡಳಿಯ ಉದ್ದೇಶ ನಾಗರೀಕರಿಗೆ ಗುಣಮಟ್ಟ ಕುಡಿಯುವ ನೀರಿನ ಪೂರೈಕೆ ಮಾಡುವುದು ಮತ್ತು ಒಳಚರಂಡಿ ವ್ಯವಸ್ಥೆ ನಿರ್ವಹಣೆ ಮಾಡುವುದಾಗಿದೆ. ನಾವು ಈ ಕೆಲಸವನ್ನು ಬಹಳ ಶಿಸ್ತಿನಿಂದ ಮಾಡಬೇಕು. ಇದರ ಜತೆಗೆ ಬರ ಸೇರಿದಂತೆ ಯಾವುದೇ ಪರಿಸ್ಥಿತಿ ಎದುರಾದರೂ ಅದನ್ನು ಎದುರಿಸಲು ಸಿದ್ಧರಾಗಿರಬೇಕು ಎಂದು ಎಂಜಿನಿಯರ್‌ಗಳಿಗೆ ಸಲಹೆ" ನೀಡಿದರು.

"ಬೆಂಗಳೂರು ಇತಿಹಾಸದಲ್ಲಿ ಮಂಡಳಿ ಸಾಧನೆ ಕೂಡ ಸ್ಥಾನ ಪಡೆದಿದೆ. ಇದಕ್ಕೆ ಪ್ರಮುಖ ಕಾರಣ, ಎಂಜಿನಿಯರ್‌ಗಳ ಪರಿಶ್ರಮ, ದೂರದೃಷ್ಟಿಯಾಗಿದೆ. ಪ್ರತಿಯೊಬ್ಬರ ಶ್ರಮವನ್ನು ನಾವು ಮರೆಯುವಂತಿಲ್ಲ. ಇದೇ ರೀತಿ ಮುಂದೆ ಸಹ ನಿಮ್ಮ ಸಹಕಾರ ಬಹಳ ಮುಖ್ಯ. ಹೊಸ ಆಲೋಚನೆಗಳ ಮೂಲಕ ನಾವು ನೀಡುವ ಸೇವೆಯನ್ನು ಮತ್ತಷ್ಟು ಉತ್ತಮ ಪಡಿಸಲು ನಾವೆಲ್ಲರೂ ಶ್ರಮಿಸೋಣ " ಎಂದರು.

ಭಾರತೀಯ ವಿಜ್ಞಾನ ಸಂಸ್ಥೆ(ಐಐಎಸ್ಸಿ) ಸಿವಿಲ್ ಇಂಜಿನಿಯರಿಂಗ್ ವಿಭಾಗದ ಪ್ರಾಧ್ಯಾಪಕರು ಮತ್ತು ಅಖಿಖಿ ಅಧ್ಯಕ್ಷರಾದ ಡಾ.ಜಿ.ಮಾಧವಿ ಲತಾ ಮಾತನಾಡಿ, " ಭಾರತದ ನಿರ್ಮಾಣಕ್ಕೆ ಸಿವಿಲ್, ಮೆಕಾನಿಲ್ ಎನ್ನದೇ ಪ್ರತಿಯೊಬ್ಬ ಎಂಜಿನಿಯರ್‌ಗಳ ಶ್ರಮ ಬಹಳಷ್ಟಿದೆ.

ಒಂದು ಹೊಸ ಯೋಜನೆಯನ್ನು ಅನುಷ್ಠಾನ ಮಾಡಲು ಮುಂದಾದರೆ, ಎಷ್ಟೆಲ್ಲಾ ತೊಡಕುಗಳು ಎದುರಾಗುತ್ತವೆ ಎಂಬುದು ಎಂಜಿನಿಯರ್‌ಗಳಿಗೆ ಮಾತ್ರ ಅರ್ಥ ಆಗಲಿದೆ.

ಇಂತಹ ಹಲವಾರು ಕ್ಲಿಷ್ಟಕರ ಸಂದರ್ಭಗಳನ್ನು ಎದುರಿಸುವವರೇ ನಿಜವಾದ ಎಂಜಿನಿಯರ್‌ಗಳ ಕೆಲಸ" ಎಂದು ಎಂಜಿನಿಯರ್‌ಗಳ ಮಹತ್ವವನ್ನು ತಿಳಿಸಿದರು.

ನೀರಿನ ಸೋರಿಕೆ, ಅನಿರೀಕ್ಷಿತ ಸವಾಲುಗಳನ್ನು ಸಮರ್ಪಕವಾಗಿ ಎದುರಿಸುತ್ತಾ ದೂರದ ಕಾವೇರಿ ನದಿಯಿಂದ ಬೆಂಗಳೂರು ಜನರಿಗೆ ಶುದ್ಧ ಕುಡಿಯುವ ನೀರು ಪೂರೈಸುತ್ತಿರುವ ತಮ್ಮ ಕಾರ್ಯ ಶ್ಲಾಘನೀಯ ಎಂದರು.

ಚೆನಾಬ್ ರೈಲ್ವೆ ಬ್ರಿಡ್ಜ್ ನಿರ್ಮಾಣ ಕಾರ್ಯದಲ್ಲಿ 2005ರಿಂದ 2022ರವರೆಗೆ ತಾವು ತೊಡಗಿಸಿಕೊಂಡ ಅನುಭವವನ್ನು ಈ ಸಂದರ್ಭದಲ್ಲಿ ತೆರೆದಿಟ್ಟರು.

ಈ ಕಾರ್ಯಕ್ರಮದಲ್ಲಿ ಜಲ ಮಂಡಳಿ ಅಭಿಯಂತರರ ಸಂಘದ ಅಧ್ಯಕ್ಷ ಬಿ.ಸಿ.ಗಂಗಾಧರ ಪ್ರಾಸ್ತವಿಕವಾಗಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ನಿವೃತ್ತರಾದ ಎಂಜನಿಯರ್ ಗಳನ್ನು ಸಂಘದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಪ್ರಧಾನ ಮುಖ್ಯ ಎಂಜನಿಯರ್ ಬಿ.ಎಸ್.ದಲಾಯತ್,ಉಪಾಧ್ಯಕ್ಷ ರಮಾನಂದ, ಕಾರ್ಯದರ್ಶಿ ಎ.ರಾಜಶೇಖರ, ಖಜಾಂಚಿ ಎಸ್.ಚಂದ್ರಶೇಖರ್ ಸೇರಿದಂತೆ ಮುಖ್ಯ ಎಂಜನಿಯರ್ ಗಳು ಹಾಗೂ ಎಂಜನಿಯರ್ ಗಳು, ಇತರರು ಇದ್ದರು.

# ಇಗ್ಗಲೂರು ಡೇರಿ ಚುನಾವಣೆ: ಜೆಡಿಎಸ್– ಬಿಜೆಪಿ ಬೆಂಬಲಿತರ ಜಯಭೇರಿ

**ಚನ್ನಪಟ್ಟಣ:** ತಾಲ್ಲೂಕಿನ ವಿರುಪಾಕ್ಷಿಪುರ ಹೋಬಳಿ ಇಗ್ಗಲೂರು ಹಾಲು ಉತ್ಪಾದಕರ ಸಹಕಾರ ಸಂಘದ ನಿರ್ದೇಶಕರ ಆಯ್ಕೆಗೆ ಶನಿವಾರ ನಡೆದ ಚುನಾವಣೆಯಲ್ಲಿ ಎಲ್ಲಾ ಹನ್ನೊಂದು ಸ್ಥಾನಗಳಲ್ಲೂ ಜೆಡಿಎಸ್– ಬಿಜೆಪಿ ಬೆಂಬಲಿತರೇ ನಿರ್ದೇಶಕರಾಗಿ ಆಯ್ಕೆಯಾಗುವ ಮೂಲಕ ಡೇರಿ ಆಡಳಿತ ಮಂಡಳಿಯು ಮತ್ತೊಮ್ಮೆ ಜೆಡಿಎಸ್ ಪಾಲಾಗಿದೆ.



ಡೇರಿಯ ಹನ್ನೊಂದು ನಿರ್ದೇಶಕರ ಸ್ಥಾನಗಳ ಪೈಕಿ ಹಿಂದುಳಿದ ವರ್ಗ ಎ ನಿಂದ ಸ್ವಾಮಿ, ಹಿಂದುಳಿದ ವರ್ಗ ಬಿ ನಿಂದ ಸ್ವಾಮಿ ಐ ಎನ್, ಪರಿಶಿಷ್ಟ ಜಾತಿ ಮೀಸಲು ಸ್ಥಾನದಿಂದ ರವಿ ಐ ಡಿ, ಮಹಿಳಾ ಮೀಸಲು ಸ್ಥಾನಗಳಿಂದ ಸಿದ್ದಮ್ಮ ಹಾಗೂ ಭಾಗ್ಯಲಕ್ಷ್ಮಿ ಜೆಡಿಎಸ್– ಬಿಜೆಪಿ ಬೆಂಬಲಿತ ಅಭ್ಯರ್ಥಿಗಳಾಗಿ ಒಬ್ಬೊಬ್ಬರೇ ಉಮೇದುವಾರಿಕೆ ಸಲ್ಲಿಸಿದ್ದ ಕಾರಣ ಈ ಐದು ಸ್ಥಾನಗಳಿಗೆ ಅವಿರೋಧ ಆಯ್ಕೆ ನಡೆದಿತ್ತು. ಅಂತೆಯೇ ಸಾಮಾನ್ಯ ಸ್ಥಾನಗಳ ಆರು ನಿರ್ದೇಶಕರ ಆಯ್ಕೆಗೆ

ಎಂಟು ಅಭ್ಯರ್ಥಿಗಳು ಕಣದಲ್ಲಿದ್ದಲ್ಲಿದ್ದರು.

ಈ ಪೈಕಿ ಜೆಡಿಎಸ್– ಬಿಜೆಪಿ ಬೆಂಬಲಿತರಾದ ಡಿಎಂಕೆ ಕುಮಾರ್, ಮಹದೇವಸ್ವಾಮಿ, ಎಂ.ನಾಗರಾಜು, ಎ.ಸಿದ್ದೇಗೌಡ , ರವಿ ಹಾಗೂ ತಿಮ್ಮೇಗೌಡ ಅವರು ಕ್ರಮವಾಗಿ ಕಾಂಗ್ರೆಸ್ ಬೆಂಬಲಿತರಾದ ಸುರೇಶ್ ಹಾಗೂ ಲೋಕೇಶ್ ಅವರಿಗಿಂತ ಅತಿಹೆಚ್ಚು ಮತಗಳನ್ನು ಪಡೆದ ಕಾರಣ ನಿರ್ದೇಶಕರಾಗಿ ಚುನಾಯಿತರಾದರು.

ಸುರೇಶ್ ಹಾಗೂ ಲೋಕೇಶ್ ಅತಿ ಕಡಿಮೆ ಪಡೆಯುವ ಮೂಲಕ ಪರಾಜಿತರಾದರು ಎಂದು ಚುನಾವಣಾಧಿಕಾರಿ ಘೋಷಿಸಿದರು.

ಡೇರಿ ಸಿಇಒ ನಾಗರಾಜು ಹಾಗೂ ಸಿಬ್ಬಂದಿ ವರ್ಗದವರು ಸುಗಮ ಚುನಾವಣೆಗೆ ನೆರವಾದರು.

**ಮುಂದುವರಿದ ಜೆಡಿಎಸ್ ಪ್ರಾಬಲ್ಯ:**

ಇಗ್ಗಲೂರು ಹಾಲು ಉತ್ಪಾದಕರ ಸಹಕಾರ ಸಂಘದ ಎಲ್ಲಾ ಹನ್ನೊಂದು ನಿರ್ದೇಶಕ ಸ್ಥಾನಗಳನ್ನು ಜೆಡಿಎಸ್– ಬಿಜೆಪಿ ಅಭ್ಯರ್ಥಿಗಳು ಗೆಲ್ಲುವ ಮೂಲಕ ಇಗ್ಗಲೂರು ಭಾಗದಲ್ಲಿ ಪ್ರಾದೇಶಿಕ ಪಕ್ಷ ಜೆಡಿಎಸ್ ಎಂದಿನಂತೆ ಪಾರಮ್ಯ ಮೆರೆದಿದೆ.

**ವಿರುಪಾಕ್ಷಿಪುರ ಹೋಬಳಿ ಜೆಡಿಎಸ್ ಯುವ ಮುಖಂಡ**

ಇಗ್ಗಲೂರು ಡಿಎಂಕೆ ಕುಮಾರ್ ನೇತೃತ್ವದ ಜೆಡಿಎಸ್– ಬಿಜೆಪಿ ಬೆಂಬಲಿತ ಅಭ್ಯರ್ಥಿಗಳು ನಿರೀಕ್ಷೆಯಂತೆಯೇ ಜಯ ಸಾಧಿಸುವ ಮೂಲಕ ಇಗ್ಗಲೂರು ಭಾಗವು ಜೆಡಿಎಸ್ ಭದ್ರಕೋಟೆ ಎಂಬುದನ್ನು ಮತ್ತೊಮ್ಮೆ ಸಾಬೀತು ಮಾಡಿದ್ದಾರೆ ಎಂದು ಮೈತ್ರಿ ಪಕ್ಷಗಳ ಸ್ಥಳೀಯ ಮುಖಂಡರು ಸಂತಸ ವ್ಯಕ್ತಪಡಿಸಿದ್ದಾರೆ.

**ಕಾರ್ಯಕರ್ತರ ಸಂಭ್ರಮ:**

ಇಗ್ಗಲೂರು ಡೇರಿ ನಿರ್ದೇಶಕರ ಚುನಾವಣೆಯಲ್ಲಿ ಎಲ್ಲಾ ಹನ್ನೊಂದು ಸ್ಥಾನಗಳಲ್ಲಿ ಜೆಡಿಎಸ್– ಬಿಜೆಪಿ ಬೆಂಬಲಿತ ಅಭ್ಯರ್ಥಿಗಳು ಜಯಭೇರಿ ಬಾರಿಸಿದ ಕಾರಣ ಸ್ಥಳೀಯ ಜೆಡಿಎಸ್– ಬಿಜೆಪಿ ಕಾರ್ಯಕರ್ತರು, ಪ್ರಮುಖ ಮುಖಂಡರು, ವಿಶೇಷವಾಗಿ ಯುವ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮ ವ್ಯಕ್ತಪಡಿಸಿದರು.

**ಜೆಡಿಎಸ್– ಬಿಜೆಪಿ ಮೈತ್ರಿಕೂಟದ ಸ್ಥಳೀಯ**

ಮುಖಂಡರಾದ ಸೋಮೇಗೌಡ, ಇ.ತಿ.ಶ್ರೀನಿವಾಸ್, ಚಿನ್ನಸ್ವಾಮಿಗೌಡ, ಸೋಮಶೇಖರ್ ಎಂ, ರೇಣುಕಾಪ್ರಸಾದ್, ಶಿವಸ್ವಾಮಿ, ಲಾಯರ್ ಬಸವರಾಜು, ಗ್ರಾಪಂ ಸದಸ್ಯರಾದ ನಾಗರಾಜು, ಸತೀಶ ಚಂದ್ರ, ನಿರಂಜನಸ್ವಾಮಿ, ಕೃಷ್ಣ, ಮಹದೇವಸ್ವಾಮಿ, ಸುಮನ್, ಸುನಿಲ್, ನಾಗರಾಜು, ಸುರೇಶ್, ಮರಿಸ್ವಾಮಿ, ಪುಟ್ಟಸ್ವಾಮಿ, ಮಂಜು, ನಾಗೇಶ್, ಶಿವಪ್ರಸಾದ್, ರಾಜು, ಶರತ್, ಸಿದ್ದಪ್ಪಾಜಿ, ಅಂಕಯ್ಯ, ಸಾಗರ್, ಸೋಮ, ಬೋರಯ್ಯ, ಬಸವರಾಜಪ್ಪ, ಪ್ರಭಾಕರ ಇನ್ನೂ ಹಲವಾರು ಇಗ್ಗಲೂರು ಡೇರಿ ನೂತನ ನಿರ್ದೇಶಕರನ್ನು ಅಭಿನಂದಿಸಿದರು.

# ನೈಜ ಮಾರ್ಗದರ್ಶಕರ ಕೊರತೆ.........

**ಮಾದರಿ ವ್ಯಕ್ತಿತ್ವಗಳ ಅವಶ್ಯಕತೆ.....**

ಮಕ್ಕಳು, ಯುವಕರು, ಗ್ರಾಮೀಣ ಪ್ರದೇಶದ ಜನರು, ಅನಕ್ಷರಸ್ಥ ಮಹಿಳೆಯರು ಇವರುಗಳಿಗೆ

ಮಾರ್ಗದರ್ಶಕರ ಕೊರತೆ ತುಂಬಾ ಕಾಡುತ್ತಿದೆ.......

ಅದರಲ್ಲೂ ಮುಖ್ಯವಾಗಿ 15 ರಿಂದ 35 ವರ್ಷ ವಯಸ್ಸಿನ ಯುವ ಜನಾಂಗ ಈ ವಿಷಯದಲ್ಲಿ ಉತ್ತಮ ಗುಣಮಟ್ಟದ ಕೊರತೆ ಎದುರಿಸುತ್ತಿದೆ.

ಶಿಕ್ಷಣ – ಉದ್ಯೋಗ – ಆರೋಗ್ಯ – ಮದುವೆ – ಕುಟುಂಬದ ನಿರ್ವಹಣೆ – ಸಾಮಾಜಿಕ ಜವಾಬ್ದಾರಿ – ಮಾನವೀಯ ಮೌಲ್ಯಗಳ ನಿರ್ವಹಣೆ – ವೈಯಕ್ತಿಕ ಮಾನಸಿಕ ಒತ್ತಡ ಇವುಗಳಲ್ಲಿ ಸ್ಪಷ್ಟವಾದ ತೀರ್ಮಾನ ಕೈಗೊಳ್ಳುವಲ್ಲಿ ಯುವ ಜನಾಂಗ ವಿಫಲವಾಗುತ್ತಿದೆ.

ಕೆಲವು ಕಾರ್ಪೊರೇಟ್ ಸಂಸ್ಥೆಗಳು ವ್ಯಕ್ತಿತ್ವ ವಿಕಸನದ ಕೆಲವು ಸಲಹಾ ಕೇಂದ್ರಗಳನ್ನು ಅಲ್ಲಲ್ಲಿ ಸ್ಥಾಪಿಸಿವೆ. ಆದರೆ ಅವುಗಳು ಸಂಪೂರ್ಣ ವಾಣಿಜ್ಯೀಕರಣವಾಗಿವೆ ಮತ್ತು ಅದರಲ್ಲಿ ಭಾರತೀಯ ಸಂಸ್ಕೃತಿಯ – ಈ ಮಣ್ಣಿನ ಮೂಲದ್ರವ್ಯವೇ ಇರುವುದಿಲ್ಲ.

ಎಸ್ಎಸ್ಎಲ್ ಸಿ , ಪಿಯುಸಿ ನಂತರದ ಶಿಕ್ಷಣದ ಆಯ್ಕೆಗಳ ಬಗ್ಗೆ ಪೋಷಕರಲ್ಲಿ ಆತಂಕ ಮತ್ತು ಗೊಂದಲ ಉಂಟಾಗುತ್ತದೆ. ಮಗ ಅಥವಾ ಮಗಳು ತೆಗೆದುಕೊಳ್ಳುವ ಅಂಕಗಳು, ಆ ಮಕ್ಕಳ ಆಸಕ್ತಿ, ಅದಕ್ಕಿರುವ ಅವಕಾಶ ಯಾವುದನ್ನೂ ಸರಿಯಾಗಿ ನಿರ್ಧರಿಸಲು ಸಾಧ್ಯವಾಗುತ್ತಿಲ್ಲ. ಒಂದು ವೇಳೆ ಪರೀಕ್ಷೆಗಳಲ್ಲಿ ಅನುತ್ತೀರ್ಣವಾದರೆ ಆಗ ಇರುವ ಅವಕಾಶದ ಬಗ್ಗೆಯೂ ಮಾಹಿತಿ ಇರುವುದಿಲ್ಲ. ಆ ಮಕ್ಕಳ ಬದುಕೇ ಮುಗಿದು ಹೋದಂತೆ ಆಡುತ್ತಾರೆ.

ಆರೋಗ್ಯದಲ್ಲಿ ಆಗುವ ಬದಲಾವಣೆಗಳು – ಅದರ ಚಿಕಿತ್ಸಾ ವಿಧಾನಗಳ ಬಗ್ಗೆಯೂ ಸರಿಯಾದ ಗುಣಮಟ್ಟದ ಮಾರ್ಗದರ್ಶನ ದೊರಕದೆ ಮಾಧ್ಯಮಗಳ ಜಾಹೀರಾತುಗಳಿಗೆ ಮರುಳಾಗುವುದನ್ನು ಗಮನಿಸಬಹುದು.

ಉದ್ಯೋಗದ ಆಯ್ಕೆ, ತದನಂತರ ಗಂಡ ಅಥವಾ ಹೆಂಡತಿಯ ಆಯ್ಕೆ, ಆ ಸಂದರ್ಭದಲ್ಲಿ ಪೋಷಕರ ಜವಾಬ್ದಾರಿ, ಸಾಮಾನ್ಯ ಕೌಟುಂಬಿಕ ಕಲಹಗಳ ನಿರ್ವಹಣೆ ಈ ವಿಷಯಗಳಲ್ಲಿ ತುಂಬಾ ಎಡುವುತ್ತಿದ್ದಾರೆ. ಪೋಲೀಸು, ಕೋರ್ಟು, ಕಚೇರಿ ಎಂದು ಅಲೆದಾಡುತ್ತಾ ಸಣ್ಣ ವಿಷಯಗಳಿಗೂ ಒತ್ತಡವನ್ನು ತಮ್ಮ ಮೇಲೆ ಎಳೆದುಕೊಳ್ಳುತ್ತಿದ್ದಾರೆ.

ವ್ಯಾಪಾರ, ವ್ಯವಹಾರ, ಸಂಗೀತ, ಸಾಹಿತ್ಯ, ಕಲೆ, ಕ್ರೀಡೆ, ವಿಜ್ಞಾನ ಮುಂತಾದ ಕ್ಷೇತ್ರಗಳಲ್ಲಿ ಆಸಕ್ತಿ ಇರುವವರು, ಬೆರಳೆಣಿಕೆಯಷ್ಟು ಯಶಸ್ವಿ ಜನರನ್ನು ಅನುಕರಣೆ ಮಾಡಲು ಹೋಗಿ ಸರಿಯಾದ ಮಾರ್ಗದರ್ಶವಿಲ್ಲದೆ ತುಂಬಾ ತೊಂದರೆ ಅನುಭವಿಸುತ್ತಿದ್ದಾರೆ.

ಜಾಗತೀಕರಣದ ಈ ಸಂದರ್ಭದಲ್ಲಿ ಬದಲಾದ ವ್ಯವಸ್ಥೆಯನ್ನು ಗುರುತಿಸಲು ಅವರಿಗೆ ಸಾಧ್ಯವಾಗುತ್ತಿಲ್ಲ.

ಮೊದಲಿದ್ದ ಹಿತೈಷಿಗಳ – ಗುರು ಹಿರಿಯರ ಮಾರ್ಗದರ್ಶನಕ್ಕೆ ಪರ್ಯಾಯವಾಗಿ ಈಗ ಇಂಟರ್ ನೆಟ್ ನಲ್ಲಿ ಎಲ್ಲಾ ಮಾಹಿತಿಗಳೂ ಸಿಗುತ್ತಿವೆ. ಕೃತಕ ಬುದ್ಧಿಮತ್ತೆಯ ಅಭಿವೃದ್ಧಿಯೂ ಆಗಿದೆ. ಇದು ಮೇಲ್ನೋಟಕ್ಕೆ ಉತ್ತಮ ಬೆಳವಣಿಗೆ. ಆದರೆ ನಿಜವಾದ ಅಂತಃಸತ್ವ ಇಲ್ಲದ ಯಾಂತ್ರಿಕ ಮತ್ತು ನಿರ್ಜೀವ ಸ್ಥಿತಿಯತ್ತ ಯುವ ಜನಾಂಗವನ್ನು ಕೊಂಡೊಯ್ಯುತ್ತಿದೆ.

ಮಾಹಿತಿಯೇ ಜ್ಞಾನ ಎಂಬ ತಪ್ಪು ಅಭಿಪ್ರಾಯ ಸಾಕಷ್ಟು ಜನರಲ್ಲಿ ಮನೆ ಮಾಡಿದೆ. ಇದು ವ್ಯಕ್ತಿಯ ಕ್ರಿಯಾತ್ಮಕತೆಯನ್ನು ಕೊಲ್ಲುತ್ತಿದೆ. ಹರಿಯುವ ನೀರಿನಂತೆ ಜ್ಞಾನವು ಸಹ ಸದಾ ಚಲಿಸುತ್ತಲೇ ಇರುತ್ತದೆ. ಅದು ನಿಂತ ನೀರಾದಾಗ ಕೊಳೆಯಲಾರಂಭಿಸುತ್ತದೆ. ನಮ್ಮೊಳಗಿನ ಅಜ್ಞಾನವನ್ನು ಹುಡುಕಿ ಹೋಗಲಾಡಿಸುವುದು ಸಹ ಜ್ಞಾನದ ಒಂದು ಭಾಗ. ಅದರ ಆಳಕ್ಕೆ ಇಳಿಯುವ ತಾಳ್ಮೆ, ಸಾಮಾಜಿಕ, ಸಾಂಸ್ಕೃತಿಕ, ಶೈಕ್ಷಣಿಕ ವಾತಾವರಣ ಇಲ್ಲವಾಗಿದೆ.

ಇದು ಅಪಾಯಕಾರಿ ಎನ್ನುವುದಕ್ಕಿಂತಲೂ ಇದೊಂದು ಸವಾಲು ಎಂದು ಪರಿಗಣಿಸಿ ಇದನ್ನು ಸಕಾರಾತ್ಮಕವಾಗಿ ಸ್ವೀಕರಿಸುವ ಮತ್ತು ಆ ಮಕ್ಕಳಿಗೆ ಪ್ರಬುದ್ದತೆಯ ಗುಣಮಟ್ಟದ ಮಾರ್ಗದರ್ಶನ ಸಿಗುವಂತೆ ಮಾಡುವ ಜವಾಬ್ದಾರಿ ಹಿರಿಯರು ತೆಗೆದುಕೊಳ್ಳಬೇಕಾಗಿದೆ.

ಏಕೆಂದರೆ.........

ಕಳೆದು ಹೋಗಿವೆ ಮಕ್ಕಳು ಈಗಾಗಲೇ.........

ಶಾಲೆಯ ಪುಸ್ತಕಗಳಲ್ಲಿ, ಅಂಕಗಳ ಪೈಪೋಟಿಯಲ್ಲಿ, ಮನೆಯ ಟಿವಿ, ಮೊಬೈಲ್, ವಿಡಿಯೋ ಗೇಮುಗಳಲ್ಲಿ, ಕಳೆದು ಹೋಗಿವೆ ಮಕ್ಕಳು ಈಗಾಗಲೇ.............

ಹಿರಿಯರ ಹಣದ ದಾಹದಲ್ಲಿ, ಪೋಷಕರ ಸಮಯದ ಅಭಾವದಲ್ಲಿ, ಕಳೆದು ಹೋಗಿವೆ ಮಕ್ಕಳು ಈಗಾಗಲೇ .............

ವಿಷಪೂರಿತ ಕಲಬೆರಕೆ ಆಹಾರ ನೀರು ಗಾಳಿ ಸೇವಿಸುವ ಪರಿಸರದಲ್ಲಿ, ಅಸಹನೆ ಆತಂಕ ಅನಾಹುತಕಾರಿ ವಾತಾವರಣದಲ್ಲಿ, ಕಳೆದು ಹೋಗಿವೆ ಮಕ್ಕಳು ಈಗಾಗಲೇ.................

ಮೌಲ್ಯಗಳು, ಸಂಬಂಧಗಳು ಶಿಥಿಲವಾದ ಕಾಲದಲ್ಲಿ, ಭಾವನೆಗಳು, ಆತ್ಮೀಯ ಒಡನಾಟಗಳು, ಸಂಸ್ಕಾರಗಳು ಮರೆಯಾದ ಸಮಯದಲ್ಲಿ, ಕಳೆದು ಹೋಗಿವೆ ಮಕ್ಕಳು ಈಗಾಗಲೇ..............

ಭಯೋತ್ಪಾದಕರ, ಮತಾಂಧರ, ಜಾತಿವಾದಿಗಳ ವಿಷ ಚಕ್ರದಲ್ಲಿ, ಭ್ರಷ್ಟ ರಾಜಕೀಯ, ಆಡಳಿತಶಾಹಿ ಮೌಢ್ಯ ತುಂಬಿದ ಮನಸ್ಸುಗಳಲ್ಲಿ.

ಇಂತಹ ಸಂದರ್ಭಗಳಲ್ಲಿ, ಹೀಗೆ ನಮ್ಮ ಕಣ್ಣ ಮುಂದೆಯೇ ಮಕ್ಕಳು ಕಳೆದು ಹೋಗುತ್ತಿರುವಾಗ ಯಾರೋ ಮಕ್ಕಳ ಕಳ್ಳರು ಬಂದಿದ್ದಾರೆ ಎಂಬ ಭ್ರಮೆಗೆ ಒಳಗಾಗಿ ಆತಂಕಕ್ಕೆ ಒಳಗಾಗಿದ್ದೇವೆ.

ಕಳ್ಳರ ಸಂತೆಯಲ್ಲಿ ಮಕ್ಕಳನ್ನು ಆಟವಾಡಲು ಬಿಟ್ಟು, ಅಜಾಗರೂಕತೆಯಿಂದ – ಬೇಜವಾಬ್ದಾರಿಯಿಂದ – ದುರಾಸೆಯಿಂದ – ಮತಿಹೀನತೆಯಿಂದ ವರ್ತಿಸಿ, ಈಗ ಮಕ್ಕಳ ಕಳ್ಳರೆಂದು ಎಲ್ಲರನ್ನೂ ಅನುಮಾನಿಸುತ್ತಾ ಭಯಗೊಂಡಿದ್ದೇವೆ.

ವ್ಯವಸ್ಥೆಯೇ ಹಾದಿ ತಪ್ಪಿದಾಗ ನಾವು, ನೀವು, ಅವರು, ಇವರು ಎಲ್ಲರೂ ಕಳ್ಳರೇ. ಎಲ್ಲರ ಬಗ್ಗೆಯೂ ಅನುಮಾನವೇ.

ಎಲ್ಲವೂ ಆತಂಕಕಾರಿಯೇ .

ಬದಲಾಗಬೇಕಿದೆ – ಬದಲಾಗೋಣ,

ಹೊಸ ನಾಗರಿಕ ಸಮಾಜಕ್ಕೆ ಮುನ್ನುಡಿ ಬರೆಯೋಣ.

ಕಳೆದು ಹೋದ ಮಕ್ಕಳನ್ನು ಹುಡುಕಿ ತರೋಣ.

ನೆಮ್ಮದಿಯ ಸಮಾಜ ಕಟ್ಟೋಣ.

ಆಗ ಮುಂದಿನ ಪೀಳಿಗೆ ಉತ್ತಮ ಗುಣಮಟ್ಟದ ಜೀವನ ಶೈಲಿಯನ್ನು ರೂಪಿಸಿಕೊಳ್ಳಲು ಸಹಾಯವಾಗುತ್ತದೆ.

ಆ ದಿನಗಳ ನಿರೀಕ್ಷೆಯಲ್ಲಿ............

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ, ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



ವಿವೇಕಾನಂದ. ಎಚ್.ಕೆ.
9663750451......
9844013068......

# 30 ರೂಪಾಯಿಗೆ ಎಸ್ಎಸ್ಎಲ್ಸಿ ಪ್ರಶ್ನೆ ಪತ್ರಿಕೆ ಮಾರಾಟ– ಶಿಕ್ಷಕರು, ವಿದ್ಯಾರ್ಥಿಗಳಿಂದಲೇ ಕೃತ್ಯ

**ಬೆಂಗಳೂರು:** ಎಸ್ಎಸ್ಎಲ್ಸಿ (SSLC) ಪ್ರಿಪರೇಟರಿ ಪ್ರಶ್ನೆ ಪತ್ರಿಕೆ ಸೋರಿಕೆ (Exam Paper




Leak) ಪ್ರಕರಣದಲ್ಲಿ ಮಹತ್ವದ ವಿಚಾರ ಬಯಲಾಗಿದೆ. ಈ ಕೃತ್ಯದಲ್ಲಿ 6 ಶಿಕ್ಷಕರು ಹಾಗೂ 9 ವಿದ್ಯಾರ್ಥಿಗಳು ಭಾಗಿಯಾಗಿದ್ದು, ಕೆಲವರಿಗೆ 30 ರೂ.ಗೆ ಪ್ರಶ್ನೆಪತ್ರಿಕೆ ಮಾರಾಟ ಮಾಡಿರುವ ವಿಚಾರ ತಿಳಿದು ಬಂದಿದೆ.

ಪ್ರಶ್ನೆ ಪತ್ರಿಕೆ ಪಡೆದ ಕೆಲವು ವಿದ್ಯಾರ್ಥಿಗಳು ಬರೀ 30 ರೂ.ಗೆ ಮಾರಾಟ ಮಾಡಿದ್ದಾರೆ. ಇನ್ನು ಕೆಲವರು 50 ರೂ. 100 ರೂ. ಹಾಗೂ 150 ರೂ.ಗೆ ಮಾರಾಟ ಮಾಡಿದ್ದಾರೆ. ಮಾರಾಟ ಮಾಡಿ ಬಂದಿರೋ ಹಣ 1500 ರೂ. ಆಗಿದೆ ಎಂಬ ಮಾಹಿತಿ ತಿಳಿದುಬಂದಿದೆ. ಈ ಬಗ್ಗೆ ಶಿಕ್ಷಕರ ಬ್ಯಾಂಕ್ ಅಕೌಂಟ್‌ಗಳನ್ನು ಸೈಬರ್ ಕ್ರೈಂ ಪೊಲೀಸರು ಪರಿಶೀಲನೆ ಮಾಡಿದ್ದಾರೆ. ಆದರೆ, ಸೋರಿಕೆ ಮಾಡಲು ಹಣ ಪಡೆದಿರುವ ಬಗ್ಗೆ ಮಾಹಿತಿ ಸಿಕ್ಕಿಲ್ಲ.

ಶಿಕ್ಷಕರು ತಮ್ಮ ಐಡಿಗಳ ಮೂಲಕ ಡೌನ್‌ಲೋಡ್ ಮಾಡಿದ್ದು, ವಿದ್ಯಾರ್ಥಿಗಳಿಗೆ ನೀಡಿ ರೋದು ಬಯಲಾಗಿದೆ. ಬಂಧಿತ ಶಿಕ್ಷಕರ ಕುಟುಂ ಬಸ್ಥರ ಬ್ಯಾಂಕ್ ಖಾತೆಗಳ ಪರಿಶೀಲನೆ ನಡೆಸಲಾ ಗುತ್ತಿದೆ.

ವಿದ್ಯಾರ್ಥಿ ಗಳಿಗೆ ಯಾರೆಲ್ಲ ಸಂಪರ್ಕ ಮಾಡಿ ಪ್ರಶ್ನೆ ಪತ್ರಿಕೆ ಪಡೆದಿದ್ದರು ಎಂಬ ಬಗ್ಗೆ ಪೊಲೀಸರು ಮಾಹಿತಿ ಕಲೆ ಹಾಕುತ್ತಿದ್ದಾರೆ.

ಕರಣ ಆದ ಬಳಿಕ ಕೆಲವರು ಸಾಮಾಜಿಕ ಜಾಲತಾಣಗಳ ಐಡಿಗಳನ್ನು ಡಿಲೀಟ್ ಮಾಡಿದ್ದಾರೆ. ಆದರೆ ವಿದ್ಯಾರ್ಥಿಗಳ ಇನ್ ಬಾಕ್ಸ್‌ನಲ್ಲಿ ಯಾರೆಲ್ಲ ಸಂಪರ್ಕ ಮಾಡಿದ್ದರು ಎಂಬ ಲೀಸ್ಟ್ ತಯಾರಾಗಿದ್ದು, ಲೀಸ್ಟ್ ಪ್ರಕಾರವಾಗಿ ಐಪಿ ಅಡ್ರೆಸ್ ಪತ್ತೆಗೆ ಪೊಲೀಸರು ಮುಂದಾಗಿದ್ದಾರೆ.

# ಎನ್‌ಹೆಚ್‌ಎಮ್ ಅಡಿ ವೇತನ ಪಾವತಿ ವಿಳಂಬವಾಗದಂತೆ ಮುಂದಿನ ದಿನಗಳಲ್ಲಿ ಅಗತ್ಯ ಕ್ರಮ: ಮಿಷನ್ ನಿರ್ದೇಶಕರು

ಬೆಂಗಳೂರು: ರಾಷ್ಟ್ರೀಯ ಆರೋಗ್ಯ ಅಭಿಯಾನದ ಅಡಿ ವೇತನ ಪಾವತಿಯಲ್ಲಿ ಮುಂದಿನ ದಿನಗಳಲ್ಲಿ ಯಾವುದೇ ವಿಳಂಬವಾಗದಂತೆ ಅಗತ್ಯ ಕ್ರಮವಹಿಸುವುದಾಗಿ ಮಿಷನ್ ನಿರ್ದೇಶಕರ ಕಚೇರಿ ಸ್ಪಷ್ಟಪಡಿಸಿದೆ.

ಈ ಸಂಬಂಧ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ (NHM) ಅಡಿ ಕಾರ್ಯನಿರ್ವಹಿಸುತ್ತಿರುವ ಒಪ್ಪಂದಾಧಾರಿತ ನೌಕರರು ಹಾಗೂ ASHA ಕಾರ್ಯಕರ್ತರಿಗೆ 2025ರ ನವೆಂಬರ್ ಮತ್ತು ಡಿಸೆಂಬರ್ ತಿಂಗಳ ವೇತನ ಮತ್ತು ಪ್ರೋತ್ಸಾಹಧನ ಪಾವತಿಯಲ್ಲಿ ಸಂಭವಿಸಿದ ವಿಳಂಬದ ಕುರಿತು ಸ್ಪಷ್ಟನೆ ನೀಡಿದ್ದಾರೆ.

ಭಾರತ ಸರ್ಕಾರದ ಮಾರ್ಗಸೂಚಿಗಳಂತೆ, ರಾಷ್ಟ್ರೀಯ ಆರೋಗ್ಯ ಅಭಿಯಾನ ಯೋಜನೆಯನ್ನು ಆರ್ಥಿಕ ವರ್ಷದ ಮಧ್ಯಭಾಗದಲ್ಲಿ SNA-SPARSH ಎಂಬ ಹೊಸ ಹಣಕಾಸು ವ್ಯವಸ್ಥೆಗೆ ವರ್ಗಾಯಿಸಲಾಗಿದೆ. ಹಿಂದಿನ ವ್ಯವಸ್ಥೆಯಿಂದ ಹೊಸ ವ್ಯವಸ್ಥೆಗೆ ವರ್ಗಾವಣೆಯಾಗುವ ಸಂದರ್ಭದಲ್ಲಿ, ಕೇಂದ್ರ ಮತ್ತು ರಾಜ್ಯ ಮಟ್ಟಗಳಲ್ಲಿ ನಿಧಿ ಬಿಡುಗಡೆ ಹಾಗೂ ಪಾವತಿ ಪ್ರಕ್ರಿಯೆಗಳಲ್ಲಿ ತಾಂತ್ರಿಕ ಮತ್ತು ಪ್ರಕ್ರಿಯಾತ್ಮಕ ಬದಲಾವಣೆಗಳು ಅಗತ್ಯವಾಗಿದ್ದು, ಇದರಿಂದಾಗಿ ಕೆಲ ತಾತ್ಕಾಲಿಕ ವಿಳಂಬಗಳು ಉಂಟಾಗಿವೆ ಎಂದು ಒಪ್ಪಿಕೊಂಡಿದ್ದಾರೆ.

SNA-SPARSH ವ್ಯವಸ್ಥೆಯ ಅಡಿ ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾದ ನಂತರ ಮಾತ್ರ ರಾಜ್ಯ ಸರ್ಕಾರವು ಪಾವತಿಗಳನ್ನು ಪ್ರಕ್ರಿಯೆಗೊಳಿಸಲು ಸಾಧ್ಯವಾಗುತ್ತದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಪಾಲಿನ ನಿಧಿಗಳ ಸ್ವೀಕೃತಿಯಲ್ಲಿ ಉಂಟಾದ ವಿಳಂಬ ಮತ್ತು ಹೊಸ ವ್ಯವಸ್ಥೆಗೆ ಹೊಂದಾಣಿಕೆಯ ಪ್ರಕ್ರಿಯೆಗಳ ಕಾರಣದಿಂದಾಗಿ, NHM ನೌಕರರಿಗೆ ವೇತನ ಪಾವತಿ ನಿರ್ದಿಷ್ಟ ಸಮಯಕ್ಕೆ ಸಾಧ್ಯವಾಗಲಿಲ್ಲ ಎಂದಿದ್ದಾರೆ.

ಈ ಹಿನ್ನೆಲೆಯಲ್ಲಿ, ಭಾರತ ಸರ್ಕಾರ 08.01.2026 ರಂದು 175.75 ಕೋಟಿ ಅನುದಾನವನ್ನು ಬಿಡುಗಡೆ ಮಾಡಿದೆ. ಸಂಬಂಧಿತ ಕೇಂದ್ರ ಹಾಗೂ ರಾಜ್ಯ ಪಾಲಿನ ನಿಧಿಗಳು ಪ್ರಸ್ತುತ ರಾಜ್ಯ ಸರ್ಕಾರದ ಮಟ್ಟದಲ್ಲಿ ಪ್ರಕ್ರಿಯೆಯಲ್ಲಿದ್ದು, ಶೀಘ್ರದಲ್ಲೇ ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದ್ದಾರೆ.

## ಎನ್‌ಇಪಿ ವಿರುದ್ಧ ತಮಿಳುನಾಡಿನ ಜೊತೆಗೆ ಕರ್ನಾಟಕವೂ ಹೋರಾಡಲಿದೆ:

# ಪ್ರಾಥಮಿಕ ಮತ್ತು ಪ್ರೌಢ ಸಚಿವ ಮಧು ಬಂಗಾರಪ್ಪ

ಚೆನ್ನೈ (ತಮಿಳುನಾಡು): ಕೇಂದ್ರ ಸರ್ಕಾರ ರಾಷ್ಟ್ರೀಯ ಶಿಕ್ಷಣ ನೀತಿ ವಿರೋಧಿಸಿ ತಮಿಳುನಾಡು ಸರ್ಕಾರದ ರೀತಿಯಲ್ಲಿ ನಾವು ಕೂಡ ಹೋರಾಟ ನಡೆಸುತ್ತೇವೆ ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ.

ಚೆನ್ನೈನಲ್ಲಿ ನಡೆಯು ತ್ತಿರುವ ಅಂತಾರಾಷ್ಟ್ರೀಯ



ಪುಸ್ತಕ ಮೇಳದ ಬಳಿಕ ಮಾಧ್ಯಮಗಳಿಗೆ ಮಾತನಾಡಿದ ಅವರು, ತಮಿಳು ನಾಡಿನಂತೆಯೇ ಕರ್ನಾಟಕವೂ ಕೇಂದ್ರ ಸರ್ಕಾರದ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ವಿರೋಧಿಸುತ್ತಿದೆ. ನಮಗೆ ನಮ್ಮದೇ ಆದ ವಿಶಿಷ್ಟ ಸಂಸ್ಕೃತಿ, ಭಾಷೆ ಮತ್ತು ಸಂಪ್ರದಾಯವಿದೆ. ನಾವು ನಮ್ಮ ಮಾತೃಭಾಷೆಯನ್ನು ಗೌರವಿಸುತ್ತೇವೆ. ಯಾವುದೇ ರಾಜ್ಯದಲ್ಲಿ ಹಿಂದಿ ಹೇರಿಕೆಯನ್ನು ಒಪ್ಪಲು ಸಾಧ್ಯವಿಲ್ಲ. ನಮಗೆ ರಾಜ್ಯ ಶಿಕ್ಷಣ ನೀತಿ ಇರುವುದರಿಂದ ನಾವು ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಒಪ್ಪಲು ಸಾಧ್ಯವಿಲ್ಲ. ತಮಿಳು ನಾಡಿನಂತೆಯೇ, ಕೇಂದ್ರ ಸರ್ಕಾರವು ಕರ್ನಾಟಕಕ್ಕೆ ಶಿಕ್ಷಣ ನಿಧಿಯನ್ನು ನೀಡುವಲ್ಲಿ ತಾರತಮ್ಯ ಮಾಡುತ್ತಿದೆ. ಇದರ ವಿರುದ್ಧ ನಾವು ತಮಿಳುನಾಡಿನೊಂದಿಗೆ ಒಟ್ಟಾಗಿ ಹೋರಾಡುತ್ತಿದ್ದೇವೆ ಎಂದರು.

ರಾಷ್ಟ್ರೀಯ ಶಿಕ್ಷಣ ನೀತಿಯನ್ನು ವಿರೋಧಿಸುವವರು ಗೊಂದಲ ಕ್ಕೊಳಗಾಗಿದ್ದಾರೆ ಎಂಬ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಕೇಂದ್ರ ಸಚಿವರೇ ಗೊಂದಲಕ್ಕೊಳಗಾಗಿದ್ದಾರೆ. ಕೇಂದ್ರ ಶಿಕ್ಷಣ ಸಚಿವರಿಗೆ ತಿಳಿದಿರುವ ಏಕೈಕ ಭಾಷೆ ಮೋದಿ ಭಾಷೆ. ಅದೇ ಸಮಸ್ಯೆ ಎಂದರು.

**ಕರ್ನಾಟಕದಲ್ಲಿಯೂ ಅಂತಾರಾಷ್ಟ್ರೀಯ ಪುಸ್ತಕ ಮೇಳ:** ಇನ್ನು ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವ ಮಧು ಬಂಗಾರಪ್ಪ, ಸಾಹಿತ್ಯ ಮತ್ತು ಬರವಣಿಗೆಗೆ ಯಾವುದೇ ಮಿತಿಯಿಲ್ಲ. ಚೆನ್ನೈ ಅಂತಾ ರಾಷ್ಟ್ರೀಯ ಪುಸ್ತಕ ಮೇಳದಂತೆ ಕರ್ನಾಟಕದಲ್ಲಿ ಅಂತಾರಾಷ್ಟ್ರೀಯ ಪುಸ್ತಕ ಮೇಳವನ್ನು ನಾವು ಪ್ರಾರಂಭಿಸ ಲಿದ್ದೇವೆ. ಶೀಘ್ರದಲ್ಲೇ ಈ ಕುರಿತು ಕ್ರಮ ಕೈಗೊಳ್ಳುತ್ತೇವೆ. ತಮಿಳು ನಾಡಿನ ಅನುಭವಿ ಸಚಿವರು ಇದಕ್ಕಾಗಿ ನಮಗೆ ಸೂಚನೆಗಳನ್ನು ನೀಡಬೇಕು. ಕರ್ನಾಟಕದ ಗ್ರಾಮೀಣ ಪ್ರದೇಶಗಳಲ್ಲಿ ಸುಮಾರು 5,000 ಗ್ರಂಥಾಲಯಗಳನ್ನು ಸ್ಥಾಪಿಸಿದ್ದೇವೆ.

ಇದರ ಮೂಲಕ ನಾವು ಓದುವ ಅಭ್ಯಾಸವನ್ನು ಬೆಳೆಸಿ ದ್ದೇವೆ. ಪ್ರತಿದಿನ ಒಂದು ಕೋಟಿ ಶಾಲಾ ವಿದ್ಯಾರ್ಥಿಗಳು ಸಂವಿ ಧಾನದ ಪೀಠಿಕೆಯನ್ನು ಓದುತ್ತಾರೆ. ನಾವು ದ್ವಿಭಾಷಾ ಶಿಕ್ಷಣವನ್ನು ಅನುಸರಿ ಸುತ್ತಿದ್ದೇವೆ. ನಮ್ಮ ಪಠ್ಯಕ್ರಮವು ತಮಿಳು, ಮಲಯಾಳಂ ಮತ್ತು ಮರಾಠಿ ಸೇರಿದಂತೆ ವ್ಯಾಪಕವಾಗಿ ಮಾತನಾಡುವ ಭಾಷೆಗಳನ್ನು ಒಳಗೊಂಡಿದೆ.

ಕಾರ್ಯಕ್ರಮದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಡಿಎಂಕೆ ಸಂಸದೀಯ ಪಕ್ಷದ ನಾಯಕಿ ಕನಿಮೋಳಿ ಕರುಣಾನಿಧಿ, ಪುಸ್ತಕಗಳ ಮೂಲಕ ವ್ಯಕ್ತಿಯ ಪ್ರಪಂಚ ಮತ್ತು ಜೀವನದ ಬಗ್ಗೆ ಕಲಿಯಬಹುದು. ಸಾಹಿತ್ಯವು ಧರ್ಮ ಮತ್ತು ಜನಾಂಗೀಯತೆಯಂತಹ ಜನರ ನಡುವಿನ ಅಡೆತಡೆಗಳನ್ನು ಇವು ಒಡೆಯುತ್ತದೆ. ಪುಸ್ತಕ ಮೇಳವು ಪ್ರಪಂಚದ ಜೀವನ, ಹೋರಾಟ ಮತ್ತು ಗುರುತನ್ನು ಅರ್ಥ ಮಾಡಿಕೊಳ್ಳಲು ನಮಗೆ ಸಹಾಯ ಮಾಡುತ್ತದೆ ಎಂದರು. ಶಾಲಾ ಶಿಕ್ಷಣ ಸಚಿವ ಅನ್ಬಿಲ್ ಮಹೇಶ್ ಪೊಯ್ಯಮೋಳಿ ಮಾತನಾಡಿ, ಈ ವರ್ಷದ ಚೆನ್ನೈ ಪುಸ್ತಕ ಮೇಳ 2026 ರಲ್ಲಿ ವಿಶೇಷ ಆಹ್ವಾನಿತರಾಗಿ ಫ್ರಾಂಕ್‌ಫರ್ಟ್ ಭಾಗ ವಹಿಸುತ್ತಿರುವುದು ನಿರ್ವಹಣಾ ಸಮಿತಿಗೆ ದೊಡ್ಡ ಗೌರವವಾಗಿದೆ. ಈ ಮೂಲಕ ಪ್ರಪಂಚದಾದ್ಯಂತದ ಪ್ರಕಾಶಕರು ಮತ್ತು ಬರಹಗಾರರು ಚೆನ್ನೈ ಪುಸ್ತಕ ಮೇಳಗಳ ಮೇಲೆ ಗಮನಹೊಂದಿದ್ದು, ಈ ಮೂಲಕ, ಚೆನ್ನೈ ಪುಸ್ತಕ ಮೇಳವು ಮುಂದಿನ ಹಂತಕ್ಕೆ ಕೊಂಡೊಯ್ಯುತ್ತದೆ ಎಂದು ತಿಳಿಸಿದರು.

ಈ ಅಂತಾರಾಷ್ಟ್ರೀಯ ಪುಸ್ತಕ ಮೇಳದಲ್ಲಿ ತಮಿಳುನಾಡು, ಕೇರಳ, ದೆಹಲಿ, ಗುಜರಾತ್, ಕರ್ನಾಟಕ, ಮಹಾರಾಷ್ಟ್ರ, ರಾಜಸ್ಥಾನ, ಪಶ್ಚಿಮ ಬಂಗಾಳ ಮತ್ತು ತೆಲಂಗಾಣ ಸೇರಿದಂತೆ 8 ರಾಜ್ಯಗಳಿಂದ 42 ಪ್ರಕಾಶಕರು ಭಾಗವಹಿಸಲಿದ್ದಾರೆ. ಇಂದಿನಿಂದ ಮೂರು ದಿನಗಳ ಈ ಪುಸ್ತಕ ಮೇಳ ನಡೆಯಲಿದೆ.

# ಆಂಧ್ರದ ಅತ್ತೆ ಮನೆಯಲ್ಲಿ ಅಳಿಯನಿಗೆ ರಾಜಾತಿಥ್ಯ: 290 ಖಾದ್ಯಗಳ ಭರ್ಜರಿ ಔತಣ

ಹೊಸದಾಗಿ ಮದುವೆಯಾದ ಅಳಿಯ ಮೊದಲ ಬಾರಿಗೆ ಅತ್ತೆ ಮನೆಗೆ ಹಬ್ಬಕ್ಕೆ ಬಂದರೆ ಅಲ್ಲಿನ ಸಂಭ್ರಮವೇ ಬೇರೆ. ಅದರಲ್ಲೂ ಆಂಧ್ರಪ್ರದೇಶದ ಗೋದಾವರಿ ಜಿಲ್ಲೆಗಳ ಭಾಗದಲ್ಲಿ ಅಳಿಯನಿಗೆ ನೀಡುವ ಸತ್ಕಾರ ಇಡೀ ದೇಶದಲ್ಲೇ ಹೆಸರುವಾಸಿ. ಈ ಬಾರಿ ಸಂಕ್ರಾಂತಿ ಹಬ್ಬದಂದು ಆಂಧ್ರದ ನರ್ಸಿಪಟ್ಟಂನಲ್ಲಿ ಅತ್ತೆ–ಮಾವ ತಮ್ಮ ಹೊಸ ಅಳಿಯನಿಗಾಗಿ ಬರೋಬ್ಬರಿ 290 ಬಗೆಯ ವಿವಿಧ ಖಾದ್ಯಗಳನ್ನು ಸಿದ್ಧಪಡಿಸಿ ಉಣಬಡಿಸಿದ್ದಾರೆ.



ನರ್ಸಿಪಟ್ಟಂನ ಶಾಂತಿನಗರ ನಿವಾಸಿಗಳಾದ ರಮೇಶ್ ಕುಮಾರ್ ಮತ್ತು ಕಲಾವತಿ ದಂಪತಿಗಳು, ತಮ್ಮ ಮಗಳು ಮತ್ತು ಅಳಿಯ ಶ್ರೀಹರ್ಷ (29) ಅವರ ಮೊದಲ ಸಂಕ್ರಾಂತಿ ಆಚರಣೆಯನ್ನು ಸ್ಮರಣೀಯವಾಗಿಸಲು ಅತೀ ವಿಜೃಂಭ ಣೆಯಿಂದ ಉಪಹಾರ ತಯಾರಿಸಿ ಅಳಿಯನಿಗೆ ಬಡಿಸಿದ್ದಾರೆ.

ಸಾಂಪ್ರದಾಯಿಕ ಗೋದಾವರಿ ಶೈಲಿಯಲ್ಲಿ ತಯಾರಾದ ಈ ಔತಣದಲ್ಲಿ ಸಿಹಿ ತಿಂಡಿಗಳು, ಖಾರ, ವಿವಿಧ ಬಗೆಯ ಅನ್ನ, ಸಾರು, ಪಲ್ಯಗಳು ಹಾಗೂ ತಂಪು ಪಾನೀಯಗಳು ಸೇರಿದ್ದವು. ಊಟದ ಮೇಜಿನ ಮೇಲೆ ಸಾಲು ಸಾಲಾಗಿ ಜೋಡಿಸಿಟ್ಟಿದ್ದ ಪಾತ್ರೆಗಳನ್ನು ಕಂಡ ಅಳಿಯ ಶ್ರೀಹರ್ಷ ಒಂದು ಕ್ಷಣ ದಂಗಾಗಿದ್ದಾರೆ.

**ಏನೇನಿತ್ತು ಈ 290 ಖಾದ್ಯಗಳ ಪಟ್ಟಿಯಲ್ಲಿ**

ಈ ಬೃಹತ್ ಔತಣದಲ್ಲಿ ಆಂಧ್ರದ ಪ್ರಸಿದ್ಧ ಪೂತರೆಕುಲು, ಬೊಬ್ಬಟ್ಟುಗಳು, ಹತ್ತಾರು ಬಗೆಯ ಉಪ್ಪಿನಕಾಯಿಗಳು, ವಿವಿಧ ಶೈಲಿಯ ಬಿರಿಯಾನಿ ಮತ್ತು ಪುಲಾವ್, ಸಾಂಪ್ರದಾಯಿಕ ಆಂಧ್ರದ ಪಪ್ಪು (ಬೇಳೆ), ಆವಕಾಯ ಹಾಗೂ ರುಚಿ ಕರವಾದ ದಕ್ಷಿಣ ಭಾರತದ ಖಾದ್ಯಗ ಳಿದ್ದವು. ಪ್ರತಿಯೊಂದು ಪದಾರ್ಥವನ್ನೂ ಅತ್ಯಂತ ಪ್ರೀತಿಯಿಂದ ಮನೆಯಲ್ಲೇ ಸಿದ್ಧಪಡಿಸಲಾಗಿತ್ತು.

ಕೇವಲ ನರ್ಸಿಪಟ್ಟಂ ಮಾತ್ರವಲ್ಲದೆ, ಗುಂಟೂರಿನ ತೆನಾಲಿಯಲ್ಲೂ ಇಂತಹದ್ದೇ ಒಂದು ಘಟನೆ ನಡೆದಿದೆ. ಅಲ್ಲಿನ ಅತ್ತೆ ಮನೆಯವರು ತಮ್ಮ ಅಳಿಯ ಶ್ರೀದತ್ತ ಅವರಿಗಾಗಿ 158 ವಿವಿಧ ರೀತಿಯ ಖಾದ್ಯಗಳ ಭೋಜನ ಬಡಿಸಿದ್ದರು. ಆಂಧ್ರದ ಸಂಸ್ಕೃತಿಯಲ್ಲಿ ಅಳಿಯನನ್ನು ಸಾಕ್ಷಾತ್ ವಿಷ್ಣು ಸ್ವರೂಪಿ ಎಂದು ಭಾವಿಸಲಾಗುತ್ತದೆ. ವಿಶೇಷವಾಗಿ ಸಂಕ್ರಾಂತಿ ಅಥವಾ ಪೆದ್ದ ಪಂಡುಗ ಸಮಯದಲ್ಲಿ ಅಳಿಯನಿಗೆ ಈ ರೀತಿ ಸತ್ಕಾರ ಮಾಡುವುದು ಅಲ್ಲಿನ ಒಂದು ಸಂಪ್ರದಾಯವಾಗಿದೆ.

# ತಮಿಳುನಾಡಿನಲ್ಲಿ ಕನ್ನಡಿಗರ ಮೇಲೆ ಹಲ್ಲೆ:

## ಜಿ. ಪರಮೇಶ್ವರ್ ಭೇಟಿಯಾದ ಯುವ ಕರ್ನಾಟಕ ವೇದಿಕೆ

**ಬೆಂಗಳೂರು:** ತಮಿಳುನಾಡಿನಲ್ಲಿ ಇತ್ತೀಚೆಗೆ ನಡೆದಿರುವ ಶಬರಿಮಲೆ ಯಾತ್ರೆಗೆ ತೆರಳುತ್ತಿದ್ದ ಕನ್ನಡಿಗ ಭಕ್ತರು ಹಾಗೂ ಟಿಟಿ ವಾಹನ ಚಾಲಕರ ಮೇಲೆ ನಡೆದ ಹಲ್ಲೆ ಘಟನೆಗಳನ್ನು ತೀವ್ರವಾಗಿ ಖಂಡಿಸಿ ಯುವ ಕರ್ನಾಟಕ ವೇದಿಕೆ ವತಿಯಿಂದ ಕರ್ನಾಟಕದ ಮಾನ್ಯ ಗೃಹ ಸಚಿವರಾದ ಡಾ.ಜಿ.ಪರಮೇಶ್ವರ್ ಅವರನ್ನು ಭೇಟಿ ಮಾಡಿ, ಮನವಿ ಸಲ್ಲಿಸಲಾಯಿತು. ಶಬರಿಮಲೆ ಯಾತ್ರೆ ಪವಿತ್ರ ಧಾರ್ಮಿಕ ಯಾತ್ರೆಯಾಗಿದ್ದು, ಕರ್ನಾಟಕ ಸೇರಿದಂತೆ ವಿವಿಧ ರಾಜ್ಯಗಳಿಂದ ಲಕ್ಷಾಂತರ ಭಕ್ತರು ಶಾಂತಿಯುತವಾಗಿ ಯಾತ್ರೆ ಕೈಗೊಳ್ಳುತ್ತಾರೆ. ಇಂತಹ ಸಂದರ್ಭದಲ್ಲೇ ತಮಿಳುನಾಡಿನ ಕೆಲವು ಪ್ರದೇಶಗಳಲ್ಲಿ ಕನ್ನಡಿಗ ಭಕ್ತರು ಹಾಗೂ ವಾಹನ ಚಾಲಕರ ಮೇಲೆ ನಡೆದ ದೌರ್ಜನ್ಯಗಳು ಗಂಭೀರ ಆತಂಕಕ್ಕೆ ಕಾರಣವಾಗಿವೆ ಎಂದು ಯುವ ಕರ್ನಾಟಕ ವೇದಿಕೆ ಸ್ಪಷ್ಟಪಡಿಸಿದೆ. ಇದನ್ನು ಯಾವುದೇ ಕಾರಣಕ್ಕೂ ಸಹಿಸಲಾಗದು ಎಂದು ವೇದಿಕೆ ಅಭಿಪ್ರಾಯಪಟ್ಟಿದೆ.

ಯುವ ಕರ್ನಾಟಕ ವೇದಿಕೆ ಪ್ರತಿನಿಧಿಗಳು, ತಕ್ಷಣವೇ ತಮಿಳುನಾಡು ಸರ್ಕಾರ ಹಾಗೂ ಅಲ್ಲಿನ ಪೊಲೀಸ್ ಅಧಿಕಾರಿಗಳೊಂದಿಗೆ ಸಂವಾದ ನಡೆಸಿ, ಇಂತಹ ಘಟನೆಗಳು ಮರುಕಳಿಸದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಗೃಹ ಸಚಿವರನ್ನು ಮನವಿ ಮಾಡಿಕೊಂಡರು. ಜೊತೆಗೆ, ಶಬರಿಮಲೆ ಯಾತ್ರೆಯ ಅವಧಿಯಲ್ಲಿ ತಮಿಳುನಾಡಿನೊಳಗೆ ಸಂಚರಿಸುವ ಕನ್ನಡಿಗ ಭಕ್ತರು, ವಾಹನ ಚಾಲಕರು ಮತ್ತು ಪ್ರವಾಸಿಗರಿಗೆ ಸಮರ್ಪಕ ಪೊಲೀಸ್ ರಕ್ಷಣೆ ಒದಗಿಸುವಂತೆ ಒತ್ತಾಯಿಸಿದರು. ಈ ವೇಳೆ, ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿ ಸಬೇಕು ಹಾಗೂ ರಾಜ್ಯಾಂತರ



ಪ್ರಯಾಣಿಸುವ ಕನ್ನಡಿಗರ ಸುರಕ್ಷತೆಗೆ ವಿಶೇಷ ಮಾರ್ಗಸೂಚಿ ಜಾರಿಗೊಳಿಸುವ ಅಗತ್ಯವಿದೆ ಎಂದು ಯುವ ಕರ್ನಾಟಕ ವೇದಿಕೆ ಹೇಳಿದೆ. ಮನವಿಯನ್ನು ಸ್ವೀಕರಿಸಿದ ಮಾನ್ಯ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ಈ ವಿಚಾರ ಗಂಭೀರವಾದುದಾಗಿ ತಿಳಿಸಿ, ಕನ್ನಡಿಗರ ಸುರಕ್ಷತೆ ಮತ್ತು ಹಿತ ಕಾಯಲು ರಾಜ್ಯ ಸರ್ಕಾರ ಸಂಪೂರ್ಣ ಬದ್ಧವಾಗಿದೆ ಎಂದು ಭರವಸೆ ನೀಡಿದರು. ಯುವ ಕರ್ನಾಟಕ ವೇದಿಕೆಯು ರಾಜ್ಯದ ಹಿತ ಮತ್ತು ಕನ್ನಡಿಗರ ಗೌರವಕ್ಕಾಗಿ ಸದಾ ಹೋರಾಟ ನಡೆಸುತ್ತಿದ್ದು, ಇಂತಹ ಅನ್ಯಾಯಗಳ ವಿರುದ್ಧ ತನ್ನ ಹೋರಾಟ ಮುಂದುವರಿಸುವುದಾಗಿ ಈ ಸಂದರ್ಭದಲ್ಲಿ ಸ್ಪಷ್ಟಪಡಿಸಿದೆ.

ಇತ್ತೀಚೆಗೆ ಶಬರಿಮಲೆಗೆ ತೆರಳುತ್ತಿದ್ದ ಕನ್ನಡಿಗರ ವಾಹನದಲ್ಲಿದ್ದ ಕನ್ನಡ ಬಾವುಟವನ್ನು ತೆಗೆಯುವಂತೆ ತಮಿಳುನಾಡಿನಲ್ಲಿ ಪುಂಡರು ಆಗ್ರಹಿಸಿ, ಚಾಲಕನ ಮೇಲೆ ಹಲ್ಲೆ ನಡೆಸಿದ್ದರು. ಈ ಘಟನೆಯನ್ನು ನಾನು ಖಂಡಿಸಿದ್ದ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ, ತಮಿಳಿಗರು ಮತ್ತು ಕನ್ನಡಿಗರು ಕರ್ನಾ ಟಕದಲ್ಲಿ ಸೋದರ ಭಾವದಿಂದ ಬಾಳುತ್ತಿರುವಾಗ, ತಮಿಳುನಾಡಿನಲ್ಲಿ ಪುಂಡರು ಕನ್ನಡಿಗ ಪ್ರಯಾಣಿಕರನ್ನು ಗುರಿಯಾಗಿಸಿ ಹಲ್ಲೆ ನಡೆಸುವುದು, ಕನ್ನಡಿಗರ ಅಸ್ಮಿತೆಯಾದ ಕೆಂಪು ಹಳದಿ ಬಾವುಟ ವನ್ನು ಅವಮಾನಿಸುವುದನ್ನು ಸಹಿಸಲು ಸಾಧ್ಯವಿಲ್ಲ ಎಂದು ಕಿಡಿಕಾರಿದ್ದರು. ತಮಿಳುನಾಡಿನ ಚುನಾವಣೆ ಸನಿಹದಲ್ಲಿರುವಾಗ ಇಂತಹ ಪ್ರಾದೇಶಿಕ ದ್ವೇಷವನ್ನೂ ಅಸ್ತ್ರವಾಗಿಸಿ ಕೊಳ್ಳುವ ಹುನ್ನಾರ ಇದರಲ್ಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಕ್ಷಣವೇ ತಮಿಳುನಾಡು ಮುಖ್ಯಮಂತ್ರಿಗಳಿಗೆ ಘಟನೆಯ ಕುರಿತು ಕ್ರಮ ಕೈಗೊಳ್ಳುವಂತೆ, ಇಂತಹ ಘಟನೆಗಳು ಪುನರಾವರ್ತನೆಯಾಗದಂತೆ ನೋಡಿಕೊಳ್ಳಲು ಆಗ್ರಹಿಸಬೇಕು ಎಂದಿದ್ದರು.

# ಮಕ್ಕಳ ಫೇವರಿಟ್ 'ಜಾಲಿ ರಾಂಚರ್' ಮಿಠಾಯಿಯಲ್ಲಿ ಕ್ಯಾನ್ಸರ್ ಕಾರಕ ಅಂಶ ಪತ್ತೆ

ಅಮೆರಿಕಾದಿಂದ ಜಗತ್ತಿನಾದ್ಯಂತ ರಫ್ತಾಗುವ ಅತ್ಯಂತ ಜನಪ್ರಿಯ ಸಿಹಿ ಮಿಠಾಯಿ ಬ್ರ್ಯಾಂಡ್ ಜಾಲಿ ರಾಂಚರ್ (Jolly Rancher) ಈಗ ಭಾರೀ ವಿವಾದಕ್ಕೆ ಸಿಲುಕಿದೆ. ಈ ಮಿಠಾಯಿಗಳಲ್ಲಿ ಕ್ಯಾನ್ಸರ್ ಉಂಟುಮಾಡುವ ಅಪಾಯಕಾರಿ ರಾಸಾಯನಿಕಗಳು ಪತ್ತೆಯಾಗಿರುವ ಹಿನ್ನೆಲೆಯಲ್ಲಿ, ಬ್ರಿಟನ್ (UK) ಸರ್ಕಾರವು ಮಾರುಕಟ್ಟೆಯಿಂದ ಈ ಉತ್ಪನ್ನಗಳನ್ನು ತುರ್ತಾಗಿ ವಾಪಸ್ ಪಡೆಯಲು (Recall) ಆದೇಶಿಸಿದೆ.

**ಪತ್ತೆಯಾದ ಅಪಾಯಕಾರಿ ರಾಸಾಯನಿಕಗ ಳು ಯಾವುವು**

ಬ್ರಿಟನ್‌ನ ಆಹಾರ ಸುರಕ್ಷತಾ ಸಂಸ್ಥೆ ನಡೆಸಿರುವ ತಪಾಸಣೆಯಲ್ಲಿ ಈ ಮಿಠಾಯಿಗಳಲ್ಲಿ ಎರಡು ಪ್ರಮುಖ ಖನಿಜ ತೈಲ ರಾಸಾಯನಿಕಗಳು ಪತ್ತೆಯಾಗಿವೆ:

1.MOAH (Mineral Oil Aromatic Hydrocarbons): ಇದು ಅತ್ಯಂತ ಅಪಾಯಕಾರಿ ರಾಸಾಯ ನಿಕವಾಗಿದ್ದು, ಮಾನವನ ಡಿಎನ್ಎ (DNA) ರಚನೆಯನ್ನೇ ಹಾನಿಗೊಳಿಸುವ ಸಾಮರ್ಥ್ಯ ಹೊಂದಿದೆ.

2.MOSH (Mineral Oil Saturated Hydrocarbons): ಇವು ಮಾನವನ ದೇಹದ ಅಂಗಾಂಗಗಳಲ್ಲಿ ಸಂಗ್ರಹವಾಗಿ ದೀರ್ಘಕಾಲದ ಆರೋಗ್ಯ ಸಮಸ್ಯೆಗಳನ್ನು ತಂದೊಡ್ಡುತ್ತವೆ.

ಬ್ರಿಟನ್‌ನ ಕಟ್ಟುನಿಟ್ಟಾದ ಆಹಾರ ನಿಯಮಗಳ ಪ್ರಕಾರ, ಆಹಾರ ಪದಾರ್ಥ ಗಳಲ್ಲಿ ಈ ರಾಸಾಯನಿಕಗಳ ಬಳಕೆಯನ್ನು ಸಂಪೂ ರ್ಣವಾಗಿ ನಿಷೇಧಿ ಸಲಾಗಿದೆ.

ಕ್ಯಾನ್ಸರ್ ಭೀತಿ

ವಿಶೇಷವಾಗಿ ಈ ಮಿಠಾಯಿಗಳನ್ನು ಮಕ್ಕ ಳು ಅತಿಯಾಗಿ ಇಷ್ಟಪಟ್ಟು ತಿನ್ನುತ್ತಾರೆ. ಎಫ್ಎಸ್ಎ ತಿಳಿಸಿದ ಪ್ರಕಾರ, MOAH ರಾಸಾಯನಿಕವು ಕ್ಯಾನ್ಸರ್‌ಕಾರಕ (Carcin ogenic) ಗುಣವನ್ನು ಹೊಂದಿದೆ. ಸಣ್ಣ ವಯಸ್ಸಿನ ಮಕ್ಕಳು ಇಂತ ಹ ರಾಸಾ ಯನಿಕಯುಕ್ತ ಮಿಠಾಯಿಗಳನ್ನು ಸೇವಿಸುವುದರಿಂದ ಅವರ ಬೆಳವಣಿಗೆಯ ಮೇಲೆ ಗಂಭೀರ ಪರಿಣಾಮ ಬೀರುವುದಲ್ಲದೆ, ಭವಿಷ್ಯದಲ್ಲಿ ಕ್ಯಾನ್ಸರ್ ಬರುವ ಸಾಧ್ಯತೆ ಹೆಚ್ಚಿರುತ್ತದೆ ಎಂದು ವೈದ್ಯಕೀಯ ತಜ್ಞರು ಕಳವಳ ವ್ಯಕ್ತಪಡಿಸಿದ್ದಾರೆ.

ಜಾಲಿ ರಾಂಚರ್ ಬ್ರ್ಯಾಂಡ್‌ನ ಪ್ರಮುಖ ಉತ್ಪನ್ನಗಳಾದ ಜಾಲಿ ರಾಂಚರ್ ಹಾರ್ಡ್ ಕ್ಯಾಂಡಿ ,




ಮಿಸ್‌ಫಿಟ್ಸ್ ಗಮ್ಮೀಸ್ , ಹಾರ್ಡ್ ಕ್ಯಾಂಡಿ ಫ್ರೂಟಿ 2 ಇನ್ 1, ಬೆರಿ ಗಮ್ಮೀಸ್ , ಫಿಲ್ಡ್ ಪಾಪ್ಸ್ , ಫ್ರೀಜ್ ಡ್ರೈಡ್ ಕ್ಯಾಂಡಿ ಗಳನ್ನ ಮಾರುಕಟ್ಟೆಯಿಂದ ತೆಗೆದುಹಾಕಲಾಗುತ್ತಿದೆ.

ಈ ಉತ್ಪನ್ನಗಳ ತಯಾರಕ ಸಂಸ್ಥೆ ಯಾದ ಅಮೆರಿಕದ 'ದಿ ಹರ್ಷ ಕಂಪನಿ' ಈಗಾಗಲೇ ಬ್ರಿಟನ್ ಮಾರುಕಟ್ಟೆಗೆ ಅಧಿಕೃತ ಪೂರೈಕೆಯನ್ನು ನಿಲ್ಲಿಸಿದೆ. ಆದರೂ, ಮೂರನೇ ವ್ಯಕ್ತಿಗಳ ಮೂಲಕ (Import) ಆಮದು ಮಾಡಿಕೊಳ್ಳಲಾಗುತ್ತಿದ್ದ ಈ ಮಿಠಾಯಿಗಳನ್ನು ಈಗ ಸಂಪೂರ್ಣವಾಗಿ ವಾಪಸ್ ಪಡೆಯಲಾಗುತ್ತಿದೆ.

ಗ್ರಾಹಕರು ಒಂದು ವೇಳೆ ಈ ಮಿಠಾಯಿಗಳನ್ನು ಈಗಾಗಲೇ ಖರೀದಿ ಸಿದ್ದರೆ, ಅವುಗಳನ್ನು ಯಾವುದೇ ಕಾರಣಕ್ಕೂ ಸೇವಿಸದೆ ವಿಲೇವಾರಿ ಮಾಡಲು ಸೂಚಿಸಲಾಗಿದೆ.

Printed, Published, & owned by : YOGESH, Printed at: SNEHA PRINTERS, No. 129, Kempe gowda Nagar, Magadi Main Road, Bangalore 560 091.
Published at : No. 10, 2nd Floor, 7th Block, Sir M. Visweswaraiah Layout, Muddayanapalya Circle, Bangalore 560 091.
Editor : YOGESH : Mobile : 9912220350 Email : info.southindiatimes@gmail.com